ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಫೆಬ್ರವರಿ 26 ಬುಧವಾರ 2025

ಸಂಪುಟ: 45 | ಸಂಚಿಕೆ: 309 | ಪುಟಗಳು: 12


₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಇಂದು ಮಹಾಶಿವರಾತ್ರಿ

● ಮೈಸೂರಿನ ದೇವಾಲಯಗಳಲ್ಲಿ ವಿಶೇಷ ಪೂಜೆ, ಶಿವನಾಮಸ್ಮರಣೆ
● ಅರಮನೆ ಆವರಣದ ತ್ರಿನೇಶ್ವರಸ್ವಾಮಿಗೆ ಚಿನ್ನದ ಕೊಳಗ ಅಲಂಕಾರ



ಮೈಸೂರು, ಫೆ.25(ಆರ್‌ಕೆ, ಎಂಟಿವೈ)– ಮೈಸೂರಲ್ಲಿ ಮಹಾಶಿವರಾತ್ರಿ ಹಬ್ಬದ ಸಂಭ್ರಮ ಮನೆ ಮಾಡಿದ್ದು, ಶಿವ ದೇವಾಲಯಗಳಲ್ಲಿ ವಿಶೇಷ ಪೂಜೆ ಹಾಗೂ ಜಾಗರಣೆ ಆಚರಣೆಗೆ ಸರ್ವಸಿದ್ಧತೆ ಮಾಡಿಕೊಳ್ಳಲಾಗಿದೆ. ಬುಧವಾರ ಬೆಳಗ್ಗೆಯಿಂದಲೇ ಶಿವ ದೇವಾಲಯಗಳಲ್ಲಿ ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತಿದ್ದು, ಶಿವಲಿಂಗಕ್ಕೆ ಅಭಿಷೇಕ, ಅಲಂಕಾರ, ಅರ್ಚನೆ, ಮಹಾ ಮಂಗಳಾರತಿ, ಹೋಮ–ಹವನಾದಿ ಧಾರ್ಮಿಕ ಕೈಂಕರ್ಯಗಳು ನೆರವೇರಲಿವೆ. ರಾತ್ರಿಯಿಡೀ ಭಜನೆ, ಶ್ಲೋಕ, ಶಿವನಾಮ ಪಠನಗಳೊಂದಿಗೆ ಭಕ್ತರು ಜಾಗರಣೆ ಮಾಡುವುದಕ್ಕೂ ಅನುಕೂಲ ಮಾಡಲಾಗಿದೆ. ಮೈಸೂರು ಅರಮನೆ ಆವರಣದಲ್ಲಿನ ತ್ರಿನೇಶ್ವರಸ್ವಾಮಿ ದೇವಸ್ಥಾನ, ಶ್ರೀ ಕೋಟೆ ಭೈರವೇಶ್ವರ ದೇವಸ್ಥಾನ, ರಾಮಾನುಜ ರಸ್ತೆಯ ಶ್ರೀ ಕಾಮಕಾಮೇಶ್ವರಿ ದೇವಾಲಯ, ಗುರುಕುಲದ 108 ಶಿವಲಿಂಗ ದೇವಸ್ಥಾನ, ಡಿ.ಸುಬ್ಬಯ್ಯ ರಸ್ತೆಯ ಶ್ರೀ ಅಮೃತೇಶ್ವರ ದೇವಾಲಯ, ಒಂಟಿ ಕೊಪ್ಪಲಿನ ಶ್ರೀ ಚಂದ್ರಮೌಳೇಶ್ವರ ದೇವಸ್ಥಾನ, ಕೆ.ಜಿ.ಕೊಪ್ಪಲಿನ ಶ್ರೀ ಮರುಳೇಶ್ವರ ದೇವಸ್ಥಾನ, ಬನ್ನೂರು ರಸ್ತೆಯ ಶ್ರೀ ಮಲೈಮಹದೇಶ್ವರ ದೇವಾಲಯ, ಪಡುವಾರಹಳ್ಳಿಯ ಶ್ರೀ ಮಲೈಮಹದೇಶ್ವರ ದೇವಸ್ಥಾನ, ಸುಣ್ಣದಕೇರಿ, ಹಳ್ಳದಕೇರಿ, ಕೆ.ಟಿ.ಸ್ಟ್ರೀಟ್‌ನ ಶ್ರೀ ಮಹದೇಶ್ವರ ದೇವಸ್ಥಾನ, ಶ್ರೀರಾಂಪುರದ ಶ್ರೀ ಮಹಾಲಿಂಗೇಶ್ವರ ದೇವಸ್ಥಾನ, ಕುವೆಂಪುನಗರದ ವಿಜಯಾ ಬ್ಯಾಂಕ್ ಸರ್ಕಲ್ ಬಳಿಯ ಶ್ರೀ ಚಂದ್ರಮೌಳೇಶ್ವರ ದೇವಾಲಯ, ಮೇಟಗಳ್ಳಿಯ ಶ್ರೀ ಮಹಾಲಿಂಗೇಶ್ವರಸ್ವಾಮಿ, ಹಿನಕಲ್‌ನ ನನ್ನೇಶ್ವರ ದೇವಾಲಯ ಸೇರಿದಂತೆ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಎಲ್ಲಾ ಶಿವನ ದೇವಾಲಯಗಳಲ್ಲಿ ಮಹಾಶಿವರಾತ್ರಿ ವಿಶೇಷ ಪೂಜೆಗೆ ಸಿದ್ಧತೆ ನಡೆದಿದ್ದು, ಭಕ್ತರ ದರ್ಶನಕ್ಕೆ ಸೂಕ್ತ ವ್ಯವಸ್ಥೆ ಮಾಡಲಾಗಿದೆ.

ಶ್ರೀಕಂಠೇಶ್ವರ ದೇವಸ್ಥಾನ: ದಕ್ಷಿಣ ಕಾಶಿ ಎಂದೇ ಪ್ರಸಿದ್ಧವಾಗಿರುವ ನಂಜನಗೂಡಿನ ಶ್ರೀ ಶ್ರೀಕಂಠೇಶ್ವರ ದೇವಾಲಯದಲ್ಲೂ ಸಾಂಪ್ರದಾಯಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲು ಸಿದ್ಧತೆ ■ 6ನೇ ಪುಟಕ್ಕೆ

ಚಿನ್ನದ ಕೊಳಗದ ಇತಿಹಾಸ...

ರಾಜವಂಶಸ್ಥರಾದ ಜಯಚಾಮರಾಜೇಂದ್ರ ಒಡೆಯರ್ ಅವರು ಪುತ್ರ ಪ್ರಾಪ್ತಿಗಾಗಿ ಸಂಕಲ್ಪ ಮಾಡಿಕೊಂಡು 1952ರಲ್ಲಿ ಪುರಾತನ ದೇವಾಲಯಗಳಲ್ಲಿ ಒಂದಾಗಿರುವ ತ್ರಿನೇಶ್ವರಸ್ವಾಮಿ ದೇವಾಲಯ, ನಂಜನಗೂಡಿನ ಶ್ರೀಕಂಠೇಶ್ವರ ಹಾಗೂ ಮಲೆ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ಚಿನ್ನದ ಕೊಳಗ(ಮುಖವಾಡ) ನೀಡಿದ್ದರು. 1953ರಲ್ಲಿ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಜನನದೊಂದಿಗೆ ಒಡೆಯರ್ ಸಂಕಲ್ಪ ಈಡೇರಿತು. ಈ ಹಿನ್ನೆಲೆಯಲ್ಲಿ ಮೂರು ದೇವಾಲಯಗಳಲ್ಲಿ ಚಿನ್ನದ ಕೊಳಗ ಧರಿಸಿ, ಪೂಜೆ ಸಲ್ಲಿಸುವ ಸಂಪ್ರದಾಯ ಮುಂದುವರೆದುಕೊಂಡು ಬಂದಿದೆ.



ಶಿವರಾತ್ರಿ ಅಂಗವಾಗಿ ಮೈಸೂರು ಅರಮನೆ ಆವರಣದಲ್ಲಿರುವ ಶ್ರೀ ತ್ರಿನೇಶ್ವರಸ್ವಾಮಿ ದೇವಾಲಯಕ್ಕೆ ಮಂಗಳವಾರ ಜಿಲ್ಲಾ ಖಜಾನೆಯಿಂದ 11 ಕೆಜಿ ತೂಕದ ಚಿನ್ನದ ಕೊಳಗ ತರಲಾಯಿತು. ಚಿತ್ರದಲ್ಲಿ ಚಾಮುಂಡೇಶ್ವರಿ ಶ್ರೀಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ.ರೂಪ, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ಇನ್ನಿತರರನ್ನು ಕಾಣಬಹುದು.

ಶುಭಾಶಯಗಳು

ನಾಡಿನ ಸಮಸ್ತರಿಗೂ ಮಹಾಶಿವರಾತ್ರಿ ಹಬ್ಬದ ಶುಭಾಶಯಗಳು

ಬಿಡುವು

ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಇಂದು ನಮ್ಮ ಕಾರ್ಯಾಲಯಕ್ಕೆ ರಜೆ ಇರುವುದರಿಂದ 27–02–2025ರ ಗುರುವಾರದ 'ಮೈಸೂರು ಮಿತ್ರ' ಸಂಚಿಕೆ ಪ್ರಕಟವಾಗುವುದಿಲ್ಲ –ಸಂ.

ಸಿದ್ದರಾಮಯ್ಯ ಪತ್ನಿಗೆ ನಿವೇಶನ ಹಂಚಿಕೆ; ಕುಮಾರ ನಾಯಕರದ್ದೇ ಲೋಪ!



ಜಿ.ಕುಮಾರ ನಾಯಕ

ಬೆಂಗಳೂರು, ಫೆ25– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ. ಪಾರ್ವತಿ ಅವರಿಗೆ ಪರಿಹಾರ ರೂಪದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು (ಮುಡಾ) ನಿವೇಶನಗಳನ್ನು ಹಂಚಿಕೆ ಮಾಡಿದ ಪ್ರಕರಣದಲ್ಲಿ, ಅಂದಿನ ಮೈಸೂರು ಜಿಲ್ಲಾಧಿಕಾರಿ, ಈಗಿನ ರಾಯಚೂರು ಕ್ಷೇತ್ರದ ಕಾಂಗ್ರೆಸ್ ಸಂಸದ ಜಿ. ಕುಮಾರನಾಯಕ ಅವರು ಕರ್ತವ್ಯಲೋಪ ಎಸಗಿದ್ದಾರೆ ಎಂದು ಲೋಕಾಯುಕ್ತ ಹೇಳಿದೆ.



ಪ್ರಕರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ವರದಿಯಲ್ಲಿ, ಕುಮಾರ ನಾಯಕ ಅವರ ಲೋಪವನ್ನು ಬೊಟ್ಟು ಮಾಡಲಾಗಿದ್ದು, ಅವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಬೇಕು ಎಂದೂ ಹೇಳಿದೆ. ಸಿದ್ದರಾಮಯ್ಯ, ಪಾರ್ವತಿ, ಪಾರ್ವತಿ ಅವರ ಸೋದರ ಮಲ್ಲಿಕಾರ್ಜುನಸ್ವಾಮಿ, ಜಮೀನಿನ ಮಾಲೀಕ ದೇವರಾಜು ಮತ್ತು ಸಿದ್ದರಾಮಯ್ಯ ಅವರ ಮಗ ಯತೀಂದ್ರ ಅವರ ವಿರುದ್ಧದ ಯಾವ ಆರೋಪಗಳೂ ಸಾಬೀತಾಗಿಲ್ಲ ಎಂದಿರುವ ಲೋಕಾಯುಕ್ತವು, ಅಧಿಕಾರಿಗಳಿಂದಲೇ ಎಲ್ಲ ತಪ್ಪುಗಳಾಗಿವೆ ■ 6ನೇ ಪುಟಕ್ಕೆ

ಯಾವೆಲ್ಲಾ ಅಧಿಕಾರಿಗಳಿಂದ ಲೋಪ

- ■ ಜಿ.ಕುಮಾರ ನಾಯಕ, ಹಿಂದಿನ ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ (ನಿವೃತ್ತ)
- ■ ಮಾಳಿಗೆ ಶಂಕರ್, ಹಿಂದಿನ ತಹಶೀಲ್ದಾರ್, ಮೈಸೂರು ತಾಲೂಕು (ನಿವೃತ್ತ)
- ■ ಸಿದ್ದಪ್ಪಾಜಿ, ರೆವಿನ್ಯೂ ಇನ್‌ಸ್ಪೆಕ್ಟರ್, ಮೈಸೂರು ತಾಲೂಕು ಕಚೇರಿ (ನಿವೃತ್ತ)
- ■ ಶಂಕರಪ್ಪ, ಭೂಮಾಪಕ ಭೂದಾಖಲೆಗಳ ಸಹಾಯಕ ನಿರ್ದೇಶಕರು

ವಿಚಾರಣೆ ಎದುರಿಸಲು ಸಿದ್ಧ

ರಾಯಚೂರು, ಫೆ.25– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಪರಿಹಾರ ರೂಪದಲ್ಲಿ ಮುಖ್ಯಮಂತ್ರಿ ಅವರ ಪತ್ನಿ ಪಾರ್ವತಿ ಅವರಿಗೆ ನಿವೇಶನ ಹಂಚಿಕೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಲೋಕಾಯುಕ್ತ ವಿಚಾರಣೆಯಲ್ಲಿ ಮಾಹಿತಿ ನೀಡಿದ್ದೇನೆ. ಹೀಗಿದ್ದರೂ ಕರ್ತವ್ಯ ಲೋಪವಾಗಿದೆ ಎಂದು ಗುರುತಿಸಿದರೆ ಅದನ್ನು ಎದುರಿಸಲು ಸಿದ್ಧ ಎಂದು ರಾಯಚೂರು ಸಂಸದ ಜಿ.ಕುಮಾರ ನಾಯಕ ಹೇಳಿದರು. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಲೋಕಾಯುಕ್ತರು ಸಲ್ಲಿಸಿರುವ ವರದಿಯಲ್ಲಿ ಏನಿದೆ ಎಂಬುದು ಗೊತ್ತಿಲ್ಲ. ಅದನ್ನು ನೋಡಿಲ್ಲ. ನಾನು ಯಾವುದೇ ನಿಯಮಬಾಹಿರವಾಗಿ ಕೆಲಸ ಮಾಡಿಲ್ಲ ಎಂದು ನಗರದಲ್ಲಿ ಮಂಗಳವಾರ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯಿಸಿದರು. ಕಡತ ಪರಿಶೀಲನೆ ಮಾಡಿಯೇ ಪ್ರಕ್ರಿಯೆ ಕೈಗೊಳ್ಳಲಾಗಿದೆ. ಕರ್ತವ್ಯ ಲೋಪವಾಗಿದೆ ಎಂದು ವರದಿಯಲ್ಲಿದ್ದರೆ ಅದನ್ನು ಎದುರಿಸುವೆ. ವರದಿ ನೋಡಿದ ಬಳಿಕ ನಿಖರವಾಗಿ ಪ್ರತಿಕ್ರಿಯಿಸುತ್ತೇನೆ ಎಂದು ತಿಳಿಸಿದರು.

ಮಹಾ ಕುಂಭಮೇಳ: ಮಹಾಶಿವರಾತ್ರಿಯ ಕಡೆಯ ಅಮೃತಸ್ನಾನ



ಪ್ರಯಾಗ್‌ರಾಜ್, ಫೆ.25– ವಿಶ್ವದ ಅತಿದೊಡ್ಡ ಧಾರ್ಮಿಕ ಸಭೆ ಮಹಾ ಕುಂಭಮೇಳಕ್ಕೆ ಬುಧವಾರ ಒಂದು ಕೋಟಿಗೂ ಅಧಿಕ ಜನರು ಭೇಟಿ ನೀಡುವ ನಿರೀಕ್ಷೆ ಇದೆ. ಶಿವರಾತ್ರಿ ಹಿನ್ನೆಲೆಯಲ್ಲಿ ಕಡೆಯ ಅಮೃತಸ್ನಾನ ನಡೆಯಲಿದ್ದು, ಇದಕ್ಕಾಗಿ ಜಿಲ್ಲಾಡಳಿತದಿಂದ ಹೆಚ್ಚಿನ ಭದ್ರತಾ ವ್ಯವಸ್ಥೆ ಮಾಡಲಾಗಿದೆ.

ಜನವರಿ 13ರಂದು ಮಹಾ ಕುಂಭಮೇಳ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಸುಮಾರು 64 ಕೋಟಿ ಭಕ್ತರು ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಜನವರಿ 13, 14, 29, ಫೆ.3 ಮತ್ತು 12 ಸೇರಿ ಒಟ್ಟು ಐದು ಅಮೃತಸ್ನಾನಗಳು ನಡೆದಿವೆ.

ಅತಿದೊಡ್ಡ ಧಾರ್ಮಿಕ ಸಭೆಯ ಭಾಗವಾಗಲು ಪ್ರಯಾಗ್‌ರಾಜ್‌ಗೆ ಭಕ್ತರ ದಂಡೇ ಹರಿದು ಬರುತ್ತಿದೆ. ರೈಲುಗಳು, ವಿಮಾನಗಳು ಮತ್ತು ರಸ್ತೆ ಮಾರ್ಗಗಳು ತುಂಬಿ ತುಳುಕುತ್ತಿವೆ. ಶಿವರಾತ್ರಿಯ ದಿನದಂದು ಪವಿತ್ರ ಸ್ನಾನ ■ 6ನೇ ಪುಟಕ್ಕೆ

ಬಿ.ವೈ.ವಿಜಯೇಂದ್ರ ವಿರುದ್ಧ ಯತ್ನಾಳ್ ನೇತೃತ್ವದಲ್ಲಿ ಲಿಂಗಾಯತ ಮುಖಂಡರ ಸಭೆ

ಹೈಕಮಾಂಡ್ ಭೇಟಿಗೆ ತೀರ್ಮಾನ



ವಿಜಯೇಂದ್ರ



ಯತ್ನಾಳ್

ಬೆಂಗಳೂರು, ಫೆ.25– ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬದಲಾವಣೆಗೆ ರೆಬೆಲ್ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಲಿಂಗಾಯತ ದಾಳ ಉರುಳಿಸಿದ್ದಾರೆ. ಬೆಂಗಳೂರಿನ ಖಾಸಗಿ ಹೋಟೆಲಿನಲ್ಲಿಂದು ಯತ್ನಾಳ್ ನೇತೃತ್ವದಲ್ಲಿ ಬಿಜೆಪಿ ಲಿಂಗಾಯತ ಮುಖಂಡರ ಸಭೆ ನಡೆಸಿ ಮತ್ತೊಂದು ಸುತ್ತಿನ ಸಮರ ಸಾರಲಾಗಿದೆ. ಸಭೆಯಲ್ಲಿ ಯತ್ನಾಳ್, ಜಿ.ಎಂ.ಸಿದ್ದೇಶ್ವರ, ಮಹೇಶ್ ಕುಮಟಳ್ಳಿ, ಬಿ.ಪಿ.ಹರೀಶ್ ಸೇರಿದಂತೆ ವೀರಶೈವ ಲಿಂಗಾಯತ ಸಮುದಾಯದ ಬಿಜೆಪಿ ಮಾಜಿ ಶಾಸಕರು, ಜಿಲ್ಲಾ ಮಾಜಿ ಅಧ್ಯಕ್ಷರು, ಮಾಜಿ ಪದಾಧಿಕಾರಿಗಳು ಸೇರಿ 60–70 ಜನ ಸಭೆಯಲ್ಲಿ ಭಾಗವಹಿಸಿದ್ದರು. ಈ ಮೂಲಕ ವಿಜಯೇಂದ್ರ ವಿರುದ್ಧ ಲಿಂಗಾಯತ ಮುಖಂಡರನ್ನು ಒಗ್ಗೂಡಿಸುವ ಪ್ರಯತ್ನಕ್ಕೆ ಶಾಸಕ ಯತ್ನಾಳ್ ಮುಂದಾಗಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಇಳಿಸುವಂತೆ ಹೈಕಮಾಂಡ್ ಬಳಿ ನಿಯೋಗ ಕೊಂಡೊಯ್ಯುವ ನಿರ್ಣಯ ಕೈಗೊಳ್ಳಲಾಗಿದೆ. ವಿಜಯೇಂದ್ರ ಮತ್ತೆ ರಾಜ್ಯಾಧ್ಯಕ್ಷ ಆಗಬಾರದು. ವಿಜಯೇಂದ್ರ ಬದಲು ಯತ್ನಾಳ್ ಅಥವಾ ವಿ.ಸೋಮಣ್ಣ ಅಥವಾ ಬೊಮ್ಮಾಯಿಯನ್ನು ಮುಂದಿನ ರಾಜ್ಯಾಧ್ಯಕ್ಷ ಮಾಡುವಂತೆ ವರಿಷ್ಠರಿಗೆ ಮನವಿ ಮಾಡಲು ತೀರ್ಮಾನಿಸಲಾಗಿದೆ. ಲಿಂಗಾಯತರಲ್ಲದಿದ್ದರೆ ಒಬಿಸಿ ಸಮುದಾಯದ ಸುನೀಲ್ ಕುಮಾರ್, ಎಸ್‌ಸಿ ಸಮುದಾಯದ ಲಿಂಬಾವಳಿ, ಒಬಿಸಿ ಸಮುದಾಯದ ■ 6ನೇ ಪುಟಕ್ಕೆ

ವಿಜಯೇಂದ್ರ ಪರ ವೀರಶೈವ–ಲಿಂಗಾಯತ ಸಮಾವೇಶ



ರೇಣುಕಾಚಾರ್ಯ

ದಾವಣಗೆರೆ, ಫೆ.25– ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಬಲಕ್ಕೆ ವೀರಶೈವ ಲಿಂಗಾಯತ ಸಮುದಾಯದ ಎಲ್ಲ ಒಳ ಪಂಗಡಗಳ ಸಮಾವೇಶ ಸಂಘಟಿಸಲು ನಿರ್ಧರಿಸಲಾಗಿದೆ. ಹಲವು ಮಠಾಧೀಶರೊಂದಿಗೆ ಈ ಬಗ್ಗೆ ಚರ್ಚಿಸಲಾಗಿದೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ತಿಳಿಸಿದರು. ಇಡೀ ಸಮುದಾಯ ಬಿ.ಎಸ್.ಯಡಿಯೂರಪ್ಪ ಹಾಗೂ ವಿಜಯೇಂದ್ರ ಬೆನ್ನಿಗೆ ನಿಲ್ಲಲಿದೆ. ಮಠಾಧೀಶರೊಂದಿಗೆ ಶೀಘ್ರವೇ ಪೂರ್ವಭಾವಿ ■ 6ನೇ ಪುಟಕ್ಕೆ

ಮಾ.1ರಿಂದ 20ರವರೆಗೆ ದ್ವಿತೀಯ ಪಿಯು ಪರೀಕ್ಷೆ

ಮೈಸೂರು ನಗರದ 27 ಸೇರಿ ಜಿಲ್ಲೆಯಾದ್ಯಂತ 50 ಪರೀಕ್ಷಾ ಕೇಂದ್ರಗಳು, 35,382 ವಿದ್ಯಾರ್ಥಿಗಳ ನೋಂದಣಿ

ಮೈಸೂರು, ಫೆ. 25(ಆರ್‌ಕೆ)– 2024–25ನೇ ಸಾಲಿನ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆಗಳು ಮಾರ್ಚ್ 1ರಿಂದ 20ರವರೆಗೆ ನಡೆಯಲಿವೆ. ಮೈಸೂರು ಜಿಲ್ಲೆಯಲ್ಲಿ ಹೊಸಬರು 32,684, ಪುನರಾವರ್ತಿತ 1,650 ಹಾಗೂ ಖಾಸಗಿ 1,028 ಸೇರಿ ಒಟ್ಟು 35,382 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಹೊಸಬರ ಪೈಕಿ 18,004 ಬಾಲಕಿಯರು ಮತ್ತು 14,680 ಬಾಲಕರು ಪರೀಕ್ಷೆ ಬರೆಯಲಿದ್ದಾರೆ. ಮೈಸೂರು ನಗರದ 27 ಸೇರಿ ಜಿಲ್ಲೆಯಾದ್ಯಂತ 50 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಕಲಾ ವಿಭಾಗದಲ್ಲಿ



7,342, ವಾಣಿಜ್ಯದಲ್ಲಿ 11,292 ಹಾಗೂ ವಿಜ್ಞಾನ ವಿಭಾಗದಲ್ಲಿ 14,050 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗುವರು.

ವೇಳಾಪಟ್ಟಿ: ಮಾ.1ರಂದು ಕನ್ನಡ, ಅರೇಬಿಕ, ಮಾ.3ರಂದು ■ 6ನೇ ಪುಟಕ್ಕೆ

ದೆಹಲಿ ವಿಧಾನಸಭೆಯಲ್ಲಿ ತೀವ್ರ ಕೋಲಾಹಲ
ಅತಿಶಿ ಸೇರಿ 12 ಆಪ್ ಶಾಸಕರು ಅಮಾನತು!

ನವದೆಹಲಿ: ದೆಹಲಿ ವಿಧಾನಸಭೆ ಅಧಿವೇಶನದ ಎರಡನೇ ದಿನವಾದ ಇಂದು ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೇನಾ ಅವರ ಭಾಷಣದ ವೇಳೆ ಘೋಷಣೆ ಕೂಗಿದ ಹಿನ್ನೆಲೆಯಲ್ಲಿ ದೆಹಲಿ ವಿಧಾನಸಭಾ ಸ್ಪೀಕರ್ ವಿಜೇಂದರ್ ಗುಪ್ತಾ ಅವರು ವಿರೋಧ ಪಕ್ಷದ ನಾಯಕರಾದ ಅತಿಶಿ, ಮಾಜಿ ಸಚಿವ ಗೋಪಾಲ್ ರೈ ಮತ್ತು ಇತರ 9 ಮಂದಿ ಎಎಪಿ ಶಾಸಕರನ್ನು ದಿನದ ಮಟ್ಟಿಗೆ ಅಮಾನತುಗೊಳಿಸಿದ ಪ್ರಸಂಗ ನಡೆಯಿತು.

ಸದನದಿಂದ ಹೊರಹಾಕಲ್ಪಟ್ಟ ಎಎಪಿ ನಾಯಕರಲ್ಲಿ ಅತಿಶಿ, ಗೋಪಾಲ್ ರೈ, ವೀರ್ ಸಿಂಗ್ ಧಿಂಗ್ನ್, ಮುಖೇಶ್ ಅಹ್ಲಾವತ್, ಚೌಧರಿ ಜುಬೈರ್ ಅಹ್ಮದ್, ಅನಿಲ್ ಝಾ, ವಿಶೇಷ್ ರವಿ ಮತ್ತು ಜರ್ನೈಲ್ ಸಿಂಗ್ ಒಳಗೊಂಡಿದ್ದಾರೆ. ಮುಖ್ಯಮಂತ್ರಿ ಕಚೇರಿಯಿಂದ ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ತೆಗೆದುಹಾಕುವ ಮೂಲಕ ಬಿಜೆಪಿ ಸಂವಿಧಾನ ರಚನಾಕಾರನಿಗೆ ಅಗೌರವ ತೋರಿದೆ ಎಂದು ಇಂದು ಸದನ ಆರಂಭವಾಗುತ್ತಿದ್ದಂತೆ ಆತಿಶಿ ಆರೋಪಿಸಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರವನ್ನು ತೆಗೆದುಹಾಕುವ ಮೂಲಕ ಬಿಜೆಪಿ ತನ್ನ ನಿಜ ಬಣ್ಣ ತೋರಿಸಿದೆ. ಬಾಬಾಸಾಹೇಬ್ ಅವರನ್ನು ಮೋದಿ ಬದಲಾಯಿಸಬಹುದು ಎಂದು ಬಿಜೆಪಿಯವರ ಭಾವನೆಯೇ? ಎಂದು ಅವರು ನಿನ್ನೆ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದರು.

ಅಮಾನತುಗೊಂಡ ಎಎಪಿ ಶಾಸಕರು ನಂತರ ವಿಧಾನಸಭೆ ಆವರಣದಲ್ಲಿ ಅಂಬೇಡ್ಕರ್ ಭಾವಚಿತ್ರಗಳೊಂದಿಗೆ ಪ್ರತಿಭಟನೆ ನಡೆಸಿದರು, ಬಾಬಾ ಸಾಹೇಬ್‌ಗೆ ಆದ ಅವಮಾನವನ್ನು ಭಾರತ ಸಹಿಸುವುದಿಲ್ಲ ಎಂಬ ಘೋಷಣೆಗಳನ್ನು ಕೂಗಿದರು.

ಹೊಸದಾಗಿ ಆಯ್ಕೆಯಾದ ಶಾಸಕರೊಂದಿಗೆ 3 ದಿನಗಳ ದೆಹಲಿ ವಿಧಾನಸಭೆ ಅಧಿವೇಶನ ನಿನ್ನೆ ಆರಂಭವಾಯಿತು. ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಬಿಜೆಪಿ ಮತ್ತು ವಿರೋಧ ಪಕ್ಷದ ಶಾಸಕರು ಸ್ಪೀಕರ್ ವಿಜೇಂದರ್ ಗುಪ್ತಾ ಅವರ ಮಾರ್ಗದರ್ಶನದಲ್ಲಿ ವಿಧಾನಸಭೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಇಂದು 2ನೇ ದಿನ, ಹಿಂದಿನ ಆಮ್ ಆದ್ಮಿ ಪಕ್ಷ ಸರ್ಕಾರದ ಕಾರ್ಯಕ್ಷಮತೆಗೆ ಸಂಬಂಧಿಸಿದಂತೆ ಬಾಕಿ ಇರುವ 14 ಸಿಎಜಿ (ಭಾರತದ ಕಂಟ್ರೋಲರ್ ಮತ್ತು ಆಡಿಟರ್ ಜನರಲ್) ವರದಿಗಳನ್ನು ಮಂಡಿಸಲು ಬಿಜೆಪಿ ಸರ್ಕಾರ ಕ್ರಮ ಕೈಗೊಳ್ಳುವ ಮೊದಲು, ಸಭೆಯ ಆರಂಭದಲ್ಲಿಯೇ ವಿರೋಧ ಪಕ್ಷಗಳಿಂದ ಗದ್ದಲ ಉಂಟಾಯಿತು. ಬಾಕಿ ಇರುವ ಲೆಕ್ಕಪರಿಶೋಧನೆಗಳು, ರಾಜ್ಯ ಹಣಕಾಸು, ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ, ವಾಹನ ವಾಯು ಮಾಲಿನ್ಯ, ಮದ್ಯ ನಿಯಂತ್ರಣ ಮತ್ತು ದೆಹಲಿ ಸಾರಿಗೆ ನಿಗಮದ ಕಾರ್ಯನಿರ್ವಹಣೆ ಸೇರಿದಂತೆ ಹಲವಾರು ವಿಷಯಗಳನ್ನು ಒಳಗೊಂಡಿವೆ. ಎಎಪಿ ಆಡಳಿತವು ಈ ಸಿಎಜಿ ವರದಿಗಳನ್ನು ತಡೆಹಿಡಿದಿತ್ತು ಎಂದು ಬಿಜೆಪಿ ಆರೋಪಿಸಿದೆ.

ವಿದ್ಯುತ್ ದರ ಏರಿಕೆಗೆ ಕೈಗಾರಿಕೆಗಳ ಸಂಘ ವಿರೋಧ


ಕೆ.ಬಿ.ಲಿಂಗರಾಜು

ಮೈಸೂರು, ಫೆ.25(ಜಿಎ)–ವಿದ್ಯುತ್ ದರ ಏರಿಕೆ ಪ್ರಸ್ತಾಪ ಕುರಿತು ರಾಜ್ಯ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗ ಹಾಗೂ ಸೆಸ್ಕ್ ಹಮ್ಮಿಕೊಂಡಿದ್ದ ಬಳಕೆದಾರರ ಅಹವಾಲು ಆಲಿಕೆ ಸಭೆಯಲ್ಲಿ ದರ ಏರಿಕೆಗೆ ನಾರು ಕೈಗಾರಿಕೆಗಳ ಸಂಘ, ಕೆಐಎಡಿಬಿ ಕೈಗಾರಿಕಾ ಪ್ರದೇಶ ಉತ್ಪಾದಕರ ಸಂಘಗಳು ವಿರೋಧ ವ್ಯಕ್ತಪಡಿಸಿವೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಕೆ.ಬಿ.ಲಿಂಗರಾಜು ಮಾತನಾಡಿ, ಆಯೋಗವೇ ನೀಡಿದ ಮಾಹಿತಿಯಂತೆ ನಿಗಮ ನಷ್ಟದಲ್ಲಿಲ್ಲ. ಆದರೆ ಆಗುತ್ತಿರುವ ನಷ್ಟವನ್ನು ಹೇಗೆ ಸರಿದೂಗಿಸಬಹುದೆಂಬ ಸಲಹೆ ಸೂಚನೆ ನೀಡಲಾಯಿತು ಎಂದರು.

ಪಂಚಾಯಿತಿಗಳ ವಿದ್ಯುತ್ ಬಾಕಿ ಮೊತ್ತದ ಮನ್ನಾ, ಕಡಿಮೆ ದರದಲ್ಲಿ ಹೊರಗಿನಿಂದ ವಿದ್ಯುತ್ ಹೇಗೆ ಖರೀದಿಸಬಹುದು, ಗ್ರಾಹಕರು ಬಾಕಿ ಉಳಿಸಿಕೊಂಡಿರುವ ಹಣವನ್ನು ದಕ್ಷತೆಯಿಂದ ವಸೂಲಿ ಮಾಡುವುದು, ಕೆಲವೊಂದು ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ವಿದ್ಯುತ್ ಪೂರೈಸುವುದ ರಿಂದ ಆಗುತ್ತಿರುವ ನಷ್ಟ ಮೊದಲಾದ ವಿವರ ನೀಡಿ, ಕ್ರಮ ಕೈಗೊಳ್ಳುವಂತೆ ಕೋರ ಲಾಯಿತು. ಆಯೋಗ ಸಹ ತಮ್ಮ ಸಲಹೆ ಗಳು ಸರಿ ಇವೆ ಎಂದು ಒಪ್ಪಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಕೆ.ರಾಘವೇಂದ್ರ ಪ್ರಭು, ಎ.ಜಿ.ಅಶೋಕ್ ಉಪಸ್ಥಿತರಿದ್ದರು.

ನಿವೃತ್ತರಿಗೆ ಏಳನೇ ವೇತನ ಆಯೋಗದಂತೆ ಆರ್ಥಿಕ ಸೌಲಭ್ಯಕ್ಕೆ ಆಗ್ರಹಿಸಿ ಫೆ.28, ಪ್ರತಿಭಟನೆ

ಮೈಸೂರು, ಫೆ.25(ಜಿಎ)–ನಿವೃತ್ತರಾದ ಅಧಿಕಾರಿ, ನೌಕರ ವರ್ಗದ 26,700 ನಿವೃತ್ತರಿಗೆ ಏಳನೇ ವೇತನ ಆಯೋಗದ ಲೆಕ್ಕಾಚಾರದಲ್ಲಿ ನಿವೃತ್ತಿ ಆರ್ಥಿಕ ಸೌಲಭ್ಯ ನೀಡುವಂತೆ ಆಗ್ರಹಿಸಿ ಫೆ.28ರಿಂದ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ಜಿಲ್ಲಾ ಮಹಾಪ್ರಧಾನ ಸಂಚಾಲಕ ಹೆಚ್.ಡಿ.ಮಾದಪ್ಪ ಈ ವಿಷಯ ತಿಳಿಸಿ, ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ವೇದಿಕೆಯ ನಿಯೋಗ ಮುಖ್ಯಮಂತ್ರಿಯವರನ್ನೇ ಭೇಟಿ ಮಾಡಿ ಮನವಿ ಮಾಡಿದ ಸಂದರ್ಭದಲ್ಲಿ ಅಧಿವೇಶನದ ಬಳಿಕ ಕರೆದು ಚರ್ಚಿಸಿ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈವರೆಗೆ ನಮ್ಮನ್ನು ಚರ್ಚೆಗೆ ಕರೆಯದೆ ನಿರ್ಲಕ್ಷಿಸಿದ್ದಾರೆ. ಈಗಲಾದರೂ ನಮ್ಮ ಬೇಡಿಕೆ ಈಡೇರಿಸುವ ಕುರಿತು ಪರಿಷ್ಕೃತ ಆದೇಶ ಹೊರಡಿಸಲಿ ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ವೇದಿಕೆ ಪದಾಧಿಕಾರಿಗಳಾದ ಶ್ರೀಕಂಠ ಮೂರ್ತಿ, ರಾಜಮ್ಮ, ಎಸ್.ವಿ. ಕುಂಬಾರ್, ನಾಣಯ್ಯ ಉಪಸ್ಥಿತರಿದ್ದರು.

ಬ್ರಾಂಡೆಡ್ ರೆಡಿಮೇಡ್ ಉಡುಪುಗಳು, ಶೂಸ್ ಮಾರಾಟ



ಮೈಸೂರಿನ ನಂಜರಾಜ ಬಹದ್ದೂರ್ ಛತ್ರದಲ್ಲಿ ಶಿವರಾತ್ರಿ ಹಬ್ಬದ ಪ್ರಯುಕ್ತ ಬ್ರಾಂಡೆಡ್ ರೆಡಿಮೇಡ್ ಉಡುಪುಗಳ ಮತ್ತು ಫುಟ್‌ವೇರ್‌ಗಳ ಮಾರಾಟ.

ಮೈಸೂರು,ಫೆ.25–ಮೈಸೂರು ನಗರದ ವಿನೋಬಾ ರಸ್ತೆಯಲ್ಲಿರುವ ನಂಜರಾಜ ಬಹದ್ದೂರ್ ಛತ್ರದಲ್ಲಿ ಶಿವರಾತ್ರಿ ಹಬ್ಬದ ಪ್ರಯುಕ್ತ ಬ್ರಾಂಡೆಡ್ ರೆಡಿಮೆಡ್ ಉಡುಪುಗಳ ಮತ್ತು ಫುಟ್‌ವೇರ್‌ಗಳ ಮೇಲೆ ಭಾರಿ ರಿಯಾಯಿತಿ ಮಾರಾಟವಿದೆ.

ಬ್ರಾಂಡೆಡ್ ಫುಟ್‌ವೇರ್ ಪುರುಷರ ಸ್ಪೋರ್ಟ್ಸ್ ಶೂಸ್, ಪುರುಷರ ಬ್ರಾಂಡೆಡ್ ಶರ್ಟ್ಸ್, ಪ್ಯಾಂಟ್ಸ್, ಟೀ–ಶರ್ಟ್ಸ್, ಜಾಕೆಟ್ಸ್, ಟ್ರಾಕ್ ಪ್ಯಾಂಟ್, ಲೋವರ್ ಶರ್ಟ್ಸ್ ರೂ. 250 ರೂ.ಗೆ ಇಲ್ಲಿ ಲಭ್ಯವಿದೆ. ಮಹಿಳೆಯರ ಬ್ರಾಂಡೆಡ್ ಕುರ್ತಾಗಳು ಲೇಡಿಸ್ ಟಾಪ್ಸ್, ಜಾಕೆಟ್ಸ್, ಸ್ವೆಟರ್ಸ್, ಟ್ರ್ಯಾಕ್ ಪ್ಯಾಂಟ್ಸ್, ಟೀ–ಶರ್ಟ್ಸ್, ಟೈಟ್ಸ್, ಪ್ಲಾಜೋ, ಲೆಗ್ಗಿನ್ಸ್ ಸಹಿತ ಅನೇಕ ಬ್ರಾಂಡೆಡ್ ಉತ್ಪನ್ನಗಳು ಕೇವಲ ರೂ. 200 ದರದಲ್ಲಿ ಲಭ್ಯವಿದೆ.

ಮಕ್ಕಳ ಉಡುಪುಗಳು ಕೇವಲ ರೂ. 100ಗೆ ಲಭ್ಯವಿದೆ. ಬ್ರಾಂಡೆಡ್ ಶೂಸ್‌ಗಳು ಭಾರಿ ರಿಯಾಯಿತಿ ದರದಲ್ಲಿ ಮಾರಾಟವಾಗುತ್ತಿದೆ. ಈ ಅವಕಾಶ 03–03–2025 ರವರೆಗೆ ಮಾತ್ರ. ಬೆಳಗ್ಗೆ 10.30ರಿಂದ ರಾತ್ರಿ 9.30ರವರೆಗೆ ಪ್ರದರ್ಶನ ಹಾಗೂ ಮಾರಾಟವಿದೆ. ಡೆಬಿಟ್ ಹಾಗೂ ಕ್ರೆಡಿಟ್ ಕಾರ್ಡ್‌ಗಳನ್ನು ಸ್ವೀಕರಿಸಲಾಗುವುದೆಂದು ಆಯೋಜಕರು ತಿಳಿಸಿದ್ದಾರೆ.

ಶ್ರೀ ಶಿವರಾತ್ರೀಶ್ವರ ಪ್ರಶಸ್ತಿಗೆ ಕೃತಿಗಳ ಆಹ್ವಾನ

ಮೈಸೂರು,ಫೆ.25–ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯಿಂದ ನೀಡಲಾಗುವ ಶ್ರೀ ಶಿವರಾತ್ರೀಶ್ವರ ಪ್ರಶಸ್ತಿಗೆ ವೀರಶೈವ–ಲಿಂಗಾಯತ ಧರ್ಮ, ಸಾಹಿತ್ಯ, ಸಂಸ್ಕೃತಿ, ಇತಿಹಾಸ ಹಾಗೂ ಕಲೆಗೆ ಸಂಬಂಧಿಸಿದಂತೆ 2024ನೇ ಸಾಲಿನಲ್ಲಿ ಪ್ರಕಟವಾಗಿರುವ ಕೃತಿಗಳನ್ನು ಆಹ್ವಾನಿಸಲಾಗಿದೆ. ಲೇಖಕರು ಹಾಗೂ ಪ್ರಕಾಶಕರು ಪ್ರಕಟಿತ ಕೃತಿಗಳನ್ನು ಪ್ರಶಸ್ತಿ ಸಮಿತಿಯ ಅವಗಾಹನೆಗಾಗಿ ನಿರ್ದೇಶಕರು, ಪ್ರಕಟಣಾ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ, ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು 570004 ವಿಳಾಸಕ್ಕೆ ಮಾ.31ರೊಳಗಾಗಿ ಕಳುಹಿಸಲು ಕೋರಿದೆ. ಹೆಚ್ಚಿನ ಮಾಹಿತಿಗೆ ವೀರಭದ್ರಸ್ವಾಮಿ ಅವರನ್ನು 9964161363 ಈ ಸಂಚಾರಿ ದೂರವಾಣಿಯಲ್ಲಿ ಸಂಪರ್ಕಿಸಲು ಕೋರಿದೆ. ಶ್ರೀ ಶಿವರಾತ್ರೀಶ್ವರ ಪ್ರಶಸ್ತಿಯನ್ನು 1983ರಿಂದ ಪ್ರತಿವರ್ಷ ಉತ್ತಮ ಕೃತಿಗಳಿಗೆ ನೀಡಲಾಗುತ್ತಿದೆ. ಪ್ರಶಸ್ತಿಯು ಪ್ರಶಸ್ತಿಫಲಕ, ಸ್ವಸ್ತಿವಾಚನ, ಫಲ ತಾಂಬೂಲ ಹಾಗೂ 25,000 ರೂ.ಗಳ ಗೌರವಧನವನ್ನು ಒಳಗೊಂಡಿರುತ್ತದೆ.

ಫೆ.28ರಂದು ಬಹಿರಂಗ ಹರಾಜು

ಮೈಸೂರು,ಫೆ.25–ಮೈಸೂರಿನ ಎನ್.ಆರ್.ಮೊಹಲ್ಲಾದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ ಫೆ.28ರಂದು ಬೆಳಗ್ಗೆ 11 ಗಂಟೆಗೆ ಸಂಸ್ಥೆಯಲ್ಲಿರುವ ನಿರುಪಯುಕ್ತ ಸಾಮಗ್ರಿಗಳ ಹರಾಜು ಪ್ರಕ್ರಿಯೆ ನಡೆಯಲಿದೆ. ಆಸಕ್ತರು ವಿವರಗಳಿಗಾಗಿ ಮೊ.9880512935, 9945711787, 9019527336 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.02.2025 ಬುಧವಾರ, ಮಳೆ ನಕ್ಷತ್ರ: ಶತಭಿಷ, 19.02.2025 ರಿಂದ 03.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಶ್ರವಣ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಥೈರಾಯಿಡ್ ಸಮಸ್ಯೆ, ಹಸಿರಂಬುವಿನ ಗಾಯಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಶಂಕರನಾರಾಯಣಸ್ವಾಮಿ ದೇವಸ್ಥಾನ :** ಶಿವರಾತ್ರಿ ಸಂಗೀತ ಸಂಭ್ರಮ, ಸಂಜೆ 6 ರಿಂದ ವಿವಿಧ ವಿದ್ವಾಂಸರಿಂದ ಸಂಗೀತ ಕಾರ್ಯಕ್ರಮ, ಸ್ಥಳ: ಶಂಕರನಾರಾಯಣಸ್ವಾಮಿ ದೇವಸ್ಥಾನ, ಚಾಮುಂಡಿಪುರಂ.

■ **ಸಮೃದ್ಧಿ ಟ್ರಸ್ಟ್, ಕೆಎಂಪಿಕೆ ಚಾರಿಟಬಲ್ ಟ್ರಸ್ಟ್ ಹಾಗೂ ಜೆಸಿಐ ಮೈಸೂರು ಕಿಂಗ್ಸ್ ಲೇಡೀಸ್ ವಿಂಗ್ಸ್:** ಮಹಾಶಿವರಾತ್ರಿ ಅಂಗವಾಗಿ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮ, ಸ್ಥಳ: ಮಹರ್ಷಿ ಪಬ್ಲಿಕ್ ಶಾಲೆ, ವಿಶ್ವೇಶ್ವರನಗರ, ಬೆಳಗ್ಗೆ 9 ಗಂಟೆಗೆ

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಮಹಾಶಿವರಾತ್ರಿ ಕಾರ್ಯಕ್ರಮಗಳು, ಬೆಳಗ್ಗೆ 6ಕ್ಕೆ ಮಹಾರುದ್ರ ಹೋಮ ಪ್ರಾರಂಭ, 7ಕ್ಕೆ ಪ್ರಯಾಗದ ಕುಂಭಮೇಳ ತೀರ್ಥದಿಂದ ಕೂಡಿದ ಸಪ್ತರ್ಷಿ ಸರೋವರದಲ್ಲಿ ಉಚಿತ ತೀರ್ಥಸ್ನಾನ, 9ಕ್ಕೆ ಶ್ರೀಚಕ್ರಪೂಜೆ, ಮಹಾರುದ್ರ ಹೋಮ, ಪೂರ್ಣಾಹುತಿ, 11ಕ್ಕೆ ಭಕ್ತಾದಿಗಳಿಂದ ಮಹಾ ರುದ್ರಾಭಿಷೇಕ, ಮಧ್ಯಾಹ್ನ 3ಕ್ಕೆ ಮೂಲಿಕೇಶ್ವರಿಗೆ ಪೂಜೆ, ಸಂಜೆ 6.30ಕ್ಕೆ ಶ್ರೀ ಸ್ವಾಮೀಜಿಯವರಿಂದ ಸಚ್ಚಿದಾನಂದೇಶ್ವರ ಶಿವಲಿಂಗಕ್ಕೆ ರುದ್ರಾಭಿಷೇಕ, 7ಕ್ಕೆ ಭಕ್ತರಿಂದ ಶಿವಲಿಂಗಕ್ಕೆ ಸಹಸ್ರ ಕಳಶಾಭಿಷೇಕ, ಸಂಜೆ 7ಕ್ಕೆ ವಿದುಷಿ ಎಸ್. ಶುಭಲಕ್ಷ್ಮಿ ಮತ್ತು ವಿದುಷಿ ಎಸ್. ಸೋರ್ನಲತಾ ಮತ್ತು ವೃಂದದವರಿಂದ ಕರ್ನಾಟಕ ಸಂಗೀತ ದ್ವಂದ್ವ ಗಾಯನ, ಸಂಜೆ 10ಕ್ಕೆ ವಿದ್ವಾನ್ ಭರತ್ ಸುಂದರ್ ಮತ್ತು ವೃಂದದವರಿಂದ ಕರ್ನಾಟಕ ಸಂಗೀತ ಗಾಯನ, ರಾತ್ರಿ 11ಕ್ಕೆ ಸಚ್ಚಿದಾನಂದೇಶ್ವರ ಶಿವಲಿಂಗಕ್ಕೆ 11 ಬಾರಿ ರುದ್ರಾಭಿಷೇಕ, ವಿವಿಧ ಅಲಂಕಾರಗಳು, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ನಂಜನಗೂಡು ರಸ್ತೆ.


■ **ಆರ್ಯ ಸಮಾಜ :** ಮಹರ್ಷಿ ದಯಾನಂದ ಸರಸ್ವತಿ ಅವರಿಗೆ ಜ್ಞಾನೋದಯವಾದ ದಿನದ ಸಾಂಕೇತಿಕವಾಗಿ 'ಋಷಿ ಬೋಧೋತ್ಸವ', ಸ್ಥಳ: ಆರ್ಯ ಸಮಾಜ, ಕೊತ್ವಾಲ್ ರಾಮಯ್ಯ ರಸ್ತೆ, ದೇವರಾಜ ಮೊಹಲ್ಲಾ, ಸಂಜೆ 5.30ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಸುಯೋಗ್ ಆಸ್ಪತ್ರೆ :** ಮಧುಮೇಹ ಉಚಿತ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.

■ **ವರ್ಧಮಾನ್ ಜೈನ್ ಮಿಲನ್ :** ಭಗವಾನ್ ಶ್ರೀ ಆದಿನಾಥರ ಮೋಕ್ಷ ಕಲ್ಯಾಣ ದಿನದಂದು ಮತ್ತು ಜಿನರಾತ್ರಿ ಪ್ರಯುಕ್ತ ಅಖಂಡಣಮೋಕಾರ ಮಂತ್ರ ಪಠಣ ಕಾರ್ಯಕ್ರಮ, ಸ್ಥಳ: ಶ್ರೀ ಪಾರ್ಶ್ವನಾಥಸ್ವಾಮಿ ಬಸದಿ, ಎಂ.ಎಲ್. ಜೈನ್ ಬೋರ್ಡಿಂಗ್, ಬೆಳಗ್ಗೆ 8 ಗಂಟೆಯಿಂದ.

■ **ಶ್ರೀ ಅಮೃತೇಶ್ವರಸ್ವಾಮಿ ದೇವಸ್ಥಾನ :** 53ನೇ ವರ್ಷದ ಮಹಾಶಿವರಾತ್ರಿ ಪೂಜೆ, ಶ್ರೀ ಬಾಲಾತ್ರಿಪುರ ಸುಂದರಿ ಸಮೇತನಾದ ಶ್ರೀ ಅಮೃತೇಶ್ವರಸ್ವಾಮಿಗೆ ಪಂಚಾಮೃತ ಪುರಸ್ಸರ ರುದ್ರಾಭಿಷೇಕ, 108 ಪಾರ್ಥಿವ ಲಿಂಗ ಪೂಜೆ, ಸಂಜೆ 6ಕ್ಕೆ ಪ್ರದೋಷ ಕಾಲದಲ್ಲಿ ಪಂಚಾಮೃತ ಪುರಸ್ಸರ ರುದ್ರಾಭಿಷೇಕ, ರಾತ್ರಿ 9ಕ್ಕೆ ರಾಶಿ ಪೂಜೆ, ರಂಗಪೂಜೆ, ಮಹಾಕೈಲಾಸ ಶಿಖರ ದೀಪಾರಾಧನೆ, ನಾಲ್ಕು ಝಾವದ ರುದ್ರಾಭಿಷೇಕ, ಸ್ಥಳ: ಶ್ರೀ ಅಮೃತೇಶ್ವರಸ್ವಾಮಿ ದೇವಸ್ಥಾನ, ದೇವರಾಜ ಮೊಹಲ್ಲಾ.



■ **ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಸ್ಥಾನ :** ಮಹಾಶಿವರಾತ್ರಿ ಉತ್ಸವ, ದರ್ಶನ : ಬೆಳಗ್ಗೆ 6 ರಿಂದ ಮಾರನೇ ದಿನ ಬೆಳಗ್ಗೆ 6 ಗಂಟೆಯವರೆಗೆ, ಅಭಿಷೇಕ : ಬೆಳಗ್ಗೆ 8, 10.30, 12.30–ಸಂಜೆ 6ಕ್ಕೆ, ರಾತ್ರಿ 9.30ಕ್ಕೆ, ಮಧ್ಯರಾತ್ರಿ ಮತ್ತು ಬೆಳಗಿನ ಝಾವ 3.30ಕ್ಕೆ ಅಭಿಷೇಕಗಳು, ರಾತ್ರಿ ಪೂರ್ತಿ ಭಜನೆ, ನೃತ್ಯ ಕಾರ್ಯಕ್ರಮಗಳು, ಸ್ಥಳ: ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಸ್ಥಾನ, ವಿ.ವಿ. ಮೊಹಲ್ಲಾ.

■ **ಆಶಾಮಂದಿರ ನಿವೇಶನ ಮತ್ತು ವಸತಿದಾರರ ಕ್ಷೇಮಾಭಿವೃದ್ಧಿ ಸಂಘ :** ಶಿವರಾತ್ರಿ ಹಬ್ಬ ಆಚರಣೆ, ಬೆಳಗ್ಗೆ 6 ರಿಂದ 7 ಜಲ, ಕ್ಷೀರಾಭಿಷೇಕ, 7.30 ರಿಂದ ರುದ್ರಾಭಿಷೇಕ, ಮಹಾಮಂಗಳಾರತಿ, ಮೊದಲನೇ ಜಾವದ ಪೂಜೆ 6 ರಿಂದ 9; ಎರಡನೇ ಜಾವದ ಪೂಜೆ ರಾತ್ರಿ 9 ರಿಂದ 12, ಮೂರನೇ ಜಾವದ ಪೂಜೆ ರಾತ್ರಿ 12 ರಿಂದ 3, ನಾಲ್ಕನೇ ಜಾವದ ಪೂಜೆ ರಾತ್ರಿ 3 ರಿಂದ ಬೆಳಗ್ಗೆ 6, ಐದನೇ ಜಾವದ ಪೂಜೆ ಬೆಳಗ್ಗೆ 6 ರಿಂದ 8, ಮಾದೇಶ್ ತಂಡದವರಿಂದ ಶಿವ ಭಜನೆ, ಸ್ಥಳ: ಸಂಘದ ಆವರಣ, ಹೆಬ್ಬಾಳು ಬಡಾವಣೆ.

■ **ಶ್ರೀ ಮುಕ್ಕಣ್ಣೇಶ್ವರಸ್ವಾಮಿ ದೇವಸ್ಥಾನ :** 57ನೇ ವರ್ಷದ ಮಹಾಶಿವರಾತ್ರಿ, ಬೆಳಗ್ಗೆ 6 ರಿಂದ ಶ್ರೀ ಗಣಪತಿ ಪೂಜೆ, ಕಳಶ ಸ್ಥಾಪನೆ, ನವಗ್ರಹ ಪೂಜೆ, ಶ್ರೀ ಮುಕ್ಕಣ್ಣೇಶ್ವರಸ್ವಾಮಿಯವರಿಗೆ ಪಂಚಾಮೃತ, ರುದ್ರಾಭಿಷೇಕ, ಅರ್ಚನೆ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸಂಜೆ 4.30ಕ್ಕೆ ಶ್ರೀ ಮುಕ್ಕಣ್ಣೇಶ್ವರಸ್ವಾಮಿಯವರ ವೈಭವದ ಉತ್ಸವ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ಅಶೋಕ ರಸ್ತೆ.

■ **ಶ್ರೀ ಕಾಮೇಶ್ವರ ಕಾಮೇಶ್ವರಿ ದೇವಸ್ಥಾನ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕೈಂಕರ್ಯ ಸಭಾ, ಅರಮನೆ ಮುಜರಾಯಿ ಸಂಸ್ಥೆಗಳು :** ಮಹಾಶಿವರಾತ್ರಿ ಆಚರಣೆ, ಬೆಳಗ್ಗೆ 8ಕ್ಕೆ ಸಂಕಲ್ಪ ವಿಜಯ ವಿಶ್ವೇಶ್ವರಸ್ವಾಮಿಯವರಿಗೆ ಏಕಾದಶಾವಾರ ರುದ್ರಾಭಿಷೇಕ, ಬೆಳಗ್ಗೆ 11.30ಕ್ಕೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮಧ್ಯಾಹ್ನ 12.30ಕ್ಕೆ ಶ್ರೀ ಸ್ವಾಮಿಯವರ ಪ್ರಾಕಾರೋತ್ಸವ ಅಷ್ಟಾವಧಾನ ಸೇವೆ, ಮಧ್ಯಾಹ್ನ 1ಕ್ಕೆ ಮಹಾಮಂಗಳಾರತಿ, ಸಂಜೆ 6 ರಿಂದ ನಾಲ್ಕು ಜಾವಗಳಲ್ಲಿ ಅಭಿಷೇಕ, ವಿಶೇಷ ಪೂಜೆ, ಬೆಳಗ್ಗೆ 10 ರಿಂದ ರಾತ್ರಿ 2.30 ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು, ಸ್ಥಳ: ಶ್ರೀ ಕಾಮೇಶ್ವರ ಕಾಮೇಶ್ವರಿ ದೇವಸ್ಥಾನ, ರಾಮಾನುಜ ರಸ್ತೆ.

■ **ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಮೈಸೂರು:** ತ್ರಿಮೂರ್ತಿ ಶಿವ ಜಯಂತಿ ಮಹೋತ್ಸವದ ಪ್ರಯುಕ್ತ ಜ್ಞಾನ ವಿಜ್ಞಾನ ದಿವ್ಯ ದರ್ಶನ ಮೇಳ, ಸಂಜೆ 7.45 ರಿಂದ ಡಾ. ವಸುಂಧರಾ ದೊರೆಸ್ವಾಮಿ ಮತ್ತು ತಂಡದಿಂದ ಭರತನಾಟ್ಯ, ಬಿ.ಕೆ. ತಿಪ್ಪೆ ಮತ್ತು ತಂಡದಿಂದ ಆಧ್ಯಾತ್ಮಿಕ ಗೀತೆಗಳು, ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರದವರಿಂದ ಶಿವಾಮೃತ ನೃತ್ಯರೂಪಕ, ಸ್ಥಳ: ಭಾರತೀಯ ವಿದ್ಯಾಭವನದ ಮುಂಭಾಗದ ನಿವೇಶನ, ಐಶ್ವರ್ಯ ಪೆಟ್ರೋಲ್ ಬಂಕ್ ಎದುರು.


■ **ಶ್ರೀ ಉಮಾಮಹೇಶ್ವರಿ ದೇವಸ್ಥಾನ :** ಶಿವರಾತ್ರಿ ಆಚರಣೆ, ಬೆಳಗ್ಗೆ 6 ರಿಂದ ರುದ್ರಾಭಿಷೇಕ ನಂತರ ಮಹಾಮಂಗಳಾರತಿ, ಸಂಜೆ 6 ಗಂಟೆಯಿಂದ ಮೊದಲನೇ ಜಾವದ ಪೂಜೆ, ರಾತ್ರಿ 9 ಗಂಟೆಗೆ ಎರಡನೇ ಜಾವದ ಪೂಜೆ, ಮಧ್ಯರಾತ್ರಿ 12 ಗಂಟೆಗೆ ಮೂರನೇ ಜಾವದ ಪೂಜೆ ಹಾಗೂ ಬೆಳಗ್ಗೆ 4 ಗಂಟೆಗೆ ನಾಲ್ಕನೇ ಜಾವದ ಪೂಜೆ, ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ, ರಾತ್ರಿ ಭಜನೆ ಹಾಗೂ ನೃತ್ಯ ಕಾರ್ಯಕ್ರಮಗಳು, ಸ್ಥಳ: ಶ್ರೀ ಉಮಾಮಹೇಶ್ವರಿ ದೇವಸ್ಥಾನ, ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಕುವೆಂಪುನಗರ 2ನೇ ಹಂತ, ಕೆಹೆಚ್‌ಬಿ ಕಾಲೋನಿ.

■ **ಅಭಿಯಂತರರು, ನವದೆಹಲಿ ಸಂಸ್ಕೃತಿ ಸಚಿವಾಲಯ :** ರಾಷ್ಟ್ರೀಯ ರಂಗ ಉತ್ಸವ (ನ್ಯಾಷನಲ್ ಥಿಯೇಟರ್ ಫೆಸ್ಟಿವಲ್), ಉದ್ಘಾಟನೆ : ಹಿರಿಯ ಸಾಹಿತಿ ಡಾ. ಎಲ್. ಹನುಮಂತಯ್ಯ, ಅಧ್ಯಕ್ಷತೆ : ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷ ಶ್ರೀನಿವಾಸ್ ಜಿ. ಕಪ್ಪಣ್ಣ, ಮುಖ್ಯ ಅತಿಥಿಗಳು : ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಕ್ರಾನಿಕಲ್ಸ್ ಆಫ್ ಇಂಡಿಯಾ ಕಲಾವಿದರಿಂದ ನಾಟಕ ಶಿವೋಹಂ, ನಿರ್ದೇಶನ : ಗಣೇಶ್ ಮಂದರ್ತಿ, ಸ್ಥಳ: ಕಲಾಮಂದಿರ, ಸಂಜೆ 6.30ಕ್ಕೆ.

ಸುತ್ತೂರು ಶ್ರೀ ಕ್ಷೇತ್ರ, ನಂಜನಗೂಡು ತಾಲೂಕು

■ **ಸುತ್ತೂರು ಶ್ರೀ ಕ್ಷೇತ್ರ :** ಮಹಾಶಿವರಾತ್ರಿಯ ವಿಶೇಷ ಕಾರ್ಯಕ್ರಮ, ಸಾನ್ನಿಧ್ಯ : ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವವರ ಕರ್ತೃಗದ್ದುಗೆಯಲ್ಲಿ ಬುಧವಾರ ಬೆಳಗ್ಗೆ 6 ಹಾಗೂ ಸಂಜೆ 6ರಿಂದ ಗುರುವಾರ ಬೆಳಗ್ಗೆ 6ರವರೆಗೆ ನಾಲ್ಕು ಜಾವಗಳಲ್ಲಿಯೂ ವಿಶೇಷ ಪೂಜೆಗಳು, ಸಂಜೆ 7ಕ್ಕೆ ಶಿವದೀಕ್ಷೆ ಮತ್ತು ರಾತ್ರಿ 9.30ಕ್ಕೆ ಬೆಳ್ಳಿರಥ ಪ್ರಾಕಾರೋತ್ಸವ, ಶ್ರೀ ಮಹದೇಶ್ವರ, ಶ್ರೀ ಸೋಮೇಶ್ವರ, ಶ್ರೀ ವೀರಭದ್ರೇಶ್ವರ, ಶ್ರೀ ನಂಜುಂಡೇಶ್ವರ ಮತ್ತು ಶ್ರೀ ನಾರಾಯಣಸ್ವಾಮಿ ದೇವಸ್ಥಾನಗಳಲ್ಲಿಯೂ ವಿಶೇಷ ಪೂಜೆ, ಸಂಜೆ 5.30ಕ್ಕೆ ಜೆಎಸ್‌ಎಸ್ ವಸತಿ ಶಾಲೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ರಾತ್ರಿ 8ಕ್ಕೆ ಮೈಸೂರಿನ ಶ್ರೀರಾಂಪುರದ ಶ್ರೀಮತಿ ರೇವತಿ ಶರ್ಮ ಮತ್ತು ತಂಡದವರಿಂದ ಭಕ್ತಿಗಾಯನ, ರಾತ್ರಿ 10ಕ್ಕೆ ಶ್ರೀ ಎಸ್.ಆರ್. ಲಕ್ಷ್ಮೀನರಸಿಂಹನ್ ಅವರಿಂದ ಶಿವಕಥಾ ಸಂಕೀರ್ತನೆ, ರಾತ್ರಿ 1ಕ್ಕೆ ಮೈಸೂರಿನ ಲಿಂಗರಾಜು ಮತ್ತು ತಂಡದವರಿಂದ ಜನಪದ ಭಕ್ತಿಗೀತೆಗಳು, ರಾತ್ರಿ 3ಕ್ಕೆ ಚಾಮರಾಜನಗರ ಜಿಲ್ಲೆಯ ಬ್ಯಾಡಮೂಡ್ಲು ಗ್ರಾಮದ ಶ್ರೀ ಮಲೆ ಮಹದೇಶ್ವರ ಕಂಸಾಳೆ ಮತ್ತು ಸಾಂಸ್ಕೃತಿಕ ಕಲಾ ಟ್ರಸ್ಟ್‌ನವರಿಂದ ನೀಲಗಾರರ ಮೇಳ, ಪ್ರಾತಃಕಾಲ 5ಕ್ಕೆ ಹೊರಳವಾಡಿಯ ಶ್ರೀ ಬಸವೇಶ್ವರ ಭಜನಾ ತಂಡದವರಿಂದ ಭಜನೆ ಕಾರ್ಯಕ್ರಮಗಳು.


ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ. ವಿನೋದ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು–ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ ಹಾಗೂ ನಿರೂಪಣೆ –ಎಸ್. ರಾಮನಾಥ್, ನಿರ್ವಾಣ–ಪ್ರಭುಸ್ವಾಮಿ ಮಳಿಮಠ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಂಬಯ್ಯನುಲಿ, ಎಂ. ರಾಘವೇಂದ್ರ, ಟಿ. ಎಸ್. ಸ್ನೇಹಾ, ವ್ಯಾಖ್ಯಾನ–ಡಾ. ಹೆಚ್. ಎನ್. ಮಂಜುರಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು–Indian Cancer Society, Karnataka Chapter, 9.10 ವೃತ್ತಿ ಮಾರ್ಗದರ್ಶನ–ಇಂಜಿನಿಯರಿಂಗ್ ಗಣಿತಶಾಸ್ತ್ರ ಅಂದರೆ ಇಂಜಿನಿಯರಿಂಗ್ ಮ್ಯಾಥಮೆಟಿಕ್ಸ್ ವಿಷಯದಲ್ಲಿ ಇರುವ ಅಧ್ಯಯನ ಹಾಗೂ ವೃತ್ತಿಪರ ಅವಕಾಶಗಳು ಕುರಿತು ರೇವಾ ವಿಶ್ವವಿದ್ಯಾಲಯದ ಗಣಿತ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಕೆ.ಗಾಯತ್ರಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ: ಬನ್ನೂರು ಮಾದಿಗಳ್ಳಿಯ ಗೌರಮ್ಮ ಮತ್ತು ಸಂಗಡಿಗರಿಂದ ದೇವಮ್ಮನ ಹಾಡು, 1.00 ಪ್ರಗತಿಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು–Indian Cancer Society, Karnataka Chapter, 1.25 ಭಾವಗೀತೆಗಳು 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಕರ್ನಾಟಕ ಪೊಲೀಸ್ ಬ್ಯಾಂಡ್, 4.00 ಮಹಿಳಾರಂಗ, 4.45 ಹಿಂದಿ ಪಾಠ, ಪ್ರಸ್ತುತಿ : ಮಧುಬಾಲಾ ಅಗರ್‌ವಾಲ್, 5.00 ಮೈಸೂರಿನ ಪ್ರೇರಣಾ ಫೌಂಡೇಶನ್‌ನ ರಜತ ಮಹೋತ್ಸವ ಸಂದರ್ಭದಲ್ಲಿ ವಿಶೇಷ ನೇರ ಸಂವಾದ ಕಾರ್ಯಕ್ರಮ, ಭಾಗವಹಿಸಲಿದ್ದಾರೆ –ಪ್ರೇರಣಾ ಸಂಸ್ಥೆಯ ಸಂಸ್ಥಾಪಕರಾದ ಎಸ್. ಎಸ್. ಭಟ್, ಕಾರ್ಯದರ್ಶಿ ಕೊರಾನಿ, ಖಜಾಂಚಿ ಪ್ರದೀಪ್ ಕುಮಾರ್. ಎನ್.ಬಿ ಮತ್ತು ಸಂಘಟಕರಾದ ವರುಣ್ ಜಯರಾಮನ್, ಪ್ರಾಯೋಜಕರು –ಪ್ರೇರಣಾ ಫೌಂಡೇಶನ್, ಸಿದ್ದಾರ್ಥ ಲೇಔಟ್ ಮತ್ತು ಗಂಗೋತ್ರಿ ಲೇಔಟ್, ಮೈಸೂರು, 6.50 ಕೃಷಿರಂಗ : ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ, ಹಸಿರು ಹಾಗೂ ಒಣಮೇವು ಸಂಸ್ಕರಣಾ ಪದ್ಧತಿಗಳು. ಈ ಕುರಿತು ಮೈಸೂರಿನ ಕೆ.ಎಂ.ಎಫ್ ಸಂಸ್ಥೆಯ ವ್ಯವಸ್ಥಾಪಕರಾದ ಕರಿಬಸವರಾಜ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ನಕ್ಷತ್ರ ಲೋಕ–ಸಿನಿ ಸೆಲೆಬ್ರಿಟಿಗಳೊಂದಿಗೆ ಮಾತುಕತೆ ಖ್ಯಾತ ಚಲನಚಿತ್ರ ನಿರ್ದೇಶಕ ಎಸ್. ಮಹೇಂದರ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಪ್ರಭುಸ್ವಾಮಿ ಮಳೀಮಠ್ ಹಾಗೂ ಶ್ರೀಮಾನ್, 9.30 ಕ್ರೀಡಾಲೋಕ, 10.00 ನಾಟಕ–ಗದಾಯುದ್ಧ, ಪ್ರಸ್ತುತಿ : ಮಾಂಡವ್ಯ ರಂಗ ಕಲಾ ಟ್ರಸ್ಟ್, ಹೊಸಹಳ್ಳಿ, ಮಂಡ್ಯ

ಮೈಸೂರು ಹಾಗೂ ಸುತ್ತಮುತ್ತ ನಾಳೆ...



ನಾಳಿನ ಪಂಚಾಂಗ

27.02.2025 ಗುರುವಾರ, ಮಳೆ ನಕ್ಷತ್ರ: ಶತಭಿಷ, 19.02.2025 ರಿಂದ 03.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ,
ತಿಥಿ: ಚತುರ್ದಶಿ, ನಕ್ಷತ್ರ: ಧನಿಷ್ಠ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಥೈರಾಯಿಡ್ ಸಮಸ್ಯೆ, ಹಸಿರಂಬುವಿನ ಗಾಯಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ಮಹಾಶಿವರಾತ್ರಿ ಕಾರ್ಯಕ್ರಮಗಳು, ಬೆಳಗ್ಗೆ 1ಕ್ಕೆ ಕೂಚಿಪುಡಿ ನೃತ್ಯ – ಶ್ರೀ ಸದ್ಗುರು ಕಲಾ ಅಕಾಡೆಮಿ, ಪೀಠಾಪುರ, ನಿರ್ದೇಶನ : ವಿದುಷಿ ಎನ್. ಸುಭಾಷಿಣಿ, ಬೆಳಗ್ಗೆ 3ಕ್ಕೆ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರಿಂದ ಶಿವ ಭಜನೆ, ದಿವ್ಯನಾಮ ಸಂಕೀರ್ತನೆ, ಉಪನ್ಯಾಸ, ಬೆಳಗ್ಗೆ 6ಕ್ಕೆ ಸಚ್ಚಿದಾನಂದೇಶ್ವರ ಶಿವಲಿಂಗಕ್ಕೆ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ನಂಜನಗೂಡು ರಸ್ತೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಸುಯೋಗ್ ಆಸ್ಪತ್ರೆ :** ಮಧುಮೇಹ ಉಚಿತ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.

■ **ಪ್ರೀತಿ ಕ್ಯಾನ್ಸರ್ ಸೆಂಟರ್ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಎಂ.ಜಿ. ರಸ್ತೆ, ಬೆಳಗ್ಗೆ 10 ರಿಂದ.

■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ವಾರ್ಷಿಕ ಕ್ರೀಡಾಕೂಟ, ಮುಖ್ಯ ಅತಿಥಿಗಳು : ಮಾಜಿ ರಣಜಿ ಆಟಗಾರ ಡಾ. ಪ್ರದೀಪ್ ಭಾರದ್ವಾಜ್, ರಾಷ್ಟ್ರೀಯ ಖೋ ಖೋ ಆಟಗಾರ್ತಿ ಬಿ. ಚೈತ್ರಾ, ಡಾ.ಎಸ್. ಪರಮೇಶ್ವರ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಹನುಮಂತಚಾರ್ ಜೋಶಿ, ಸ್ಥಳ: ಶಾರದಾ ವಿಲಾಸ ಕಾಲೇಜು ಮೈದಾನ, ಬೆಳಗ್ಗೆ 10ಕ್ಕೆ.

■ **ಶ್ರೀ ಅಮೃತೇಶ್ವರಸ್ವಾಮಿ ದೇವಸ್ಥಾನ :** 53ನೇ ವರ್ಷದ ಮಹಾಶಿವರಾತ್ರಿ ಪೂಜೆ, ರುದ್ರಹೋಮ, ಶನೈಶ್ವರ ಜಯಂತಿ, ಸ್ಥಳ: ಶ್ರೀ ಅಮೃತೇಶ್ವರಸ್ವಾಮಿ ದೇವಸ್ಥಾನ, ದೇವರಾಜ ಮೊಹಲ್ಲಾ.

■ **ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಸ್ಥಾನ :** ಮಹಾಶಿವರಾತ್ರಿ ಉತ್ಸವ, ಬೆಳಗ್ಗೆ 8.30ಕ್ಕೆ ದೇವರ ರಾಜ ಬೀದಿಯಲ್ಲಿ ಉತ್ಸವ, ಸ್ಥಳ: ಶ್ರೀ ಚಂದ್ರಮೌಳೀಶ್ವರಸ್ವಾಮಿ ದೇವಸ್ಥಾನ, ವಿ.ವಿ. ಮೊಹಲ್ಲಾ.

■ **ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಬಾಸುದೇವ ಸೋಮಾನಿ ಕಾಲೇಜು :** ಡಾ. ಬಿ.ಆರ್. ಅಂಬೇಡ್ಕರ್ ಅವರ ಶೈಕ್ಷಣಿಕ ಪಯಣ ಕುರಿತು ವಿಶೇಷ ಉಪನ್ಯಾಸ ಸಂದರ್ಶಕ ಪ್ರಾಧ್ಯಾಪಕ ಪ್ರೊ. ರಹಮತ್ ತರೀಕೆರೆ ಅವರಿಂದ, ಮುಖ್ಯ ಅತಿಥಿಗಳು : ಡಾ. ಎಂ. ಪುಟ್ಟಸ್ವಾಮಿ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಎಂ.ಮಹದೇವಸ್ವಾಮಿ, ಉಪಸ್ಥಿತರು : ಡಾ. ಜಿ. ಸೋಮಶೇಖರ್, ಸ್ಥಳ: ಬಾಸುದೇವ ಸೋಮಾನಿ ಕಾಲೇಜು, ಕುವೆಂಪುನಗರ, ಬೆಳಗ್ಗೆ 11ಕ್ಕೆ.

■ **ಶ್ರೀಮುಕ್ಕಣ್ಣೇಶ್ವರಸ್ವಾಮಿ ದೇವಸ್ಥಾನ :** 57ನೇ ವರ್ಷದ ಮಹಾಶಿವರಾತ್ರಿ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, ತೀರ್ಥಪ್ರಸಾದ, ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನದ ಆವರಣ, ಅಶೋಕ ರಸ್ತೆ.

■ **ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಮೈಸೂರು:** ತ್ರಿಮೂರ್ತಿ ಶಿವ ಜಯಂತಿ ಮಹೋತ್ಸವದ ಪ್ರಯುಕ್ತ ಜ್ಞಾನ ವಿಜ್ಞಾನ ದಿವ್ಯ ದರ್ಶನ ಮೇಳ, ಸಂಜೆ 6.15 ರಿಂದ ಮಂಜುಳ, ಸರಸ್ವತಿಪುರಂ ಅವರಿಂದ ಸಂಕಲ್ಪಶಕ್ತಿ ಕುರಿತು ಚಿಂತನ ಕಾರ್ಯಕ್ರಮ, ಸಂಜೆ 7.45 ರಿಂದ ಸಂಗಿತ ವಿದ್ವಾನ್ ಆರ್. ರಘು ಆರ್. ಮತ್ತು ತಂಡದಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ಸ್ಥಳ: ಭಾರತೀಯ ವಿದ್ಯಾಭವನದ ಮುಂಭಾಗದ ನಿವೇಶನ, ಐಶ್ವರ್ಯ ಪೆಟ್ರೋಲ್ ಬಂಕ್ ಎದುರು.

■ **ಅಭಿಯಂತರರು, ನವದೆಹಲಿ ಸಂಸ್ಕೃತಿ ಸಚಿವಾಲಯ :** ರಾಷ್ಟ್ರೀಯ ರಂಗ ಉತ್ಸವ (ನ್ಯಾಷನಲ್ ಥಿಯೇಟರ್ ಫೆಸ್ಟಿವಲ್), ಬೆಂಗಳೂರಿನ ಯುವಶ್ರೀ ಕಲಾವಿದರಿಂದ ಒಂದು ವಿಲಯ ಕಥೆ (ಕನ್ನಡ) ನಾಟಕ ಪ್ರದರ್ಶನ, ನಿರ್ದೇಶನ : ಶರತ್ ಪರ್ವತವಾಣಿ, ಸ್ಥಳ: ಕಲಾಮಂದಿರ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಸೀರೆಯ ಸೊಬಗು –ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ : ಜಯಶ್ರೀ ಹೆಗಡೆ, 6.40 ಅರಿವಿನ ಶಿಖರ –ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಂಬಯ್ಯನುಲಿ, ಎಂ.ಎ. ಶೋಭಾ, ವ್ಯಾಖ್ಯಾನ–ಡಾ. ಲತಾ, ಮೈಸೂರು, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 9.05 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು - Indian Cancer Society, Karnataka Chapter, 10.00ಕರ್ನಾಟಕ ಶಾಸ್ತ್ರೀಯ ಸಂಗೀತ: ಹರಿಣಿ. ಆರ್ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ : ಜಿ. ಶಾಂತಕುಮಾರ್

ಮಧ್ಯಾಹ್ನ: 12.35 ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು–Indian Cancer Society, Karnataka Chapter, 1.20 ಭಾವಗೀತೆಗಳು, 2.40 ಕನ್ನಡ ಚಿತ್ರಗೀತೆಗಳು, 4.00 ಹಳ್ಳಿಹಾಡು, ಭಾಗವಹಿಸುತ್ತಾರೆ–ಬನ್ನೂರು ಬಸವನಹಳ್ಳಿಯ ದೊಡ್ಡರಾಚಪ್ಪ ಮತ್ತು ನಾಗರಾಜು, ಪ್ರಸ್ತುತಿ : ಡಾ. ಮೈಸೂರು ಉಮೇಶ್, 4.30 ಕನ್ನಡ ಭಾರತಿ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ಜೋಳ ಹಾಗೂ ಕಡಲೆ ಬೇಸಾಯ ಮತ್ತು ಮಾರಾಟ ಕುರಿತು ಮುಶ್ಗೂರೇಶ್ವರ ರೈತ ಉತ್ಪಾದಕ ಕಂಪನಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಿ.ರಾಜಣ್ಣ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಹಲೋ ಯುವವಾಣಿ–ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ರಸಪ್ರಶ್ನೆ ಕಾರ್ಯಕ್ರಮ. ನಡೆಸಿಕೊಡುತ್ತಾರೆ–ನಿವೇದಿತಾ. ಹೆಚ್., 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಡಾ. ಶ್ರೀಪಾದ ಪಿನಾಕಪಾಣಿ–ಹಾಡುಗಾರಿಕೆ, 10.00 ನಾಟಕ–ಧೃವಸ್ವಾಮಿನಿ, ರಚನೆ–ಡಾ. ವಿ. ಸೌಭಾಗ್ಯಲಕ್ಷ್ಮಿ, ನಿರ್ದೇಶನ ಹಾಗೂ ನಿರ್ವಾಣ –ಪ್ರಭುಸ್ವಾಮಿ ಮಳೀಮಠ್, 10.30 ಸವಿನೆನಪು

ಕಂಡಕ್ಟರ್ ಮೇಲೆ ಹಲ್ಲೆ: ಬೆಳಗಾವಿಯಲ್ಲಿ ಕರವೇ ಪ್ರತಿಭಟನೆ

ಎಂಇಎಸ್ ಪುಂಡರ ವಿರುದ್ಧ ಆಕ್ರೋಶ, ಗಡಿಪಾರು ಮಾಡಲು ಒತ್ತಾಯ



ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣಗೌಡ, ಪ್ರವೀಣ ಶೆಟ್ಟಿ ಬಣಗಳ ಕಾರ್ಯಕರ್ತರು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದರು.

ಬೆಳಗಾವಿ, ಫೆ.25– ಬಸ್ ಕಂಡಕ್ಟರ್ ಮಹಾದೇವ ಹುಕ್ಕೇರಿ ಮೇಲಿನ ಹಲ್ಲೆ ಹಾಗೂ ಅವರ ವಿರುದ್ಧ ಪೋಕ್ಸೋ ಪ್ರಕರಣ ದಾಖಲಿಸಿರುವುದನ್ನು ಖಂಡಿಸಿ, ಇಲ್ಲಿನ ರಾಣಿ ಚೆನ್ನಮ್ಮನ ವೃತ್ತದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಟಿ.ಎ. ನಾರಾಯಣಗೌಡ, ಪ್ರವೀಣ ಶೆಟ್ಟಿ ಬಣಗಳ ಕಾರ್ಯಕರ್ತರು ಮಂಗಳವಾರ ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದರು.

ರಾಣಿ ಚನ್ನಮ್ಮ ವೃತ್ತದಲ್ಲಿ ನೂರಾರು ಸಂಖ್ಯೆಯಲ್ಲಿ ಜಮಾಯಿಸಿದ್ದ ಕನ್ನಡ ಪರ ಕಾರ್ಯಕರ್ತರು ಕನ್ನಡ ಬಾವುಟಗಳನ್ನು ಹಿಡಿದು ಎಂಇಎಸ್, ಶಿವಸೇನೆ ವಿರುದ್ಧ ಘೋಷಣೆಗಳನ್ನು ಮೊಳಗಿಸಿದರು. ಆರಂಭದಲ್ಲಿ ಪ್ರತಿಭಟನೆಗೆ ಮುಂದಾದ ಪ್ರವೀಣ ಶೆಟ್ಟಿ ಹಾಗೂ ಅವರ ಬಣದ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಬಳಿಕ ಆಗಮಿಸಿದ ಕ.ರ.ವೇ ರಾಜ್ಯಾಧ್ಯಕ್ಷ ನಾರಾಯಣಗೌಡ, ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಂಡಕ್ಟರ್ ಮಹಾದೇವ ಹುಕ್ಕೇರಿ ಅವರನ್ನು ಭೇಟಿಯಾಗಿ, ಆರೋಗ್ಯ ವಿಚಾರಿಸಿ ಧೈರ್ಯ ತುಂಬಿದರು. ಬಳಿಕ ರಾಣಿ ಚೆನ್ನಮ್ಮ ವೃತ್ತದಲ್ಲಿ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಬಾಳೇಕುಂದ್ರಿ ಚಲೋಗೆ ಮುಂದಾದ ನಾರಾಯಣಗೌಡ ಅವರನ್ನು ಬೆಳಗಾವಿ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಮನವೊಲಿಸುವಲ್ಲಿ ಯಶಸ್ವಿಯಾದರು. ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ನಾರಾಯಣಗೌಡ, ಕಂಡಕ್ಟರ್ ಮೇಲೆ ಹಲ್ಲೆ ಮಾಡಿದವರನ್ನು ಗೂಂಡಾ ಕಾಯ್ದೆಯಡಿ ಬಂಧಿಸಿ ಕರ್ನಾಟಕದಿಂದ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು. ಮಹಾಜನ್ ವರದಿ ಪ್ರಕಾರ ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎನ್ನುವುದು ತೀರ್ಮಾನವಾಗಿದೆ. ಆದಾಗ್ಯೂ, MES ಪುಂಡರು, ಮರಾಠಿ, ಮಹಾರಾಷ್ಟ್ರ ಮುಂದಿಟ್ಟುಕೊಂಡು ಕನ್ನಡಿಗರ ಮೇಲೆ ಹಲ್ಲೆ, ದೌರ್ಜನ್ಯ ಮಾಡುತ್ತಿದ್ದಾರೆ.ಶಿವಸೇನೆ ಕಿತ್ತೋದ ಶಿವಸೇನೆ. ಶಿವ ಹೆಸರು ಯಾಕೆ ಇಟ್ಟುಕೊಂಡಿದ್ದೀರಿ, ಮಹಾರಾಷ್ಟ್ರದ ಗೂಂಡಾ ಸೇನೆ ಎಂದು ಹೆಸರು ಇಟ್ಟುಕೊಳ್ಳಿ ಎಂದು ವಾಗ್ದಾಳಿ ನಡೆಸಿದ ಅವರು, ಗೂಂಡಾಗಳಿಗೆ ಇಲ್ಲಿಂದಲೇ ಉತ್ತರ ಕೊಡಬೇಕು ಎಂದು ಬಂದಿದ್ದೇವೆ. ಪುಂಡಾಟಕ್ಕೆ ಕೊನೆ ಆಗಬೇಕು. ಪುಂಡರನ್ನು ಗೂಂಡಾ ಕಾಯ್ದೆ ಹಾಕಿ ಬಂಧಿಸಿ ಜೈಲಿಗೆ ಕಳುಹಿಸಿ ಎಂದು ಒತ್ತಾಯಿಸಿದರು. ಇಲ್ಲಿನ ಜನಪ್ರತಿನಿಧಿಗಳನ್ನು ಕೇವಲ ಮರಾಠಿಗರು, ಎಂಇಎಸ್‌ನವರು ಆಯ್ಕೆ ಮಾಡಿ ಕಳುಹಿಸಿಲ್ಲ. ಎಲ್ಲ ಕನ್ನಡಿಗರೂ ಮತ ಹಾಕಿದ್ದಾರೆ. ಹಾಗಾಗಿ, ಹಲ್ಲೆಗೊಳಗಾದ ಕನ್ನಡಿಗ ಕಂಡಕ್ಟರ್ ಪರವಾಗಿ ನೀವು ನಿಲ್ಲಬೇಕು. ಅದನ್ನು ಬಿಟ್ಟು ಮರಾಠಿ ವೋಟ್ ಬ್ಯಾಂಕ್‌ಗಾಗಿ ಕನ್ನಡಿಗರನ್ನು ಬಲಿ ಕೊಡುವ ಕೆಲಸ ಮಾಡಿದರೆ ಕ.ರ.ವೇಯ ದೊಡ್ಡ ಹೋರಾಟವನ್ನು ಇಲ್ಲಿನ ಇಬ್ಬರು ಸಚಿವರು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕನ್ನಡಿಗರ ಸಹನೆ ಪರೀಕ್ಷೆ ಮಾಡುವುದು ಸರಿಯಲ್ಲ. ಕನ್ನಡಿಗರು ಸಹಜೀವನ ಬಯಸುವವರು. ಅದನ್ನು ನ್ಯೂನತೆ ಎಂದು ಭಾವಿಸಿದರೆ ಬೀದಿಗಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದ ಅವರು, ನಿರ್ವಾಹಕ ವಿರುದ್ಧ ಸುಳ್ಳು ಪೋಕ್ಸೊ ಪ್ರಕರಣ ದಾಖಲಿಸಿಕೊಂಡು ಪೊಲೀಸ್ ಅಧಿಕಾರಿಯನ್ನು ಅಮಾನತ್ತು ಮಾಡಬೇಕು ಎಂದು ಆಗ್ರಹಿಸಿದರು. ಈ ಮಧ್ಯ ಹಲ್ಲೆಗೊಳಗಾದ ನಿರ್ವಾಹಕನ ವಿರುದ್ಧ ಪೋಕ್ಸೊ ಪ್ರಕರಣ ದಾಖಸಿಕೊಂಡು ಬೆಳಗಾವಿ ಮಾರಿಹಾಳ ಪೊಲೀಸ್ ಠಾಣೆಯ ಸಿಪಿಐ ಗುರುರಾಜ್ ಕಲ್ಯಾಣಶೆಟ್ಟಿ ಎಂಬವರನ್ನು ಪೊಲೀಸ್ ಆಯುಕ್ತ ಯಡಾ ಮಾರ್ಟಿನ ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ–ಮಹಾರಾಷ್ಟ್ರ ನಡುವೆ ಬಸ್ ಸಂಚಾರ ರದ್ದು



ಬೆಂಗಳೂರು, ಫೆ.25–ಬಸ್‌ಗಳು ಮತ್ತು ಅವುಗಳ ಸಿಬ್ಬಂದಿಗಳ ಮೇಲೆ ದಾಳಿ ನಡೆದ ನಂತರ ಕರ್ನಾಟಕ ಮತ್ತು ಮಹಾರಾಷ್ಟ್ರ ನಡುವಿನ ಸಾರಿಗೆ ಸಂಸ್ಥೆಗಳ ಬಸ್ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ.

ನಾವು ನಿನ್ನೆಯಿಂದ ಮಹಾರಾಷ್ಟ್ರಕ್ಕೆ ಬಸ್ ಸೇವೆಗಳನ್ನು ಸ್ಥಗಿತಗೊಳಿಸಿದ್ದೇವೆ. ಮಹಾರಾಷ್ಟ್ರ ರಾಜ್ಯ ರಸ್ತೆ ಸಾರಿಗೆ ನಿಗಮ ಸಹ ಕರ್ನಾಟಕಕ್ಕೆ ಬಸ್‌ಗಳ ಕಾರ್ಯಾಚರಣೆಯನ್ನು ನಿಲ್ಲಿಸಿದೆ ಎಂದು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಹಿರಿಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ.

ಗಡಿ ಜಿಲ್ಲೆ ಬೆಳಗಾವಿಯಲ್ಲಿ ಉದ್ವಿಗ್ನ ಪರಿಸ್ಥಿತಿ ತಲೆದೋರಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ವಿವರಿಸಿದರು. ನಾರಾಯಣಗೌಡ ನೇತೃತ್ವದ ಕರ್ನಾಟಕ ರಕ್ಷಣಾ ವೇದಿಕೆ(ಕರವೇ) ಇಂದು ಬೆಳಗಾವಿ ಚಲೋಗೆ ಕರೆ ನೀಡಿದ್ದು, ಬೆಳಗಾವಿಯಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಭಾಷಾ ವಿಚಾರವಾಗಿ ಬಸ್ ನಿರ್ವಾಹಕನ ಮೇಲೆ ನಡೆದ ಈ ಹಲ್ಲೆ ಪ್ರಕರಣ ಇದೀಗ ಎರಡು ರಾಜ್ಯಗಳ ನಡುವಿನ ಸಂಪರ್ಕಕ್ಕೆ ಕುತ್ತು ಉಂಟು ಮಾಡಿದೆ. ಬೆಳಗಾವಿಯ ಸಣ್ಣ ಬಾಳೇಕುಂದ್ರಿ ಗ್ರಾಮದಲ್ಲಿ ಶುಕ್ರವಾರ ಬಸ್ ನಿರ್ವಾಹಕ ಮಹಾದೇವ ಹುಕ್ಕೇರಿ ಮೇಲೆ ಹಲ್ಲೆ ನಡೆಸಲಾಗಿತ್ತು. ಮರಾಠಿ ಮಾತನಾಡಲು ಬರುವುದಿಲ್ಲ ಎಂಬ ಕಾರಣಕ್ಕಾಗಿ ಪುಂಡರು ಹಲ್ಲೆ ನಡೆಸಿದ್ದರು. ಈ ಸಂಬಂಧ ಮಾರಿಹಾಳ ಠಾಣೆ ಪೊಲೀಸರು ಈಗಾಗಲೇ ಐವರನ್ನು ಬಂಧಿಸಿದ್ದಾರೆ. ಹಲ್ಲೆಗೊಳಗಾದ ಬಸ್ ನಿರ್ವಾಹಕ ಬೆಳಗಾವಿಯ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬೆಳಗಾವಿ ಕಂಡಕ್ಟರ್ ವಿರುದ್ಧದ ಪೋಕ್ಸೋ ಕೇಸ್ ವಾಪಸ್: ನಾವೂ ಕನ್ನಡಿಗರೇ ಎಂದ ಸಂತ್ರಸ್ತ ಬಾಲಕಿ ತಾಯಿ

ಬೆಳಗಾವಿ, ಫೆ.25– ಕೆಎಸ್‌ಆರ್‌ಟಿಸಿ ಬಸ್ ನಿರ್ವಾಹಕ ಮಹಾದೇವಪ್ಪ ಮೇಲೆ ನೀಡಿದ್ದ ಪೋಕ್ಸೋ ಕೇಸ್ ಅನ್ನು ಸಂತ್ರಸ್ತ ಬಾಲಕಿಯ ತಾಯಿ ವಾಪಸ್ ಪಡೆದಿದ್ದಾರೆ.

ಈ ಕುರಿತು ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಸಂತ್ರಸ್ತ ಬಾಲಕಿಯ ತಾಯಿ, ಯಾವುದೇ ಒತ್ತಡ ಇಲ್ಲದೆ ಕಂಡಕ್ಟರ್ ಮಹದೇವಪ್ಪ ವಿರುದ್ಧ ನೀಡಿದ್ದ ಪೋಕ್ಸೋ ಕೇಸ್ ವಾಪಸ್ ಪಡೆದಿದ್ದೇವೆಂದು ಹೇಳಿದ್ದಾರೆ.

ನಾವು ಕೂಡ ಕನ್ನಡಿಗರೇ. ಈ ವಿಚಾರದಲ್ಲಿ ಕನ್ನಡ–ಮರಾಠಿಗರ ನಡುವೆ ಜಗಳ ಆಗುತ್ತಿದೆ. ನಿರ್ವಾಹಕ ಮಹಾದೇವಪ್ಪ ಅವರ ಮೇಲೆ ನೀಡಿದ್ದ ದೂರನ್ನು ಹಿಂಪಡೆದಿದ್ದೇವೆ ಎಂದು ತಿಳಿಸಿದ್ದಾರೆ. ಬೆಳಗಾವಿಯಿಂದ ಬಾಳೇಕುಂದ್ರಿಗೆ ಬರುತ್ತಿದ್ದೆವು. ಈ ವೇಳೆ ಟಿಕೆಟ್ ಸಂಬಂಧ ಆಗಿರುವ ಜಗಳ ಇದು. ಇದನ್ನು ಕನ್ನಡ, ಮರಾಠಿ ಎಂದು ಪ್ರಚಾರ ಮಾಡುತ್ತಿದ್ದಾರೆ. ನಾವು ಕನ್ನಡದ ಅಭಿಮಾನಿಗಳು, ನಮ್ಮಲ್ಲಿ ಜಾತಿ ಭೇದಭಾವ ಇಲ್ಲ. ವಿನಾಕಾರಣ ಕನ್ನಡ, ಮರಾಠಿ ಎಂದು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ಇದನ್ನು ಮುಂದಿಟ್ಟುಕೊಂಡು ಕರ್ನಾಟಕ, ಮಹಾರಾಷ್ಟ್ರ ನಡುವೆ ಜಗಳ ಆರಂಭವಾಗಿದೆ. ನಮ್ಮ ಮಗಳಿಗೆ ಅನ್ಯಾಯವಾಗಿದೆ. ನಾವು ಪ್ರಕರಣ ವಾಪಸ್ ಪಡೆಯುತ್ತೇವೆ, ಇದನ್ನು ಇಲ್ಲಿಗೆ ನಿಲ್ಲಿಸಿ. ಕೇಸ್ ಸ್ವ–ಇಚ್ಛೆಯಿಂದ ವಾಪಸ್ ಪಡೆಯುತ್ತಿದ್ದೇವೆ. ನಮ್ಮ ಮೇಲೆ ಯಾವುದೇ ಒತ್ತಡ ಇಲ್ಲ ಎಂದು ಹೇಳಿದ್ದಾರೆ. ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಪ್ರತಿಕ್ರಿಯಿಸಿ, ವಿಡಿಯೋ ಮೂಲಕ ಪೋಕ್ಸೋ ಕೇಸ್ ವಾಪಸ್ ಪಡೆಯುವುದಾಗಿ ದೂರುದಾರರು ತಿಳಿಸಿದ್ದಾರೆ. ಅದರಲ್ಲಿ ನಾವೂ ಕನ್ನಡಿಗರು ಎಂದು ಅವರು ಹೇಳಿದ್ದಾರೆ. ಆ ವಿಡಿಯೋ ಪರಿಶೀಲಿಸಿ, ತನಿಖೆಯಲ್ಲಿ ಸಾಕ್ಷಿಯಾಗಿ ಪರಿಗಣಿಸುತ್ತೇವೆ. ತಕ್ಷಣ ತನಿಖಾಧಿಕಾರಿಯನ್ನು ಬದಲಿಸಿ, ಪ್ರಕರಣವನ್ನು ಎಸಿಪಿಗೆ ವಹಿಸಿದ್ದೇವೆ. ಅದೇ ರೀತಿ ಈ ವಿಡಿಯೋ ಸಂಗ್ರಹಿಸಿ, ಮತ್ತೊಂದು ಹೇಳಿಕೆ ದಾಖಲಿಸುವಂತೆ ತನಿಖಾಧಿಕಾರಿಗೆ ಸೂಚಿಸಿದ್ದೇನೆ. ಹಾಗೆಯೇ ಮಾರಿಹಾಳ ಪೊಲೀಸ್ ಠಾಣೆ ಸಿಪಿಐ ಅವರನ್ನು ಬೇರೆಡೆ ವರ್ಗಾವಣೆ ಮಾಡಲಾಗಿದೆ. ಅವರ ವಿರುದ್ಧ ತನಿಖೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಯುಜಿಸಿ ಕರಡು ನಿಯಮ ಪುನರ್‌ಪರಿಶೀಲನೆಗೆ ಆಗ್ರಹ

ಬೆಂಗಳೂರು, ಫೆ.25– ಶಿಕ್ಷಣ ವ್ಯವಸ್ಥೆಯ ಬದಲಾವಣೆಯು ಗುಣಮಟ್ಟವನ್ನು ದುರ್ಬಲಗೊಳಿಸಬಾರದು. ಆದ್ದರಿಂದ ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ತನ್ನ ಕರಡು ನಿಯಮಾವಳಿಗಳನ್ನು ಪುನರ್ ಪರಿಶೀಲಿಸಬೇಕು ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಕೆಂಪರಾಜು ಆಗ್ರಹಿಸಿದರು.

ಬೆಂಗಳೂರು ವಿಶ್ವವಿದ್ಯಾಲಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕದ ವತಿಯಿಂದ ಆಯೋಜಿಸಿದ್ದ ಯುಜಿಸಿಯ ವಿಶ್ವವಿದ್ಯಾಲಯಗಳ ಹೊಸ ಕರಡು ನಿಯಮಾವಳಿಗಳ ಸಾಧಕ–ಬಾಧಕ ಕುರಿತ ವಿಚಾರ ಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬದಲಾವಣೆಗೆ ತಕ್ಕಂತೆ ಶಿಕ್ಷಣ ವ್ಯವಸ್ಥೆ ಇರಬೇಕು. ಶಿಕ್ಷಣ ವ್ಯವಸ್ಥೆ ಪರಾಮರ್ಶೆಯಾಗದಿದ್ದರೆ ಅಭಿವೃದ್ಧಿ ಸಾಧ್ಯವಿಲ್ಲ. ಆದರೆ, ಅದು ಗುಣಮಟ್ಟವನ್ನು ತಗ್ಗಿಸಲು ಕಾರಣವಾಗಬಾರದು. ವಿದ್ಯಾರ್ಥಿ ಕೇಂದ್ರಿತ, ಸದೃಢ ಶಿಕ್ಷಣ ವ್ಯವಸ್ಥೆಗೆ ಪೂರಕವಾಗುವ ನೀತಿಗಳನ್ನು ಅನುಷ್ಠಾನಗೊಳಿಸಬೇಕು ಎಂದರು. ಸಹಾಯಕ ಪ್ರಾಧ್ಯಾಪಕನಾಗಬೇಕಾದರೆ ನಿರ್ದಿಷ್ಟ ವಿಷಯದ ಜ್ಞಾನ ಮತ್ತು ಆಳವಾದ ಅಧ್ಯಯನ ಅವಶ್ಯ. ನಿಯಮಾವಳಿಯಲ್ಲಿ ಆ ಬಗ್ಗೆ ಸಡಿಲಿಕೆ ಇದೆ. ಅಲ್ಲದೆ, ಪ್ರಾಧ್ಯಾಪಕರ ಪಿಎಚ್.ಡಿ ಅಗತ್ಯವನ್ನೂ ತಗ್ಗಿಸಿದೆ. ಇದರಿಂದ ಪ್ರಾಧ್ಯಾಪಕರಲ್ಲಿ ಸಂಶೋಧನಾ ಪ್ರವೃತ್ತಿ, ಸುದೀರ್ಘ ಅಧ್ಯಯನ ಆಸಕ್ತಿ ಕುಂಠಿತವಾಗುತ್ತದೆ. ಪ್ರಾಧ್ಯಾಪಕರೇ ಸಂಶೋಧನಾ ಆಸಕ್ತಿ ರೂಢಿಸಿಕೊಳ್ಳದಿದ್ದರೆ ವಿದ್ಯಾರ್ಥಿಗಳಲ್ಲಿ ಸಂಶೋಧನಾ, ಅನ್ವೇಷಣಾ, ಅಧ್ಯಯನ ಪ್ರವೃತ್ತಿ ವೃದ್ಧಿಸಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು.

ಉದ್ಯಮಿಗಳು, ಖಾಸಗಿ ವಲಯದವರು, ಶಿಕ್ಷಣ ವ್ಯವಸ್ಥೆಯ ಅರಿವಿಲ್ಲದವರು ಕುಲಪತಿಗಳಾಗಬಹುದು ಎಂಬ ಚಿಂತನೆ ಸಮಂಜಸವಲ್ಲ. ಶಿಕ್ಷಣ ಕ್ಷೇತ್ರದಲ್ಲಿ ಅನುಭವ ಹೊಂದಿದ ಮಾತ್ರಕ್ಕೆ ಪ್ರಾಧ್ಯಾಪಕರಿಗೆ ಎಚ್‌ಎಎಲ್, ಬಿಎಚ್‌ಇಎಲ್ ಸಂಸ್ಥೆಗಳಲ್ಲಿ ನಿರ್ದೇಶಕ ಹುದ್ದೆ ಪಡೆಯಲು ಸಾಧ್ಯವೇ. ಬೇರೆ ಕ್ಷೇತ್ರದಲ್ಲಿ ಇಲ್ಲದ ಸಡಿಲಿಕೆ, ಉನ್ನತ ಶಿಕ್ಷಣದಲ್ಲಿ ಮಾತ್ರ ಏಕೆ ಎಂದು ಪ್ರಶ್ನಿಸಿದರು.

ದುಡಿಯುವವರಿಗೆ ಮಾತ್ರವೇ ಪಕ್ಷದ ಜವಾಬ್ದಾರಿ ಸ್ಥಾನಗಳಿಗೆ ನೇಮಕ

- ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ.ಶಿವಕುಮಾರ್ ಖಡಕ್ ನುಡಿ
- ದುಡಿಯದವರು ನನ್ನ, ಸಚಿವರ ಆಪ್ತರಾದರೂ ಕೆಪಿಸಿಸಿಯಲ್ಲಿ ಸ್ಥಾನವಿಲ್ಲ

ಬೆಂಗಳೂರು, ಫೆ.25(ಕೆಎಂಶಿ)–ನಾಯಕರ ಮನೆ ಮುಂದೆ ಗಿರಕಿ ಹೊಡೆಯುವವರಿಗೆ ಪಕ್ಷದ ಜವಾಬ್ದಾರಿ ಸ್ಥಾನಗಳಿಗೆ ನೇಮಿಸುವುದಿಲ್ಲ ಎಂದು ಉಪಮುಖ್ಯಮಂತ್ರಿಯೂ ಆಗಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಇಂದಿಲ್ಲಿ ಖಡಕ್ಕಾಗಿ ತಿಳಿಸಿದ್ದಾರೆ. ನಮ್ಮವರೇ ಆಗಿರಲಿ, ಸಚಿವರ ಆಪ್ತರೇ ಆಗಿರಲಿ, ಪಕ್ಷಕ್ಕೆ ದುಡಿಯದವರಿಗೆ ಕೆಪಿಸಿಸಿಯಲ್ಲಿ ಸ್ಥಾನಮಾನವಿಲ್ಲ. ವರಿಷ್ಠರ ಸೂಚನೆಯಂತೆ ಕೆಪಿಸಿಸಿ ಪುನರ್ರಚನೆ ಮಾಡುತ್ತಿದ್ದೇನೆ. ಅವರ ಸಲಹೆಯಂತೆ ಕೆಳಹಂತದಲ್ಲಿ ಪಕ್ಷದ ಸಂಘಟನೆಗೆ ದುಡಿಯುತ್ತಿರುವವರನ್ನು ಗುರುತಿಸಿ ರಾಜ್ಯ ಮಟ್ಟದಲ್ಲಿ ಸ್ಥಾನಮಾನ ನೀಡಲಾಗುವುದು ಎಂದರು.



ದೆಹಲಿಗೆ ತೆರಳುವುದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೇಮಕಾತಿ ಸಂದರ್ಭದಲ್ಲಿ ಯಾವುದೇ ಒತ್ತಡ, ಮುಲಾಜಿಗೆ ಒಳಗಾಗುವುದಿಲ್ಲ. ತಾಲೂಕು ಮಟ್ಟದಲ್ಲಿ ಹಗಲಿರುಳು ಶ್ರಮಿಸುವ ಕಾರ್ಯಕರ್ತರನ್ನು ಮಾತ್ರ ನೇಮಿಸಲಾಗುವುದು ಎಂದರು. ಪದಾಧಿಕಾರಿಗಳ ಪಟ್ಟಿಯಲ್ಲಿ ಕೆಲವು ಮಂತ್ರಿಗಳ ಆಪ್ತರನ್ನು ಕೈಬಿಡಲಾಗಿದೆ ಎಂಬ ಚರ್ಚೆ ನಡೆದಿಲ್ಲ. ನಮಗೆ ಕೆಲಸ ಮಾಡುವವರು ಬೇಕು, ಅವರಿಗೆ ಜವಾಬ್ದಾರಿ ಕೊಟ್ಟರೆ ತಕ್ಕ ಫಲಿತಾಂಶ ಬರಬೇಕು.

ನಮ್ಮ ಸುತ್ತ ಗಿರಿಗಿಟ್ಲೆಯಂತೆ ಸುತ್ತುತ್ತಿದ್ದರೆ ಆಗುವುದಿಲ್ಲ, ತಾಲೂಕಿನಲ್ಲಿ ಕೂತು, ಅಲ್ಲಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಫಲಿತಾಂಶ ಬರುವ ನಾಯಕತ್ವಕ್ಕೆ ಮಾತ್ರ ಆದ್ಯತೆ ನೀಡಲಾಗುವುದು. ಪದಾಧಿಕಾರಿಗಳ ಪಟ್ಟಿ ಸದ್ಯಕ್ಕೆ ಸಿದ್ಧವಾಗಿದ್ದು, ಆಸಕ್ತಿ ಇಲ್ಲದವರ ಜಾಗಕ್ಕೆ ಬೇರೆಯವರನ್ನು ನೇಮಿಸಲಾಗುವುದು, ಪಕ್ಷ ಸಂಘಟನೆ ವಿಚಾರದಲ್ಲಿ ನಮಗೆ ದಿನವಿಡೀ ಸ್ಥಳೀಯ ಮಟ್ಟದಲ್ಲಿ ಕೆಲಸ ಮಾಡುವವರು ಬೇಕು. ಬೇರೆಯವರ ಒತ್ತಡದ ಮೇಲೆ ಪದಾಧಿಕಾರಿಗಳ ನೇಮಕ ಮಾಡಿ ಸಮಯ ವ್ಯರ್ಥ ಮಾಡುವುದಿಲ್ಲ, ಕೆಲಸ ಮಾಡುವವರಿಗೆ ಅವಕಾಶ ನೀಡಿ ಎಂಬುದಾಗಿ ಎಐಸಿಸಿ ಆದೇಶ ನೀಡಿದೆ.

ಶ್ರಮ ವಹಿಸುವ ಕಾರ್ಯಕರ್ತರ ವರದಿ ತರಿಸಿಕೊಂಡಿದ್ದು, ಅಂತಹವರಿಗೇ ಜವಾಬ್ದಾರಿ ನೀಡಲಾಗುವುದು. ಮಹಿಳೆಯರಿಗೆ ಆದ್ಯತೆ ನೀಡಿ ನಾಯಕತ್ವಕ್ಕೆ ತಯಾರಿ ಮಾಡಲಾಗುತ್ತಿದೆ. ಈ ವಾರವೇ ಈ ಪಟ್ಟಿ ಅಂತಿಮಗೊಳ್ಳಲಿದೆ.

ಬೆಳಗಾವಿಯಲ್ಲಿ ಮರಾಠಿಗರ ದಾಳಿ ವಿಷಯವನ್ನು ರಾಜ್ಯದ ಗೃಹ, ಸಾರಿಗೆ, ಜಿಲ್ಲಾ ಉಸ್ತುವಾರಿ ಸಚಿವರು ನಿಭಾಯಿಸುತ್ತಿದ್ದಾರೆ ಎಂದರು.

ಮಳೆಯಿಂದ ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ ಪಂದ್ಯ ರದ್ದು

ರಾವಲ್ಪಿಂಡಿ, ಫೆ.25– ಐಸಿಸಿ ಚಾಂಪಿಯನ್ ಟ್ರೋಫಿಯ ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ನಡುವಣ ಪಂದ್ಯ ಮಳೆಯಿಂದಾಗಿ ರದ್ದಾಗಿದೆ. ಟಾಸ್ ಹಾಕಲು ಮಳೆ ಅವಕಾಶ ನೀಡಲಿಲ್ಲ. ಮೂರು ಗಂಟೆಗಳಿಗೂ ಹೆಚ್ಚು ಕಾಲ ವಾತಾವರಣದಲ್ಲಿ ಬದಲಾವಣೆಯಾಗದ ಕಾರಣ ಪಂದ್ಯವನ್ನು ಅಂತಿಮವಾಗಿ ರದ್ದುಗೊಳಿಸಲಾಯಿತು. ರದ್ದಾಗಿದ್ದರಿಂದ ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ತಂಡಗಳಿಗೆ ತಲಾ ಒಂದೊಂದು ಅಂಕ ನೀಡಲಾಯಿತು. ಬುಧವಾರ ಇಂಗ್ಲೆಂಡ್ ಮತ್ತು ಅಫ್ಘಾನಿಸ್ತಾನ ಮಧ್ಯೆ ಪಂದ್ಯ ನಡೆಯಲಿದೆ. ಈ ಪಂದ್ಯದಲ್ಲಿ ಸೋತವರು ಟೂರ್ನಿಯಿಂದಲೇ ನಿರ್ಗಮಿಸಲಿದ್ದಾರೆ. ಬಿ ಗುಂಪಿನಿಂದ ದಕ್ಷಿಣ ಆಫ್ರಿಕಾ ಮತ್ತು ಆಸ್ಟ್ರೇಲಿಯಾ 3 ಅಂಕ ಪಡೆದಿದ್ದರೂ ನೆಟ್ ರನ್ ರೇಟ್ ಉತ್ತಮವಾಗಿರುವ ಕಾರಣ ದಕ್ಷಿಣ ಆಫ್ರಿಕಾ ಮೊದಲ ಸ್ಥಾನದಲ್ಲಿದೆ. ಇಂಗ್ಲೆಂಡ್ ಆಸ್ಟ್ರೇಲಿಯಾ ವಿರುದ್ಧ ಸೋತಿದ್ದರೆ ಅಫ್ಘಾನಿಸ್ತಾನ ದಕ್ಷಿಣ ಆಫ್ರಿಕಾ ವಿರುದ್ಧ ಸೋತಿದೆ.

ಆನೆ ಹಾವಳಿ ತಡೆಗೆ ಭದ್ರಾ ಅರಣ್ಯ ಪ್ರದೇಶದಲ್ಲಿ 'ಆನೆ ಧಾಮ' ನಿರ್ಮಾಣ

- ಅರಣ್ಯ ಸಚಿವ ಈಶ್ವರ್ ಖಂಡ್ರೆ ಘೋಷಣೆ
- ಅರಣ್ಯ ಪ್ರದೇಶ ಕ್ಷೀಣಿಸುತ್ತಿರುವುದು; ವನ್ಯಜೀವಿ ಸಂಖ್ಯೆ ಹೆಚ್ಚುತ್ತಿರುವುದೇ ಸಂಘರ್ಷಕ್ಕೆ ಕಾರಣ
- ದೇಶದಲ್ಲೇ ಅತ್ಯಧಿಕ ಸಂಖ್ಯೆ 6395 ಆನೆ ಕರ್ನಾಟಕದಲ್ಲಿವೆ

ಬೆಂಗಳೂರು, ಫೆ.25(ಕೆಎಂಶಿ)– ಅರಣ್ಯ ತೊರೆದು ಜನವಸತಿ ಪ್ರದೇಶಕ್ಕೆ ನುಗ್ಗುತ್ತಿರುವ ಕೆಲವು ಪುಂಡಾನೆಗಳಿಗಾಗಿ ಭದ್ರಾ ಕಾನನದಲ್ಲಿ 'ಆನೆ ಧಾಮ' ನಿರ್ಮಿಸುವುದಾಗಿ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದ್ದಾರೆ.



ಈಶ್ವರ ಬಿ.ಖಂಡ್ರೆ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 150ಕ್ಕೂ ಹೆಚ್ಚು ಆನೆಗಳು ಕಾಡಿನಿಂದ ಹೊರಬಂದು ಮಾನವ ಸಂಘರ್ಷಕ್ಕೆ ಕಾರಣವಾಗುತ್ತಿವೆ, ಅಂತಹ ಆನೆಗಳನ್ನು ಗುರುತಿಸಿದ್ದು ಮಿನಿ ಖೆಡ್ಡಾ ಮೂಲಕ ಸೆರೆ ಹಿಡಿದು, ಆನೆ ಧಾಮಕ್ಕೆ ರವಾನಿಸಲಾಗುವುದು ಎಂದರು. ಭದ್ರಾ ಅರಣ್ಯ ಪ್ರದೇಶದ 2,000 ಹೆಕ್ಟೇರ್‌ನಲ್ಲಿ ಧಾಮ ನಿರ್ಮಾಣಕ್ಕೆ ತೀರ್ಮಾನಿಸಲಾಗಿದೆ, ಇಲ್ಲಿ ಆನೆಗಳಿಗೆ ಅಗತ್ಯ ಆಹಾರ, ನೀರು ಲಭ್ಯವಾಗುವಂತೆ ನೋಡಿಕೊಳ್ಳಲಾಗುವುದು.

ಚಾಮರಾಜನಗರ, ಮೈಸೂರು, ಕೊಡಗು, ಹಾಸನ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಚಿಕ್ಕಮಗಳೂರು, ಬೆಳಗಾವಿ ಸೇರಿದಂತೆ ವಿವಿಧ ಅರಣ್ಯ ಪ್ರದೇಶಗಳಿಂದ ಹೊರಬಂದು ಜನವಸತಿ ಪ್ರದೇಶಗಳಿಗೆ ಲಗ್ಗೆ ಇಟ್ಟು ಮನುಷ್ಯರ ಪ್ರಾಣ ತೆಗೆಯುತ್ತಿವೆ. ಕಳೆದ ಎರಡು ದಿನಗಳಲ್ಲಿ ಆನೆಗಳಿಗೆ ಮೂರು ಜನ ಬಲಿಯಾಗಿದ್ದಾರೆ, ಮೃತರ ಹತ್ತಿರದ ಸಂಬಂಧಿಕರಿಗೆ ಕೂಡಲೇ ಪರಿಹಾರದ ಮೊತ್ತ ನೀಡಲು ಸೂಚಿಸಲಾಗಿದೆ.



ಕಾಡಿನಿಂದ ಆನೆ ಹೊರಬರದಂತೆ ಹಲವು ಯೋಜನೆಗಳನ್ನು ರೂಪಿಸಿದರೂ ಪೂರ್ಣ ಪ್ರಮಾಣದಲ್ಲಿ ತಡೆಯಲು ಸಾಧ್ಯವಾಗುತ್ತಿಲ್ಲ. ಕಾಡಂಚಿನ ಜನರು ಅರಣ್ಯ ಇಲಾಖೆ ನೀಡುವ ಆನೆಗಳ ಚಲನವಲನದ ಬಗೆಗಿನ ಮುನ್ನೆಚ್ಚರಿಕೆಗೆ ಸ್ಪಂದಿಸಬೇಕು, ಎಲ್ಲ ದುರ್ಘಟನೆಗಳು ಬೆಳಗಿನ ಮತ್ತು ಸಂಜೆ ವೇಳೆ ಸಂಭವಿಸುತ್ತಿದ್ದು, ಜಾಗರೂಕರಾಗಿರಬೇಕು. ಆನೆ–ಮಾನವ ಸಂಘರ್ಷ, ವನ್ಯಜೀವಿ–ಮಾನವ ಸಂಘರ್ಷ ಇಂದಿನ ಸಮಸ್ಯೆಯಲ್ಲ, ಸಾವಿರಾರು ವರ್ಷಗಳಿಂದಲೂ ಇದೆ. ಒಂದೆಡೆ ಅರಣ್ಯ ಪ್ರದೇಶ ಕ್ಷೀಣಿಸುತ್ತಿದೆ, ಮತ್ತೊಂದೆಡೆ ವನ್ಯಜೀವಿಗಳ ಸಂಖ್ಯೆ ಹೆಚ್ಚುತ್ತಿರುವುದು ಸಮಸ್ಯೆ ಉಲ್ಬಣವಾಗಲು ಕಾರಣವಾಗಿದೆ. ವನ್ಯಜೀವಿ–ಮಾನವ ಸಂಘರ್ಷ ತಡೆಗೆ ಟೆಂಟಕಲ್ ಫೆನ್ಸಿಂಗ್, ಸೌರ ಬೇಲಿ, ಆನೆ ಕಂದಕ ನಿರ್ಮಿಸಿ, ರೈಲ್ವೆ ಬ್ಯಾರಿಕೇಡ್‌ಗಳನ್ನೂ ಹಾಕಲಾಗುತ್ತಿದೆ.

2024–25ನೇ ಸಾಲಿನಲ್ಲಿ 78.917 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಕಾಮಗಾರಿ ಪೂರ್ಣಗೊಂಡಿದೆ, 41.87 ಕಿ.ಮೀ. ಕಾಮಗಾರಿ ಪ್ರಗತಿಯಲ್ಲಿದೆ, ಇನ್ನೂ 103 ಕಿ.ಮೀ. ಗುರಿ ನಿಗದಿ ಮಾಡಲಾಗಿದ್ದು, ಮಾರ್ಚ್ 31ರೊಳಗೆ ಕೆಲಸ ಆರಂಭವಾಗಲಿದೆ.

ದೇಶದಲ್ಲಿಯೇ ಅತೀ ಹೆಚ್ಚು ಅಂದರೆ, 6,395 ಆನೆಗಳು ಕರ್ನಾಟಕದಲ್ಲಿವೆ. ಪುಂಡಾನೆ ಹಾವಳಿ ತಡೆಗೆ ಮಾರ್ಗೋಪಾಯ ಕಂಡುಹಿಡಿಯಲು ನೆರೆ ರಾಜ್ಯಗಳ ಸಚಿವರೊಂದಿಗೆ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸಮಾವೇಶವನ್ನೂ ನಡೆಸಲಾಗಿದೆ, ತಜ್ಞರ ಸಮಿತಿ ರಚಿಸಿ ಅಧ್ಯಯನ ನಡೆಸಲಾಗುತ್ತಿದೆ. ಆನೆ ಕಾರ್ಯಪಡೆಯನ್ನೂ ರಚಿಸಲಾಗಿದೆ. ಕಾಡಂಚಿನಲ್ಲಿ ಕೃಷಿ ಚಟುವಟಿಕೆ, ಕೆರೆಗಳನ್ನು ತುಂಬಿಸುವ ಕಾರ್ಯಗಳಿಂದಾಗಿ ಬಾಳೆ, ಹಲಸು, ಭತ್ತ ಇತ್ಯಾದಿ ಫಸಲು ತಿನ್ನಲು ಮತ್ತು ನೀರು ಕುಡಿಯಲು ಆನೆಗಳು ಊರಿಗೆ ಬರುತ್ತಿವೆ ಎಂಬುದು ತಜ್ಞರ ಅಭಿಪ್ರಾಯ. ಮಾನವ–ಆನೆ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದರು.

ಇಂದು ಲಷ್ಕರ್‌ಮೊಹಲ್ಲಾದ ಶ್ರೀ ಮಲೆ ಮಹದೇಶ್ವರಸ್ವಾಮಿಗೆ ವಿಶೇಷ ಪೂಜೆ

ಮೈಸೂರು,ಫೆ.25(ಪಿಎಂ)– ಮೈಸೂರಿನ ಲಷ್ಕರ್‌ಮೊಹಲ್ಲಾದ ಗರಡಿಕೇರಿಯ 3ನೇ ಕ್ರಾಸ್‌ನ ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದಲ್ಲಿ ಫೆ.26ರಂದು ಮಹಾ ಶಿವರಾತ್ರಿ ಪೂಜಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 6 ಗಂಟೆಗೆ ಶ್ರೀ ಮಹದೇಶ್ವರ ಸ್ವಾಮಿಯವರ ಪ್ರಾಣಲಿಂಗಕ್ಕೆ ಮಹಾರುದ್ರಾಭಿಷೇಕ, ಹಾಲಭಿಷೇಕ, ಬಿಲ್ವಾರ್ಚನೆ, ನಿವೇದನೆ, ಧೂಪದಾರತಿ, ತುಪ್ಪದಾರತಿ, ವಿಶೇಷ ಹೂವಿನ ಅಲಂಕಾರ ಮತ್ತು ಮಹಾಮಂಗಳಾರತಿ, ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ಸಂಜೆ 7ಕ್ಕೆ ಶ್ರೀ ಸ್ವಾಮಿಯವರ ಉತ್ಸವಮೂರ್ತಿ ಹಾಗೂ ಸುವರ್ಣ ಕೊಳಗದ ಮೆರವಣಿಗೆಯು ಮಂಗಳವಾದ್ಯ ಮತ್ತು ನಗಾರಿ ತಂಡಗಳೊಂದಿಗೆ ಮೊಹಲ್ಲಾದಲ್ಲಿ ನಡೆಯಲಿದೆ ಎಂದು ಶ್ರೀಮಲೆ ಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಎಂ.ಎಸ್.ರವಿಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಮೇಷ್ಟ್ರು : ನಿಜವಾದ ಕನ್ನಡಿಗರು ಎಂದರೆ ಯಾರು?
ಮರಿಗುಂಡ : ಯಾರು ಇಂಗ್ಲೀಷ್‌ನಲ್ಲಿ ಫೇಲ್ ಆಗ್ತಾರೋ ಅವರೇ ನಿಜವಾದ ಕನ್ನಡಿಗರು ಮೇಷ್ಟ್ರೇ...!

ಮೈಸೂರು ಮಿತ್ರ
ಬುಧವಾರ, 26 ಫೆಬ್ರವರಿ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಅರಮನೆ ಹಾಳಾದರೆ ಅದು ಪಾಳುಮನೆ ಎನ್ನಿಸಿಕೊಳ್ಳುತ್ತದೆ. ಆದರೆ ದೇವಾಲಯ ಎಷ್ಟು ಹಾಳಾದರೂ ಅದು ದೇವಾಲಯವೆಂದೇ ಎನ್ನಿಸಿಕೊಳ್ಳುತ್ತದೆ. ನಿನ್ನ ಬಾಳನ್ನು ಅರಮನೆಯನ್ನಾಗಿ ಮಾಡಿಕೊಳ್ಳಬೇಡ, ದೇವಾಲಯವನ್ನಾಗಿ ಮಾಡಿಕೊ. – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮನೆಂಬೆಂಬ ಮರ ಮುರಿಯಬಾರದು, ಮನಸ್ಸೆಂಬ ಮಾರ್ಗ ಕತ್ತರಿಸಬಾರದು.

ನಿಮ್ಮ ಪತ್ರಗಳು

■ ಮದುವೆಯಾಗುವವರೆಗೂ...

ಮಾನ್ಯರೆ,

ಹತ್ತು ವರ್ಷಗಳ ಸುದೀರ್ಘ ಕಾಲ ಹುಡುಕಿದರೂ ಸಹ, ಮದುವೆಗೆ ಹೆಣ್ಣು ಸಿಗಲಿಲ್ಲವೆಂಬ ಜಿಗುಪ್ಸೆಯಿಂದ ನೊಂದ ಯುವಕನೋರ್ವ ಆತ್ಮಹತ್ಯೆಗೆ ಶರಣಾಗಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದೆ. ವೈವಾಹಿಕ ಜೀವನದ ಸಂಕಷ್ಟಗಳ ಸರಮಾಲೆಯಿಂದ ನೊಂದು–ಬೆಂದು ಆತ್ಮಹತ್ಯೆ ದಾರಿ ತುಳಿಯುವವರ ವರ್ಗ ಒಂದಾದರೆ, ಮದುವೆಯಾಗಲಿಲ್ಲ ಎಂದು ಕೊರಗಿ ಕೊರಗಿ ಸಾಯುವವರ ಸಂಖ್ಯೆ ಕೂಡ ಹೆಚ್ಚುತ್ತಿದೆ. ಅದೇನೋ ಹೇಳ್ತಾರಲ್ಲ "ಮದುವೆಯಾಗುವವರೆಗೂ ಹುಚ್ಚು ಬಿಡೊಲ್ಲ, ಹುಚ್ಚು ಬಿಡುವವರೆಗೂ ಮದುವೆಯಾಗೊಲ್ಲಾ" ಅನ್ನುವ ಹಾಗೆ ನಡೆಯುತ್ತಿರುವ ಇಂತಹ ಪ್ರಕರಣಗಳು ಅಷ್ಟೇ ಗಂಭೀರವಾಗಿವೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

■ ಕಾಮುಕ ಪೊಲೀಸ್ ಪೇದೆ ವಜಾಗೊಳಿಸಿ ಜೀವಾವಧಿ ಶಿಕ್ಷೆ ನೀಡಿ

ಮಾನ್ಯರೆ,

ಬೆಂಗಳೂರಿನ ಬೊಮ್ಮನಹಳ್ಳಿ ಪೊಲೀಸ್ ಠಾಣೆಯ ಕಾನ್ಸ್‌ಟೇಬಲ್ ಅರುಣ್ ಎಂಬ ವಿಕೃತಕಾಮಿಯು ಅದಾಗಲೇ ಪ್ರೀತಿಯ ಮೋಸದ ಜಾಲಕ್ಕೆ ಬಿದ್ದು ಯುವಕನೋರ್ವನಿಂದ ಗಂಭೀರ ಸ್ವರೂಪದ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿದ್ದ 17 ವರ್ಷದ ಹೆಣ್ಣು ಮಗಳು ಪೊಲೀಸ್ ಠಾಣೆಗೆ ತನಗಾದ ಅನ್ಯಾಯದ ವಿರುದ್ಧ ದೂರು ನೀಡಲು ಬಂದಾಗ ಈ ಹೆಣ್ಣು ಮಗಳಿಗೆ ನ್ಯಾಯ ಕೊಡಿಸುವುದಾಗಿ ನಂಬಿಸಿ ಹೋಟೆಲ್ ಒಂದರಲ್ಲಿ ನಿರಂತರವಾಗಿ ಎರಡು ಬಾರಿ ಅತ್ಯಾಚಾರ ಮಾಡಿ, ಬೆತ್ತಲೆಯ ಫೋಟೋವನ್ನು ತೆಗೆದು ಒಂದು ವೇಳೆ ನೀನು ಬೇರೆ ಯಾರಿಗಾದರೂ ಈ ವಿಷಯವನ್ನು ಹೇಳಿದ್ದಲ್ಲಿ ನಿನ್ನನ್ನು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿ ಪ್ರಕರಣವನ್ನು ಮುಚ್ಚು ಹಾಕಲು ಪ್ರಯತ್ನಿಸಿದ. ನಡೆದ ಈ ಘಟನೆಯನ್ನು ತನ್ನ ತಾಯಿಯ ಬಳಿ ಆ ಹೆಣ್ಣು ಮಗಳು ಹೇಳಿಕೊಂಡಾಗ ಈ ಪ್ರಕರಣ ಬೆಳಕಿಗೆ ಬಂದಿದೆ. ತಕ್ಷಣ ಎಚ್ಚೆತ್ತು ಪೊಲೀಸ್ ಕಾನ್ಸ್‌ಟೇಬಲ್ ಹಾಗೂ ಯುವಕನನ್ನು ಬಂಧಿಸಿದ್ದಾರೆ. ಈ ಪೊಲೀಸ್ ಪೇದೆಯ ಕೃತ್ಯದಿಂದ ಸಮಾಜಕ್ಕೆ ಇಲಾಖೆಯ ಬಗ್ಗೆ ಯಾವ ರೀತಿಯಲ್ಲಿ ಸಂದೇಶ ತಲುಪುತ್ತದೆ ಎಂಬುದನ್ನು ಆಲೋಚಿಸಿ ಬೆಂಗಳೂರಿನ ಪೊಲೀಸ್ ಆಯುಕ್ತರು ಈತನನ್ನು ಪೊಲೀಸ್ ಪೇದೆ ಹುದ್ದೆಯಿಂದ ಶಾಶ್ವತವಾಗಿ ವಜಾಗೊಳಿಸಿ ಹಾಗೂ ಜೀವಾವಧಿ ಶಿಕ್ಷೆ ಆಗುವ ರೀತಿಯಲ್ಲಿ ಪ್ರಕರಣದ ವರದಿಯನ್ನು ನ್ಯಾಯಾಂಗಕ್ಕೆ ಒಪ್ಪಿಸಬೇಕಾಗಿದೆ.

–ಪವನ್ ಜಯರಾಂ, ಸಿದ್ದಯ್ಯನಪುರ, ಚಾ.ನಗರ

■ ಲೀಟರ್‌ಗೆ 5 ರೂ. ಏರಿಕೆ? ಕಹಾಮ ಸ್ಪಷ್ಟನೆ ನೀಡಲಿ

ಮಾನ್ಯರೆ,



ಹಾಲಿನ ದರ ಏರಿಸುವ ನಿಟ್ಟಿನಲ್ಲಿ ಗ್ರಾಹಕರಿಗೆ ಹೊರೆಯಾಗದಂತೆ ಎಂದು ಹೇಳುತ್ತಾ ಮಂಕು ಬೂದಿ ಎರಚುವ ಕಹಾಮ ಕೆಲವೇ ತಿಂಗಳ ಹಿಂದೆ ಅರ್ಧ ಲೀಟರ್‌ನ ಪ್ರತಿ ಪ್ಯಾಕೆಟ್‌ಗೆ ರೂ.2 ಮತ್ತು ಒಂದು ಲೀಟರ್‌ನ ಪ್ಯಾಕೆಟ್‌ಗೆ ರೂ.2 ಹೆಚ್ಚಿಸಿ ಇದು ಐವತ್ತು ಮಿಲಿ ಹೆಚ್ಚಿನ ಹಾಲಿಗೆ ಎಂಬ ಸಬೂಬು ಹೇಳಿತ್ತು. ಆದರೆ ಪ್ರಸ್ತುತ ಸುದ್ದಿಯ ರೀತ್ಯ (ಮೈ.ಮಿ.21.2.2025) ಬಜೆಟ್ ನಂತರ ನಂದಿನಿ ಹಾಲಿನ ದರ ಲೀ.ಗೆ 5 ರೂ ಹೆಚ್ಚಳ ಹಾಗೂ ಈ ಹಿಂದೆ ನೀಡುತ್ತಿದ್ದ ಲೀಟರ್ ಪರಿಮಾಣವನ್ನು 1050 ಮಿಲಿ ಇಂದ ಇಳಿಸಲಾಗುವುದು ಎಂಬ ಹೇಳಿಕೆ ಗ್ರಾಹಕರನ್ನು ಚಿಂತೆಗೀಡು ಮಾಡಿರುವುದು ಸುಳ್ಳಲ್ಲ. ಹಾಲಿನ ಪರಿಮಾಣ ಇಳಿಸಲಿ, ಆದರೆ ಈ ಹಿಂದೆ ಏರಿಸಲಾಗಿದ್ದ ದರಕ್ಕೇ ಲೀಟರ್‌ಗೆ ರೂ.5 ಏರಿಕೆಯೋ ಅಥವಾ ಹಿಂದಿನ ಎರಡು ರೂಗಳನ್ನು ಒಳಗೊಂಡಂತೆ ಲೀಟರ್‌ಗೆ 5 ರೂ.ಏರಿಕೆಯೋ ಎಂಬುದು ಬಡ ಗ್ರಾಹಕ ಚಿಂತಿಸುವಂತಾಗಿದೆ. ಒಂದು ವೇಳೆ ಹಳೆಯ ದರಕ್ಕೆ, ಅಂದರೆ ಹೆಚ್ಚುವರಿ ಹಾಲಿಗೆ ವಿಧಿಸುತ್ತಿದ್ದ ಎರಡು ರೂಗಳ ಜೊತೆಗೆ ಪ್ರಸ್ತಾವನೆಯ 5 ರೂ.ಸೇರಿದರೆ, ಒಟ್ಟಾರೆ ಲೀಟರ್‌ಗೆ ಏಳು ರೂ. ಆಗುತ್ತದಲ್ಲವೇ?! ಈ ಗೊಂದಲಕ್ಕೆ ಕಹಾಮ ಸ್ಪಷ್ಟನೆ ನೀಡಬೇಕಿದೆ. ಅಲ್ಲದೇ ಪ್ರತಿ ಜಿಲ್ಲಾ ಹಾಲು ಒಕ್ಕೂಟವು ಹಾಲಿನ ಉಪ ಉತ್ಪನ್ನಗಳಾದ ಮೊಸರು, ಲಸ್ಸಿ, ಮಜ್ಜಿಗೆ, ಪೇಡ, ಮೈಸೂರು ಪಾಕ್ ಇತ್ಯಾದಿಗಳಿಗೆ ತನ್ನಿಚ್ಛೆಯಂತೆ ದರ ಹೆಚ್ಚಿಸಲಿದೆ.

ಜೊತೆಗೆ ಸರ್ಕಾರ ಮುಂದುವರಿದು ಎಸ್ಕಾಂಗಳ ಸಲಹೆಯಂತೆ ಈಗಲೇ ಮುಂದಿನ ಮೂರು ವರ್ಷಗಳಿಗೆ ಪ್ರತಿ ವಿದ್ಯುತ್ ಯೂನಿಟ್‌ಗೆ ದರ ಏರಿಕೆ ಪ್ರಹಾರ ನೀಡಲು ಸಿದ್ಧತೆ ನಡೆಸಿದೆ. ಕಾಫಿ ಪುಡಿ, ಸಾರಿಗೆ ದರ, ಆಟೋಗಳಿಂದ ಹಿಡಿದು ಈಗಾಗಲೇ ದರ ಏರಿಕೆ ಮಾಡಿ ಬಿಟ್ಟಿ ಭಾಗ್ಯಗಳ ಹೊಂದಾಣಿಕೆಗಾಗಿ ಸರ್ಕಸ್ ಮಾಡುತ್ತಿರುವ ಸರ್ಕಾರ ಇನ್ನಾದರೂ ಕನಿಷ್ಠ ಉಚಿತ ವಿದ್ಯುತ್ ಮತ್ತು ಸಾರಿಗೆ ಭಾಗ್ಯಗಳನ್ನು ನಿಲ್ಲಿಸುವ ಯತ್ನ ಮಾಡಲಿ.

–ವಿಜಯ್ ಹೆಮ್ಮಿಗೆ, ಮೈಸೂರು

■ ಬಂಗಾರದ ಮಡಿಲು

ಮಾನ್ಯರೆ,

ಈ ಕಾಲದಲ್ಲಿ ಕಾಲಾಯ ತಸ್ಮೈ ನಮಃ– ವಿವಿ ನಿಲಯಗಳ ಘಟಿಕೋತ್ಸವಗಳಲ್ಲಿ ಪದವೀಧರರು, ಅದರಲ್ಲೂ –ಧರೆ'ಯರು ಹಲವಾರು ಚಿನ್ನದ ಪದಕಗಳನ್ನು ಬಾ (ದೋ)ಚುತ್ತಾರೆ! (ಅವರು 'ಚಿನ್ನದ ಜಿಂಕೆ'ಗಳು).

ಹಿಂದೆ ನಾನು ಡಿಗ್ರಿ ಪಡೆದಾಗ ಸಿಕ್ಕಿದ್ದು ಎರಡೇ ಎರಡು ಸುವರ್ಣ ಪದಕಗಳು : ಆನರ್ಸ್‌ನಲ್ಲಿ ಒಂದು, ಎಂ.ಎ.ನಲ್ಲಿ ಒಂದು. ಈಚೆಗೆ ರಾಜ್ಯೋತ್ಸವ ಪ್ರಶಸ್ತಿಯೊಡನೆ ಒಂದು ಪದಕ ಬಂತು. ಆದರೆ ಈಗ ಅವು ಯಾವುವೂ ನನ್ನೊಡನಿಲ್ಲ: ಮನೆಯವರು 'ಮುರಿಸಿ' ಸಣ್ಣಪುಟ್ಟ ಒಡವೆಗಳನ್ನು ಮಾಡಿಸಿಕೊಂಡರು. (ನನ್ನ ಒಡಲು ಉರಿದು ಹೋಯಿತು!)

ಪದಕ ಎಂದಾಗ, ಚಂದ್ರನನ್ನು ಕುರಿತ ಜಿಎಸ್‌ಎಸ್ ಅವರ ಉದ್ಗಾರ ನೆನಪಾಗುತ್ತದೆ : "ಯಾರು ಕೊಟ್ಟರೋ ಬಾನಿಗೊಂದು ಬಂಗಾರದ ಪದಕ!" (ಅದಕ್ಕೆ ಯಾವುದು ತಾನೆ ಸಾಟಿ?)

ಗೋಳ : ಬಾಳೊಂದು ಗೋಳ –'ಕೋಡು ಬಳೆ' (ಗಂಡು–ಕೋಡು; ಹೆಣ್ಣು –ಬಳೆ!).

– ಸಿಪಿಕೆ, ಹಿರಿಯ ಸಾಹಿತಿಗಳು, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಮಹಾಶಿವರಾತ್ರಿಯೆಂಬ ಪರಮಪವಿತ್ರ ಕಾಲ

ಪ್ರತಿ ತಿಂಗಳಲ್ಲೂ ಶಿವರಾತ್ರಿಯೆಂಬ ಪವಿತ್ರ ದಿನ ಇರುತ್ತದೆ. ಇದನ್ನು ಮಾಸ ಶಿವರಾತ್ರಿಯೆನ್ನುತ್ತಾರೆ. ಆದರೆ ಪರಮ ಪವಿತ್ರವಾದುದು ಮಾಘ ಮಾಸದಲ್ಲಿ ಬರುವ ಮಹಾಶಿವರಾತ್ರಿ. ಇದರಲ್ಲಿ ಜಾಗರಣೆಯನ್ನು ಮಾಡಿ ಶಿವಲಿಂಗಕ್ಕೆ ಅಭಿಷೇಕವನ್ನು ಮಾಡಿ, ಬಿಲ್ವಪತ್ರೆಯನ್ನು ಅರ್ಪಿಸಿದವರಿಗೆ ಆ ಭಗವಂತನು ಅಭಿಲಷಿತಾರ್ಥಗಳನ್ನೂ ಶಿವಗಣಸ್ವರೂಪವನ್ನೂ ನೀಡುವನೆಂಬುದು ಪುರಾಣ ಪ್ರತಿಪಾದಿತವಾಗಿದೆ. ಅದನ್ನು ವರ್ಣಿಸುವ ಒಂದು ಶ್ಲೋಕ ಇಂತಿದೆ–

ರಾತ್ರಿಃ ಶಿವಾ ಕಾಚನ ಸಂನಿಧತ್ತೇ
ವಿಲೋಚನೇ ಜಾಗ್ರತಮಪ್ರಮತ್ತೇ।
ಸಮಾನಧರ್ಮಾ ಯುವಯೋಃ ಸಕಾಶೇ
ಸಖಾ ಭವಿಷ್ಯತ್ಯಚಿರೇಣ ಕಶ್ಚಿತ್ ॥

"ಎಲೈ ನನ್ನೆರಡು ಕಣ್ಣುಗಳೆ, ಪವಿತ್ರವಾದ ಒಂದು ರಾತ್ರಿಯು ಬರುತ್ತಿದೆ. ಅಂದು ನೀವು ಅಪ್ರಮತ್ತರಾಗಿ ಜಾಗರಣೆಯನ್ನು ಮಾಡಿರಿ. ನಿಮ್ಮಿಬ್ಬರ ಬಳಿ ನಿಮಗೆ ಸಮಾನನಾಗಿರುವ ಒಬ್ಬ ಮಿತ್ರನು ಬೇಗನೆ ಹುಟ್ಟುವನು."

ಇದರ ತಾತ್ಪರ್ಯವೇನೆಂದರೆ, ಶಿವರಾತ್ರಿಯ ದಿನ ರಾತ್ರಿಯಲ್ಲಿ ಜಾಗರಣೆ ಮಾಡಿದವರಿಗೆ ಶಿವಸ್ವರೂಪವೇ ಬರುವುದರಿಂದ ಮೂರನೆಯ ಕಣ್ಣು ಹುಟ್ಟುತ್ತದೆ. ಆ ದೃಷ್ಟಿಯಿಂದ ಆ ಭಕ್ತನಿಗೆ ಜಗವೇ ಶಿವಮಯ ಎಂದು ಶಿವತ್ವವನ್ನು ಕೊಡುವ ಮಹಿಮೆ ವ್ಯಕ್ತವಾಗಿದೆ.

ಶಿವನನ್ನು ಭಕ್ತರು ನಾನಾ ಪುಷ್ಪಗಳಿಂದಲೂ, ಪತ್ರೆಗಳಿಂದಲೂ ಪೂಜಿಸುವವರಾದರೂ ಬಿಲ್ವ ಪತ್ರೆಯು ಅವನ ಪ್ರೇಮಪಾತ್ರವಾಗಿರುವುದು ನಿಸ್ಸಂಶಯ. ಏಕಬಿಲ್ವಂ ಶಿವಾರ್ಪಣಂ ಎಂಬ ಸ್ತೋತ್ರವೇ ಇದೆ. ವೇದ ಕಾಲದಿಂದಲೂ ಶಿವನ ಆರಾಧನೆಗೆ ಕುರುಹುಗಳಿವೆ. ಅದಕ್ಕೂ ಹಿಂದಿನದೆಂದು ಹೇಳಲಾಗುವ ಸಿಂಧೂ–ಸರಸ್ವತಿ ಸಂಸ್ಕೃತಿಯಲ್ಲೂ ಶಿವನ ಆರಾಧನೆ ನಡೆಯುತ್ತಿತ್ತೆಂದು ಕೆಲವರ ಅಭಿಪ್ರಾಯವಿದೆ. ನಮ್ಮ ದೇಶದ ಉತ್ತರದ ತುದಿಯಾದ ಕಾಶ್ಮೀರದಲ್ಲಿ ಪ್ರತ್ಯಭಿಜ್ಞಾಶೈವದರ್ಶನವೂ ದಕ್ಷಿಣದ ತುದಿಯಾದ ತಮಿಳುನಾಡಿನಲ್ಲಿ ಸಿದ್ಧಾಂತಶೈವದರ್ಶನವೂ ಬೆಳೆದು ಶಿವಾರಾಧನೆಯನ್ನು ಸಮಸ್ತ ದೇಶವ್ಯಾಪಿಯನ್ನಾಗಿ ಮಾಡಿದುವು.

ಮಂತ್ರಗಳಲ್ಲಿ ಶಿವನನ್ನು ನಾನಾ ವಿಧವಾಗಿ ಸ್ತುತಿಸಲಾಗಿದೆ. "ನಮಸ್ತೇ ಅಸ್ತು ಭಗವನ್ ವಿಶ್ವೇಶ್ವರಾಯ ಮಹಾದೇವಾಯ ನೀಲಕಂಠಾಯ ತ್ರಿಯಂಬಕಾಯ ತ್ರಿಕಾಗ್ನಿಕಾಲಾಯ ಕಾಲಾಗ್ನಿರುದ್ರಾಯ ತ್ರಿಪುರಾಂತಕಾಯ ಶ್ರೀಮನ್ಮಹಾದೇವಾಯ ನಮಃ" ಇತ್ಯಾದಿಗಳಲ್ಲಿ ಶಿವನ ನಾನಾ ಲೀಲೆಗಳನ್ನು ಗುರುತಿಸಲಾಗಿದೆ. ಹದಿನೇಳನೆಯ ಶತಮಾನದಲ್ಲಿದ್ದ ನೀಲಕಂಠದೀಕ್ಷಿತನೆಂಬ ಕವಿಯು ಶಿವನ ಲೀಲೆಗಳನ್ನು ವರ್ಣಿಸುವುದಕ್ಕಾಗಿಯೇ ಶಿವಲೀಲಾರ್ಣವ ಎಂಬ ಮಹಾಕಾವ್ಯವನ್ನು ರಚಿಸಿದ್ದಾನೆ. ಕ್ಷೀರಸಮುದ್ರವನ್ನು ಅಮೃತಕ್ಕಾಗಿ ದೇವಾಸುರರು ಕಡೆದಾಗ ಉತ್ಪನ್ನವಾದ ಕಾಲಕೂಟವೆಂಬ ಮಹಾವಿಷವನ್ನು ಕುಡಿದು ಜಗತ್ತನ್ನು ರಕ್ಷಿಸಿದ ಶಿವನು ನೀಲಕಂಠನಾದ ಘಟನಾವಳಿಯನ್ನು ವರ್ಣಿಸಲು ನೀಕಂಠ ದೀಕ್ಷಿತನೇ 'ನೀಲಕಂಠ ವಿಜಯ' ಎಂಬ ಚಂಪೂ ಗ್ರಂಥವನ್ನೂ ಬರೆದಿದ್ದಾನೆ. ಭಗೀರಥನ ಕೋರಿಕೆಯನ್ನು ಈಡೇರಿಸಲು ಶಿವನು ತನ್ನ ಜಟಾಜೂಟದಲ್ಲಿ ಗಂಗೆಯನ್ನು ಧರಿಸಿದ ಕಥೆಯನ್ನು ಅದೇ ಕವಿಯು ಗಂಗಾವತರಣ ಎಂಬ ಕಾವ್ಯದಲ್ಲಿ ಹೇಳಿದ್ದಾನೆ. ಶಿವನು ಆಕಾಶದಲ್ಲಿ ಹಾರುತ್ತಿದ್ದ



ತ್ರಿಪುರಗಳನ್ನು ದಹಿಸಿದ ಕಥೆ ಅವನಿಗೆ ತ್ರಿಪುರಾಂತಕ ಎಂಬ ಹೆಸರನ್ನು ತಂದುಕೊಟ್ಟಿದೆ. ಮೂರು ಕಣ್ಣುಗಳಿಂದ ಅವನು ತ್ರ್ಯಂಬಕ.

ತ್ರಿಯಂಬಕಂ ಯಜಾಮಹೇ
ಸುಗಂಧಿಂ ಪುಷ್ಟಿವರ್ಧನಮ್ ।
ಉರ್ವಾರುಕಮಿವ ಬಂಧನಾನ್
ಮೃತ್ಯೋರ್ಮುಕ್ಷೀಯ ಮಾಮೃತಾತ್ ॥

ಎಂಬ ವೇದ ಮಂತ್ರದಲ್ಲೂ ಶಿವನನ್ನು ತ್ರಿಯಂಬಕ (=ಮುಕ್ಕಣ್ಣ) ಎಂದು ಕರೆಯಲಾಗಿದೆ. ಸುಗಂಧಿಯೂ ಪುಷ್ಟಿಯನ್ನು ಹೆಚ್ಚಿಸುವವನೂ ಆದ ತ್ರಿಯಂಬಕನನ್ನು ಯಜ್ಞದಿಂದ ಆರಾಧಿಸುತ್ತೇವೆ. ಅದರಿಂದ ನಾನು ತೊಟ್ಟಿನಿಂದ ಕಳಚಿಕೊಳ್ಳುವ ಕಾಡುಸವತೆಕಾಯಿನಂತೆ ಮೃತ್ಯುವಿನಿಂದ ತಪ್ಪಿಸಿಕೊಳ್ಳುವ ಹಾಗಾಗಲಿ. ಅಮೃತತ್ವದಿಂದ ನಾನು ವಂಚಿತನಾಗುವುದು ಬೇಡ ಎಂಬ ತಾತ್ಪರ್ಯವನ್ನು ಹೊಂದಿರುವ ಈ ಮಂತ್ರವನ್ನು ಮೃತ್ಯುಂಜಯ ಹೋಮದಲ್ಲಿ ಬಳಸುತ್ತಾರೆ. ಹೀಗೆ ಶಿವನಿಗೆ ಮೃತ್ಯುಂಜಯ ಎಂಬ ಹೆಸರು ಸಾರ್ಥಕವಾಗಿದೆ.

ಪ್ರಸಿದ್ಧ ಸಂಸ್ಕೃತ ಕವಿ ಕಾಳಿದಾಸನು ಅಷ್ಟಮೂರ್ತಿ ಶಿವನ ಆರಾಧಕ–ಅಭಿಜ್ಞಾನ ಶಾಕುಂತಲವೆಂಬ ಅವನ ಪ್ರಖ್ಯಾತ ನಾಟಕದ ನಾಂದೀಪದ್ಯದಲ್ಲಿ ಅವನು ಶಿವನ ಅಷ್ಟಮೂರ್ತಿಗಳಾದ ಪೃಥಿವ್ಯಾದಿಗಳನ್ನೇ ಸ್ತುತಿಸಿದ್ದಾನೆ.

ಯಾ ಸೃಷ್ಟಿಃ ಸ್ರಷ್ಟುರಾದ್ಯ ವಹತಿ ವಿಧಿಹುತಂ ಯಾ ಹವಿರ್ಯಾ ಚ ಹೋತ್ರೀ
ಯೇ ದ್ವೇ ಕಾಲಂ ವಿಧತ್ತಃ ಶ್ರುತಿ ವಿಷಯಗುಣಾ ಯಾ ಸ್ಥಿತಾವ್ಯಾಪ್ಯ ವಿಶ್ವಮ್ ।
ಯಾಮಾಹುಃ ಸರ್ವಬೀಜಪ್ರಕೃತಿರಿತಿ ಯಯಾ ಪ್ರಾಣಿನಃ ಪ್ರಾಣವಂತಃ
ಪ್ರತ್ಯಕ್ಷದಾಭಿಃ ಪ್ರಸನ್ನನುಭಿರವತು ವಸ್ತಾಭಿರಷ್ಟಾಭಿರೀಶಃ ॥

ಯಾವುದು ಬ್ರಹ್ಮನ ಮೊದಲನೆಯ ಸೃಷ್ಟಿಯೋ (ನೀರು), ಯಾವುದು ವಿಧಿವತ್ತಾಗಿ ಅರ್ಪಿಸಲಾದ ಹವಿಸ್ಸನ್ನು ದೇವತೆಗಳಿಗೆ ತಲುಪಿಸುವುದೋ (ಅಗ್ನಿ), ಯಾವುದು ಹವನವನ್ನು ಮಾಡುವುದೋ (ಮಾನವ) ಯಾವ ಎರಡು ಭೂಲೋಕದಲ್ಲಿ ಕಾಲದ ನಿಯಮನವನ್ನು ಮಾಡುವುವೋ (ಸೂರ್ಯ ಮತ್ತು ಚಂದ್ರ), ಕಿವಿಗೆ ವಿಷಯವಾದ ಶಬ್ದವನ್ನು ಗುಣವಾಗಿ ಪಡೆದಿರುವ ಯಾವುದು ವಿಶ್ವವನ್ನೆಲ್ಲ ವ್ಯಾಪಿಸಿದೆಯೋ (ಆಕಾಶ), ಯಾವುದನ್ನು ಎಲ್ಲ ಬೀಜಗಳ ಉತ್ಪತ್ತಿಗೂ ಬೆಳವಣಿಗೆಗೂ ಕಾರಣವೆನ್ನವರೋ (ಪೃಥಿವೀ), ಯಾವುದರಿಂದ ಎಲ್ಲ ಪ್ರಾಣಿಗಳೂ ಪ್ರಾಣವನ್ನು ಪಡೆದಿವೆಯೋ (ವಾಯು) ಆ ಎಂಟು ಪ್ರತ್ಯಕ್ಷಮೂರ್ತಿಗಳಿಂದ ಪ್ರಸನ್ನನಾದ ಶಿವನು ನಮ್ಮನ್ನೂ ನಿಮ್ಮನ್ನೂ ಕಾಪಾಡಲಿ– ಎಂದು ವಿಶ್ವಸ್ವರೂಪನಾದ ಶಿವನ ಎಂಟು ರೂಪಗಳ ವರ್ಣನೆಯನ್ನು ಇಲ್ಲಿ ಕಾಣುತ್ತೇವೆ.

ರಾಮಾಯಣದಲ್ಲಿ ನಿಜವಾದ ಕಥೆ ಆರಂಭಗೊಳ್ಳುವುದು ಶಿವಧನುರ್ಭಂಗದಿಂದಲೇ ಪರಶುರಾಮನಿಗೆ ಧನುರ್ವೇದವನ್ನು ಕಲಿಸಿದ ಗುರು ಶಿವನೇ. ರಾವಣನ ಆರಾಧ್ಯದೈವವೂ ಶಿವನೇ. ಮಹಾಭಾರತದಲ್ಲಿ ಪಾಂಡವರು ವನವಾಸದಲ್ಲಿದ್ದಾಗ ಕೌರವ ಸೈನ್ಯವನ್ನು ಸೋಲಿಸಲು ಬೇಕಾದ ಶಸ್ತ್ರಗಳನ್ನು ಪಡೆಯಲು ಅರ್ಜುನನು ಶಿವನನ್ನು ಕುರಿತು ತಪಸ್ಸು ಮಾಡಿದ ಸಂದರ್ಭ ಸುಪ್ರಸಿದ್ಧ ಅನುಗ್ರಹಿಸಲು ಶಿವನು ಕಿರಾತರೂಪದಲ್ಲಿ ಬಂದ ಪ್ರಸಂಗವೇ ಕಿರಾತಾರ್ಜುನೀಯ. ಇದು ಅನೇಕ ಕಾವ್ಯಗಳಲ್ಲೂ ಶಿಲ್ಪಗಳಲ್ಲೂ ಅಭಿವ್ಯಕ್ತಿಯನ್ನು ಕಂಡಿರುವ ಪ್ರಸಂಗ

ಭಗವಾನ್ ಶಿವನೇ ನಾನಾ ಶಾಸ್ತ್ರಗಳ ಮೂಲತತ್ತ್ವಗಳನ್ನು ಆವಿಷ್ಕರಿಸಿದವನು ಎಂಬುದೂ ಶಾಸ್ತ್ರಸಮ್ಮತವೇ. ಶಿವನ ಢಕ್ಕೆಯ ನಿನಾದಿಂದಲೇ ಪಾಣಿನಿಯ ವ್ಯಾಕರಣಕ್ಕೆ ಮೂಲವಾದ ಪ್ರತ್ಯಾಹಾರದ ಸೂತ್ರಗಳು ಹುಟ್ಟಿದುವೆಂದು ಹೇಳಿದ್ದಾರೆ.

ನೃತ್ತಾವಸಾನೇ ನಟರಾಜರಾಜೋ
ನನಾದ ಢಕ್ಕಾಂ ನವಪಂಚವಾರಮ್ ।
ಉದ್ಧರ್ತುಕಾಮಃ ಸನಕಾದಿಸಿದ್ಧಾನ್
ಏತದ್ವಿಮರ್ಶೇ ಶಿವಸೂತ್ರಜಾಲಮ್ ॥

ಎಂದು ನಂದಿಕೇಶ್ವರಕಾರಿಕೆಯಲ್ಲಿ ಹೇಳಲಾಗಿದೆ. ಶಿವನು ತಾಂಡವ ನೃತ್ಯವನ್ನು ಮಾಡಿದ ಮೇಲೆ ಸನಕನೇ ಮುಂತಾದ ಸಿದ್ಧರನ್ನು ಉದ್ಧರಿಸುವುದಕ್ಕಾಗಿ ಢಕ್ಕೆಯನ್ನು ಹದಿನಾಲ್ಕು ಬಾರಿ ವಾದನೆ ಮಾಡಿದನು. ಆ ಢಕ್ಕೆಯ ನಾದವೇ ಅಇಉಣ್ ಮುಂತಾದ ಹದಿನಾಲ್ಕು 'ಶಿವಸೂತ್ರಗಳಾಗಿ ವ್ಯಾಕರಣ ಸೂತ್ರಗಳಿಗೆ ಮೂಲವಾದುವು ಎಂದು ಈ ಕಾರಿಕೆಯ ತಾತ್ಪರ್ಯ.

ಶಿವರಾತ್ರಿಯಂದು ಆಸ್ತಿಕರು ಉಪವಾಸ ಮಾಡಿ, ಶಿವದೇವಸ್ಥಾನಗಳಿಗೆ ಹೋಗಿ ದೇವರ ದರ್ಶನವನ್ನು ಪಡೆದು ಧನ್ಯರಾಗುತ್ತಾರೆ. ಕುಂಭಮೇಳದಲ್ಲಿ ಅಂದು ಕೊನೆಯ ಪವಿತ್ರಸ್ನಾನ. ದೇವಸ್ಥಾನಗಳಲ್ಲಿ ಯಜುರ್ವೇದೋಕ್ತವಾದ ರುದ್ರಸೂಕ್ತದ ಪಠನವಾಗುತ್ತಿರುತ್ತದೆ. ಕಲಾವಿದರು ಶಿವಸ್ತೋತ್ರಗಳ ಗಾನವನ್ನು ಮಾಡುತ್ತಿರುತ್ತಾರೆ. ಶಿವಲಿಂಗಕ್ಕೆ ಅಭಿಷೇಕವು ನಡೆಯುತ್ತಿರುತ್ತದೆ. ಇದರ ದರ್ಶನವನ್ನು ಮಾಡುತ್ತಾ ಜಾಗರಣೆ ಮಾಡುವುದು ಸೂಕ್ತ. ಶಿವಕಥೆಯನ್ನು ಕೇಳುತ್ತಾ ಶಿವಮಹಿಮೆಯನ್ನು ಚಿಂತಿಸುತ್ತಾ ರಾತ್ರಿಯನ್ನು ಕಳೆದರೆ ಪುಣ್ಯಕಾರಣ. ಬೇಡರ ಕಣ್ಣಪ್ಪ–ಚಲನಚಿತ್ರವನ್ನು ನೋಡಿದರೆ ಶಿವಭಕ್ತಿ ದೃಢವಾಗುತ್ತದೆ.

ಶರಣಸಂಗವ್ಯವಸನ ಭುಜಗಾ
ಬರಣನಮರಕಿರೀಟಮಂಡಿತ
ಚರಣ ಚಾರುಚರಿತ್ರ ನಿರುಪಮ ಭಾಳಶಿಖಿನೇತ್ರ
ಕರಣನಿರ್ಮಲ ಭಜಕರಘ ಸಂ–
ಹರಣ ದಂತಿಚಮೂರುಚರ್ಮಾಂ
ಬರನೆ ಸಲಹುಗೆ ಭಕುತಜನರನು ಪಾರ್ವತೀರಮಣ॥

ಮೈಸೂರು ಸೇರಿದಂತೆ ವಿವಿಧೆಡೆ ಶಿವರಾತ್ರಿ ಆಚರಣೆ



ಶ್ರೀ ಶಂಕರೇಶ್ವರ ದೇವಾಲಯ: ಮೈಸೂರಿನ ಬೋಗಾದಿ ಸಮೀಪ ಕೆ.ಹೆಮ್ಮನಹಳ್ಳಿ ಗ್ರಾಮದ ಬಳಿಯ ಶ್ರೀ ಶಂಕರೇಶ್ವರ ಮತ್ತು ಶ್ರೀ ಶಂಕರ ನಾರಾಯಣ ದೇವಸ್ಥಾನಗಳಲ್ಲಿ ನಾಳೆ (ಫೆ.26) ಮಹಾಶಿವರಾತ್ರಿ ಹಬ್ಬ ಆಚರಿಸಲಾಗುವುದು.

ಬೆಳಗ್ಗೆಯಿಂದಲೇ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದ್ದು, ರುದ್ರಾಭಿಷೇಕ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗವಾಗಲಿದೆ.

ಜಿ.ಬಿ.ಸರಗೂರಲ್ಲಿ ಶಿವರಾತ್ರಿ: ಹೆಚ್.ಡಿ.ಕೋಟೆ ತಾಲೂಕು, ಜಿ.ಬಿ.ಸರಗೂರಿನ ಶ್ರೀ ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಶಿವರಾತ್ರಿ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳು ನಡೆಯುಲಿದ್ದು, ಪ್ರಯಾಗ್‌ರಾಜ್‌ನ ಗಂಗಾ–ಯಮುನಾ–ಸರಸ್ವತಿ ನದಿಗಳ ಸಂಗಮದಿಂದ ತಂದಿರುವ ತೀರ್ಥವನ್ನು ಭಕ್ತರಿಗೆ ವಿತರಿಸಲಾಗುವುದು.

ರಾತ್ರಿ ಜಾಗರಣೆ ವೇಳೆ ಭಕ್ತಿಗೀತೆ, ಭಾವಗೀತೆ, ಶಿವನಾಮ ಪಠಣ ಮಾಡಲಾಗುವುದು ಎಂದು ಶ್ರೀ ಕಾಶಿ ವಿಶ್ವನಾಥ ದೇವಸ್ಥಾನ ಸಮಿತಿ ಅಧ್ಯಕ್ಷ ಜಿ.ಬಿ.ಸಿದ್ದೇಗೌಡ ತಿಳಿಸಿದ್ದಾರೆ.

ನಾಗಲಿಂಗೇಶ್ವರ ಸ್ವಾಮಿ: ಮೈಸೂರು ತಾಲೂಕಿನ ಬೋಗಾದಿಯಲ್ಲಿರುವ ಶ್ರೀ ನಾಗಲಿಂಗೇಶ್ವರ ಶ್ರೀ ಭೋಗೇಶ್ವರ, ಶ್ರೀ ಸಪ್ತಮಾತೃಕಾ ಹಿರಿದೇವಮ್ಮ ದೇವಸ್ಥಾನದಲ್ಲಿ ಶಿವರಾತ್ರಿ ಪ್ರಯುಕ್ತ ಬೆಳಗ್ಗೆ 5 ಗಂಟೆಯಿಂದ ಮಹಾಸಂಕಲ್ಪ, ಗಣಪತಿ ಪೂಜೆ, ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಅಲಂಕಾರ, ಅರ್ಚನೆ, ಗಣಪತಿ ಹೋಮ, ತೀರ್ಥ ಪ್ರಸಾದ ವಿನಿಯೋಗವಿರಲಿದೆ.


ಕುವೆಂಪುನಗರದ ಶ್ರೀ ಪ್ರಸನ್ನ ಶಿವಲಿಂಗೇಶ್ವರ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ: ಮೈಸೂರಿನ ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ನಾಗರಿಕ ವೇದಿಕೆಯ ಶ್ರೀ ಪ್ರಸನ್ನ ಶಿವಲಿಂಗೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಫೆ.26ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮ, ಹೂವಿನ ಅಲಂಕಾರ ಹಾಗೂ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ.

ಫೆ.26ರ ಬೆಳಗ್ಗೆ 5.30ರಿಂದ ಫೆ.27ರ ಬೆಳಗಿನ ಜಾವ 4 ಗಂಟೆವರೆಗೂ ನಾನಾ ಅವಧಿಯಲ್ಲಿ ರುದ್ರಾಭಿಷೇಕ ನಂತರ ಮಹಾ ಮಂಗಳಾರತಿ ನೆರವೇರಲಿದೆ.

ಸಂಜೆ 7 ಗಂಟೆಗೆ ಆಕಾಶವಾಣಿಯ ಸುಪ್ರಸಿದ್ಧ ಕಲಾವಿದ ಡಾ.ಎ.ಡಿ.ಶ್ರೀನಿವಾಸ್ ಮತ್ತು ತಂಡದವರಿಂದ ಭಕ್ತಿಗೀತೆ ಹಾಗೂ ಭಾವಗೀತೆ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅಲ್ಲದೆ, ಮಾ.2ರಂದು ಭಾನುವಾರ ಹೊರನಾಡ ಅನ್ನಪೂರ್ಣೇಶ್ವರಿ ರಥೋತ್ಸವದ ಪ್ರಯುಕ್ತ ಶ್ರೀ ಅನ್ನಪೂರ್ಣದೇವಿಗೆ ಅಭಿಷೇಕ ಹಾಗೂ ಪ್ರಸಾದ ವಿನಿಯೋಗ ನಡೆಯಲಿದೆ.

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ: ನಂಜನಗೂಡು ರಸ್ತೆಯಲ್ಲಿರುವ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಶಿವರಾತ್ರಿ ಅಂಗವಾಗಿ ಬೆಳಗ್ಗೆ 6ಕ್ಕೆ ಮಹಾರುದ್ರ ಹೋಮ ಪ್ರಾರಂಭ, 7ಕ್ಕೆ ಪ್ರಯಾಗದ ಕುಂಭಮೇಳ ತೀರ್ಥದಿಂದ ಕೂಡಿದ ಸಪ್ತರ್ಷಿ ಸರೋವರದಲ್ಲಿ ಉಚಿತ ತೀರ್ಥಸ್ನಾನ, 9ಕ್ಕೆ ಶ್ರೀಚಕ್ರಪೂಜೆ, ಮಹಾರುದ್ರ ಹೋಮ, ಪೂರ್ಣಾಹುತಿ, 11ಕ್ಕೆ ಭಕ್ತಾದಿಗಳಿಂದ ಮಹಾ ರುದ್ರಾಭಿಷೇಕ, ಮಧ್ಯಾಹ್ನ 3ಕ್ಕೆ ಮೂಲಿಕೇಶ್ವರಿಗೆ ಪೂಜೆ, ಸಂಜೆ 6.30ಕ್ಕೆ ಶ್ರೀ ಸ್ವಾಮೀಜಿಯವರಿಂದ ಸಚ್ಚಿದಾನಂದೇಶ್ವರ ಶಿವಲಿಂಗಕ್ಕೆ ರುದ್ರಾಭಿಷೇಕ, 7ಕ್ಕೆ ಭಕ್ತರಿಂದ ಶಿವಲಿಂಗಕ್ಕೆ ಸಹಸ್ರ ಕಳಶಾಭಿಷೇಕ, ಸಂಜೆ 7ಕ್ಕೆ ವಿದುಷಿ ಎಸ್. ಶುಭಲಕ್ಷ್ಮಿ ಮತ್ತು ವಿದುಷಿ ಎಸ್. ಸೋರ್ನಲತಾ ಮತ್ತು ವೃಂದದವರಿಂದ ಕರ್ನಾಟಕ ಸಂಗೀತ ದ್ವಂದ್ವ ಗಾಯನ, ಸಂಜೆ 10ಕ್ಕೆ ವಿದ್ವಾನ್ ಭರತ್ ಸುಂದರ್ ಮತ್ತು ವೃಂದದವರಿಂದ ಕರ್ನಾಟಕ ಸಂಗೀತ ಗಾಯನ, ರಾತ್ರಿ 11ಕ್ಕೆ ಸಚ್ಚಿದಾನಂದೇಶ್ವರ ಶಿವಲಿಂಗಕ್ಕೆ 11 ಬಾರಿ ರುದ್ರಾಭಿಷೇಕ, ವಿವಿಧ ಅಲಂಕಾರಗಳು ನಡೆಯಲಿವೆ.

ಚಿಕ್ಕಬಳ್ಳಾಪುರದ ಸದ್ಗುರು ಸನ್ನಿಧಿಯಲ್ಲಿ ಶಿವರಾತ್ರಿ ವೈಭವ



ಮೈಸೂರು,ಫೆ.25–ಶಿವನ ರಾತ್ರಿಯಾದ ಮಹಾಶಿವರಾತ್ರಿ–ಸಮೀಪಿಸುತ್ತಿರುವಂತೆ, ಆದಿಯೋಗಿ ಮತ್ತು ಯೋಗೇಶ್ವರ ಲಿಂಗದಲ್ಲಿ ರಾತ್ರಿಯೆಲ್ಲಾ ಭಕ್ತರನ್ನು ಸ್ವೀಕರಿಸಲು ಸದ್ಗುರು ಸನ್ನಿಧಿ ಚಿಕ್ಕಬಳ್ಳಾಪುರ ಸಿದ್ಧತೆ ನಡೆಸುತ್ತಿದೆ. ಆದಿಯೋಗಿ ಮತ್ತು ಸದ್ಗುರುಗಳ ಸಾನ್ನಿಧ್ಯದಲ್ಲಿ ಈಶ ಯೋಗ ಕೇಂದ್ರ ಕೊಯಂಬತ್ತೂರಿನಲ್ಲಿ ನಡೆಯುವ ರಾತ್ರಿಯ ಆಚರಣೆಗಳನ್ನು ದೊಡ್ಡ ಪರದೆಯ ಮೂಲಕ ನೇರ ಪ್ರಸಾರ ಮಾಡಲಾಗುವುದು.

ಈ ವರ್ಷ ಕೊಯಂಬತ್ತೂರಿನ ಉತ್ಸವಗಳಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಖ್ಯ ಅತಿಥಿಗಳಾಗಿರುತ್ತಾರೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇತರ ಗಣ್ಯರು ಆಚರಣೆಗಳಲ್ಲಿ ಭಾಗವಹಿಸಲಿದ್ದಾರೆ.

ಫೆ.26ರಂದು ಸಂಜೆ 6 ಗಂಟೆಯಿಂದ ಫೆಬ್ರವರಿ 27ರಂದು ಬೆಳಗ್ಗೆ 6 ಗಂಟೆಯವರೆಗೆ ಈಶ ಯೋಗ ಕೇಂದ್ರ ಕೊಯಂಬತ್ತೂರಿನಲ್ಲಿ ಹಲವಾರು ಕಲಾವಿದರು ಪ್ರದರ್ಶನ ನೀಡಲಿದ್ದಾರೆ. ವಿಶ್ವದಾದ್ಯಂತ 70 ಕ್ಕೂ ಹೆಚ್ಚು ದೇಶಗಳಿಂದ ಸಾವಿರಾರು ಭಕ್ತರು ಮತ್ತು ನೂರಾರು ಸ್ವಯಂಸೇವಕರನ್ನು ಆಕರ್ಷಿಸುವ ಈ ಉತ್ಸವವು ಈಗ ವಿಶ್ವಪ್ರಸಿದ್ಧ ರಾತ್ರಿಯ ಆಚರಣೆಯಾಗಿ ಮಾರ್ಪಟ್ಟಿದೆ.

ಪ್ರಪಂಚದಾದ್ಯಂತ ಲಕ್ಷಾಂತರ ಜನರು 150 ಕ್ಕೂ ಹೆಚ್ಚು ಚಾನೆಲ್‌ಗಳ ಮೂಲಕ ನೇರಪ್ರಸಾರವಾಗುವ ಈಶ ಮಹಾಶಿವರಾತ್ರಿ ಆಚರಣೆಗಳನ್ನು ಆನ್‌ಲೈನ್‌ನಲ್ಲಿ ವೀಕ್ಷಿಸುತ್ತಾರೆ. ಸದ್ಗುರು ಸನ್ನಿಧಿಯಲ್ಲಿ, ಸನ್ನಿಧಿ ಸುತ್ತಮುತ್ತಲಿನ ಗ್ರಾಮಗಳ ಸ್ಥಳೀಯ ಸಮುದಾಯಗಳ ಸದಸ್ಯರು ಅಂಗಡಿಗಳನ್ನು ಸ್ಥಾಪಿಸಿ ಕಡಲೆಕಾಯಿ, ಜೋಳ ಮತ್ತು ಎಳನೀರು ಸೇರಿದಂತೆ ಸ್ಥಳೀಯವಾಗಿ ಬೆಳೆದ ಉತ್ಪನ್ನಗಳನ್ನು ಮಾರಾಟ ಮಾಡಲಿದ್ದಾರೆ. ಸನ್ನಿಧಿಯ ಗೋಶಾಲೆಯಲ್ಲಿ ದೇಸಿ ತಳಿಯ ಜಾನುವಾರುಗಳನ್ನು ಪ್ರದರ್ಶಿಸಲಾಗುವುದು. ಆಚರಣೆಗಳಲ್ಲಿ ಪ್ರತಿ ದಿನ ಸಾವಿರಾರು ಜನರನ್ನು ಸದ್ಗುರು ಸನ್ನಿಧಿಗೆ ಆಕರ್ಷಿಸುವ ಅತ್ಯಂತ ಜನಪ್ರಿಯ ವಿಡಿಯೋ ಇಮೇಜಿಂಗ್ ಶೋ ಆದ ಆದಿಯೋಗಿ ದಿವ್ಯ ದರ್ಶನವೂ ಸೇರಿರುತ್ತದೆ.

ಮೈಸೂರಲ್ಲಿ ಶಿವರಾತ್ರಿಗೆ ಭಾರಿ ಬಂದೋಬಸ್ತ್

ಮೈಸೂರು, ಫೆ.25– ಮಹಾ ಶಿವರಾತ್ರಿ ಅಂಗವಾಗಿ ಮೈಸೂರು ನಗರದಾದ್ಯಂತ ಮತ್ತು ದೇವಸ್ಥಾನಗಳ ಬಳಿ 6 ಮಂದಿ ಸಹಾಯಕ ಪೊಲೀಸ್ ಆಯುಕ್ತರು, 25 ಮಂದಿ ಇನ್‌ಸ್ಪೆಕ್ಟರ್, 57 ಮಂದಿ ಪಿಎಸ್‌ಐ, 110 ಮಂದಿ ಎಎಸ್‌ಐ, 738 ಮಂದಿ ಹೆಚ್‌ಸಿ/ಪಿಸಿ, 76 ಮಹಿಳಾ ಸಿಬ್ಬಂದಿ ಹಾಗೂ ಕೆಎಸ್‌ಆರ್‌ಪಿ ಮತ್ತು ಸಿಎಆರ್ ತುಕಡಿಗಳನ್ನು ಒಳಗೊಂಡಂತೆ ಭದ್ರತಾ ವ್ಯವಸ್ಥೆ ಮಾಡಿದ್ದು, ನಗರದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ದೇವಸ್ಥಾನಗಳ ಬಳಿ ಮತ್ತು ಜಾಗರಣೆ ಸಮಯದಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ಹಾಗೂ ಕಿಡಿಗೇಡಿತನ ಕಂಡು ಬಂದಲ್ಲಿ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಯಾವುದೇ ಅಹಿತಕರ ಘಟನೆಗಳು ಕಂಡು ಬಂದಲ್ಲಿ ಕೂಡಲೇ ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಅಥವಾ ಪೊಲೀಸ್ ಕಂಟ್ರೋಲ್ ರೂಂಗೆ ದೂರವಾಣಿ ಸಂಖ್ಯೆ.112, 0821–2418139, 0821–2418339 ಗೆ ಮಾಹಿತಿ ನೀಡಲು ಕೋರಲಾಗಿದೆ.

ಸಾರ್ವಜನಿಕರು ಮಹಾ ಶಿವರಾತ್ರಿ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಹಾಗೂ ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸರೊಂದಿಗೆ ಸಹಕರಿಸಲು ಕೋರಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರ ಕಚೇರಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಹಾಸನ ಮಿತ್ರ

ಕರ್ತವ್ಯನಿರತ ವೈದ್ಯ ವಿದ್ಯಾರ್ಥಿ ಮೇಲೆ ಹಲ್ಲೆ ಖಂಡಿಸಿ ಓಪಿಡಿ ಬಂದ್ ಮಾಡಿ ಪ್ರತಿಭಟನೆ



ಹಾಸನ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ವೈದ್ಯ ವಿದ್ಯಾರ್ಥಿ ಮೇಲೆ ಹಲ್ಲೆ ಖಂಡಿಸಿ ವೈದ್ಯಕೀಯ ವಿದ್ಯಾರ್ಥಿಗಳು ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ಹಾಸನ: ಜಿಲ್ಲಾ ಸರ್ಕಾರಿ ಆಸ್ಪತ್ರೆಯ ವೈದ್ಯ ವಿದ್ಯಾರ್ಥಿ ಮೇಲೆ ಹಲ್ಲೆ ಮಾಡಿರುವುದನ್ನು ಖಂಡಿಸಿ ಓಪಿಡಿ ಸೇವೆ ಬಂದ್ ಮಾಡಿ ಆಸ್ಪತ್ರೆ ಆವರಣದಲ್ಲಿ ಹಿಮ್ಸ್ ಆಸ್ಪತ್ರೆ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ತೋಳಿಗೆ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ತಡರಾತ್ರಿ ಚಿಕಿತ್ಸೆಗೆಂದು ಬಂದಿದ್ದ ಕೆಲ ಯುವಕರು ಚಿಕಿತ್ಸೆ ನೀಡುತ್ತಿರುವಾಗಲೇ ವಿನಾ ಕಾರಣ ಕ್ಯಾತೆ ತೆಗೆದು ವೈದ್ಯರ ಮೇಲೆ ಹಲ್ಲೆ ಮಾಡಿದ್ದರು. ಇದನ್ನು ವೈದ್ಯರು, ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ದಿಢೀರ್ ತಮ್ಮ ಕರ್ತವ್ಯ ಬಹಿಷ್ಕರಿಸಿ ಪ್ರತಿಭಟನೆ ನಡೆಸಿದ್ದರು. ನಂತರ ಹೊರ ರೋಗಿ ವಿಭಾಗ ಬಂದ್ ಮಾಡಿ ಪ್ರತಿಭಟನೆ ನಡೆಸಿ, ಆರೋಪಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜಿತಾ ಹಾಗೂ ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ವೈದ್ಯ ವೀರ ರಂಜನ್ ಕುಮಾರ ಅವರನ್ನು ಒದ್ದು ಕಪಾಳಮೋಕ್ಷ ಮಾಡಿ ಹೊಡೆಯುತ್ತಿರುವ ವಿಡಿಯೋ ವೈರಲ್ ಆಗಿದ್ದು, ಇದೆ ರೀತಿ ಮುಂದುವರೆದರೆ ರಾಜ್ಯಾದ್ಯಂತ ಹೋರಾಟ ಮಾಡುವುದಾಗಿ ಎಚ್ಚರಿಸಿದ್ದಾರೆ.

ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳ ಸಂಘದ ಮುಖಂಡ ಗಗನ್ ಮಾತನಾಡಿ, ವೈದ್ಯರ ಮೇಲೆ ಮಾರಣಾಂತಿಕ ಹಲ್ಲೆ ಮಾಡಲಾಗಿದೆ. ಸಮಾಜಕ್ಕೆ ಆರೋಗ್ಯ ಸೇವೆ ನೀಡುವ ವೈದ್ಯರಿಗೆ ಹಲವು ಸಮಸ್ಯೆಗಳಿವೆ. ಜೀವದ ಮೇಲೆ ನಂಬಿಕೆ ಇಲ್ಲದೇ ಜೀವ ಭಯದಲ್ಲಿ ಕೆಲಸ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಅಕ್ರಮ ಗಣಿಗಾರಿಕೆ ಸ್ಥಗಿತಕ್ಕೆ ಆಗ್ರಹಿಸಿ ರಾಜ್ಯ ರೈತ ಸಂಘದಿಂದ ಪ್ರತಿಭಟನೆ



ಶಿಲುಬೆ ಬೆಟ್ಟದ ಜಾಗದಲ್ಲಿ ಗಣಿಗಾರಿಕೆಗೆ ಅನುಮತಿ ನೀಡಿರುವುದನ್ನು ಹಿಂಪಡೆಯುವಂತೆ ಒತ್ತಾಯಿಸಿ ಡಿಸಿ ಅವರಿಗೆ ಮನವಿ ಸಲ್ಲಿಸಲಾಯಿತು.

ಹಾಸನ: ಶಿಲುಬೆ ಬೆಟ್ಟದ ಜಾಗದಲ್ಲಿ ಗಣಿಗಾರಿಕೆಗೆ ಅನುಮತಿ ನೀಡಿರುವುದನ್ನು ಖಂಡಿಸಿ ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ಡಿಸಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಸಿ.ಸತ್ಯಭಾಮ ಅವರಿಗೆ ಮನವಿ ಸಲ್ಲಿಸಿದರು.

ಇದೇ ವೇಳೆ ರೈತ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಮಾತನಾಡಿ, ಜಿಲ್ಲಾಧಿಕಾರಿಗಳ ಗಮನಕ್ಕೆ ಬಂದ ಮೇಲೆ ಕೆಲಸ ಸ್ಥಗಿತಗೊಳಿಸಬೇಕು. ಆದರೆ ಸಬೂಬು ಹೇಳುವುದನ್ನು ಮಾಡಬಾರದು. ಜಿಲ್ಲಾಧಿಕಾರಿಗಳಿಗೆ ಅಧಿಕಾರ ಇರುವುದರಿಂದ ಅವರಿಗೆ ನೋಟಿಸ್ ನೀಡಿ ಗಣಿಗಾರಿಕೆ ನಿಲ್ಲಿಸಬೇಕು. ಕೂಡಲೇ ಶಿಲುಬೆ ಬೆಟ್ಟಕ್ಕೆ ಭೇಟಿ ನೀಡಿ, ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ಗಣಿಗಾರಿಕೆಗೆ ಭಾರಿ ಗಾತ್ರದ ವಾಹನಗಳನ್ನು ಬಳಸುವುದರಿಂದ ರಸ್ತೆ ಹಾಳಾಗಿದ್ದು, ಶಾಲಾ ವಾಹನಗಳು ಮಕ್ಕಳನ್ನು ಕರೆದುಕೊಂಡು ಹೋಗಲು ಬರುವುದಕ್ಕೆ ನಿರಾಕರಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಜೊತೆಗೆ ಕೃಷಿ ಭೂಮಿಗೆ ಕಲುಷಿತ ನೀರು ಮತ್ತು ಧೂಳು ಬಂದು ಸೇರಿಕೊಳ್ಳುತ್ತಿದೆ. ಇದರಿಂದ ಜಮೀನುಗಳಲ್ಲಿ ಕಾಫಿ, ಭತ್ತ ಹಾಗೂ ಇತರೆ ಬೆಳೆಗಳು ಕಲುಷಿತಗೊಂಡು ಹಾಳಾಗುತ್ತಿವೆ. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಈ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಶಾಶ್ವತವಾಗಿ ಗಣಿಗಾರಿಕೆಯನ್ನು ನಿಲ್ಲಿಸುವಂತೆ ಆದೇಶವನ್ನು ಹೊರಡಿಸಬೇಕೆಂದು ಮನವಿ ಮಾಡಿದರು. ಪ್ರತಿಭಟನೆಯಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಆನೆಕೆರೆ ರವಿ, ರಾಜ್ಯ ಸಂಚಾಲಕ ಮಹಮದ್ ಸಾಧಿಕ್, ಕರವೇ ಜಿಲ್ಲಾಧ್ಯಕ್ಷ ಸತೀಶ್ ಪಟೇಲ್, ಷಾಭಾಶ್, ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು ಇತರರು ಉಪಸ್ಥಿತರಿದ್ದರು.

ಧರ್ಮಸ್ಥಳಕ್ಕೆ ಪಾದಯಾತ್ರೆಗೆ ಹೋಗಿದ್ದವರ ಮನೆಯಲ್ಲಿ ಕಳ್ಳತನ

ಹಾಸನ: ಧರ್ಮಸ್ಥಳಕ್ಕೆ ಪಾದಯಾತ್ರೆಗೆ ಹೋಗಿದ್ದ ಪ್ರೇಮ ಎಂಬುವರ ಮನೆಯಲ್ಲಿ ಕಳ್ಳತನವಾಗಿದೆ. ಮುಂಬಾಗಿಲ ಬೀಗ ಒಡೆದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿದ್ದ ಓಲೆ, ಕಾಲು ಚೈನು, ಕತ್ತಿನ ಬೆಳ್ಳಿ ಸರಗಳು ಹಾಗೂ 10 ಸಾವಿರ ರೂ. ನಗದು ದೋಚಿ ಪರಾರಿಯಾಗಿರುವ ಘಟನೆ ನಡೆದಿದೆ. ನಗರದ ಶಾಂತಿನಗರದಲ್ಲಿರುವ ಪ್ರೇಮ ಎಂಬುವರು ಧರ್ಮಸ್ಥಳಕ್ಕೆ ಪಾದಯಾತ್ರೆಯನ್ನು ಶನಿವಾರ ಪ್ರಾರಂಭಿಸಿದ್ದರು. ಇದನ್ನರಿತ ಕಳ್ಳರು ಮನೆಗೆ ನುಗ್ಗಿ ಒಳಗಿದ್ದ ಒಡವೆ, ಹಣವನ್ನು ದೋಚಿ ಪರಾರಿಯಾಗಿದ್ದು, ವಿಷಯ ತಿಳಿದ ಪೊಲೀಸರು ಸ್ಥಳಕ್ಕೆ ಶ್ವಾನದಳ, ಬೆರಳಚ್ಚು ತಜ್ಞರು ಆಗಮಿಸಿ ಪರಿಶೀಲಿಸಿದರು. ಈ ಸಂಬಂಧ ಪ್ರಕರಣ ದಾಖಲಾಗಿದೆ.

ವಿವೇಕಾನಂದರು ಭಾರತದ ಶ್ರೇಷ್ಠತೆಯನ್ನು ವಿಶ್ವಕ್ಕೆ ಪರಿಚಯಿಸಿದ ಮಹಾನ್ ದಾರ್ಶನಿಕ

- ಅಖಿಲ ಭಾರತೀಯ ಸಂಘಟನಾ ಮಂತ್ರಿ ಶಂಕರಾನಂದಜೀ ಅಭಿಪ್ರಾಯ
- ಹೆಚ್ಚು ಆಕರ್ಷಣೆಗೆ ಒಳಗಾದರೆ ಅದು ಸಿಗದಿದ್ದಾಗ ಆತ್ಮಹತ್ಯೆಗೆ ನಾಂದಿ



ಮೈಸೂರಿನ ಮಾನಸಗಂಗೋತ್ರಿಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಯುವ ಜನತೆಗೆ ಸ್ವಾಮಿ ವಿವೇಕಾನಂದರ ಸಂದೇಶ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಭಾರತೀಯ ಶಿಕ್ಷಣ ಮಂಡಲದ ಅಖಿಲ ಭಾರತೀಯ ಸಂಘಟನಾ ಮಂತ್ರಿ ಬಿ.ಆರ್.ಶಂಕರಾನಂದಜೀ ಉದ್ಘಾಟಿಸಿದರು.

ಮೈಸೂರು, ಫೆ.25(ಬಿಎಲ್‌ಯು)– ನಮ್ಮ ದೇಶವನ್ನು ವಿದೇಶಿಯರು ಕೀಳಾಗಿ ಕಾಣುವ ಸಂದರ್ಭದಲ್ಲಿ ಸ್ವಾಮಿ ವಿವೇಕಾನಂದರು ಶ್ರೇಷ್ಠ ಭಾರತವನ್ನು ವಿಶ್ವಕ್ಕೆ ಪರಿಚಯಿಸಿದರು ಎಂದು ಭಾರತೀಯ ಶಿಕ್ಷಣ ಮಂಡಲದ ಅಖಿಲ ಭಾರತೀಯ ಸಂಘಟನಾ ಮಂತ್ರಿ ಬಿ.ಆರ್.ಶಂಕರಾನಂದಜೀ ಹೇಳಿದರು.

ನಗರದ ಮಾನಸ ಗಂಗೋತ್ರಿಯ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಇಂದು ಯುವ ಜನತೆಗೆ ಸ್ವಾಮಿ ವಿವೇಕಾನಂದರ ಸಂದೇಶ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಮೇರಿಕಾದ ಚಿಕಾಗೋದಲ್ಲಿ ನಡೆದ ಸರ್ವಧರ್ಮ ಸಮ್ಮೇಳನದಲ್ಲಿ ಭಾರತೀಯರ ಪ್ರೀತಿ, ಮಮಕಾರ ಹಾಗೂ ಸಂಬಂಧಗಳಿಗೆ ನೀಡುವ ಮಹತ್ವವನ್ನು ವಿಶ್ವಕ್ಕೆ ಪರಿಚಯಿಸಿದರು ಎಂದರು.

ವಿವೇಕಾನಂದರ ಆಕರ್ಷಣೆಯ ವ್ಯಕ್ತಿತ್ವದಿಂದ ಪ್ರತಿಯೊಬ್ಬರಿಗೂ ಅವರು ಹತ್ತಿರವಾಗುತ್ತಿದ್ದರು. ವಿವೇಕಾನಂದರ ಮಾತು ಹಾಗೂ ಅವರ ಜೀವನದ ಬಗ್ಗೆ ಅಧ್ಯಯನ ಮಾಡಿದ ಸಂದರ್ಭದಲ್ಲಿ ಭಾರತಕ್ಕಾಗಿ ಅವರು ಸುರಿಸಿದ ಕಣ್ಣೀರು ಹಾಗೂ ಶ್ರಮವನ್ನು ಮನದಟ್ಟು ಮಾಡಿಸುತ್ತದೆ ಎಂದರು.

ಪ್ರಶ್ನೆ ಕೇಳುವುದು ಸೊಕ್ಕು ಎಂಬ ಭಾವನೆ ಹಲವರಲ್ಲಿದೆ. ಆದರೆ ವಿಶ್ವದ ಚರಿತ್ರೆಯಲ್ಲಿ ಭಾರತೀಯರನ್ನು ಎತ್ತರಕ್ಕೆ ಕೊಂಡೊಯ್ಯಲು ಹಗಲು ರಾತ್ರಿ ಎನ್ನದೆ ಶ್ರಮಿಸಿದ ವಿವೇಕಾನಂದರಿಗೆ ಪ್ರಶ್ನೆಗಳಿಗೆ ಉತ್ತರ ಹುಡುಕುವುದು ಜನ್ಮತಃ ನಡವಳಿಕೆಯಾಗಿತ್ತು. ಪ್ರಾಯಶಃ ಈ ಗುಣ ಇಲ್ಲದಿದ್ದರೆ ಎಂದೂ ನರೇಂದ್ರ ವಿವೇಕಾನಂದ ಆಗಲು ಸಾಧ್ಯವಾಗುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟರು.

ತರ್ಕದ ಆಧಾರದ ಮೇಲೆ ದೇವರು ಇದ್ದಾನೆಯೇ ಎಬ ಪ್ರಶ್ನೆಗೆ ವಿವೇಕಾನಂದರು ಉತ್ತರ ಹುಡುಕುತ್ತಾ ಹೊರಟರು. ಈ ವೇಳೆ ವಿವೇಕಾನಂದರು ರಾಮಕೃಷ್ಣ ಪರಮಹಂಸರನ್ನು ಭೇಟಿಯಾದರು. ಈ ವೇಳೆ ರಾಮಕೃಷ್ಣ ಪರಮಹಂಸರ ಆಕರ್ಷಕ ಪರೀಕ್ಷೆಯಲ್ಲಿ ವಿವೇಕನಂದರು ತೇರ್ಗಡೆಯಾದರು ಎಂದು ತಿಳಿಸಿದರು.

ಯಾರು ಕೂಡ ಆಕರ್ಷಣೆಗೆ ಒಳಗಾಗಬಾರದು. ಇಂತಹ ವಸ್ತು ಅಥವಾ ವ್ಯಕ್ತಿ ನನಗೆ ಬೇಕು ಎಂದು ತೀವ್ರ ರೀತಿಯ ಆಕರ್ಷಣೆಗೆ ಒಳಗಾದರೆ ಅದು ಲಭಿಸದಿದ್ದಾಗ ಮನಸ್ಸು ಆತ್ಮಹತ್ಯೆ ದಾರಿ ತೋರಿಸುತ್ತದೆ. ಅತಿಯಾದ ಆಕರ್ಷಣೆಯಿಂದ ಭಾರತದಲ್ಲಿ ಒಂದು ದಿನಕ್ಕೆ ಕನಿಷ್ಠ 26 ಜನರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ ಎಂದು ಶಂಕರಾನಂದಜೀ ಹೇಳಿದರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಕುಲಸಚಿವ ಪ್ರೊ.ಕೆ.ಬಿ. ಪ್ರವೀಣ್, ಸ್ವಾಮಿ ವಿವೇಕಾನಂದ ಅಧ್ಯಯನ ಪೀಠದ ಸಂಯೋಜನಾಧಿಕಾರಿ ಡಾ.ಜ್ಯೋತಿ ಶಂಕರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮಾ.1ರಂದು ಅಂಬಿಗರತ್ನ ಪ್ರಶಸ್ತಿ ಪ್ರದಾನ

ಮೈಸೂರು,ಫೆ.25–ಮೈಸೂರಿನ ಸುವರ್ಣ ಬೆಳಕು ಫೌಂಡೇಶನ್ ವತಿಯಿಂದ ಶ್ರೀ ನಿಜ ಶರಣ ಅಂಬಿಗರ ಜಯಂತಿ, ಶ್ರೀ ನಿಜ ಶರಣ ಅಂಬಿಗರ ರತ್ನ ಪ್ರಶಸ್ತಿ ಪ್ರದಾನ, ಶ್ರೀ ನಿಜಶರಣ ಅಂಬಿಗರ ಚೌಡಯ್ಯರವರ ಸಂದೇಶ ಕುರಿತು ಸಾಹಿತಿ ಕಿರಣ್ ಸಿದ್ಲೆಹಳ್ಳಿ ಅವರಿಂದ ಉಪನ್ಯಾಸ, ಅಂಬಿಗರ ಭಾವಚಿತ್ರ ಬಿಡಿಸಿದ ಮಕ್ಕಳಿಗೆ ಪ್ರಮಾಣ ಪತ್ರ ಹಾಗೂ ನಗದು ಬಹುಮಾನ ವಿತರಣಾ ಕಾರ್ಯಕ್ರಮವನ್ನು ಮಾ.1ರಂದು ಸಂಜೆ 4.30 ಕ್ಕೆ ಸುಣ್ಣದ ಕೇರಿ ಗಂಗಾಮತಸ್ಥರ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಮಾಜಿ ಸಚಿವರು ಹಾಗೂ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಗುರುಪೀಠದ ಕಾರ್ಯಾಧ್ಯಕ್ಷ ಪ್ರಮೋದ್ ಮಧ್ವರಾಜ್ ಉದ್ಘಾಟಿಸಲಿದ್ದಾರೆ. ನಿಜಶರಣ ಅಂಬಿಗರ ಭಾವಚಿತ್ರಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಪುಷ್ಪಾರ್ಚನೆ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಹಿರಿಯ ಸಮಾಜ ಸೇವಕ ರಘುರಾಮ್ ವಾಜಪೇಯಿ, ನವೀನ್ ಕುಮಾರ್, ಅಪೂರ್ವ ಶಿವಣ್ಣ ಉಪಸ್ಥಿತರಿರಲಿದ್ದಾರೆ. ಫೌಂಡೇಶನ್ ಅಧ್ಯಕ್ಷ ಮಹೇಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ಸಂದರ್ಭ ವಿವಿಧ ಕ್ಷೇತ್ರಗಳ ಸಾಧನೆ ಮಾಡಿದ ಸಾಧಕರಿಗೆ ಅಂಬಿಗ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ರಾಜ್ಯದ ನೀರಾವರಿ ಯೋಜನೆಗಳಿಗೆ ಅನುದಾನ–ಅನುಮತಿ ಕಲ್ಪಿಸುವಂತೆ ಕೇಂದ್ರ ಜಲ ಸಂಪನ್ಮೂಲ ಸಚಿವರಲ್ಲಿ ಡಿಕೆಶಿ ಮನವಿ



ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರನ್ನು ರಾಜ್ಯ ಜಲಸಂಪನ್ಮೂಲ ಸಚಿವ, ಡಿಸಿಎಂ ಡಿ.ಕೆ.ಶಿವಕುಮಾರ್ ನವದೆಹಲಿಯಲ್ಲಿ ಭೇಟಿಯಾದರು.

ಬೆಂಗಳೂರು, ಫೆ.25(ಕೆಎಂಶಿ)–ನನೆಗುದಿಗೆ ಬಿದ್ದಿರುವ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳಿಗೆ ಅನುದಾನ ಹಾಗೂ ಅನುಮತಿ ನೀಡಲು ಕ್ರಮ ಕೈಗೊಳ್ಳುವಂತೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ರಾಜ್ಯ ಜಲಸಂಪನ್ಮೂಲ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒತ್ತಾಯಿಸಿದ್ದಾರೆ.

ರಾಜ್ಯದ ಯೋಜನೆಗಳಾದ ತುಂಗ–ಭದ್ರಾ ಎಡದಂಡೆ ಕಾಲುವೆ, ಘಟಪ್ರಭಾ ಬಲದಂಡೆ ಪ್ರಮುಖ ಕಾಲುವೆ, ಕೃಷ್ಣಾ ಮೇಲ್ದಂಡೆ ಯೋಜನೆಯ ಇಂಡಿ ಕಾಲುವೆ, ಮಲಪ್ರಭಾ ಕಾಲುವೆಗಳ ವಿಸ್ತರಣೆ, ನವೀಕರಣ, ಆಧುನೀಕರಣ ಹಾಗೂ ಸೋಂತಿ ಏತ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುಮತಿ ಹಾಗೂ ಅನುದಾನ ನೀಡಬೇಕು ಎಂದರು.

ದೆಹಲಿಯಲ್ಲಿ ಇಂದು ಕೇಂದ್ರ ಸಚಿವರನ್ನು ಭೇಟಿ ಮಾಡಿದ ಅವರು, ಭದ್ರಾ ಎಡದಂಡೆ ಕಾಲುವೆಯ ವಿಸ್ತರಣೆ, ನವೀಕರಣ, ಆಧುನೀಕರಣ ಯೋಜನೆಗೆ ಕರ್ನಾಟಕ ಸರ್ಕಾರ ಕೇಂದ್ರ ಜಲ ಆಯೋಗಕ್ಕೆ ವಿಸ್ತೃತ ಯೋಜನಾ ವರದಿ ಸಲ್ಲಿಸಿದೆ.

ತುಂಗಭದ್ರಾ ಎಡದಂಡೆ ಕಾಲುವೆ 226 ಕಿ.ಮೀ ಉದ್ದ ಇದ್ದು, ಉತ್ತರ ಕರ್ನಾಟಕದ 244,103 ಹೆಕ್ಟೇರ್ ಕೃಷಿ ಭೂಮಿಗೆ ನೀರಾವರಿ ಒದಗಿಸಲಿದೆ, ಈ ಯೋಜನೆಯಿಂದಾಗಿ ಕಾಲುವೆಯ ಕೊನೆ ಭಾಗದ ರೈತರಿಗೂ ನೀರು ಸಮನಾಂತರವಾಗಿ ಹಂಚಿಕೆಯಾಗಲಿದೆ. ಅಲ್ಲದೆ, ಜೊತೆಗೆ 96,400 ಹೆಕ್ಟೇರ್ ಪ್ರದೇಶದ ರೈತರಿಗೆ ನೆರವಾಗಲಿದೆ. ಯೋಜನೆಗೆ 1444.42 ಕೋಟಿ ರೂ. ಅನುದಾನದ ಅಗತ್ಯವಿದೆ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ–ವೇಗವರ್ಧಿತ ನೀರಾವರಿ ಪ್ರಯೋಜನಗಳ ಕಾರ್ಯಕ್ರಮಗಳಡಿ ಅನುದಾನ ನೀಡಬೇಕು ಎಂದರು.

ಘಟಪ್ರಭಾ ಬಲದಂಡೆ ಪ್ರಮುಖ ಕಾಲುವೆಯ 199.09 ಕಿ.ಮೀ.ವರೆಗೆ ಹಾಗೂ ಚಿಕ್ಕೋಡಿ ಭಾಗದ ಕಾಲುವೆ 88.25 ಕಿ.ಮೀ.ವರೆಗೆ ಕಾಲುವೆಗಳ ವಿಸ್ತರಣೆ, ನವೀಕರಣ, ಆಧುನೀಕರಣಕ್ಕೂ ಕರ್ನಾಟಕ ಸರ್ಕಾರ ವಿಸ್ತೃತ ಯೋಜನಾ ವರದಿ ಸಲ್ಲಿಕೆ ಮಾಡಿದೆ. ಈ ಭಾಗದ ರೈತರಿಗೆ ಸಮರ್ಪಕವಾಗಿ ನೀರು ಪೂರೈಸಲು ನೆರವಾಗಲಿದೆ, ಯೋಜನೆಗೆ ಪಿಎಂಕೆಎಸ್‌ವೈ–ಎಐಬಿಪಿ ಯೋಜನೆಯಡಿ 1596.98 ಕೋಟಿ ರೂ. ಅನುದಾನ ಒದಗಿಸಬೇಕು.

ಪ್ರವಾಹ ನಿರ್ವಹಣೆ ಮತ್ತು ಗಡಿ ಪ್ರದೇಶ ಕಾರ್ಯಕ್ರಮ ಯೋಜನೆಯಡಿ ಬೆಣ್ಣಿಹಳ್ಳದಿಂದ ಮಲಪ್ರಭಾದ ಸಂಗಮದವರೆಗೂ ಪ್ರವಾಹ ನಿಯಂತ್ರಣ ಹಾಗೂ ಪ್ರವಾಹ ನಿರ್ವಹಣೆ ಕಾಮಗಾರಿಗೆ ನಡೆಸಲು ಅಗತ್ಯವಿರುವ 1610.00 ಕೋಟಿ ರೂ. ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ಜಿ ಸ್ಕ್ವಯರ್ ಮೈಸೂರಿಗೆ ವಿಸ್ತರಣೆ



ರಿಯಲ್ ಎಸ್ಟೇಟ್ ಡೆವಲಪರ್ ಜಿ ಸ್ಕ್ವಯರ್ ಮೈಸೂರಿನಲ್ಲೂ ಆರಂಭಗೊಂಡಿದೆ.

ಮೈಸೂರು, ಫೆ.25–ಭಾರತದ ಅತ್ಯಂತ ದೊಡ್ಡ ರಿಯಲ್ ಎಸ್ಟೇಟ್ ಡೆವಲಪರ್ ಜಿ ಸ್ಕ್ವಯರ್ ತನ್ನ ವ್ಯಾಪ್ತಿಯನ್ನು ಪ್ಲಾಟ್‌ಗಳು, ವಿಲ್ಲಾಗಳು ಮತ್ತು ಅಪಾರ್ಟ್‌ಮೆಂಟ್‌ಗಳನ್ನು ಒದಗಿಸುವ ಪ್ರೀಮಿಯಂ ಟೌನ್‌ಶಿಪ್ ಜಿ ಸ್ಕ್ವಯರ್ ಆಲ್ಕೆಮಿ ಮೂಲಕ ಮೈಸೂರಿಗೆ ವಿಸ್ತರಿಸಿದೆ ಎಂದು ಜಿ ಸ್ಕ್ವಯರ್ ರಿಯಾಲ್ಟರ್ಸ್ ಪ್ರೈವೇಟ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಬಾಲ ರಾಮಜೆಯಂ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕಾರ್ಯತಂತ್ರೀಯ ಕ್ರಮವು ಪ್ರಮುಖ ತಾಣಗಳಲ್ಲಿ ಉನ್ನತ ಗುಣಮಟ್ಟದ, ಕೈಗೆಟುಕುವ ಗೃಹ ಪರಿಹಾರಗಳನ್ನು ಒದಗಿಸುವ ಕಂಪನಿಯ ಧ್ಯೇಯೋದ್ದೇಶಕ್ಕೆ ಪೂರಕವಾಗಿದೆ. ಈ ವಿಸ್ತರಣೆಗೆ ಅನುಕೂಲ ಕಲ್ಪಿಸಲು ಜಿ ಸ್ಕ್ವಯರ್ ಬಿಲ್ಡರ್‌ಗಳೊಂದಿಗೆ ಸಹಯೋಗಗಳನ್ನು ನಿರೀಕ್ಷಿಸುತ್ತಿದ್ದು, ರಿಯಲ್ ಎಸ್ಟೇಟ್ ಮಾರುಕಟ್ಟೆಯಲ್ಲಿ ತನ್ನ ಉಪಸ್ಥಿತಿಯನ್ನು ಸದೃಢಗೊಳಿಸುವ ಗುರಿ ಹೊಂದಿದೆ ಎಂದರು.

ಜಿ ಸ್ಕ್ವಯರ್ ಆಲ್ಕೆಮಿ: ಪ್ರೀಮಿಯಂ ರೆಸಿಡೆನ್ಷಿಯಲ್ ಕಮ್ಯುನಿಟಿ ರಾಜರಾಜೇಶ್ವರಿ ನಗರದ ಹೃದಯಭಾಗದಲ್ಲಿರುವ ಜಿ ಸ್ಕ್ವಯರ್ ಆಲ್ಕೆಮಿ 39.8 ಎಕರೆಗಳ ವಿಸ್ತೀರ್ಣ ಹೊಂದಿದೆ. 478 ಅತಿ ಸೂಕ್ಷ್ಮವಾಗಿ ಯೋಜಿಸಿದ ರೆಸಿಡೆನ್ಷಿಯಲ್ ಪ್ಲಾಟ್‌ಗಳು 822ರಿಂದ 3,800 ಚದರ ಅಡಿಯವರೆಗೆ ವಿಸ್ತರಿಸಿವೆ. ಈ ನಿರ್ಮಾಣಕ್ಕೆ ಸಿದ್ಧವಿರುವ ಕಮ್ಯುನಿಟಿ ಮತ್ತು ಎಲ್ಲವನ್ನೂ ಒಳಗೊಂಡ ರೆಸಿಡೆನ್ಷಿಯಲ್ ಟೌನ್‌ಶಿಪ್ 35 ವಿಶ್ವ ಮಟ್ಟದ ಸೌಲಭ್ಯಗಳನ್ನು ಒಳಗೊಂಡಿದ್ದು ಅದರಲ್ಲಿ ಉತ್ತಮವಾಗಿ ರೂಪಿಸಿದ ಬೀದಿ ದೀಪಗಳನ್ನು ಒಳಗೊಂಡ ಆಂತರಿಕ ರಸ್ತೆಗಳು, 24x7 ಸಿಸಿಟಿವಿ ಮೇಲ್ವಿಚಾರಣೆ ಮತ್ತು ಪರಿಪೂರ್ಣ ಕಾನೂನು ದಾಖಲೀಕರಣ ಹೊಂದಿದ್ದು ಸುರಕ್ಷಿತ, ಐಷಾರಾಮಿ ಜೀವನ ಶೈಲಿ ದೃಢೀಕರಿಸುತ್ತದೆ ಎಂದರು.

ಮಾ.4, 5ರಂದು ದೆಹಲಿಯಲ್ಲಿ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳ ಸಮ್ಮೇಳನ

ಬೆಂಗಳೂರು, ಫೆ.25(ಕೆಎಂಶಿ)–ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನ ಮಾರ್ಚ್ 4 ಮತ್ತು 5ರಂದು ದೆಹಲಿಯಲ್ಲಿ ನಡೆಯಲಿದೆ.

ಎಲ್ಲಾ ರಾಜ್ಯ, ಕೇಂದ್ರಾಡಳಿತ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಚುನಾವಣಾ ನೋಂದಣಾಧಿಕಾರಿಗಳು (ಇ.ಆರ್.ಓ) ರಾಜ್ಯ, ಜಿಲ್ಲಾ ಮತ್ತು ವಿಧಾನಸಭಾ ಕ್ಷೇತ್ರದ ಮಟ್ಟದಲ್ಲಿ ಶಾಸನಬದ್ಧ ಅಧಿಕಾರಿಗಳಾಗಿ ಪ್ರಮುಖ ಕಾರ್ಯ ನಿರ್ವಹಿಸುವಲ್ಲಿ ಸಮ್ಮೇಳನ ಅಗತ್ಯ ಮಾಹಿತಿ ಒದಗಿಸಲಿದೆ. ಕೇಂದ್ರ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿಯಾಗಿ ನೇಮಕಗೊಂಡ ಜ್ಞಾನೇಶ್‌ಕುಮಾರ್ ಅಧಿಕಾರ ವಹಿಸಿಕೊಂಡ ನಂತರದ ಮೊದಲ ಸಮ್ಮೇಳನ ಇದಾಗಿದೆ.

ಎಲ್ಲಾ ಜಿಲ್ಲಾ ಚುನಾವಣಾಧಿಕಾರಿ (ಡಿ.ಇ.ಓ) ಮತ್ತು ಚುನಾವಣಾ ನೋಂದಣಾಧಿಕಾರಿಗಳ (ಇ.ಆರ್.ಓ) ನಾಮನಿರ್ದೇಶನಕ್ಕೆ ಸೂಚಿಸಲಾಗಿದೆ. ಆಧುನಿಕ ಚುನಾವಣಾ ನಿರ್ವಹಣೆಗೆ ಮಾಹಿತಿ ತಂತ್ರಜ್ಞಾನ, ಪರಿಣಾಮಕಾರಿ ಸಂವಹನ, ಸಾಮಾಜಿಕ ಮಾಧ್ಯಮ ಉಪಯೋಗ ಮತ್ತು ಚುನಾವಣಾ ಪ್ರಕ್ರಿಯೆಗಳಲ್ಲಿ ಶಾಸನಬದ್ಧ ಪಾತ್ರ ಕುರಿತು ಚರ್ಚೆಗಳು ನಡೆಯಲಿದೆ.

ನಿಖಿಲ್ ಕುಮಾರಸ್ವಾಮಿಗೆ ಅಭಿನಂದನೆ...



ಮಂಗಳವಾರ ಮೈಸೂರಿಗೆ ಆಗಮಿಸಿದ್ದ ನಿಖಿಲ್ ಕುಮಾರಸ್ವಾಮಿ ಅವರನ್ನು ನಿಖಿಲ್ ಕುಮಾರಸ್ವಾಮಿ ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಕುಮಾರ ಬಿಡನಹಳ್ಳಿ ಅಭಿನಂದಿಸಿದರು. ಈ ವೇಳೆ ಶಾಸಕ ಜಿ.ಡಿ. ಹರೀಶ್‌ಗೌಡ ಇದ್ದರು.

ಯುವರಾಜ ಕಾಲೇಜು ಪ್ರಾಧ್ಯಾಪಕಿ ಡಾ.ಕೆ.ಎ.ಶರ್ವಾಣಿ ಅವರಿಗೆ ಬೀಳ್ಕೊಡುಗೆ



ಯುವರಾಜ ಕಾಲೇಜು ಪ್ರಾಧ್ಯಾಪಕಿ ಡಾ.ಶರ್ವಾಣಿ ಅವರಿಗೆ ಬೀಳ್ಕೊಡಲಾಯಿತು.

ಮೈಸೂರು, ಫೆ. 25– ಯುವರಾಜ ಕಾಲೇಜಿನ ಸಸ್ಯಶಾಸ್ತ್ರ ವಿಭಾಗದಲ್ಲಿ ಕಳೆದ 34 ವರ್ಷಗಳಿಂದ ಅಧ್ಯಾಪಕರಾಗಿ, ಸಹಾಯಕ ಪ್ರಾಧ್ಯಾಪಕರಾಗಿ, ಸಹ ಪ್ರಾಧ್ಯಾಪಕರಾಗಿ, ವಿಭಾಗದ ಮುಖ್ಯಸ್ಥರಾಗಿ, ಪರೀಕ್ಷಾ ಮಂಡಳಿಯ ಅಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸಿರುವ ಡಾ.ಕೆ.ಎ. ಶರ್ವಾಣಿ, ಸೇವೆಯಿಂದ ನಿವೃತ್ತರಾದ ಹಿನ್ನೆಲೆಯಲ್ಲಿ ಅವರಿಗೆ ಬೀಳ್ಕೊಡುಗೆ ಸಮಾರಂಭ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿದ ಜೀವರಸಾಯನ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಜೆ.ರಾಜೇಶ್, ಅಧ್ಯಾಪಕ ವೃತ್ತಿಯ ಪಾವಿತ್ರ್ಯತೆಗೆ ಘನತೆ ಬರುವಂತೆ ಕರ್ತವ್ಯ ನಿರ್ವಹಿಸಿರುವ ಡಾ.ಶರ್ವಾಣಿ ಅವರು ಸಸ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳ ಪ್ರೀತಿ ಗೌರವಕ್ಕೆ ಪಾತ್ರರಾಗಿದ್ದಾರೆ. ತಮ್ಮ ವೃತ್ತಿ ಬದುಕಿನುದ್ದಕ್ಕೂ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ದೊರಕಿಸಿ ಕೊಟ್ಟಿದ್ದಾರೆ. ಪ್ರತಿ ವರ್ಷ ತೊಂದರೆಯಲ್ಲಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡುತ್ತಾ ಬಂದಿದ್ದಾರೆ. ಕಾಲೇಜಿನ ಪಠ್ಯೇತರ ಚಟುವಟಿಕೆ, ರಾಷ್ಟ್ರೀಯ ಸೇವಾ ಯೋಜನೆ, ವಾರ್ಷಿಕ ಸಂಚಿಕೆ, ಗ್ರಂಥಾಲಯ, ಪರಿಸರ ಸಂರಕ್ಷಣೆ ಇತ್ಯಾದಿ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕೆಲಸವನ್ನು ಮಾಡುತ್ತಾ ಬಂದಿದ್ದಾರೆ. ಯುವ ಅಧ್ಯಾಪಕರು ಅವರ ಮಾರ್ಗದಲ್ಲಿ ಮುನ್ನಡೆದು ಅಧ್ಯಾಪಕ ವೃತ್ತಿಯ ಶ್ರೇಷ್ಠತೆಯನ್ನು ಹೆಚ್ಚಿಸಬೇಕೆಂದರು. ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ಪ್ರೊ.ಜಿ.ಕೃಷ್ಣಮೂರ್ತಿ, ಪ್ರೊ.ಎಸ್. ಸುರೇಶ್, ಪ್ರೊ.ಸೌಮ್ಯ, ಪ್ರೊ.ಮಹದೇವಸ್ವಾಮಿ, ಪ್ರೊ.ಬಿ.ಸಿ.ಮಂಜುನಾಥ್, ಪ್ರೊ.ಎಂ.ಪಿ.ರೇಖಾ, ಪ್ರೊ. ಪಿ.ಕೆ.ಮಹೇಶ್ವರ್ ಮತ್ತಿತರರು ಹಾಜರಿದ್ದರು.

ಸಮುದಾಯಕ್ಕಾಗಿ ಶ್ರಮಿಸಿದವರ ಚರಿತ್ರೆ ರಚನೆಯಾಗಬೇಕು

ವಿವಿಧ ಕೃತಿಗಳ ಬಿಡುಗಡೆಗೊಳಿಸಿ ಮೈಸೂರು ವಿವಿ ಡಾ.ಬಿ.ಆರ್.ಅಂಬೇಡ್ಕರ್ ಪೀಠದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ರಹಮತ್ ತರೀಕೆರೆ ಕಿವಿಮಾತು



ಮಾನಸಗಂಗೋತ್ರಿಯ ಇಎಂಆರ್‌ಸಿ ಸಭಾಂಗಣದಲ್ಲಿ ಲೇಖಕ ಡಾ.ಡಿ.ರವಿಕುಮಾರ್ ಇಂದ್ವಾಡಿ ಅವರ ಕೃತಿಗಳನ್ನು ಮೈಸೂರು ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಪೀಠದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ರಹಮತ್ ತರೀಕೆರೆ ಬಿಡುಗಡೆ ಮಾಡಿದರು.

ಮೈಸೂರು, ಫೆ.25(ಎಂಟಿವೈ)– ಇತಿಹಾಸದ ಹುತ್ತಕ್ಕೆ ಕೈ ಹಾಕಿದ್ದರಿಂದ ವಿಷ ಕಾರುವ ಘಟನೆಗಳು ನಡೆಯುತ್ತಿದ್ದು, ಇವು ದೇಶದ ಏಳಿಗೆಗೆ ಮಾರಕ ಎಂದು ಮೈಸೂರು ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಪೀಠದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ರಹಮತ್ ತರೀಕೆರೆ ವಿಷಾಧಿಸಿದ್ದಾರೆ.

ಮಾನಸ ಗಂಗೋತ್ರಿಯ ಇಎಂಆರ್‌ಸಿ ಸಭಾಂಗಣದಲ್ಲಿ ದಲಿತ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ, ಮೈಸೂರು ವಿಶ್ವವಿದ್ಯಾನಿಲಯದ ಸಂಶೋಧಕರ ಸಂಘದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಲೇಖಕ ಡಾ.ಡಿ.ರವಿಕುಮಾರ್ ಇಂದ್ವಾಡಿ ರಚಿತ ದೇವರಾಯ ಇಂಗಳೆ, ಸೋಸಲೆ ಸಿದ್ದಪ್ಪ, ಡಿ.ಗೋವಿಂದ ದಾಸ್: ಬದುಕು–ಬರಹ ಹಾಗೂ ಕಾರುಣ್ಯ ಬಿತ್ತನೆ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಇತಿಹಾಸದ ಹುತ್ತಕ್ಕೆ ಕೈಹಾಕುವ ಕೆಲಸ ಕಳೆದ 30–35 ವರ್ಷದಿಂದ ಕೆಲ ಘಟನೆಗಳಿಂದ ಗೊತ್ತಾಗುತ್ತಿದೆ. ಇತಿಹಾಸ ಎಂದರೆ ನಮ್ಮ ಸಮಾಜ ಏನೆಲ್ಲಾ ಬಿಕ್ಕಟ್ಟು ಎದುರಿಸಿತು. ಎದುರಾದ ಬಿಕ್ಕಟ್ಟನ್ನು ಬಗೆಹರಿಸಿಕೊಂಡ ಬಗೆ, ಪರಿವರ್ತನೆಗೆ ಮಾಡಿದ ಹೋರಾಟವೇ ಇತಿಹಾಸವಾಗಿದೆ. ಈ ಇತಿಹಾಸ ನಮ್ಮನ್ನಾಳಿದ ದೊರೆಗಳಿಗಿಂತ ಮಿಗಿಲಾಗಿದೆ. ಚರಿತ್ರೆ ಹುದುಗಿ ಹೋಗಿರುವ ಇತಿಹಾಸದ ತಿಳುವಳಿಕೆಗೆ ಮೂಡಿಸುವುದು ಅನಿವಾರ್ಯ ಎಂದರು.

ನಾವು ರಾಜರ ಯುದ್ಧ ಕಥನವನ್ನು ಇತಿಹಾಸವೆಂದು ಬರೆದುಕೊಂಡಿದ್ದೇವೆ. ಹೀಗಾಗಿ ಅದೊಂದು ರೀತಿ ಊಳಿಗಮಾನ್ಯ ಪ್ರವೃತ್ತಿ ನಮ್ಮಲ್ಲಿ ಬೆಳೆಸುತ್ತಿದೆ. ಯಾರು ಆಳಿದರು, ಯಾರು ಯುದ್ಧ ಮಾಡಿದರು, ಯುದ್ಧದಲ್ಲಿ ಯಾರು ಸೋತರು ಎಂಬ ಇತಿಹಾಸದ ಹುತ್ತಕ್ಕೆ ಕೈ ಹಾಕಿ ಭಾರತದ ಮೇಲೆ ವಿಷ ಚೆಲ್ಲುವ ಪ್ರಕ್ರಿಯೆಗೆ ಕಡಿವಾಣ ಹಾಕಬೇಕು ಎಂದರು.

ಸಮುದಾಯ ಶೈಕ್ಷಣಿಕವಾಗಿ ಮುಂದೆ ತರಲು ಅನೇಕರು ಶ್ರಮಿಸಿದ್ದಾರೆ. ಇಂತಹ ಸಾಮಾಜಿಕ ನಾಯಕರ ಕುರಿತ ಚರಿತ್ರೆ ಬರೆಯಬೇಕು. ಕರ್ನಾಟಕದ ಸಮುದಾಯಗಳು ವೈಚಾರಿಕತೆಯನ್ನು ಆಯುಧವನ್ನಾಗಿ ಮಾಡಿಕೊಂಡು, ಅದರ ಮೂಲಕ ಸಮಾಜ ವಿಮರ್ಶೆ ಮಾಡುವ ಹಾದಿ ತುಳಿಯಬೇಕಾಗಿತ್ತು. ಆದರೆ ಧಾರ್ಮಿಕ ಪಥವನ್ನು ಹಿಡಿದರು. ಇದರಿಂದ ವೈಚಾರಿಕತೆಗೆ ಹಿನ್ನಡೆಯಾಗಿದೆ. ಪ್ರಖರ ವೈಚಾರಿಕತೆ ನಡುವೆ ಕಾರುಣ್ಯ ಇಲ್ಲದಿದ್ದರೆ ಅದು ಶುಷ್ಕವಾಗಲಿದೆ. ಟಿಪ್ಪು ಆಳ್ವಿಕೆ ಕಾಲದಲ್ಲಿ ದಲಿತರಿಗೆ ಸೇನೆಯಲ್ಲಿ ಸ್ಥಾನಮಾನ ನೀಡಲಾಗಿತ್ತು. ಅದು ನಾಲ್ವಡಿ ಕಾಲದಲ್ಲಿ ಮುಂದುವರೆಯಿತು. ಇದರ ಫಲವಾಗಿ ಚಿಂತಕರು ಮೇಲೆ ಬರಲು ಒಂದು ಪರಂಪರೆ ದೊರೆಯಿತು ಎಂದರು.

ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಪ್ರೊ.ಎನ್.ಕೆ.ಲೋಲಾಕ್ಷಿ ಮಾತನಾಡಿ, ಜನಪದರು ಮತ್ತು ದ್ರಾವಿಡರಿಂದ ನಮ್ಮ ಚರಿತ್ರೆ ಆರಂಭವಾಗಲಿದೆ. ಆದರೆ, ಕೇವಲ ಶಾಸನಗಳಿಂದ ಚರಿತ್ರೆಯನ್ನು ಕಟ್ಟಲಾಗಿದೆ. ಜನಪದರಿಂದ ಚರಿತ್ರೆ ಕಟ್ಟಿಲ್ಲ. ಹೀಗಾಗಿ ನಮ್ಮದಲ್ಲದ ಸಾಹಿತ್ಯ ಚರಿತ್ರೆಯ ಬಗ್ಗೆ ಮಾತನಾಡುತ್ತಿದ್ದೇವೆ. ಆರ್ಯರ ಚರಿತ್ರೆಯನ್ನು ಓದಿಕೊಂಡು, ಮೆರೆಸಿಕೊಂಡು ಮಾತನಾಡುತ್ತಿದ್ದೇವೆ. ರಾಮಾಯಣ, ಮಹಾಭಾರತ ಓದುವ ದೊಡ್ಡ ಯುದ್ಧ, ಅರಮನೆ, ಅಂತಪುರದ ಮಹಿಳೆಯರ ಚರಿತ್ರೆ ಓದುತ್ತೇವೆ. ಆದರೆ, ಅಂತಪುರದ ಮಹಿಳೆಯರಿಗೆ ಬಟ್ಟೆ ಹೊಲೆದು ಕೊಡುತ್ತಿದ್ದ, ಅವರ ಮಲ–ಮೂತ್ರಗಳನ್ನು ಸ್ವಚ್ಛಗೊಳಿಸಿದ ಚರಿತ್ರೆ ಎಲ್ಲಿ ಹೋಯಿತು ಎಂದು ಪ್ರಶ್ನೆಯನ್ನು ಎತ್ತಿದವರು ದೇವಯ್ಯ ಹರವೇ. ಈ ಪ್ರಶ್ನೆಯನ್ನು ನಮ್ಮ ಕಾಲಕ್ಕೆ ಎತ್ತಿಕೊಳ್ಳಲು ದಾಖಲೆಗಳಿಲ್ಲ ಎಂದರು.

ಒಂದು ಚರಿತ್ರೆಯನ್ನು ಮುರಿದು ಕಟ್ಟುವ ಕೆಲಸವನ್ನು ಈ ನೆಲದಲ್ಲಿ ಆರಂಭ ಮಾಡಿದ್ದು, ಎಂ.ಎಸ್.ಶೇಖರ್ ದಲಿತ ಲೇಖಕರನ್ನು ಇಟ್ಟುಕೊಂಡು ಚರಿತ್ರೆಯನ್ನು ಮುರಿದು ಕಟ್ಟಿದರು. ತಮ್ಮ ವಿದ್ಯಾರ್ಥಿಗಳ ಮೂಲಕ ಅದನ್ನು ಮುಂದುವರಿಸಿದ್ದಾರೆ. ಸಂಶೋಧನಾ ವಿದ್ಯಾರ್ಥಿಗಳು ಅಧ್ಯಯನದಿಂದ ಬೆಣ್ಣೆಯನ್ನು ತೆಗೆದಿದ್ದಾರೆ. ಆದರೆ, ತುಪ್ಪವನ್ನು ತೆಗೆಯುವ ಕೆಲಸ ಮಾಡಿಲ್ಲ. ಕೃತಿಗಳ ಮೂಲಕ ನವ ಇತಿಹಾಸವನ್ನು ನಿರ್ಮಾಣ ಮಾಡಬೇಕು ಎಂದು ಹೇಳಿದರು.

ಕಾರುಣ್ಯ ಬಿತ್ತನೆ ಕೃತಿ ಕುರಿತು ಸಿದ್ಧಾರ್ಥನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ.ತ್ರಿವೇಣಿ ಮಾತನಾಡಿದರು. ಮೈಸೂರು ವಿಶ್ವವಿದ್ಯಾನಿಲಯದ ಡೀನರು ಕಲಾನಿಕಾಯದ ಪ್ರೊ.ಎಂ.ಎಸ್.ಶೇಖರ್, ಕವಿ ಪ್ರೊ.ಮಹದೇವ ಶಂಕನಪುರ, ದಲಿತ ಸಾಹಿತ್ಯ ಪರಿಷತ್ ವಿಭಾಗೀಯ ಸಂಯೋಜಕ ಡಾ.ಚಂದ್ರಗುಪ್ತ, ಲೇಖಕ ಡಾ.ಡಿ.ರವಿಕುಮಾರ್ ಇಂದ್ವಾಡಿ, ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಸಂಶೋಧನಾ ಸಹಾಯಕ ಡಾ.ಬಿ.ಮೂರ್ತಿ, ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್ ಇನ್ನಿತರರು ಹಾಜರಿದ್ದರು.

ಇಂದು ಶಿವರಾತ್ರಿ ಜಾಗರಣೆ, ಶ್ರೀ ಚೌಡೇಶ್ವರಿ ಕೊಂಡೋತ್ಸವ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ದೇವಸ್ಥಾನದ ಗುಡ್ಡಪ್ಪ ಚಿನ್ನಸ್ವಾಮಿ.

ಶ್ರೀರಂಗಪಟ್ಟಣ: ತಾಲೂಕಿನ ಮಹದೇವಪುರ ಗ್ರಾಮದ ಕುಂಬಾರಗುಂಡಿ ಸರ್ಕಲ್‌ನಲ್ಲಿ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಫೆ.26 ರಂದು ರಾತ್ರಿ ಜಾಗರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಗುಡ್ಡಪ್ಪ ಚಿನ್ನಸ್ವಾಮಿ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶ್ರೀ ಮಹದೇಶ್ವರ ಮಠ ಮತ್ತು ಓಂ ಶ್ರೀ ಜಡೆಮುನೇಶ್ವರ ದೇವಸ್ಥಾನ ಟ್ರಸ್ಟ್ ವತಿಯಿಂದ ಬುಧವಾರ ರಾತ್ರಿ ಜಾಗರಣೆ, ಶ್ರೀ ಜಡೇಮುನೇಶ್ವರ ಮತ್ತು ಕಾಲ ಭೈರವ, ಚಾಮುಂಡೇಶ್ವರಿ ದೇವರುಗಳಿಗೆ ರುದ್ರಾಭಿಷೇಕ, ರುದ್ರ ಹೋಮ ಪೂರ್ಣಾಹುತಿ, ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಇರುತ್ತದೆ ಎಂದರು.

ಫೆ27ರಂದು ಬೆಳಗ್ಗೆ ಕಾವೇರಿ ನದಿಯಿಂದ ಶ್ರೀ ಜಡೇಮುನೇಶ್ವರ ಸ್ವಾಮಿಯ ಕರಗ ಸಹಿತ ಕಂಡಾಯ, ಕಗ್ಗಲಿ ಉತ್ಸವ ಸಹಿತ ಗ್ರಾಮದ ಪ್ರಮುಖ ರಾಜಬೀದಿಗಳಲ್ಲಿ ದೊಡ್ಡ ರಾಡಿನ ಬಾಯಿ ಬೀಗ, ಕಲಾತಂಡಗಳು ಮತ್ತು ಭಕ್ತಾದಿಗಳೊಂದಿಗೆ ಮೆರವಣಿಗೆ ನಡೆಸಲಾಗುವುದು. ಮಧ್ಯಾಹ್ನ ಅನ್ನ ಸಂತರ್ಪಣೆ ಜರುಗಲಿದೆ ಎಂದು ತಿಳಿಸಿದರು.

ಜೊತೆಗೆ ಮಾ.3ರ ಸೋಮವಾರ ಸಂಜೆ ಗೋಧೂಳಿ ಮುಹೂರ್ತದಲ್ಲಿ ಶ್ರೀ ಚೌಡೇಶ್ವರಿ ದೇವಿ ಅಮ್ಮನವರ ಕೊಂಡದ ಆರಾಧನಾ ಕಾರ್ಯಕ್ರಮ ಜರುಗಲಿದ್ದು, ದೇವಿಗೆ ರುದ್ರಾಭಿಷೇಕ, ಕುಂಕುಮಾರ್ಚನೆ, ಚಂಡಿಕಾ ಹೋಮ ಕೊಂಡದ ಪೂಜೆ ಮತ್ತು ಅಗ್ನಿ ಪೂಜೆ ಕಾರ್ಯಕ್ರಮ ನಡೆಯಲಿದೆ ಮಾ.4ರ ಮಂಗಳವಾರ ಬೆಳಗ್ಗಿನ ಜಾವ 4 ಗಂಟೆ ಸಮಯಕ್ಕೆ ಕೊಂಡ ಹಾಯುವ ಕಾರ್ಯಕ್ರಮ ಹಾಗೂ ಮಧ್ಯಾಹ್ನ ಅನ್ನ ಸಂತರ್ಪಣೆ ಕಾರ್ಯಕ್ರಮ ಜರುಗಲಿದ್ದು ಭಕ್ತಾದಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಚಂದ್ರು, ಭಕ್ತವತ್ಸಲ, ಎಸ್.ಟಿ ರಾಜು, ವಿಶ್ವನಾಥ್ ಇದ್ದರು.

ನಾಳೆ ಹಲಗೂರಿನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ

ಹಲಗೂರು, ಫೆ25– ಹಲಗೂರು ಲಯನ್ಸ್ ಕ್ಲಬ್ ಹಾಗೂ ಮೈಸೂರಿನ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಸಂಯುಕ್ತ ಆಶಯದಲ್ಲಿ ಫೆ27ರಂದು ಉಚಿತ ಆರೋಗ್ಯ ತಪಾಸಣಾ ಹಾಗೂ ಆಯುರ್ವೇದ ಆರೋಗ್ಯ ಸಲಹಾ ಮತ್ತು ಔಷಧಿ ವಿತರಣಾ ಶಿಬಿರ ಆಯೋಜಿಸಲಾಗಿದೆ.

ಹಲಗೂರಿನ ಚನ್ನಪಟ್ಟಣ ರಸ್ತೆಯಲ್ಲಿರುವ ಲಯನ್ಸ್ ಭವನದಲ್ಲಿ ಬೆಳಿಗ್ಗೆ 10ರಿಂದ ಮಧ್ಯಾಹ್ನ 1.30ರವರೆಗೆ ಶಿಬಿರ ನಡೆಯಲಿದೆ. ಶಿಬಿರದಲ್ಲಿ ಜ್ವರ, ಕೆಮ್ಮು, ದಮ್ಮು, ನೆಗಡಿ, ಉಸಿರಾಟದ ತೊಂದರೆ, ನರ ದೌರ್ಬಲ್ಯ, ಗಂಟು–ಸಂದಿ ನೋವು, ರಕ್ತಹೀನತೆ, ನಿದ್ರಾಹೀನತೆ ಹಾಗೂ ಮಕ್ಕಳ ಜ್ಞಾಪಕಶಕ್ತಿ ಮತ್ತು ರೋಗನಿವಾರಕ ಶಕ್ತಿಯನ್ನು ಹೆಚ್ಚಿಸಲು ಆಯುರ್ವೇದ ಚಿಕಿತ್ಸೆಗಳ ಮಾರ್ಗದರ್ಶನ ನೀಡಲಾಗುವುದು.

ಸುದ್ದಿಗೋಷ್ಠಿಯಲ್ಲಿ ಹಲಗೂರು ಲಯನ್ಸ್ ಕ್ಲಬ್‌ನ PMJF DC ಡಾ. ಷಂಶುದ್ದೀನ್ ಈ ವಿಷಯ ತಿಳಿಸಿದರು. ಗ್ರಾಮೀಣ ಪ್ರದೇಶದ ಜನತೆಗೆ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಈ ಶಿಬಿರವನ್ನು ಆಯೋಜಿಸಲಾಗಿದೆ. ಹಲಗೂರಿನ ಸುತ್ತಮುತ್ತಲಿನ ಗ್ರಾಮಸ್ಥರು ಫೆ.27 ರಂದು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಓ.ಪಿ.ಕುಮಾರ್, ಡಿ.ಎಲ್. ಮಾದೇಗೌಡ, ಕೆ.ಶಿವರಾಜು, ಮನೋಹರ್ ಹಾಗೂ ಲಯನ್ಸ್ ಸದಸ್ಯರು ಉಪಸ್ಥಿತರಿದ್ದರು.

ಸಾರ್ವಜನಿಕ ಸ್ಮಶಾನಗಳಲ್ಲಿ

ಅಂತ್ಯಸಂಸ್ಕಾರಕ್ಕೆ ಮುಕ್ತ ಅವಕಾಶ

ಮಂಡ್ಯ,ಫೆ.25– ಸರ್ಕಾರಿ ಸ್ಥಳಗಳಲ್ಲಿರುವ ಸ್ಮಶಾನಗಳಲ್ಲಿ ಎಲ್ಲಾ ಸಮುದಾಯದವರು ಯಾವುದೇ ಭೇದ ಭಾವವಿಲ್ಲದೆ ಅಂತ್ಯಸಂಸ್ಕಾರ ಮಾಡಲು ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕುಂದುಕೊರತೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶವಸಂಸ್ಕಾರವನ್ನು ಪ್ರತಿಯೊಬ್ಬರು ಗೌರವಯುತವಾಗಿ ಮಾಡಬೇಕು. ಕೆ.ಆರ್. ಪೇಟೆಯ ಟೌನ್‌ನಲ್ಲಿ ವಾಸಿಸುತ್ತಿರುವ 64 ಪೌರಕಾರ್ಮಿಕ ಕುಟುಂಬಗಳಿಗೆ ಒಂದು ವಾರದೊಳಗೆ ಹೊಸಹೊಳಲು ಗ್ರಾಮದಲ್ಲಿ ಸರ್ಕಾರಿ ಜಮೀನಿನಲ್ಲಿ ಲಭ್ಯವಿರುವ 7 ಎಕರೆ ಜಾಗವನ್ನು ಸರ್ವೆ ಮಾಡಿ, ನಿವೇಶನ ರಹಿತ ಕುಟುಂಬಗಳಿಗೆ ನಿವೇಶನ ಕೊಡಿಸುವ ಕಾರ್ಯ ಜರುಗಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಕೆಆರ್.ಪೇಟೆ ತಾಲೂಕಿನ ಬಿಂಡಿಗನವಿಲೆ, ಮಂಗರಹಳ್ಳಿಯಿಂದ ಹಿರಿಸಾವೆಗೆ ಗ್ರಾಮಕ್ಕೆ ಸುಮಾರು ವರ್ಷಗಳಿಂದಲೂ ರಸ್ತೆ ಕಿರಿದಾಗಿದೆ ಎಂಬ ಕೆಎಸ್‌ಆರ್‌ಟಿಸಿ ಬಸ್ ಇರುವುದಿಲ್ಲಎಂಬ ದೂರು ಬಂದಿದ್ದು, ಕೆಎಸ್ ಆರ್‌ಟಿಸಿಯ ಅಧಿಕಾರಿಗಳು ಖುದ್ದು ಪರಿಶೀಲನೆ ನಡೆಸಿ ಬಸ್‌ಗಳು ಚಲಿಸುವ ಸಾಧ್ಯತೆ ಇದ್ದರೆ ಬಸ್ ವ್ಯವಸ್ಥೆ ಕಲ್ಪಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.


ಜಿಲ್ಲಾಧಿಕಾರಿ ಡಾ.ಕುಮಾರ್ ಎಸ್‌ಸಿ, ಎಸ್‌ಟಿ ಸಮುದಾಯದ ಕುಂದುಕೊರತೆ ಸಭೆ ನಡೆಸಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಕುಂದು ಕೊರತೆಗಳು ಜಿಲ್ಲಾ ಮಟ್ಟದಲ್ಲಿ ಚರ್ಚೆಯಾಗುವ ವಿಷಯಗಳು ತಾಲೂಕು ಮಟ್ಟದ ಸಭೆಯಲ್ಲಿ ಚರ್ಚೆ ನಡೆಸಿದರೆ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಬಹುದು. ಪರಿಶಿಷ್ಟಜಾತಿ ಹಾಗೂ ಪಂಗಡದವರು ತಮ್ಮ ಗ್ರಾಮದಲ್ಲಿ ಕೆರೆ, ರಸ್ತೆ ಹಾಗೂ ಸ್ಮಶಾನ ಅಭಿವೃದ್ಧಿಪಡಿಸಿಕೊಡಬೇಕು ಎಂದು ಕುಂದು ಕೊರತೆ ಸಭೆಯಲ್ಲಿ ಅರ್ಜಿ ಸಲ್ಲಿಸಿದಾಗ ಇದನ್ನು ವಿಶೇಷವಾಗಿ ಪರಿಗಣಿಸಿ ನರೇಗಾ ಯೋಜನೆಯಡಿ ತಯಾರಿಸುವ ಕ್ರಿಯಾ ಯೋಜನೆಯಲ್ಲಿ ನಿಯಮಾನುಸಾರ ಪರಿಶೀಲಿಸಿ ಪ್ರಥಮ ಆದ್ಯತೆ ನೀಡಿ ಸೇರಿಸಿಕೊಳ್ಳಿ ಎಂದು ಹೇಳಿದರು.

ಸರ್ಕಾರದ ವ್ಯಾಪ್ತಿಯಲ್ಲಿರುವ ಅಂಗಡಿ ಮಳಿಗೆಗಳನ್ನು ಹರಾಜು ಮಾಡುವಾಗ ಪೌರಕಾರ್ಮಿಕರಿಗೆ ಮೀಸಲಾತಿ ನೀಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಚರ್ಚಿಸಲಾಗುವುದು ಎಂದರು.

ಜಿಪಂ. ಸಿಇಓ ನಂದಿನಿ ಮಾತನಾಡಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಸತಿ ರಹಿತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಮ್ಯಾನುಯಲ್ ಸ್ಕಾವೆಂಜರ್‌ಗಳನ್ನು ಗುರುತಿಸಿ ಅವರಿಗೆ ನಿವೇಶನ ಒದಗಿಸಲು ಗ್ರಾಮ ಮಟ್ಟದಲ್ಲಿ ಸಭೆ ನಡೆಸಲು ಸೂಚನೆ ನೀಡಿ ಪಟ್ಟಿ ಸಿದ್ಧಪಡಿಸಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಕೆಆರ್.ಪೇಟೆ ತಾಲೂಕು ಕಿಕ್ಕೇರಿ ಗ್ರಾಮದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಪಕ್ಕ ವಾಸವಿರುವ ದಲಿತ ಕುಟುಂಬದವರಿಗೆ ಪೌತಿ ಖಾತೆ ಮಾಡಿಕೊಡುವ ಬಗ್ಗೆ ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯತಿಯಲ್ಲಿ ಲಭ್ಯವಿರುವ ಮಾಹಿತಿ ಹಾಗೂ ವಾಸವಿರುವ ಕುಟುಂಬಸ್ಥರ ಬಳಿ ಇರುವ ಮಾಹಿತಿಯನ್ನು ಪರಿಶೀಲಿಸಿ ಪೌತಿ ಖಾತೆ ನೀಡುವ ಬಗ್ಗೆ ನಿರ್ಧಾರ ಕೈಗೊಳ್ಳಲು ಸಮಿತಿ ರಚಿಸಲಾಗುವುದು ಎಂದರು.

ಪರಿಶಿಷ್ಟ ಜಾತಿ ಪಂಗಡದವರು ಪೊಲೀಸ್ ಇಲಾಖೆಯಲ್ಲಿ ದಾಖಲೆ ಮಾಡುವ ಪ್ರಕರಣಗಳಲ್ಲಿ ಸರಿಯಾಗಿ ಚಾರ್ಜ್ ಶೀಟ್ ಆಗುತ್ತಿಲ್ಲ ಎಂದು ಕೆಲವು ಮುಖಂಡರು ಸಭೆಯಲ್ಲಿ ಚರ್ಚಿಸಿದಾಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಈ ಕುರಿತು ತಾವೇ ಖುದ್ದು ಪರಿಶೀಲಿಸಿ ವರದಿ ನೀಡುವುದಾಗಿ ಸಭೆಗೆ ತಿಳಿಸಿದರು.

ಸಭೆಯಲ್ಲಿ ಅಡಿಷನಲ್ ಎಸ್ಪಿ ತಿಮ್ಮಯ್ಯ, ಉಪವಿಭಾಗಾಧಿಕಾರಿ ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗೇಶ್ ಸೇರಿದಂತೆ ಸಮುದಾಯದ ಮುಖ್ಯಸ್ಥರುಗಳು ಉಪಸ್ಥಿತರಿದ್ದರು.

ಕಿಸಾನ್ ಸಮ್ಮಾನ್ ಯೋಜನೆಯ 19ನೇ ಕಂತಿನ ಹಣ ಬಿಡುಗಡೆ

ಮಂಡ್ಯ,ಫೆ25–2019ನೇ ಸಾಲಿನಲ್ಲಿ ಕಿಸಾನ್ ಸಮ್ಮಾನ್ ಯೋಜನೆಗೆ ಚಾಲನೆ ನೀಡಲಾಗಿದ್ದು, ರೈತರಿಗೆ ಇಂದು 19ನೇ ಕಂತಿನ ಹಣ ಬಿಡುಗಡೆಯಾಗುತ್ತಿದೆ ಎಂದು ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರೈತ ಸಮ್ಮಾನ್ ಯೋಜನೆಯ 19ನೇ ಕಂತನ್ನು ಬಿಹಾರದಲ್ಲಿ ಬಿಡುಗಡೆ ಮಾಡುವ ಕಾರ್ಯಕ್ರಮವನ್ನು ಅವರು ಸೋಮವಾರ ವಿ.ಸಿ.ಫಾರಂ ನ ಸಭಾಂಗಣದಲ್ಲಿ ವೀಕ್ಷಿಸಿ, ಮಾತನಾಡಿದರು.

ರೈತರ ಕೃಷಿ ಚಟುವಟಿಕೆಗಾಗಿ ವರ್ಷದಲ್ಲಿ 3 ಕಂತುಗಳಲ್ಲಿ ರೂ 2000 ನೀಡಲಾಗುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ 2,46,947 ರೈತರು ಕಿಸಾನ್ ಸಮ್ಮಾನ್ ಯೋಜನೆಯಡಿ ನೆರವು ಪಡೆಯುತ್ತಿದ್ದು, 18 ಕಂತುಗಳಲ್ಲಿ 803 ಕೋಟಿ ನೆರವು ನೀಡಲಾಗಿದೆ ಎಂದರು.

ರೈತರು ಮುಂಗಾರು ಅಥವಾ ಹಿಂಗಾರು ಪ್ರಾರಂಭವಾಗುತ್ತಿದ್ದಂತೆ ಯಾವುದೇ ಲಾಭ ನಷ್ಟವನ್ನು ಲೆಕ್ಕಚಾರ ಮಾಡದೆ ಬಿತ್ತನೆ ಪ್ರಾರಂಭಿಸಿ ದೇಶಕ್ಕೆ ಆಹಾರ ನೀಡುವ ನಿಸ್ವಾರ್ಥ ಮನಸ್ಸಿನವರು. ಇವರಿಗಾಗಿ ಕೇಂದ್ರ ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ ಎಂದು ತಿಳಿಸಿದರು.


ರೈತ ಸಮ್ಮಾನ್ ಯೋಜನೆಯಡಿ ರೈತರನ್ನು ಸನ್ಮಾನಿಸಲಾಯಿತು.

ದೇಶದಲ್ಲಿ ಶೇ 50ಕ್ಕಿಂತ ಹೆಚ್ಚು ಜನರು ರೈತರಿದ್ದಾರೆ. ರೈತರು ಉಳಿದರೆ ಮಾತ್ರ ದೇಶ ಉಳಿಯಲು ಸಾಧ್ಯ . ಕೃಷಿಯ ಮೇಲೆ ಅವಲಂಬಿತರಾಗಿರುವ ರೈತರಿಗೆ 22 ಬೆಳೆ ಗಳಿಗೆ ಮಾತ್ರ ಬೆಂಬಲ ಬೆಲೆ ನೀಡಿರುವ ಬಗ್ಗೆ ಅಸಮಾಧಾನವಿದೆ. ಬೆಂಬಲ ಬೆಲೆ ಯೋಜನೆಯಡಿ ಬೆಳೆಗಳ ಸಂಖ್ಯೆ ಹೆಚ್ಚಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಟಿ. ಮಂಜು, ವಿಧಾನಪರಿಷತ್ ಸದಸ್ಯ ಕೆ. ವಿವೇಕಾನಂದ, ನಗರಸಭೆ ಅಧ್ಯಕ್ಷ ಎಂ.ವಿ. ಪ್ರಕಾಶ್, ಜಿಲ್ಲಾಧಿಕಾರಿ ಡಾ.ಕುಮಾರ, ಜಿ.ಪಂ. ಸಿಇಓ ನಂದಿನಿ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮಾನವ ಹಕ್ಕುಗಳ ಆಯೋಗದಿಂದ ಫೆ.28ರಂದು ಅಹವಾಲು ಸ್ವೀಕಾರ

ಮಂಡ್ಯ,ಫೆ.25–ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳು ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ಸಲುವಾಗಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಫೆ.28 ರಂದು ಮಂಡ್ಯ ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸಲಿದೆ.

ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಿ ವಿಲೇವಾರಿ ಮಾಡಲು ಆಯೋಗ ಕ್ರಮ ವಹಿಸಲಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರರುಗಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಂಡ್ಯ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಫೆ28ರಂದು ಸಾರ್ವಜನಿಕರಿಂದ ದೂರುಗಳು, ಅಹವಾಲುಗಳನ್ನು ಸಹ ಸ್ವೀಕರಿಸಲಾಗುವುದು. ಸಾರ್ವಜನಿಕರು, ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದಾಗಿದೆ.

ಎಂಇಎಸ್ ಪುಂಡಾಟ ವಿರೋಧಿಸಿ ಕರವೇ ಪ್ರತಿಭಟನೆ

ಕೆ.ಆರ್.ಪೇಟೆ,ಫೆ.25– ಬೆಳಗಾವಿಯ ಬಾಳೆಕುಂದ್ರೆಯಲ್ಲಿ ಸಾರಿಗೆ ಬಸ್ ನಿರ್ವಾಹಕ ಹಾಗೂ ಖಾನಾಪುರದ ಹೋಟೆಲ್‌ನಲ್ಲಿ ಕರವೇ ಉಪಾಧ್ಯಕ್ಷರ ಮೇಲೆ ಹಲ್ಲೆ ನಡೆಸಿರುವ ಮರಾಠಿ ಪುಂಡರನ್ನು ತಕ್ಷಣವೇ ಬಂಧಿಸಿ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಕೆ.ಆರ್.ಪೇಟೆ ತಾಲೂಕು ಘಟಕದ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಶ್ರೀನಿವಾಸಗೌಡ ನೇತೃತ್ವದಲ್ಲಿ ಪಟ್ಟಣದ ತಾಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಲೋಕೇಶ್‌ಗೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ತಾಲೂಕು ಕಚೇರಿಯ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದ ಕರವೇ ಕಾರ್ಯಕರ್ತರು ಕನ್ನಡ ನೆಲದಲ್ಲಿ ಕರ್ನಾಟಕ ಸಾರಿಗೆ ಬಸ್ಸಿನಲ್ಲಿ ಕನ್ನಡದಲ್ಲಿ ಮಾತನಾಡಿದ್ದಕ್ಕೆ ಎಂಇಎಸ್. ಹಾಗೂ ಮರಾಠಿ ಪುಂಡರು ನಿರ್ವಾಹಕನ ಮೇಲೆ ಹಲ್ಲೆ ನಡೆಸಿ, ಸುಳ್ಳು ಪೋಕ್ಸೋ ಹಾಕಿರುವ ಪೋಲೀಸರನ್ನು ಕೂಡಲೇ ಅಮಾನತು ಮಾಡಬೇಕು. ಕನ್ನಡ ನೆಲದಲ್ಲಿ ಆರಂಭಿಸಿರುವ ಮರಾಠ ಅಭಿವೃದ್ಧಿ ನಿಗಮವನ್ನು ರದ್ದು ಮಾಡಬೇಕು ಎಂದು ಕರ್ನಾಟಕ ಸರ್ಕಾರವನ್ನು ಒತ್ತಾಯಿಸಿದರು.


ತಹಸೀಲ್ದಾರ್ ಲೋಕೇಶ್ ಅವರಿಗೆ ಮನವಿ ಸಲ್ಲಿಸುತ್ತಿರುವ ಕರವೇ ಪದಾಧಿಕಾರಿಗಳು.

ಈ ವೇಳೆ ಕರವೇ ಪದವೀಧರ ಅಧ್ಯಕ್ಷ ಚಿಕ್ಕೋನಹಳ್ಳಿ ಚೇತನಕುಮಾರ್, ತಾಲೂಕು ಕರವೇ ಅಧ್ಯಕ್ಷಅಗ್ರಹಾರಬಾಚಹಳ್ಳಿಶ್ರೀನಿವಾಸಗೌಡ ಮಾತನಾಡಿ ಘಟನೆಯನ್ನು ತೀವ್ರವಾಗಿ ಖಂಡಿಸಿ ದ್ದಲ್ಲದೇ ಪದೇ ಪದೇ ಕನ್ನಡಿಗರ ಮೇಲೆ ಮರಾಠಿ ಪುಂಡರು, ಎಂಇಎಸ್ ಗೂಂಡಾಗಳು ಕನ್ನಡಿಗರನ್ನು ಕೆಣಕುತ್ತಿರುವುದು ನಾವುಗಳು ಸಹಿಸಲು ಸಾಧ್ಯವಿಲ್ಲ ಎಂದರು.

ಪ್ರತಿಭಟನೆಯಲ್ಲಿ ಕರವೇ ಜಿಲ್ಲಾ ಉಪಾಧ್ಯಕ್ಷ ಶಿವಪ್ರಸಾದ್, ಕರವೇ ಪೋಷಕರಾದ ಕೆ.ಎಂ. ಶಿವಪ್ಪ, ಕರವೇ ಪದವೀಧರ ಗೌರವಾಧ್ಯಕ್ಷ ಚೇತನಕುಮಾರ್, ತಾಲೂಕು ಉಪಾಧ್ಯಕ್ಷ ಹೊಸಹೊಳಲು ಗೋಪಿ, ನಗರ ಘಟಕ ಅಧ್ಯಕ್ಷ ಮದನ್, ತಾಲೂಕು ಯುವ ಘಟಕ ಅಧ್ಯಕ್ಷ ಆನಂದ್, ಕಾರ್ಯದರ್ಶಿ ಮನು, ಕರವೇ ತಾಲೂಕು ಸಂಚಾಲಕ ಸ್ವಾಮಿ, ಮಾಧ್ಯಮ ಉಸ್ತುವಾರಿ ಚೇತನ್, ಹರೀನಹಳ್ಳಿ ಲೋಕೇಶ್, ಹರೀಶ್, ಅಜಯ್ ಭಾಗವಹಿಸಿದ್ದರು.

ಒಂದನೇ ಪುಟದಿಂದ

ಇಂದು ಮಹಾಶಿವರಾತ್ರಿ


ಮೈಸೂರಿನ ರಾಮಾನುಜ ರಸ್ತೆಯ ಗುರುಕುಲದ 108 ಶಿವಲಿಂಗಗಳನ್ನು ಸ್ವಚ್ಛಗೊಳಿಸಿ ಪೂಜಾ ವಿಧಿ–ವಿಧಾನಕ್ಕೆ ಸಜ್ಜುಗೊಳಿಸುತ್ತಿರುವ ದೇವಸ್ಥಾನ ಮಂಡಳಿಯವರನ್ನು ಚಿತ್ರದಲ್ಲಿ ಕಾಣಬಹುದು.

ಮಾಡಿಕೊಳ್ಳಲಾಗಿದ್ದು, ದರ್ಶನಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸುವುದರಿಂದ ನೂಕುನುಗ್ಗಲು ಉಂಟಾಗದಂತೆ ಕ್ರಮ ವಹಿಸಲಾಗಿದೆ. ಎಲ್ಲಾ ದೇವಸ್ಥಾನಗಳಲ್ಲೂ ವಿಶೇಷ ಪೂಜೆ ನೆರವೇರಲಿದ್ದು, ಒಂದಷ್ಟು ದೇಗುಲಗಳಲ್ಲಿ ರಾತ್ರಿಯಿಡೀ ದೇವರ ದರ್ಶನದೊಂದಿಗೆ ಜಾಗರಣೆ ಆಚರಣೆಗೆ ಅನುವು ಮಾಡಿಕೊಡಲಾಗಿದೆ.

ಇಂದು ಬೆಳಗ್ಗೆಯಿಂದಲೇ ದೇವಾಲಯಗಳನ್ನು ಸ್ವಚ್ಛಗೊಳಿಸಿ, ತಳಿರು–ತೋರಣ, ಪುಷ್ಪಾಲಂಕಾರದಿಂದ ಸಿಂಗರಿಸಲಾಗುತ್ತಿದೆ. ಹೆಚ್ಚು ಸಂಖ್ಯೆಯ ಭಕ್ತರು ನೆರೆಯುವ ದೇವಸ್ಥಾನ ಆವರಣದಲ್ಲಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ, ಭಕ್ತರು ಸರತಿ ಸಾಲಿನಲ್ಲಿ ಬಂದು ದೇವರ ದರ್ಶನ ಮಾಡಲು ವ್ಯವಸ್ಥೆ ಮಾಡಲಾಗಿದೆ. ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಗಳಿಂದ ಶಿವರಾತ್ರಿಯಂದು ಸಿಬ್ಬಂದಿಗಳನ್ನು ನಿಯೋಜಿಸಿ, ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ರಸ್ತೆ ಸಂಚಾರಕ್ಕೆ ಅಡ್ಡಿಯಾಗದಂತೆ ಸಂಚಾರ ಪೊಲೀಸರು ಮುಂಜಾಗ್ರತಾ ಕ್ರಮ ಕೈಗೊಂಡಿದ್ದಾರೆ. ರಾತ್ರಿಯಿಡೀ ಜಾಗರಣೆ ಇರುವುದರಿಂದ ಅಧಿಕಾರಿಗಳು ಗಸ್ತು ಮೂಲಕ ಕಟ್ಟೆಚ್ಚರ ವಹಿಸಲಿದ್ದಾರೆ.

ಎಲ್ಲೆಡೆ ಶಿವಸ್ಮರಣೆ: ದೇವಾಲಯಗಳ ಜೊತೆಗೆ ಮನೆ ಮನೆಯಲ್ಲೂ ಶಿವಾರಾಧನೆಗೆ ಸಜ್ಜಾಗಿದ್ದಾರೆ. ಶಿವನಿಗೆ ಇಷ್ಟವಾದ ಬಿಲ್ವಪತ್ರೆ, ವಿಭೂತಿ, ವಸ್ತ್ರ ಇನ್ನಿತರ ಪೂಜಾ ಸಾಮಗ್ರಿಗಳನ್ನು ಸಿದ್ಧಪಡಿಸಿಕೊಂಡಿದ್ದಾರೆ. ಹಬ್ಬದಂದು ಮನೆಯಲ್ಲೂ ವಿಶೇಷ ಪೂಜೆ ಸಲ್ಲಿಸಿ, ಜಾಗರಣೆ ಮಾಡಲಿದ್ದಾರೆ. ಹಲವು ಭಕ್ತರು ದಿನವಿಡೀ ಉಪವಾಸವಿದ್ದು ದೇವರನ್ನು ಆರಾಧಿಸಿ, ರಾತ್ರಿ ಪ್ರಸಾದ ಸೇವಿಸುವ ಮೂಲಕ ಪುನೀತರಾಗಲಿದ್ದಾರೆ.

ಚಿನ್ನದ ಕೊಳಗ ಹಸ್ತಾಂತರ: ಅರಮನೆ ಆವರಣದಲ್ಲಿನ ತ್ರಿನೇಶ್ವರಸ್ವಾಮಿ ದೇವಾಲಯಕ್ಕೆ ಜಿಲ್ಲಾ ಖಜಾನೆಯಿಂದ 11 ಕೆಜಿ ತೂಕದ ಚಿನ್ನದ ಕೊಳಗ (ಮುಖವಾಡ)ವನ್ನು ಬಿಗಿ ಭದ್ರತೆಯಲ್ಲಿ ಮಂಗಳವಾರ ಹಸ್ತಾಂತರಿಸಲಾಯಿತು. ಪ್ರತಿ ವರ್ಷ ಶಿವರಾತ್ರಿಯಂದು ಮಾತ್ರ ಶಿವಲಿಂಗಕ್ಕೆ ಚಿನ್ನದ ಕೊಳಗ ಧರಿಸಿ, ವಿಶೇಷ ಪೂಜೆ ಸಲ್ಲಿಸುವ ಸಂಪ್ರದಾಯ ವಿದೆ. ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ.ರೂಪ, ಮುಜರಾಯಿ ಇಲಾಖೆಯ ವ್ಯವಸ್ಥಾಪಕಿ ಕಾವ್ಯ ಇನ್ನಿತರ ಅಧಿಕಾರಿಗಳ ತಂಡ ತ್ರಿನೇಶ್ವರ ಕೊಳಗವಿದ್ದ ಪೆಟ್ಟಿಗೆಯನ್ನು ದೇವಾಲಯದ ಅರ್ಚಕರ ಸುಪರ್ದಿಗೆ ಹಸ್ತಾಂತರಿಸಿತು.

ಬಳಿಕ ದೇವಾಲಯದ ಪ್ರಾಂಗಣದಲ್ಲಿ, ಅಧಿಕಾರಿಗಳ ಸಮ್ಮುಖದಲ್ಲಿ ಸೀಲ್ ಆಗಿದ್ದ ಬೀಗವನ್ನು ತೆಗೆದು, ಪೆಟ್ಟಿಗೆಯೊಳಗಿದ್ದ ಕೊಳಗವನ್ನು ಹೊರ ತೆಗೆದು ಪರಿಶೀಲಿಸಲಾಯಿತು. ಕೊಳಗ, ಚಿನ್ನದ ಗಂಗೆ, ಕಿವಿಯಲ್ಲಿ ಕಂಡಿಕೆ(ಓಲೆ), ಬೆಳ್ಳಿಯ ಅರ್ಧ ಚಂದ್ರ, ಬೆಳ್ಳಿಯ ತಿರುಪು, ಗಂಗೆಯ ಕಿವಿಯಲ್ಲಿನ ಓಲೆ, ಕೆಂಪು ಹರಳು ಸೇರಿದಂತೆ ವಿವಿಧ ಆಭರಣಗಳನ್ನು ಪಟ್ಟಿ ಮಾಡಿ ದಾಖಲಿಸಿಕೊಳ್ಳಲಾಯಿತು. ಬಳಿಕ ಮತ್ತೆ ಮರದ ಪೆಟ್ಟಿಗೆಯೊಳಗಿಟ್ಟು, ದೇವಾಲಯದ ಕೊಠಡಿಯಲ್ಲಿ ಭದ್ರಪಡಿಸಲಾಯಿತು. ಈ ಸಂದರ್ಭದಲ್ಲಿ ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಅರಮನೆ ಭದ್ರತಾ ವಿಭಾಗದ ಎಸಿಪಿ ಚಂದ್ರಶೇಖರ್ ಇನ್ನಿತರರು ಉಪಸ್ಥಿತರಿದ್ದರು. ಚಿನ್ನದ ಕೊಳಗದ ಪೆಟ್ಟಿಗೆ ಇಟ್ಟಿರುವ ಕೊಠಡಿಗೆ ಶಸ್ತ್ರಸಜ್ಜಿತ ಸಿಬ್ಬಂದಿಯನ್ನು ಭದ್ರತೆಗೆ ನಿಯೋಜಿಸಲಾಗಿದೆ.

ವಿಶೇಷ ಪೂಜೆ: ಬುಧವಾರ ಮುಂಜಾನೆಯಿಂದಲೇ ತ್ರಿನೇಶ್ವರಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯ ಜರುಗಲಿದೆ. ಗಣಪತಿ ಪೂಜೆ, ಪುಣ್ಯಾಹ, ರುದ್ರಾಭಿಷೇಕ, ಪಂಚಾಮೃತ ಅಭಿಷೇಕ ಸೇರಿದಂತೆ ವಿವಿಧ ಅಭಿಷೇಕಗಳ ಬಳಿಕ ಶಿವಲಿಂಗಕ್ಕೆ ಚಿನ್ನದ ಕೊಳಗ ಧಾರಣೆ ಮಾಡಲಾಗುತ್ತದೆ. ಕೊಳಗ ಧಾರಣೆಯಲ್ಲಿ ಕಂಗೊಳಿಸುವ ತ್ರಿನೇಶ್ವರಸ್ವಾಮಿಗೆ ಅಭಿಷೇಕ ನೆರವೇರುತ್ತದೆ. ಅರ್ಚನೆ, ಮಹಾ ಮಂಗಳಾರತಿ ನಂತರ ಬೆಳಗ್ಗೆ 6 ಗಂಟೆಯಿಂದ ಭಕ್ತರಿಗೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುತ್ತದೆ. ಸಂಜೆ 4 ಗಂಟೆ, ರಾತ್ರಿ 10ಕ್ಕೆ, ಫೆ.27ರ ಮುಂಜಾನೆ 2 ಗಂಟೆ ಹಾಗೂ ಮುಂಜಾನೆ 4 ಗಂಟೆ ಸೇರಿ ನಾಲ್ಕು ಯಾಮದಲ್ಲಿ ದೇವಾಲಯದ ಪ್ರಧಾನ ಅರ್ಚಕ ಸಂತಾನಂ ಹಾಗೂ ಶ್ರೀಹರಿ ನೇತೃತ್ವದಲ್ಲಿ ಅಭಿಷೇಕ ಹಾಗೂ ವಿವಿಧ ಪೂಜೆ ನೆರವೇರಲಿದೆ.

ರಾತ್ರಿಯಿಡೀ ತ್ರಿನೇಶ್ವರ ದರ್ಶನ, ಸಾಂಸ್ಕೃತಿಕ ಕಾರ್ಯಕ್ರಮ

ಅರಮನೆ ಆವರಣದ ತ್ರಿನೇಶ್ವರಸ್ವಾಮಿ ದೇವಾಲಯ ಮಹಾಶಿವರಾತ್ರಿಯಂದು ಬೆಳಗಾಗುವವರೆಗೂ ತೆರೆದಿರುತ್ತದೆ. ಬುಧವಾರ ಬೆಳಗ್ಗೆ 6ರಿಂದ ಗುರುವಾರ ಬೆಳಗ್ಗೆ 6 ಗಂಟೆವರೆಗೂ ಚಿನ್ನದ ಕೊಳಗದಲ್ಲಿ ಕಂಗೊಳಿಸುವ ಈಶ್ವರನ ದರ್ಶನ ಪಡೆಯಬಹುದು. ಭಕ್ತರಿಗೆ ಸರತಿಯಲ್ಲಿ ಸಾಗಲು ಬ್ಯಾರಿಕೇಡ್, ವಿದ್ಯುತ್ ದೀಪದ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಎಲ್ಲಾ ಮೂಲ ಸೌಲಭ್ಯ ಕಲ್ಪಿಸಲಾಗಿದೆ. ಅರಮನೆಯ ಎಲ್ಲಾ ದ್ವಾರದಿಂದ ಭಕ್ತರ ಪ್ರವೇಶಕ್ಕೆ ಅವಕಾಶ ನೀಡುವಂತೆ ಅರಮನೆ ಮಂಡಳಿಗೆ ಪತ್ರ ಬರೆಯಲಾಗಿದೆ. ಇದೇ ಮೊದಲ ಬಾರಿಗೆ ದೇವಾಲಯದ ಆವರಣದಲ್ಲಿ ಮೈಸೂರು, ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆಯಿಂದ ಆಗಮಿಸುವ 250ಕ್ಕೂ ಹೆಚ್ಚು ಕಲಾವಿದರು ನೃತ್ಯ ರೂಪಕ, ಭರತನಾಟ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದು ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ.ರೂಪ ತಿಳಿಸಿದ್ದಾರೆ.

ಶಿವರಾತ್ರಿ ದಿನ ಲಾಡ್ಲೆ ಮಶಾಕ್ ದರ್ಗಾದಲ್ಲಿನ ಶಿವಲಿಂಗ ಪೂಜೆಗೆ ಹೈಕೋರ್ಟ್ ಅನುಮತಿ

ಕಲಬುರಗಿ, ಫೆ.25– ಮಹಾ ಶಿವರಾತ್ರಿಯ ದಿನದಂದು ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಪ್ರಸಿದ್ಧ ಲಾಡ್ಲೆ ಮಶಾಕ್ ದರ್ಗಾದಲ್ಲಿನ ರಾಘವಚೈತನ್ಯ ಶಿವಲಿಂಗದ ಪೂಜೆಗೆ ಹೈಕೋರ್ಟ್ ವಿಭಾಗೀಯ ಪೀಠ ಮಂಗಳವಾರ ಅನುಮತಿ ನೀಡಿದೆ.

ನಾಳೆ ಮಹಾ ಶಿವರಾತ್ರಿಯಂದು ದರ್ಗಾದಲ್ಲಿನ ಶಿವಲಿಂಗ ಪೂಜೆಗೆ ಅನುಮತಿ ನೀಡುವಂತೆ ಕೋರಿ ಹಿಂದೂ ಸಂಘಟನೆಗಳು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕಲಬುರಗಿ ಹೈಕೋರ್ಟ್ ವಿಭಾಗೀಯ ಪೀಠ, ನಾಳೆ ಶಿವಲಿಂಗದ ಪೂಜೆಗೆ ಅನುಮತಿ ನೀಡಿದೆ.

ದರ್ಗಾದೊಳಗೆ ಶಿವಲಿಂಗಕ್ಕೆ ಪೂಜೆ ಸಲ್ಲಿಸಲು ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅನುಮತಿ ನಿರಾಕರಿಸಿದ್ದರು.

ಜಿಲ್ಲಾಧಿಕಾರಿ ಅನುಮತಿ ನಿರಾಕರಣೆ ಹಿನ್ನಲೆಯಲ್ಲಿ ಹಿಂದೂ ಸಂಘಟನೆ ಸದಸ್ಯರು ಹೈಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ನಾಳೆ ಮಧ್ಯಾಹ್ನ 2 ರಿಂದ ಸಂಜೆ 6ರ ವರೆಗೆ ಲಾಡ್ಲೆ ಮಶಾಕ್ ದರ್ಗಾದಲ್ಲಿರುವ ಶಿವಲಿಂಗಕ್ಕೆ ಪೂಜೆ ಸಲ್ಲಿಸಲು ಗ್ರೀನ್ ಸಿಗ್ನಲ್ ನೀಡಿ ಆದೇಶ ಹೊರಡಿಸಿದೆ. ಆದರೆ, ಆಂದೋಲಾ ಸಿದ್ದಲಿಂಗ ಸ್ವಾಮೀಜಿ ಹೊರತುಪಡಿಸಿ 15 ಜನರಿಗೆ ಪೂಜೆಗೆ ಅವಕಾಶ ನೀಡಿದೆ.

ದರ್ಗಾದ ಇತಿಹಾಸ: ಆಳಂದ ಪಟ್ಟಣದಲ್ಲಿ ಈ ಪ್ರಸಿದ್ದ ದರ್ಗಾ ಇದೆ. ಖ್ಯಾತ ಸೂಫಿ ಸಂತ ಲಾಡ್ಲೆ ಮಶಾಕ್ ಅವರ ದರ್ಗಾ ಇದಾಗಿದೆ. 14ನೇ ಶತಮಾನದಲ್ಲಿ ತತ್ವ ವಿಚಾರಗಳಿಂದ ಲಾಡ್ಲೆ ಮಶಾಕ್ ಸುಪ್ರಸಿದ್ಧಿಯನ್ನು ಹೊಂದಿದ್ದರು. ಇದೇ ದರ್ಗಾದ ಆವರಣದಲ್ಲಿ 15ನೇ ಶತಮಾನದಲ್ಲಿ ಆಗಿಹೋಗಿರುವ ಶಿವಾಜಿ ಮಹಾರಾಜರ ಗುರು, ಸಂತ ಸಮರ್ಥ ರಾಮದಾಸರ ರಾಘವ ಚೈತನ್ಯರ ಸಮಾಧಿಯಿ ಕೂಡ ಇದೆ. ಅದರ ಮೇಲೆ ಒಂದು ಶಿವಲಿಂಗ ಇದೆ. ಹೀಗಾಗಿ ಆ ಶಿವಲಿಂಗಕ್ಕೆ ಶ್ರೀ ರಾಘವ ಚೈತನ್ಯ ಶಿವಲಿಂಗ ಎಂದು ಕರೆಯಲಾಗುತ್ತದೆ.

ಕುಮಾರ ನಾಯಕರದ್ದೇ ಲೋಪ!

ಎಂದು ಆರೋಪಿಸಿದೆ. ಕೆಸರೆ ಗ್ರಾಮ ವಿವಾದಿತ ಸರ್ವೆ ಸಂಖ್ಯೆ: 464ರ 3 ಎಕರೆ 16 ಗುಂಟೆ ಜಮೀನಿನ ಭೂಬಳಕೆ ಪರಿವರ್ತನೆಗೆ 2004–05ರಲ್ಲಿ ಮಲ್ಲಿಕಾರ್ಜುನಸ್ವಾಮಿ ಅರ್ಜಿ ಸಲ್ಲಿಸಿದಾಗ, ಕುಮಾರ ನಾಯಕ ಅವರು ಮೈಸೂರು ಜಿಲ್ಲಾಧಿಕಾರಿ ಆಗಿದ್ದರು. ಆ ಅವಧಿಯಲ್ಲಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸದೆಯೇ ವರದಿ ಸಲ್ಲಿಸಿದ್ದಾರೆ ಎಂದು ಲೋಕಾಯುಕ್ತ ಹೇಳಿದೆ.

ಜಮೀನಿನ ಸ್ಥಳ ಪರಿಶೀಲನೆ ನಡೆಸಬೇಕಿತ್ತು. ಬದಲಿಗೆ ಅಧಿಕಾರಿಗಳು ಕೆಸರೆ ಗ್ರಾಮದ ನಕ್ಷೆ, ಭೂಸ್ವಾಧೀನ ಸಂಬಂಧಿ ನಕ್ಷೆ, ಬಡಾವಣೆ ಅಭಿವೃದ್ಧಿ ನಕ್ಷೆಗಳನ್ನು ಬಳಸಿಕೊಂಡು ಸ್ಥಳ ಪರಿಶೀಲನೆ ವರದಿ ಸಿದ್ಧಪಡಿಸಿದ್ದಾರೆ. ಈ ನಕ್ಷೆಗಳಲ್ಲಿ ಸರ್ವೆ ಸಂಖ್ಯೆ 464ರ ಜಮೀನು ಖಾಲಿ ಎಂದೇ ನಮೂದಾಗಿದೆ. ಹೀಗಾಗಿ ಜಮೀನಿನಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಆಗಿಲ್ಲ ಎಂದು ವರದಿ ನೀಡಿದ್ದಾರೆ ಎಂದು ಉಲ್ಲೇಖಿಸಿದೆ. ಅಧೀನ ಅಧಿಕಾರಿಗಳು ನೀಡಿದ ಸ್ಥಳ ಪರಿಶೀಲನಾ ವರದಿಯನ್ನು ಕುಮಾರ ನಾಯಕ ಅನುಮೋದಿಸಿದ್ದಾರೆ.

ವರದಿ ಖಾತರಿಪಡಿಸಿಕೊಳ್ಳದೇ ಭೂಪರಿವರ್ತನೆಗೆ ಆದೇಶಿಸಿದ್ದಾರೆ. ಇದು ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಕರ್ತವ್ಯಲೋಪಕ್ಕೆ ಹಿಡಿದ ಕೈಗನ್ನಡಿ. ಆದರೆ, ಅವರು ಭೂಮಾಲೀಕರ ಜತೆ ಸೇರಿಕೊಂಡು ಅಕ್ರಮ ಎಸಗಿದ್ದಾರೆ, ಉದ್ದೇಶಪೂರ್ವಕವಾಗಿ ಸುಳ್ಳು ವರದಿ ನೀಡಿದ್ದಾರೆ ಎಂಬುದು ಸಾಬೀತಾಗುವುದಿಲ್ಲ. ಕರ್ತವ್ಯಲೋಪ ಎಸಗಿದ ಅಧಿಕಾರಿಗಳ ವಿರುದ್ಧ ಇಲಾಖಾ ತನಿಖೆ ಮತ್ತು ಇಲಾಖಾ ಶಿಸ್ತುಕ್ರಮ ತೆಗೆದುಕೊಳ್ಳಬೇಕು ಎಂದು ಶಿಫಾರಸು ಮಾಡಿದೆ.

ತಮ್ಮಿಂದ ಕರ್ತವ್ಯಲೋಪವಾಗಿದೆ ಎಂದು ಲೋಕಾಯುಕ್ತ ವರದಿಯಲ್ಲಿ ಉಲ್ಲೇಖಿಸಿರುವ ಬಗ್ಗೆ ಪ್ರತಿಕ್ರಿಯೆ ಪಡೆಯಲು ಸಂಸದ ಕುಮಾರ ನಾಯಕ ಅವರಿಗೆ ಮೂರು ಬಾರಿ ಕರೆ ಮಾಡಿದರೂ ಸ್ವೀಕರಿಸ ಲಿಲ್ಲ. ಅವರಿಗೆ ಕಳುಹಿಸಲಾದ ಎರಡು ಸಂದೇಶಕ್ಕೂ ಪ್ರತಿಕ್ರಿಯೆ ನೀಡಲಿಲ್ಲ. ಭೂಸ್ವಾಧೀನಪಡಿಸಿಕೊಳ್ಳದೇ ರೈತರ ಜಮೀನನ್ನು ಮುಡಾ ಬಳಕೆ ಮಾಡಿಕೊಂಡ ಪ್ರಕರಣಗಳಲ್ಲಿ ಸರ್ಕಾರಕ್ಕೆ 700 ಕೋಟಿಗೂ ಹೆಚ್ಚು ನಷ್ಟವಾಗಿದೆ ಎಂದು ಲೋಕಾಯುಕ್ತವು ಹೇಳಿದೆ. ಇಂತಹ ಪ್ರಕರಣಗಳಲ್ಲಿ ಮುಡಾವು 2016–2022ರ ಅವಧಿಯಲ್ಲಿ 50:50ರ ಅನುಪಾತದಲ್ಲಿ ಅಕ್ರಮವಾಗಿ 1095 ನಿವೇಶನಗಳನ್ನು ಪರಿಹಾರವಾಗಿ ನೀಡಿದೆ. ಆದರೆ ಇವು ಭೂಮಾಲೀಕರು ಅಥವಾ ವಾರಸುದಾರರಿಗೆ ಸಿಗದೆ ರಿಯಲ್ ಎಸ್ಟೇಟ್ ಉದ್ಯಮಿಗಳು ಮತ್ತು ಪ್ರಭಾವಿಗಳ ಪಾಲಾಗಿವೆ ಎಂದು ಹೇಳಿದೆ. ಮುಡಾ ಆಯುಕ್ತರಾಗಿದ್ದ ದಿನೇಶ್ ಕುಮಾರ್ ಅವರು ಇದರಲ್ಲಿ ಭಾಗಿಯಾಗಿದ್ದಾರೆ. 50:50ರ ಅನುಪಾತದ ಪರಿಹಾರ ನಿಯಮವನ್ನು ಸರ್ಕಾರ ರದ್ದುಪಡಿಸಿದ ನಂತರವೂ ದಿನೇಶ್ ಕುಮಾರ್ ಮತ್ತು ಮುಡಾದ ಹಿಂದಿನ ಅಧ್ಯಕ್ಷ ಕೆ.ಮರೀಗೌಡ ಅವರ ಮೌಖಿಕ ಆದೇಶದಂತೆ 252 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಈ ಬಗ್ಗೆ ಸಮಗ್ರ ತನಿಖೆ ನಡೆಯಬೇಕು ಎಂದು ಹೇಳಿದೆ.

ಮಹಾಶಿವರಾತ್ರಿಯ ಕಡೆಯ ಅಮೃತಸ್ನಾನ

ಮಾಡಲು ಭಕ್ತರ ಅನುಕೂಲಕ್ಕಾಗಿ ಮಾಡಲಾದ ವಿಶೇಷ ವ್ಯವಸ್ಥೆಗಳ ಭಾಗವಾಗಿ, ಅಧಿಕಾರಿಗಳು ಲಕ್ನೋ ಮತ್ತು ಪ್ರತಾಪ್‌ಗಢದಿಂದ ಬರುವ ಯಾತ್ರಾರ್ಥಿಗಳಿಗೆ ಫಾಫಮೌ ಘಾಟ್ ಅನ್ನು ಗೊತ್ತುಪಡಿಸಿದ್ದಾರೆ. ಆದರೆ ಅರೈಲ್ ಘಾಟ್ ಅನ್ನು ರೇವಾನ್, ಬಂದಾ, ಚಿತ್ರಕೂಟ ಮತ್ತು ಮಿರ್ಜಾಪುರದ ಜನರಿಗೆ ಕಾಯ್ದಿರಿಸಲಾಗಿದೆ. ಕೌಶಂಬಿಯಿಂದ ಬರುವ ಭಕ್ತರಿಗಾಗಿ ಸಂಗಮ್ ಘಾಟ್ ಅನ್ನು ಗೊತ್ತುಪಡಿಸಲಾಗಿದೆ. ಭದ್ರತಾ ವ್ಯವಸ್ಥೆಗಳ ವಿಷಯದಲ್ಲಿ, ಇಡೀ ಮೇಳ ಪ್ರದೇಶದಲ್ಲಿ ಯಾವುದೇ ವಾಹನಗಳನ್ನು ಅನುಮತಿಸಲಾಗುವುದಿಲ್ಲ. ಆದರೆ ಪಾಸ್‌ಗಳನ್ನು ಹೊಂದಿರುವ ವಾಹನಗಳಿಗೆ ಮಾತ್ರ ಗೊತ್ತುಪಡಿಸಿದ ಪಾರ್ಕಿಂಗ್ ಪ್ರದೇಶಗಳಲ್ಲಿ ನಿಲುಗಡೆ ಮಾಡಲು ಅವಕಾಶವಿರುತ್ತದೆ. ಪ್ರಯಾಗ್‌ರಾಜ್‌ಗೆ ಹೋಗುವ ಎಲ್ಲಾ ಪ್ರಮುಖ ಹೆದ್ದಾರಿಗಳು ಮತ್ತು ಮಾರ್ಗಗಳಲ್ಲಿ ಮೋಟಾರ್‌ಬೈಕ್‌ಗಳಲ್ಲಿ ಪೊಲೀಸರ 40 ತಂಡಗಳನ್ನು ನಿಯೋಜಿಸಲಾಗಿದೆ. ಸುಗಮ ಮತ್ತು ಸುರಕ್ಷಿತ ಸಂಚಾರಕ್ಕಾಗಿ, ಮಾರ್ಗ ಬದಲಾವಣೆಗಳನ್ನು ರಚಿಸಲಾಗಿದೆ.

ಪ್ರಯಾಗ್‌ರಾಜ್ ಅನ್ನು ಸಂಪರ್ಕಿಸುವ ಏಳು ರಸ್ತೆ ಮಾರ್ಗಗಳಲ್ಲಿ ಹೆಚ್ಚುವರಿ ಮಹಾನಿರ್ದೇಶಕರು ಮತ್ತು ಮಹಾನಿರೀಕ್ಷಕರ ಮಟ್ಟದ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ. ಕುಂಭಮೇಳದ ಕೊನೆಯ ದಿನ ಮಹಾಶಿವರಾತ್ರಿಯೊಂದಿಗೆ ಹೊಂದಿಕೆಯಾಗುವುದರಿಂದ, ನಗರದ ಎಲ್ಲಾ ಶಿವ ದೇವಾಲಯಗಳಿಗೆ ಭಕ್ತರಿಗೆ ಭೇಟಿ ನೀಡಲು ಅವಕಾಶ ನೀಡಲಾಗುವುದು. ಅಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಈಗಾಗಲೇ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

ಮಹಾ ಕುಂಭಮೇಳದ ಆರಂಭದಲ್ಲಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಈ ಕಾರ್ಯಕ್ರಮಕ್ಕೆ 45 ಕೋಟಿಗೂ ಹೆಚ್ಚು ಭಕ್ತರು ಆಗಮಿಸುತ್ತಾರೆ ಎಂದು ಅಂದಾಜಿಸಿದ್ದರು. ಫೆಬ್ರವರಿ 11 ರ ವೇಳೆಗೆ ಈ ಮೈಲಿಗಲ್ಲು ಸಾಧಿಸಲಾಯಿತು. ಮುಂದಿನ ಮೂರು ದಿನಗಳಲ್ಲಿ ಆ ಸಂಖ್ಯೆ 50 ಕೋಟಿ ದಾಟಿತು. ಈಗ ಶಿವರಾತ್ರಿ ವೇಳೆಗೆ 65 ಕೋಟಿ ಜನರು ಭೇಟಿ ನೀಡಿರಬಹುದು ಎಂದು ಅಂದಾಜಿಸಲಾಗಿದೆ.

ಲಿಂಗಾಯತ ಮುಖಂಡರ ಸಭೆ

ಕುಮಾರ್ ಬಂಗಾರಪ್ಪ ಅವರನ್ನಾದರೂ ರಾಜ್ಯಾಧ್ಯಕ್ಷ ಮಾಡುವಂತೆ ಒತ್ತಾಯಿಸಲು ನಿರ್ಧರಿಸಲಾಗಿದೆ. ಇದೇವೇಳೆ ಸಭೆಯಲ್ಲಿ ವಿಜಯೇಂದ್ರ ವಿಫಲ ನಾಯಕ ಅಂತ ಆಕ್ರೋಶ ವ್ಯಕ್ತಪಡಿಸಲಾಗಿದೆ. ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ಸಮುದಾಯದ ಮನೆ ಮನೆ ಜಾಗೃತಿಗೂ ಚಿಂತಿಸಲಾಗಿದೆ. ಒಟ್ಟಿನಲ್ಲಿ ಈ ಸಭೆ ಮೂಲಕ ವಿಜಯೇಂದ್ರ ಪರ ಲಿಂಗಾಯತರು ಇಲ್ಲ ಅನ್ನೋ ಸಂದೇಶ ರವಾನೆ ಮಾಡುವ ಕಸರತ್ತು ನಡೆಸಲಾಗಿದೆ.

ವೀರಶೈವ–ಲಿಂಗಾಯತ ಸಮಾವೇಶ

ಸಭೆಯೊಂದನ್ನು ನಡೆಸಲಾಗುವುದು. ಬಿ.ವೈ.ವಿಜಯೇಂದ್ರ ಅವರನ್ನು ಮುಂದಿನ ಮುಖ್ಯಮಂತ್ರಿ ಮಾಡುವುದು ನಮ್ಮ ಉದ್ದೇಶ ಎಂದು ಮಂಗಳವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ಕೆಲವು ತಿರಸ್ಕೃತ ನಾಣ್ಯಗಳು ವೀರಶೈವ–ಲಿಂಗಾಯರ ನಾಯಕರೆಂದು ಬಿಂಬಿಸಿಕೊಳ್ಳಲು ಪ್ರಯತ್ನಿಸುತ್ತಿವೆ. ನೀವು (ಬಸನ ಗೌಡ ಪಾಟೀಲ ಯತ್ನಾಳ್) ಲಿಂಗಾಯತ ನಾಯಕರಲ್ಲ, ಡಮ್ಮಿ ನಾಯಕರು ಎಂದು ಆರೋಪಿಸಿದರು. ಬಿ.ಎಸ್.ಯಡಿಯೂರಪ್ಪ ಅವರ ಜನ್ಮದಿನದ ಅಂಗವಾಗಿ ದಾವಣಗೆರೆಯಲ್ಲಿ ಸಮಾವೇಶವೊಂದನ್ನು ಸಂಘಟಿಸುವ ಆಲೋಚನೆ ಇತ್ತು. ಇಂತಹ ಸಮಾವೇಶ ಸಂಘಟಿಸದಂತೆ ಸ್ವತಃ ಯಡಿಯೂರಪ್ಪ ಅವರೇ ಸೂಚನೆ ನೀಡಿದ್ದರಿಂದ ನಿರ್ಧಾರ ಕೈಬಿಟ್ಟೆವು. ಪಕ್ಷದ ವರಿಷ್ಠರು ಈ ಸಮಾವೇಶವನ್ನು ತಡೆದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯೆ ನೀಡಿದರು.

ದ್ವಿತೀಯ ಪಿಯು ಪರೀಕ್ಷೆ

ಗಣಿತ, ಶಿಕ್ಷಣಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ ಅಧ್ಯಯನ, ಮಾ. 4: ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್, ಮಾ. 5: ರಾಜ್ಯಶಾಸ್ತ್ರ, ಸಂಖ್ಯಾಶಾಸ್ತ್ರ, ಮಾ. 7: ಇತಿಹಾಸ, ಭೌತಶಾಸ್ತ್ರ, ಮಾ. 10: ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, ಮಾ. 12: ಮನಶಾಸ್ತ್ರ, ರಸಾಯನಶಾಸ್ತ್ರ, ಮೂಲ ಗಣಿತ, ಮಾ. 13: ಅರ್ಥಶಾಸ್ತ್ರ, ಮಾ. 15: ಇಂಗ್ಲಿಷ್, ಮಾ. 17: ಭೂಗೋಳಶಾಸ್ತ್ರ, ಮಾ. 18: ಜೀವಶಾಸ್ತ್ರ, ಗಣಿತವಿಜ್ಞಾನ, ಮಾ. 19: ಹಿಂದೂಸ್ತಾನಿ ಸಂಗೀತ, ಮಾಹಿತಿ ತಂತ್ರಜ್ಞಾನ, ರೀಟೈಲ್, ಆಟೋಮೊಬೈಲ್, ಹೆಲ್ತ್ ಕೇರ್, ಬ್ಯೂಟಿ ಅಂಡ್ ವೆಲ್‌ನೆಸ್ ಹಾಗೂ ಮಾ. 20ರಂದು ಹಿಂದಿ ಪರೀಕ್ಷೆಗಳು ನಡೆಯಲಿವೆ. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾಗಳ ವೆಬ್ ಕ್ಯಾಸ್ಟಿಂಗ್, ಡಿಜಿಟಲ್ ಸ್ಕ್ರೀನ್, ಸ್ಮಾರ್ಟ್ ಟಿವಿ, ಮಾನಿಟರ್‌ಗಳ ಮೂಲಕ ವೀಕ್ಷಿಸಿ ನಿಗಾ ಇರಿಸಲು ವ್ಯವಸ್ಥೆ ಮಾಡಲಾಗಿದೆ.

‘ದೇಶ್ ಕಿ ಪ್ರಕೃತಿ ಪರೀಕ್ಷಾ ಅಭಿಯಾನ’ದಲ್ಲಿ ಕರ್ನಾಟಕಕ್ಕೆ ದ್ವಿತೀಯ ಸ್ಥಾನ



ಕರ್ನಾಟಕ ರಾಜ್ಯದ ಆಯುಷ್ ಇಲಾಖೆ ಅಭಿಯಾನದ ಕೋ-ಆರ್ಡಿನೇಟರ್‌ಗಳಾದ ಡಾ.ಲಕ್ಷ್ಮಿನಾರಾಯಣ ಶೆಣೈ, ಡಾ.ಹರೀಶ್ ಬಾಬು, ಡಾ.ಸಂತೋಷ್ ಯಡಹಳ್ಳಿ, ಡಾ.ಸುಹಾಸ್ ಶೆಟ್ಟಿ ಅವರು ಕರ್ನಾಟಕ ರಾಜ್ಯದ ಪರವಾಗಿ ಪ್ರಶಸ್ತಿ ಸ್ವೀಕರಿಸಿದರು.

ಮೈಸೂರು, ಫೆ.25(ಆರ್‌ಕೆ)– ಭಾರತ ಸರ್ಕಾರದ ಆಯುಷ್ ಮಂತ್ರಾಲಯವು 2024ರ ನವೆಂಬರ್ 26ರಿಂದ ಡಿಸೆಂಬರ್ 25ರವರೆಗೆ ಆಯೋಜಿಸಿದ್ದ ‘ದೇಶ್ ಕಿ ಪ್ರಕೃತಿ ಪರೀಕ್ಷಾ ಅಭಿಯಾನ’ದಲ್ಲಿ ಕರ್ನಾಟಕ ರಾಜ್ಯ ದ್ವಿತೀಯ ಸ್ಥಾನ ಗಳಿಸಿದೆ.

2025ರ ಫೆಬ್ರವರಿ 20ರಂದು ಮುಂಬೈನಲ್ಲಿ ನಡೆದ ಅಭಿಯಾನದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಆಯುಷ್ ಇಲಾಖೆ ಸಚಿವ ಪ್ರಕಾಶ್‌ರಾವ್ ಜಾಧವ್ ಅವರು ಬಹುಮಾನ ವಿತರಿಸಿದರು. ಒಂದು ತಿಂಗಳ ಅವಧಿಯಲ್ಲಿ 1.30 ಕೋಟಿ ಜನರಿಗೆ ಪ್ರಕೃತಿ ಚಿಕಿತ್ಸೆ ಮೂಲಕ ಆಯುಷ್ ಮಂತ್ರಾಲಯವು 5 ಗಿನ್ನಿಸ್ ವಿಶ್ವ ದಾಖಲೆ ಮಾಡಿದೆ.

ಅಭಿಯಾನದಲ್ಲಿ ಮಹಾರಾಷ್ಟ್ರ ರಾಜ್ಯವು ಪ್ರಥಮ ಸ್ಥಾನ ಪಡೆದಿದ್ದು, ಕರ್ನಾಟಕ 23 ಲಕ್ಷಕ್ಕೂ ಹೆಚ್ಚು ಮಂದಿಗೆ ಪ್ರಕೃತಿ ಚಿಕಿತ್ಸೆ ನಡೆಸಿ ದ್ವಿತೀಯ ಬಹುಮಾನ ಗಳಿಸಿದೆ. ರಾಜ್ಯದ ಆಯುಷ್ ಇಲಾಖೆ ಅಭಿಯಾನದ ಕೋ-ಆರ್ಡಿನೇಟರ್‌ಗಳಾದ ಡಾ.ಲಕ್ಷ್ಮಿನಾರಾಯಣ ಶೆಣೈ, ಡಾ.ಹರೀಶ್‌ಬಾಬು, ಡಾ.ಸಂತೋಷ್ ಯಡಹಳ್ಳಿ, ಡಾ.ಸುಹಾಸ್ ಶೆಟ್ಟಿ ರಾಜ್ಯದ ಪರವಾಗಿ ಪ್ರಶಸ್ತಿ ಸ್ವೀಕರಿಸಿದರು. ರಾಜ್ಯವು 2ನೇ ಪ್ರಶಸ್ತಿ ಗಳಿಸಿರುವುದಕ್ಕೆ ಆಯುಷ್ ಇಲಾಖೆ ಆಯುಕ್ತ ವಿಪಿನ್ ಸಿಂಗ್ ಅಭಿನಂದನೆ ಸಲ್ಲಿಸಿದ್ದಾರೆ.

ಮಾ.1 ಸೇವಾ ಸಂಕ್ರಮಣ ಕಾರ್ಯಕ್ರಮ



ಮಾ.1ರಂದು ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ನಡೆಯಲಿರುವ ಸೇವಾ ಸಂಕ್ರಮಣ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಮೈಸೂರು, ಫೆ25(ಜಿಎ)– ಜಿಎಸ್‌ಎಸ್ ಯೋಗ ಮತ್ತು ಗ್ರಾಮ್ ಸಂಸ್ಥೆಗಳ ವತಿಯಿಂದ ಮಾ.1ರಂದು ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 8ರವರೆಗೆ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಸೇವಾ ಸಂಕ್ರಮಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಎಸ್‌ಎಸ್ ಯೋಗ ಸಂಸ್ಥೆಯ ಮುಖ್ಯಸ್ಥ ಶ್ರೀಹರಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಕಾರ್ಪೊರೇಟ್ ವೃತ್ತಿಪರರು, ಸಿಎಸ್‌ಆರ್ ನಾಯಕರು, ಎನ್‌ಜಿಒಗಳು, ಸರ್ಕಾರಿ ಅಧಿಕಾರಿಗಳು, ಶಿಕ್ಷಣ ತಜ್ಞರು ಮತ್ತು ನಗರದ ಭವಿಷ್ಯಕ್ಕಾಗಿ ಇರುವ ಸವಾಲುಗಳಿಗೆ ಪರಿಹಾರ ರಚಿಸಲು ಬದ್ಧರಾಗಿರುವ ನಗರದ ನಾಗರಿಕರು ಪಾಲ್ಗೊಳ್ಳುತ್ತಿದ್ದಾರೆ ಎಂದರು.

ಗ್ರಾಮ್ ಸಂಸ್ಥೆಯ ಡಾ.ಬಸವರಾಜ್ ಆರ್. ಶ್ರೇಷ್ಠ ಮಾತನಾಡಿ, ಸಂಜೆ 4.30ಕ್ಕೆ ಸಂಸದ ಯದುವೀರ್ ಒಡೆಯರ್, ಅದಮ್ಯ ಚೇತನ ಫೌಂಡೇಶನ್ ಅಧ್ಯಕ್ಷೆ ತೇಜಸ್ವಿನಿ ಅನಂತಕುಮಾರ್, ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಉದ್ಯಮಿ ಪವನ್ ರಂಗ ಅವರು ‘ಫೈರ್ ಸೈಡ್ ಚಾಟ್’ ವಿಷಯ ಕುರಿತು ಚರ್ಚಿಸಲಿದ್ದಾರೆ. ಮೈಸೂರಿನ ಸುಸ್ಥಿರ ಬೆಳವಣಿಗೆಗೆ ಕ್ರಿಯಾತ್ಮಕ ತಂತ್ರ ರೂಪಿಸಲು ಪರಿಸರ ಜ್ಞಾನ ವಿನಿಮಯಕ್ಕೆ ವೇದಿಕೆ ಸೃಷ್ಟಿಸಿ, ಸಹಭಾಗಿತ್ವಕ್ಕೆ ಪ್ರೋತ್ಸಾಹ ನೀಡಲು ಈ ಕಾರ್ಯಕ್ರಮ ನಡೆಯಲಿದೆ. ಮಾಸ್ಟರ್ ಕ್ಲಾಸ್, ವಿಷಯಾಧಾರಿತ ಚರ್ಚೆ, ನೆಟ್‌ವರ್ಕಿಂಗ್ ಕಾರ್ಯಾಗಾರ ನಡೆಯಲಿದೆ ಎಂದರು. ಗೋಷ್ಠಿಯಲ್ಲಿ ಭಗವಾನ್ ಬಿದರಕೋಟಿ ಉಪಸ್ಥಿತರಿದ್ದರು.

ಬೆಳಗಾವಿ ಜಿಲ್ಲೆಯ ಮರಾಠಿ ಪುಂಡರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ

ಸಿಎಂಗೆ ಪ್ರಜ್ಞಾವಂತ ನಾಗರಿಕ ವೇದಿಕೆಯಿಂದ ಮನವಿ



ಮರಾಠಿ ಪುಂಡರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರಜ್ಞಾವಂತ ನಾಗರಿಕ ವೇದಿಕೆ ಪದಾಧಿಕಾರಿಗಳು ಎಡಿಸಿ ಶಿವರಾಜು ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಮೈಸೂರು, ಫೆ. 25– ಬೆಳಗಾವಿ ಜಿಲ್ಲೆ ಸುಳೇಬಾವಿಯ ಹೊರವಲಯದಲ್ಲಿ ಕರ್ತವ್ಯ ನಿರತ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ನಿರ್ವಾಹಕ ಮಹದೇವಪ್ಪ ಅವರ ಮೇಲೆ ಅಮಾನುಷವಾಗಿ ಹಲ್ಲೆ ಮಾಡಿರುವ ಮರಾಠಿ ಪುಂಡರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರಜ್ಞಾವಂತ ನಾಗರಿಕ ವೇದಿಕೆ ಪದಾಧಿಕಾರಿಗಳು, ಎಡಿಸಿ ಶಿವರಾಜು ಅವರಿಗೆ ಮನವಿ ಪತ್ರ ಸಲ್ಲಿಸಿದರು.

ನಂತರ ಮಾತನಾಡಿದ ಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್‌ಪ್ರಸಾದ್, ವಿಶ್ವ ಮಾತೃಭಾಷಾ ದಿನದಂದೇ ರಾಜ್ಯ ಸಾರಿಗೆ ಸಂಸ್ಥೆಯ ನಿರ್ವಾಹಕ ಮಹದೇವಪ್ಪ ಎಂಬುವರ ಮೇಲೆ ಮರಾಠಿ ಪುಂಡರ ಗುಂಪು ಹಲ್ಲೆ ನಡೆಸಿದೆ. ಈ ವಿಚಾರವಾಗಿ ಪ್ರಶ್ನಿಸಿದ ಚಾಲಕ ಕಟಾಲ್ ಸಾಬ್ ಮೇಲೆಯು ಪುಂಡರ ಗುಂಪು ಹಲ್ಲೆ ಮಾಡಿದ್ದು ಖಂಡನೀಯ. ಹಲ್ಲೆಗೆ ಒಳಗಾದವರು ಸ್ಥಳೀಯ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ನಡೆಯುತ್ತಿದ್ದರೂ ಇಲ್ಲಿನ ಪೊಲೀಸರು ಆರೋಪಿಗಳ ವಿರುದ್ಧ ಯಾವುದೇ ಕ್ರಮ ಜರುಗಿಸದೇ ಇರುವುದು ವಿಷಾದನೀಯ ಸಂಗತಿ. ಕೂಡಲೇ ಗೃಹ ಇಲಾಖೆ ಹಿರಿಯ ಅಧಿಕಾರಿಗಳು ಹಲ್ಲೆಕೋರರ ಮೇಲೆ ಕಠಿಣ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಎಂಇಎಸ್ ಕಾರ್ಯಕರ್ತರು ಮಹಾರಾಷ್ಟ್ರದಲ್ಲಿ ರಾಜ್ಯದ ಬಸ್‌ಗಳಿಗೆ ಕಪ್ಪು ಮಸಿ ಬಳಿದು, ನಾಲಿಗೆ ಹರಿಯಬಿಟ್ಟಿದ್ದು, ದಿನೇ ದಿನೆ ಇವರ ದಬ್ಬಾಳಿಕೆ ಹೆಚ್ಚುತ್ತಿದೆ ಎಂದು ಆರೋಪಿಸಿದರು. ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಒಕ್ಕಲಿಗರ ಸಂಘದ ನಿರ್ದೇಶಕರಾದ ಎ.ರವಿ, ಪ್ರಜ್ಞಾವಂತ ನಾಗರಿಕ ವೇದಿಕೆ ಅಧ್ಯಕ್ಷ ಕಡಕೊಳ ಜಗದೀಶ್, ಸಾಮಾಜಿಕ ಹೋರಾಟಗಾರ ವಿಕ್ರಮ ಅಯ್ಯಂಗಾರ್, ಸುಚಿಂದ್ರ, ಶ್ರೇಯಸ್, ಅಜಯ್ ಶಾಸ್ತ್ರಿ ಇದ್ದರು.

ಪೊಲೀಸರು ಸಮರ್ಥವಾಗಿ ಕೆಲಸ ಮಾಡಲು ಕಾಂಗ್ರೆಸ್ ನಾಯಕರ ಅಡ್ಡಗಾಲು

ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಆರೋಪ

- ಖಜಾನೆ ಬರಿದಾಗಿ ಸರ್ಕಾರದ ಪರದಾಟ
- ಗೃಹಲಕ್ಷ್ಮಿ ಯೋಜನೆಗೆ ಹಣ ನೀಡುತ್ತಿಲ್ಲ
- ಲೋಕಾಯುಕ್ತ ಸರ್ಕಾರದ ಕಂಟ್ರೋಲ್‌ನಲ್ಲಿದೆ
- ನಮ್ಮನ್ನು ಎದುರಿಸಲು ಇವರಿಗೆ ಆಗಲ್ಲ



ಮೈಸೂರಿನ ಸೈಲೆಂಟ್ ಶೋರ್ ರೆಸಾರ್ಟ್‌ನಲ್ಲಿ ಮಂಗಳವಾರ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಪಕ್ಷದ ನಾಯಕರ ಸಭೆ ನಡೆಸಿದರು. ಶಾಸಕ ಜಿ.ಡಿ.ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಶಾಸಕರಾದ ಕೆ.ಮಹದೇವ್, ಅಶ್ವಿನ್ ಕುಮಾರ್ ಇನ್ನಿತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಫೆ.25(ಬಿಎಲ್‌ಯು)– ಪೊಲೀಸರು ಸಮರ್ಥವಾಗಿ ಕೆಲಸ ಮಾಡಲು ಸಾಧ್ಯವಾಗದಂತೆ ಕಾಂಗ್ರೆಸ್ ನಾಯಕರು ಅವರ ಕಾರ್ಯದಲ್ಲಿ ಅಡ್ಡಗಾಲು ಹಾಕುತ್ತಿದ್ದಾರೆ. ಇದರಿಂದಲೇ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಆರೋಪಿಸಿದ್ದಾರೆ.

ನಗರದ ಸೈಲೆಂಟ್ ಶೋರ್ ರೆಸಾರ್ಟ್‌ನಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕೊಡಗಿನ ಮಡಿಕೇರಿಯಲ್ಲಿ ಇಂದು ಕಾಂಗ್ರೆಸ್ ಮುಖಂಡನೊಬ್ಬ ಬಹಿರಂಗವಾಗಿ ಪೊಲೀಸರನ್ನು ತರಾಟೆಗೆ ತೆಗೆದುಕೊಂಡಿದ್ದಾನೆ. ಆದರೆ ಪೊಲೀಸರು ಅವನ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಆಗಿಲ್ಲ ಎಂದು ದೂರಿದರು.

ಕಾನೂನು ಬಗ್ಗೆ ಕಾಂಗ್ರೆಸ್ ನಾಯಕರಿಗೆ ಗೌರವ ಭಾವನೆ ಇಲ್ಲ. ಅಲ್ಲದೆ, ಸರ್ಕಾರವೇ ಕೆಲವರ ಕೇಸ್‌ಗಳನ್ನು ವಾಪಸು ಪಡೆಯುತ್ತಿರುವ ಕಾರಣ ಕಿಡಿಗೇಡಿಗಳು ರಾಜಾರೋಷವಾಗಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಮಾಡುತ್ತಿದ್ದಾರೆ ಎಂದು ಆಪಾದಿಸಿದರು.

ದುರಾಡಳಿತಕ್ಕೆ ಸ್ಪಷ್ಟ ನಿದರ್ಶನ: ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಮಾಡಿದ ಹಲವರನ್ನು ಬಂಧಿಸದೆ ಪೊಲೀಸರು ಮೌನವಾದರು. ಆದರೆ ಪೋಸ್ಟ್ ಹಾಕಿದ ವ್ಯಕ್ತಿಯನ್ನು ಈಗ ಗಡಿಪಾರು ಮಾಡಲು ಮುಂದಾಗಿದ್ದಾರೆ. ಇದನ್ನೆಲ್ಲಾ ನೋಡಿದರೆ ಜನರು ಮಾತ್ರವಲ್ಲದೆ ಪೊಲೀಸರಿಗೂ ರಕ್ಷಣೆ ಇಲ್ಲದಂತಾಗಿದೆ. ಇದು ಕಾಂಗ್ರೆಸ್ ಸರ್ಕಾರದ ದುರಾಡಳಿತಕ್ಕೆ ಸ್ಪಷ್ಟ ನಿದರ್ಶನ ಎಂದು ದೂರಿದರು.

ಗ್ಯಾರಂಟಿಗೇ ಗ್ಯಾರಂಟಿ ಇಲ್ಲ: ಸರ್ಕಾರದ ಹಲವು ಯೋಜನೆಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗೆ ಬಳಸಿಕೊಳ್ಳುತ್ತಿದ್ದಾರೆ. ಆದರೂ ಗ್ಯಾರಂಟಿ ಯೋಜನೆಗೆ ಹಣ ನೀಡಲು ಸಾಧ್ಯವಾಗುತ್ತಿಲ್ಲ. ಇದರಿಂದಲೇ ಗೃಹಲಕ್ಷ್ಮಿ ಯೋಜನೆಯಲ್ಲಿ ಮಹಿಳೆಯರಿಗೆ ಇನ್ನು ಹಣ ಸಂದಾಯವಾಗಿಲ್ಲ. ನೌಕರರಿಗೆ ವೇತನ ನೀಡಲು ಕೂಡ ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ. ಈ ಕಾರಣದಿಂದಲೇ ಗ್ಯಾರಂಟಿಗಳ ನಿಲ್ಲಿಸುತ್ತೇವೆ ಎಂದು ಹೇಳುತ್ತಿದ್ದಾರೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದಲ್ಲಿ ಲೋಕಾಯುಕ್ತರು ಕ್ಲೀನ್‌ಚಿಟ್ ನೀಡಿದ್ದಾರೆ. ಸಿದ್ದರಾಮಯ್ಯ ಪರ ವರದಿ ನೀಡಿರುವ ಲೋಕಾಯುಕ್ತರು ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿದ್ದಾರೆ. ಲೋಕಾಯುಕ್ತ ಸರ್ಕಾರದ ಕಂಟ್ರೋಲ್‌ನಲ್ಲಿ ಇದೆ ಎಂಬುದಕ್ಕೆ ಇದೊಂದು ಸ್ಪಷ್ಟ ಉದಾಹರಣೆ ಎಂದರು.

ರಾಜಕೀಯವಾಗಿ ಕುಮಾರಸ್ವಾಮಿ ಎದುರಿಸಲು ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ನಮ್ಮ ತೋಟದ ಜಾಗವನ್ನು ಸರ್ವೆ ಮಾಡಿಸುತ್ತಿದ್ದಾರೆ. ಇದಕ್ಕೆಲ್ಲಾ ನಾವು ಹೆದರುವುದಿಲ್ಲ. ಅವರು ಏನು ಬೇಕಾದರೂ ಮಾಡಿಕೊಳ್ಳಲಿ ಎಂದು ನಿಖಿಲ್ ಕುಮಾರಸ್ವಾಮಿ ಸವಾಲು ಹಾಕಿದರು.

ಮುಂದಿನ ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆಗೆ ಪಕ್ಷ ಸಂಘಟನೆ ಮಾಡುವ ಸಂಬಂಧ ಸಭೆ ಕರೆದು ಚರ್ಚಿಸಲಾಯಿತು. ಮಿಸ್ಡ್ ಕಾಲ್ ಕ್ಯಾಂಪೇನ್ ಮೂಲಕ ಪರಿಣಾಮಕಾರಿಯಾಗಿ ಸಂಘಟನೆ ಮಾಡಲು ತೀರ್ಮಾನ ಮಾಡಲಾಯಿತು. ಈಗ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಇದ್ದು, ಎರಡು ಪಕ್ಷದ ಕಾರ್ಯಕರ್ತರು ಒಟ್ಟಾಗಿ ಹೋಗಲು ಸಲಹೆ ನೀಡಲಾಯಿತು.

ಮೈಸೂರು, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಯ ಶಾಸಕರು, ಮಾಜಿ ಶಾಸಕರು ಹಾಗೂ ಜಿಲ್ಲಾ ಮಟ್ಟದ ಮುಖಂಡರು ಸಭೆಯಲ್ಲಿ ಭಾಗವಹಿಸಿದ್ದರು.

ಜಿ.ಟಿ.ದೇವೇಗೌಡರಿಗೆ ಹೊಸ ವರ್ಷದ ಶುಭಾಶಯ ಹೇಳಿದ್ದೆ...

“ಹೊಸ ವರ್ಷದ ದಿನ ಶಾಸಕ ಜಿ.ಟಿ.ದೇವೇಗೌಡರಿಗೆ ದೂರವಾಣಿ ಕರೆ ಮಾಡಿ ಶುಭಾಶಯ ತಿಳಿಸಿದ್ದೆ. ತಾವು, ಚಾಮುಂಡೇಶ್ವರಿ ಕ್ಷೇತ್ರದ ಕಾರ್ಯದೊತ್ತಡದಿಂದ ಪಕ್ಷದ ಚಟುವಟಿಕೆಗಳಲ್ಲಿ ಭಾಗಿಯಾಗಲು ಸಾಧ್ಯವಾಗುತ್ತಿಲ್ಲ ಎಂದು ಸ್ವತಃ ಜಿ.ಟಿ.ದೇವೇಗೌಡರೇ ಹೇಳಿದ್ದರು. ಚನ್ನಪಟ್ಟಣದಲ್ಲಿ ನನ್ನ ಸ್ಪರ್ಧೆ ಅನಿರೀಕ್ಷಿತ. ಚುನಾವಣಾ ಪ್ರಚಾರಕ್ಕೆ ಎಲ್ಲರೂ ಬಂದು ನನ್ನ ಪರವಾಗಿ ಪ್ರಚಾರ ಮಾಡಿದರು. ಪ್ರಚಾರಕ್ಕೆ ಬರುವಂತೆ ನಾನೇ ಜಿ.ಟಿ.ದೇವೇಗೌಡರನ್ನು ಕೋರಿದ್ದೆ. ಆದರೆ, ನನ್ನ ಕರೆದಿಲ್ಲ ಎಂದು ಏಕೆ ಹೇಳುತ್ತಿದ್ದಾರೋ ತಿಳಿಯದು.

–ನಿಖಿಲ್ ಕುಮಾರಸ್ವಾಮಿ.

ಡಿಜಿಟಲ್ (ಮಿಸ್ಡ್ ಕಾಲ್) ಸದಸ್ಯತ್ವ ನೋಂದಣಿ ಹಾಗೂ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಪಕ್ಷ ಸಂಘಟನೆ ಬಗ್ಗೆ ಚರ್ಚೆ ನಡೆಸಲಾಗಿದೆ. ಶಾಸಕರಾದ ಜಿ.ಡಿ.ಹರೀಶ್‌ಗೌಡ, ಹನೂರು ಮಂಜುನಾಥ್, ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಮಾಜಿ ಶಾಸಕರಾದ ಕೆ.ಮಹದೇವ್, ಅಶ್ವಿನ್‌ಕುಮಾರ್, ಮುಖಂಡರಾದ ಜೈ ಪ್ರಕಾಶ್, ಕೃಷ್ಣ ನಾಯಕ್, ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ನಗರ ಅಧ್ಯಕ್ಷ ಚಲುವೇಗೌಡ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

ಜೊಯಲುಕ್ಕಾಸ್‌ನ ನವೀಕರಿಸಿದ ಶೋರೂಮ್ ಉದ್ಘಾಟನೆ...



ಬೆಂಗಳೂರಿನ ಡಿಕನ್ಸನ್ ರಸ್ತೆಯಲ್ಲಿ ಜೊಯಲುಕ್ಕಾಸ್‌ನ ನವೀಕರಿಸಿದ ಶೋರೂಮ್ ಅನ್ನು ಶಾಸಕ ರಿಜ್ವಾನ್ ಅರ್ಷದ್ ಉದ್ಘಾಟಿಸಿದರು. ಡಾ.ನಂದಕುಮಾರ್ ಜೈರಾಮ್ (ಅಧ್ಯಕ್ಷರು (RBANMನ ಶೈಕ್ಷಣಿಕ ದತ್ತಿ), ಥಾಮಸ್ ಮ್ಯಾಥ್ಯೂ (ಕಾರ್ಯನಿರ್ವಾಹಕ ನಿರ್ದೇಶಕರು, ಜೋಯಾಲುಕ್ಕಾಸ್) ಮತ್ತು ಇತರ ಗಣ್ಯರ ಉಪಸ್ಥಿತರಿದ್ದರು.

ಕೋಟೆಕಾರು ಬ್ಯಾಂಕ್ ದರೋಡೆ ಪ್ರಕರಣ: ಮತ್ತಿಬ್ಬರು ಅರೆಸ್ಟ್

ಮಂಗಳೂರು, ಫೆ.25– ದಕ್ಷಿಣ ಕನ್ನಡ ಜಿಲ್ಲೆಯ ಕೋಟೆಕಾರು ವ್ಯವಸಾಯ ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೆ ಇಬ್ಬರು ಆರೋಪಿಗಳನ್ನು ಮಂಗಳೂರು ಪೊಲೀಸರು ಬಂಧಿಸಿದ್ದಾರೆ.

ಕೆ.ಸಿ.ರೋಡ್ ನಿವಾಸಿ ಮೊಹಮ್ಮದ್ ನಜೀರ್ ಹಾಗೂ ಭಾಸ್ಕರ್ ಬೆಳ್ಚಪಾಡ ಅಲಿಯಾಸ್ ಶಶಿ ಥೇವರ್ ಬಂಧಿತ ಆರೋಪಿಗಳು. ಈ ಇಬ್ಬರು ದರೋಡೆ ಪ್ರಕರಣದ ಮಾಸ್ಟರ್ ಮೈಂಡ್‌ಗಳು ಎನ್ನಲಾಗಿದೆ. 6 ತಿಂಗಳ ಹಿಂದೆಯೇ ಬ್ಯಾಂಕ್ ದರೋಡೆಗೆ ಸ್ಕೆಚ್ ಹಾಕಿದ್ದರು.

ಬ್ಯಾಂಕ್ ದರೋಡೆ ಪ್ರಕರಣ ಸಂಬಂಧ ಮಂಗಳೂರು ಪೊಲೀಸರು ಈಗಾಗಲೇ ಮುರುಗನ್ ಡಿ, ದೇವರ್, ಯೋಶುವಾ ರಾಜೇಂದ್ರನ್, ಕಣ್ಣನ್ ಮಣಿ ಹಾಗೂ ಷಣ್ಮುಗಂ ಸುಂದರ್ ಎಂಬ ಆರೋಪಿಗಳನ್ನು ಬಂಧಿಸಿದ್ದಾರೆ. ಇದೀಗ ಪ್ರಮುಖ ಇಬ್ಬರು ಆರೋಪಿಗಳನ್ನು ಬಂಧಿಸಿದ್ದು, ದರೋಡೆಯಲ್ಲಿ ದೋಚಿದ್ದ 18.314 ಕೆಜಿ ಚಿನ್ನವನ್ನು ವಶಕ್ಕೆ ಪಡೆಯಲಾಗಿದೆ. ಬ್ಯಾಂಕ್ ದರೋಡೆ ವೇಳೆ ಕಳ್ಳರು 11,67,044 ರೂ. ದರೋಡೆ ಮಾಡಿದ್ದಾರೆ ಎನ್ನಲಾಗಿದೆ.

ಫೆ.28ರಿಂದ ಮೈಸೂರಲ್ಲಿ ‘ಬಿಸ್‌ಟೆಕ್ ಎಕ್ಸ್ಟ್ರಾ ವೇಗಾನ್ಜಾ’ ಕಾರ್ಯಕ್ರಮ

ಮೈಸೂರು, ಫೆ. 25(ಜಿಎ)–ಮೈಸೂರಿನ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ವತಿಯಿಂದ ‘ವಿದ್ವತ್–2025’ ಎರಡು ದಿನಗಳ ರಾಜ್ಯಮಟ್ಟದ ಅಂತರ ಕಾಲೇಜು ‘ಬಿಸ್‌ಟೆಕ್ ಎಕ್ಸ್ಟ್ರಾ ವೇಗಾನ್ಜಾ’ ಕಾರ್ಯಕ್ರಮವನ್ನು ಫೆ.28 ಮತ್ತು ಮಾ.1 ರಂದು ಕಾಲೇಜಿನಲ್ಲಿ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ.ಎಸ್. ಮರೀಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ವಾಣಿಜ್ಯ, ನಿರ್ವಹಣಾ, ಕಲೆ ಮತ್ತು ಕ್ರೀಡಾ ಕೌಶಲಗಳನ್ನು ಬೆಳೆಸಲು ವಿದ್ವತ್ ಒಂದು ಉತ್ತಮ ವೇದಿಕೆಯಾಗಿದ್ದು, ಪ್ರಮುಖ ಸ್ಪರ್ಧೆಗಳಲ್ಲದೆ ವಿದ್ಯಾರ್ಥಿಗಳಿಗೆ ಅವರಲ್ಲಿರುವ ಕೌಶಲ ಮತ್ತು ಸಾಮರ್ಥ್ಯದ ಮೇಲೆ ಗಮನ ಕೇಂದ್ರೀಕರಿಸಲು ಹಲವು ಸ್ಪರ್ಧೆಗಳನ್ನೂ ಏರ್ಪಡಿಸಲಾಗಿದೆ. ವಿದ್ವತ್–2025ರ 17ನೇ ಆವೃತ್ತಿಯ ಆತಿಥ್ಯವನ್ನು ವಿದ್ಯಾವರ್ಧಕ ಸಂಘ ವಹಿಸಿದೆ ಎಂದರು.

ಕಾಲೇಜಿನ ತರಗತಿ ಕೊಠಡಿಗಳಲ್ಲಿ ಹಲವು ಹಂತಗಳಲ್ಲಿ ಏಕಕಾಲದಲ್ಲಿ ಸ್ಪರ್ಧೆಗಳು ನಡೆಯಲಿವೆ. ಫೆ.28ರಂದು ಬೆಳಿಗ್ಗೆ 9.30ಕ್ಕೆ ಬೆಂಗಳೂರಿನ ಅಮರ ರಾಜಾ ಎಲೆಕ್ಟ್ರಾನಿಕ್ಸ್ ಲಿ. ಮುಖ್ಯ ಹಣಕಾಸು ಅಧಿಕಾರಿ ಷಣ್ಮುಖರಾವ್ ಗೊರು ಉದ್ಘಾಟಿಸಲಿದ್ದಾರೆ. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪ ಗೌಡ ಅಧ್ಯಕ್ಷತೆ ವಹಿಸಲಿದ್ದು, ಕಾರ್ಯದರ್ಶಿ ಪಿ.ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣನವರ್, ಟಿ.ನಾಗರಾಜು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಅಂದು ಸಂಜೆ 6.30ಕ್ಕೆ ಅಂತರ ಕಾಲೇಜು ಸಾಂಸ್ಕೃತಿಕ ಸ್ಪರ್ಧೆಯನ್ನು ಖ್ಯಾತ ಹಿನ್ನೆಲೆ ಗಾಯಕ ಜಸ್ಕರಣ್ ಸಿಂಗ್ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಸ್ಪರ್ಧೆಗಳ ವಿಜೇತರಿಗೆ 1.50 ಲಕ್ಷ ರೂ.ಗಳ ನಗದು ಬಹುಮಾನ, ಪಾರಿತೋಷಕ, ಪ್ರಮಾಣಪತ್ರ ನೀಡಿ ಗೌರವಿಸಲಾಗುವುದು. ಮಾ.1ರಂದು ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಮೈಸೂರು ವಿವಿ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಡಾ.ಕೆ. ಮಂಟೇಲಿಂಗು ಸಮಾರೋಪ ಭಾಷಣ ಮಾಡಲಿದ್ದಾರೆ. ಈ ಸ್ಪರ್ಧೆಗೆ ರಾಜ್ಯದ ವಿವಿಧ ಕಾಲೇಜುಗಳಿಂದ ಸುಮಾರು 500 ಮಂದಿ ಸ್ಪರ್ಧಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದರು. ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ಪ್ರೊ.ಎನ್. ಗೀತಾ, ಡಾ.ಹರಿಪ್ರಸಾದ್, ಪ್ರೊ.ಶ್ರುತಿ, ಪ್ರೊ.ಚಂದನ್ ಉಪಸ್ಥಿತರಿದ್ದರು.

ಈ ಬಾರಿ ರೈತ ಬಜೆಟ್ ಮಂಡನೆಗೆ ರೈತ ಸಂಘ ಆಗ್ರಹ

ಬಜೆಟ್ ಪೂರ್ವಭಾವಿ ಸಭೆಯಲ್ಲಿ ಮುಖ್ಯಮಂತ್ರಿಗಳಿಗೆ ಮನವಿ

ಮೈಸೂರು,ಫೆ.25(ಜಿಎ)–ರಾಜ್ಯ ಬಜೆಟ್ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಹ್ವಾನ ನೀಡಿದ್ದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ, ಬಜೆಟ್ ಕುರಿತಂತೆ ರೈತ ಬಜೆಟ್ ಹಕ್ಕು ಮಂಡನೆ ಮೂಲಕ ಹಕ್ಕೊತ್ತಾಯ ಸಲ್ಲಿಸಲಾಗಿದೆ ಎಂದು ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1990ರ ನಂತರ ಜಾರಿಗೆ ತಂದ ಹೊಸ ಆರ್ಥಿಕ ನೀತಿ, ಉದಾರೀಕರಣ, ಮುಕ್ತ ಆರ್ಥಿಕ ನೀತಿಗಳಿಂದಾಗಿ ದೇಶದ ಬಹುಸಂಖ್ಯಾತ ರೈತರ ಬದುಕು ಸಂಕಷ್ಟದಲ್ಲಿದೆ. ಹೀಗಾಗಿ ಇವರನ್ನು ಮೇಲೆತ್ತುವ ಕಡೆಗೆ ಬಜೆಟ್‌ಗಳು ಗಮನ ನೀಡಬೇಕೆಂಬ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಈ ಬಾರಿಯ ಬಜೆಟ್‌ಗೆ ಸಂಬಂಧಿಸಿದಂತೆ ರಾಜ್ಯ ರೈತ ಸಂಘ ಸಿಎಂ ಸಿದ್ದರಾಮಯ್ಯ ಅವರ ಮುಂದೆ ಕೆಲವೊಂದು ಸಲಹೆ, ಬೇಡಿಕೆ ಇಟ್ಟಿದೆ ಎಂದರು.



ನಾಗೇಂದ್ರ

ತಾತ್ಕಾಲಿಕ ಹಾಗೂ ದೀರ್ಘಾವಧಿ ಕ್ರಮಗಳನ್ನು ತಮ್ಮ ಹಕ್ಕೊತ್ತಾಯ ಹೊಂದಿದ್ದು, ಇದರಲ್ಲಿ ಮೊದಲನೆಯದಾಗಿ ಸರ್ಕಾರದ ಅಧೀನ ಸಂಸ್ಥೆಗಳ ಮೂಲಕವೇ ಸಣ್ಣ ಸಾಲ ನೀಡುವ ವ್ಯವಸ್ಥೆ ಆಗಬೇಕು. ಇದು ಈಗ ನಡೆಯದಿರುವ ಕಾರಣ ಪ್ರಮುಖವಾಗಿ ಮಹಿಳೆಯರು ಸೇರಿದಂತೆ ರೈತಾಪಿ ವರ್ಗ, ದುಡಿಯುವ ವರ್ಗ ಮೈಕ್ರೋಫೈನಾನ್ಸ್‌ಗಳ ಮೊರೆ ಹೋಗಿ, ಸಮಸ್ಯೆಗೆ ಸಿಲುಕಿ ಆತ್ಮಹತ್ಯೆ ಅಥವಾ ಊರು ಬಿಟ್ಟು ಹೋಗುವ ಪರಿಸ್ಥಿತಿಯುಂಟಾಗಿದೆ. ಹೀಗಾಗಿ ಈ ಬಗ್ಗೆ ಬಜೆಟ್ ಗಮನ ಹರಿಸಬೇಕು. ಕೇಂದ್ರ ಸರ್ಕಾರ ನಬಾರ್ಡ್ ಮೂಲಕ ನೀಡುತ್ತಿದ್ದ ಸಾಲದ ಮೊತ್ತವನ್ನು ಕಡಿಮೆ ಮಾಡಿರುವುದು ಖಂಡನೀಯ. ಆದರೆ ರಾಜ್ಯ ಸರ್ಕಾರ ಸಹಕಾರಿ ಸಂಸ್ಥೆಗಳ ಮೂಲಕ ಐದು ಲಕ್ಷದವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಸಾಲ ನೀಡುವುದನ್ನು ರಾಜ್ಯ ಸಂಪನ್ಮೂಲದಿಂದಲೇ ಮುಂದುವರಿಸಬೇಕು ಎಂದು ತಿಳಿಸಲಾಗಿದೆ ಎಂದು ತಿಳಿಸಿದರು.

ಕೃಷಿ ಪಂಪ್‌ಸೆಟ್ ವಿದ್ಯುತ್ ಸಂಪರ್ಕ ಉಚಿತವಾಗಿರಬೇಕು, ಕೃಷಿಗೆ ಕನಿಷ್ಠ ಹಗಲು 12 ಗಂಟೆ 3 ಫೇಸ್ ವಿದ್ಯುತ್ ನೀಡಬೇಕು, ಕರ ನಿರಾಕರಣ ಚಳವಳಿಯ ಗೃಹ ವಿದ್ಯುತ್ ಬಾಕಿ ಮನ್ನಾ ಮಾಡಬೇಕು, ಡಯಾಂಚ ಮತ್ತು ಸೆಣಬು ಬೆಳೆಯಲು ಪ್ರೋತ್ಸಾಹ ನೀಡಬೇಕು. ಪಡಿತರವನ್ನು ರೈತರಿಂದ ನೇರವಾಗಿ ಖರೀದಿಸಬೇಕು ಎಂಬಿವೇ ಸಲಹೆ ಮುಂದಿಟ್ಟು, ಜಾರಿಗೆ ಆಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮುಖಂಡರಾದ ಪಿ. ಮರಂಕಯ್ಯ ಮಾತನಾಡಿ, ಜಿಲ್ಲೆಯಲ್ಲಿ ಹಲ್ಲೆ ನಡೆದ ಸಂದರ್ಭದಲ್ಲಿ ಪೊಲೀಸರು ಪ್ರತಿ ದೂರು ದಾಖಲಿಸಿಕೊಂಡು ಹಲ್ಲೆಗೊಳಗಾದವರನ್ನು ಹತ್ತಿಕ್ಕುವ ಕೆಲಸ ಮಾಡುತ್ತಿರುವುದು ಸರಿಯಲ್ಲ. ಈ ಬಗ್ಗೆ ಎಸ್‌ಪಿ ಗಮನ ಹರಿಸಬೇಕು. ಇದೇ ರೀತಿ ಕಳೆದ 19 ರಂದು ರೈತ ಸಂಘದ ಪದಾಧಿಕಾರಿ ಆನಂದೂರು ಪ್ರಭಾಕರ್ ಅವರ ಮೇಲೆ ರಾಜಕೀಯ ಮುಖಂಡ ರಾಮೇಗೌಡ ಎಂಬುವವರು ಆನಂದೂರಿನಲ್ಲಿ ಹಲ್ಲೆ ಮಾಡಿದ್ದಾರೆ. ಅವರ ವಿರುದ್ಧ ಎಫ್‌ಐಆರ್ ಆದರೂ ಪೊಲೀಸರು ಪ್ರತಿದೂರು ದಾಖಲಿಸಿಕೊಂಡಿರುವುದು ಸರಿಯಲ್ಲ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ನಾಗನಹಳ್ಳಿ ವಿಜೇಂದ್ರ, ಮಂಡಕಳ್ಳಿ ಮಹೇಶ್ ಉಪಸ್ಥಿತರಿದ್ದರು.

ನಾಳೆ ಮೈಸೂರಲ್ಲಿ ಕೊಡಗು ಜಿಲ್ಲೆಯ ಇತಿಹಾಸ ಕುರಿತು ವಿಶೇಷ ಉಪನ್ಯಾಸ

ಮೈಸೂರು,ಫೆ.25– ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ವತಿಯಿಂದ ಕೊಡಗು ಜಿಲ್ಲೆಯ ಇತಿಹಾಸ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಫೆಬ್ರವರಿ 27 ರಂದು ಬೆಳಗ್ಗೆ 10.30 ಗಂಟೆಗೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದ ಕೇಂದ್ರ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಆಸಕ್ತ ಇತಿಹಾಸ ತಜ್ಞರು, ಸಂಶೋಧಕರು, ವಿದ್ಯಾರ್ಥಿಗಳು, ಹಾಗೂ ಸಾರ್ವಜನಿಕರು ಭಾಗವಹಿಸುವಂತೆ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಉಪನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶ - ವಿದೇಶ

ಮಲೇಷ್ಯಾ ಏರ್‌ಲೈನ್ಸ್‌ನ MH370 ಮಹಾ ದುರಂತ: ವಿಮಾನಕ್ಕೆ ಮತ್ತೆ ಹುಡುಕಾಟ..!

ಮಲೇಷ್ಯಾ: ನಾಪತ್ತೆಯಾಗಿರುವ ಮಲೇಷ್ಯಾ ಏರ್‌ಲೈನ್ಸ್‌ನ ಎಂಎಚ್ 370 ವಿಮಾನದ ಶೋಧ ಕಾರ್ಯ ಹಲವು ವರ್ಷಗಳ ನಂತರ ಮತ್ತೆ ಆರಂಭವಾಗುತ್ತಿದೆ. 239 ಮಂದಿ ಪ್ರಯಾಣಿಸುತ್ತಿದ್ದ ಆ ನತದೃಷ್ಟ ವಿಮಾನ 2014ರ ಮಾರ್ಚ್ 8ರಂದು ಕಣ್ಮರೆಯಾಗಿತ್ತು.



ಬ್ರಿಟನ್‌ನ ಸಾಗರ ಸಂಶೋಧನಾ ಕಂಪನಿ ಒಷಿಯನ್ ಇನ್ಫಿನಿಟಿ, ಎಂಎಚ್ 370 ವಿಮಾನವನ್ನು ಹುಡುಕಾಡುವ ಕೆಲಸವನ್ನು ಆರಂಭಿಸುತ್ತಿದೆ. ತನ್ನ ಅತ್ಯಾಧುನಿಕ ಹಡಗುಗಳನ್ನು, ಸಲಕರಣೆಗಳನ್ನು ಸಮುದ್ರದಾಳಕ್ಕೆ ಇಳಿಸುತ್ತಿದೆ ಎಂದು ಮಲೇಷ್ಯಾದ ಸಾರಿಗೆ ಸಚಿವ ಆಂಥೋನಿ ಲೋಕ್ ಹೇಳಿದ್ದಾರೆ. ಆದರೆ ಈ ಹುಡುಕಾಟಕ್ಕೆ ಒಷಿಯನ್ ಇನ್ಫಿನಿಟಿ ಕಂಪನಿಗೆ ಯಾವುದೇ ಗಡುವನ್ನು ವಿಧಿಸುತ್ತಿಲ್ಲ. ಹೊಸ ಆಶಾಭಾವನೆಯೊಂದಿಗೆ ಹುಡುಕಾಟಕ್ಕೆ ಸಿದ್ಧರಿದ್ದಾರೆ ಎಂದು ಹೇಳಿದ್ದಾರೆ. ಈ ಕುರಿತು ಅನೇಕ ಅಂತರರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ವಿಮಾನ ಕಣ್ಮರೆಯಾದಾಗಿನಿಂದ 2018ರವರೆಗೆ ದಕ್ಷಿಣ ಹಿಂದೂ ಮಹಾಸಾಗರದಲ್ಲಿ ವಿಮಾನಕ್ಕಾಗಿ ಸಾಕಷ್ಟು ಶೋಧ ಕಾರ್ಯ ನಡೆಸಲಾಗಿತ್ತು. ಆದರೆ ಆ ವಿಮಾನದ ಕುರಿತು ಇನ್ನೂ ಯಾವುದೇ ಅಧಿಕೃತ ಸುಳಿವು ಸಿಕ್ಕಿಲ್ಲ.

ಸಿಖ್ ವಿರೋಧಿ ದಂಗೆ: ಸಜ್ಜನ್ ಕುಮಾರ್‌ಗೆ ಜೀವಾವಧಿ ಶಿಕ್ಷೆ



ನವದೆಹಲಿ: 1984ರ ಸಿಖ್ ವಿರೋಧಿ ದಂಗೆಗೆ ಸಂಬಂಧಿಸಿದ ಕೊಲೆ ಪ್ರಕರಣವೊಂದರ ಅಪರಾಧಿ, ಕಾಂಗ್ರೆಸ್‌ನ ಮಾಜಿ ಸಂಸದ ಸಜ್ಜನ್ ಕುಮಾರ್‌ಗೆ ಜೀವಾವಧಿ ಶಿಕ್ಷೆ ವಿಧಿಸಿ ದೆಹಲಿ ನ್ಯಾಯಾಲಯ ಆದೇಶ ಹೊರಡಿಸಿದೆ. ವಿಶೇಷ ನ್ಯಾಯಾಧೀಶರಾದ ಕಾವೇರಿ ಬವೇಜಾ ಅವರು ಪ್ರಕರಣದ ವಿಚಾರಣೆ ನಡೆಸಿ ತೀರ್ಪು ನೀಡಿದ್ದಾರೆ. ಸಿಖ್ ವಿರೋಧಿ ದಂಗೆಯ ವೇಳೆ(1984ರ ನವೆಂಬರ್ 1ರಂದು) ಸರಸ್ವತಿ ವಿಹಾರ್ ಬಳಿ ಜಸ್ವಂತ್ ಸಿಂಗ್ ಹಾಗೂ ಅವರ ಪುತ್ರ ತರುಣ್‌ದೀಪ್ ಸಿಂಗ್ ಅವರನ್ನು ಹತ್ಯೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಸಜ್ಜನ್ ಕುಮಾರ್ ಅವರಿಗೆ ಮರಣದಂಡನೆ ವಿಧಿಸುವಂತೆ ಜಸ್ವಂತ್ ಅವರ ಪತ್ನಿ ಕೋರಿದ್ದರು.

ಸದ್ಯ ಸಜ್ಜನ್‌ಕುಮಾರ್ ತಿಹಾರ್ ಕಾರಾಗೃಹದಲ್ಲಿದ್ದಾರೆ. ಫೆ.12ರಂದು ನ್ಯಾಯಾಲಯವು ಸಜ್ಜನ್ ಕುಮಾರ್ ಪ್ರಕರಣದ ಅಪರಾಧಿ ಎಂದು ಪರಿಗಣಿಸಿ ತೀರ್ಪು ನೀಡಿತ್ತು. ಸಜ್ಜನ್‌ಕುಮಾರ್ ಮಾನಸಿಕ ಸ್ಥಿತಿಯ ಬಗ್ಗೆ ವರದಿ ನೀಡುವಂತೆ ನ್ಯಾಯಾಲಯವು ತಿಹಾರ್ ಕೇಂದ್ರ ಕಾರಾಗೃಹದ ಅಧಿಕಾರಿಗಳಿಗೆ ನಿರ್ದೇಶನ ನೀಡಿತ್ತು.

ಮಾಡಿರುವ ಕೆಲಸದ ಬಗ್ಗೆ ಸರ್ಕಾರಿ ನೌಕರರು ವಿವರಣೆ ನೀಡಬೇಕು: ಮಸ್ಕ್ ಎಚ್ಚರಿಕೆ

ವಾಷಿಂಗ್ಟನ್: ಸರ್ಕಾರಿ ಉದ್ಯೋಗಿಗಳು ಇನ್ನು ಮುಂದೆ ವಾರದ ಅವಧಿಯಲ್ಲಿ ಏನೆಲ್ಲ ಕೆಲಸ ಮಾಡಿದ್ದಾರೆ ಎಂಬುದನ್ನು ವಿವರಿಸಬೇಕು. ಇಲ್ಲವಾದರೆ, ಅಂತಹವರಿಂದ ರಾಜೀನಾಮೆ ಪಡೆಯಲಾಗುವುದು ಎಂದು ಉದ್ಯಮಿ ಹಾಗೂ ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆಯ (ಡಿಒಜಿಇ) ಉಸ್ತುವಾರಿ ಎಲಾನ್ ಮಸ್ಕ್ ಹೇಳಿದ್ದಾರೆ.



ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಸರ್ಕಾರಿ ನೌಕರರು ಕಳೆದ ಒಂದು ವಾರದಲ್ಲಿ ಏನೆಲ್ಲ ಕೆಲಸ ಮಾಡಿದ್ದಾರೆ ಎಂಬುದನ್ನು ವಿವರಿಸಬೇಕು. ಆ ನಿಟ್ಟಿನಲ್ಲಿ ಶೀಘ್ರದಲ್ಲೇ ಅವರಿಗೆಲ್ಲ ಇ–ಮೇಲ್ ಕಳುಹಿಸಲಾಗುವುದು. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸೂಚನೆಯಂತೆ ಈ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ. ಮುಂದುವರಿದು, ಒಂದು ವೇಳೆ ಇ–ಮೇಲ್‌ಗೆ ಪ್ರತಿಕ್ರಿಯೆ ನೀಡದಿದ್ದರೆ ಅದನ್ನು ರಾಜೀನಾಮೆ ಎಂದು ಪರಿಗಣಿಸಲಾಗುವುದು ಎಂದೂ ಎಚ್ಚರಿಸಿದ್ದಾರೆ.

18 ಕೋಟಿ ಸಾಲ ಮನ್ನಾ ಆರೋಪ: ಕಾಂಗ್ರೆಸ್ ವಿರುದ್ಧ ನಟಿ, ಉದ್ಯಮಿ ಪ್ರೀತಿ ಜಿಂಟಾ ವಾಗ್ದಾಳಿ



ನವದೆಹಲಿ: ತನ್ನ ಸಾಮಾಜಿಕ ಮಾಧ್ಯಮ ಖಾತೆಯನ್ನು ಬಿಜೆಪಿಗೆ ಹಸ್ತಾಂತರಿಸುವ ಮೂಲಕ 18 ಕೋಟಿ ಸಾಲವನ್ನು ಮನ್ನಾ ಮಾಡಿಸಿಕೊಂಡಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದ ಕೇರಳದ ಕಾಂಗ್ರೆಸ್ ಘಟಕವನ್ನು ನಟಿ, ಉದ್ಯಮಿ ಪ್ರೀತಿ ಜಿಂಟಾ ತರಾಟೆಗೆ ತೆಗೆದುಕೊಂಡಿದ್ದಾರೆ. ನ್ಯೂ ಇಂಡಿಯಾ ಕೋ–ಆಪರೇಟಿವ್ ಬ್ಯಾಂಕ್‌ನಿಂದ 18 ಕೋಟಿ ಸಾಲವನ್ನು ಮನ್ನಾ ಮಾಡಲಾಗಿದೆ. ಇದರಿಂದಾಗಿ ಕಳೆದ ವಾರ ಬ್ಯಾಂಕ್‌ನ ಆದಾಯ ಕುಸಿದಿದ್ದು, ಠೇವಣಿದಾರರು ತಮ್ಮ ಹಣಕ್ಕಾಗಿ ಬೀದಿಗಿಳಿದಿದ್ದಾರೆ ಎಂದು ಕೇರಳದ ಕಾಂಗ್ರೆಸ್ ಘಟಕ ಎಕ್ಸ್‌ನಲ್ಲಿ ಪೋಸ್ಟ್ ಮಾಡಿತ್ತು. ಕಾಂಗ್ರೆಸ್ ಆರೋಪಗಳಿಗೆ ಎಕ್ಸ್‌ನಲ್ಲಿ ತಿರುಗೇಟು ಕೊಟ್ಟಿರುವ ಪ್ರೀತಿ ಜಿಂಟಾ, ನನ್ನ ಸಾಮಾಜಿಕ ಮಾಧ್ಯಮ ಖಾತೆಗಳನ್ನು ನಾನೇ ನಿರ್ವಹಿಸುತ್ತಿದ್ದೇನೆ. ನಕಲಿ ಸುದ್ದಿಗಳನ್ನು ಪ್ರಚಾರ ಮಾಡಿದವರಿಗೆ ನಾಚಿಕೆಯಾಗಬೇಕು. ಯಾರೂ ಕೂಡಾ ನನಗೆ ಏನನ್ನೂ ಅಥವಾ ಯಾವುದೇ ರೀತಿ ಸಾಲವನ್ನು ಮನ್ನಾ ಮಾಡಿಲ್ಲ ಎಂದು ಕಿಡಿಕಾರಿದ್ದಾರೆ. 10 ವರ್ಷಗಳ ಹಿಂದೆ ಸಾಲವನ್ನು ತೆಗೆದುಕೊಳ್ಳಲಾಗಿತ್ತು. ಬಳಿಕ ಸಾಲವನ್ನು ಪೂರ್ತಿಯಾಗಿ ಮರುಪಾವತಿ ಮಾಡಲಾಗಿದೆ ಎಂದು ಜಿಂಟಾ ಸ್ಪಷ್ಟಪಡಿಸಿದ್ದಾರೆ.

ಆದಷ್ಟು ಬೇಗ ಮದುವೆಯಾಗಿ, ಇಲ್ಲದಿದ್ರೆ ಕೆಲಸ ಕಳೆದುಕೊಳ್ತೀರಿ!

ಚೀನಾ: ಬ್ಯಾಚುಲರ್ ಆಗಿರುವ ಮತ್ತು ವಿಚ್ಛೇದನ ಹೊಂದಿ ಒಂಟಿಯಾಗಿ ಬದುಕುತ್ತಿರುವ ಉದ್ಯೋಗಿಗಳಿಗೆ ಚೀನಾದ ಶಾಂಡೊಂಗ್ ಪ್ರಾಂತ್ಯದ ಕಂಪನಿಯೊಂದು ಶೀಘ್ರದಲ್ಲೇ ಮದುವೆಯಾಗುವಂತೆ ಸೂಚಿಸಿದೆ. ಒಂದು ವೇಳೆ ಮದುವೆಯಾಗದಿದ್ದರೆ ಕೆಲಸದಿಂದ ತೆಗೆದು ಹಾಕುವುದಾಗಿಯೂ ಎಚ್ಚರಿಕೆ ನೀಡಿದೆ. ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ ಪ್ರಕಾರ, ಶಾಂಡೊಂಗ್ ಶುಂಟಿಯನ್ ಕೆಮಿಕಲ್ ಗ್ರೂಪ್ ಲಿಮಿಟೆಡ್ ತನ್ನ 28ರಿಂದ 58 ವರ್ಷದೊಳಗಿನ 1,200 ಉದ್ಯೋಗಿಗಳನ್ನು ಸೆಪ್ಟೆಂಬರ್ ಅಂತ್ಯದೊಳಗೆ ಮದುವೆಯಾಗಲು ಆದೇಶಿಸಿದೆ. ಈ ಆದೇಶದಲ್ಲಿ ವಿಚ್ಛೇದಿತರೂ ಸೇರಿದ್ದಾರೆ. ಕಂಪನಿಯ ಈ ಆದೇಶವು ಚೀನಾದ ಸಾಮಾಜಿಕ ಮಾಧ್ಯಮದಲ್ಲಿ ವೇಗವಾಗಿ ವೈರಲ್ ಆಯಿತು. ಇದು ಬಹಳಷ್ಟು ಟೀಕೆಗೆ ಗುರಿಯಾಯಿತು. ಈ ಆದೇಶಕ್ಕೆ ಎಲ್ಲೆಡೆ ನಿರಂತರ ವಿರೋಧ ವ್ಯಕ್ತವಾದ ನಂತರ, ಸ್ಥಳೀಯ ಮಾನವ ಸಂಪನ್ಮೂಲ ಮತ್ತು ಸಾಮಾಜಿಕ ಭದ್ರತಾ ಬ್ಯೂರೋ ಈ ವಿಷಯದಲ್ಲಿ ಮಧ್ಯಪ್ರವೇಶಿಸಿ ಕಂಪನಿಯ ಸೂಚನೆಯನ್ನು ರದ್ದುಗೊಳಿಸುವ ಪರಿಷ್ಕರಣಾ ಆದೇಶವನ್ನು ಹೊರಡಿಸಿತು.



ಆಟೋದಲ್ಲೇ ಚಾಲಕ ಸಾವು



ಶನಿವಾರಸಂತೆಯಲ್ಲಿ ಚಾಲಕ ಆಟೋದಲ್ಲೇ ಮೃತಪಟ್ಟಿರುವುದು.

ಮಡಿಕೇರಿ, ಫೆ.25– ನಿಲ್ದಾಣದಲ್ಲಿ ನಿಲ್ಲಿಸಿದ್ದ ಆಟೋದಲ್ಲೇ ಚಾಲಕ ಮೃತಪಟ್ಟಿರುವ ಘಟನೆ ಶನಿವಾರಸಂತೆಯಲ್ಲಿ ಸೋಮವಾರ ರಾತ್ರಿ ನಡೆದಿದೆ.

ಶನಿವಾರಸಂತೆ ಮಂಜುನಾಥ್ (50) ಮೃತಪಟ್ಟ ಆಟೋ ಚಾಲಕ. ಮೂಲತಃ ಸೋಮವಾರಪೇಟೆ ತಾಲೂಕಿನ ಸಿದ್ದಲಿಂಗಪುರದ ನಿವಾಸಿ ಮಂಜುನಾಥ್ ಶನಿವಾರಸಂತೆಯಲ್ಲಿ ಕಳೆದ 15 ವರ್ಷಗಳಿಂದ ಆಟೋ ಚಾಲಕರಾಗಿದ್ದರು. ಕೌಟುಂಬಿಕ ಕಲಹದಿಂದ ಮನೆ ತೊರೆದಿದ್ದ ಮಂಜುನಾಥ್ ಪ್ರತಿನಿತ್ಯ ನಿಲ್ದಾಣದಲ್ಲಿ ಆಟೋದಲ್ಲೇ ರಾತ್ರಿ ಕಳೆಯುತ್ತಿದ್ದರು. ಎಂದಿನಂತೆ ಸೋಮವಾರ ರಾತ್ರಿ ಆಟೋದಲ್ಲೇ ಮಲಗಿದ್ದ ಮಂಜುನಾಥ್ ಮಂಗಳವಾರ ಬೆಳಗ್ಗೆ ತಡವಾದರೂ ಆಟೋ ತೆಗೆಯದ ಹಿನ್ನೆಲೆಯಲ್ಲಿ ಇತರೇ ಆಟೋ ಚಾಲಕರು ಬಂದು ನೋಡಿದಾಗ ಮೃತಪಟ್ಟಿರುವುದು ಕಂಡು ಬಂದಿದೆ.

ಶನಿವಾರಸಂತೆ ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಬಸ್ ಡಿಕ್ಕಿ: ದ್ವಿಚಕ್ರ ವಾಹನ ಸವಾರ ಸಾವು

ಕುಶಾಲನಗರ, ಫೆ.25–ಖಾಸಗಿ ಬಸ್ ಡಿಕ್ಕಿ ಹೊಡೆದ ಪರಿಣಾಮ ದ್ವಿಚಕ್ರ ವಾಹನ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಸಮೀಪದ ತೊರೆನೂರು ಗ್ರಾಪಂ ವ್ಯಾಪ್ತಿಯ ಭೈರಪ್ಪನಗುಡಿ ಬಳಿ ಬಾಣವಾರ ರಸ್ತೆಯಲ್ಲಿ ಮಂಗಳವಾರ ಮಧ್ಯಾಹ್ನ ನಡೆದಿದೆ.

ಸಿದ್ದಲಿಂಗಪುರ ಗ್ರಾಮದ ನಿವಾಸಿ ಶಾಂತಪ್ಪ ಅವರ ಮಗ ಎಸ್.ಎ.ಅಶೋಕ್ (64) ಮೃತಪಟ್ಟ ಕೃಷಿಕ. ಈತ ತಮ್ಮ ಜಮೀನಿನಲ್ಲಿ ಅಳವಡಿಸುತ್ತಿದ್ದ ನೀರಾವರಿ ಪೈಪ್‌ಗೆ ಕಾಲರ್‌ಗಳನ್ನು ತೆಗೆದುಕೊಂಡು ಬರಲು ಹೆಬ್ಬಾಲೆ ಕಡೆಗೆ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದರು. ಈ ವೇಳೆ ಕುಶಾಲನಗರದಿಂದ ಸಿದ್ದಲಿಂಗಪುರ ಕಡೆ ಬರುತ್ತಿದ್ದ ಖಾಸಗಿ ಬಸ್ ನಾಪಂಡ ಮುತ್ತಪ್ಪ ಅವರ ಮನೆಯ ಮುಂಭಾಗ ಡಿಕ್ಕಿ ಹೊಡೆದಿದೆ. ಪರಿಣಾಮ ಅಶೋಕ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರಿಗೆ ಪತ್ನಿ ಹಾಗೂ ಇಬ್ಬರು ಪುತ್ರರಿದ್ದು, ಈ ಕುರಿತು ಕುಶಾಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಕ್ಕಿ ಸಾಗಿಸುತ್ತಿದ್ದ ಲಾರಿ ಬೆಂಕಿಗಾಹುತಿ



ಅಕ್ಕಿ ಸಾಗಿಸುತ್ತಿದ್ದ ಲಾರಿಯಲ್ಲಿ ಕಾಣಿಸಿಕೊಂಡ ಬೆಂಕಿಯನ್ನು ಅಗ್ನಿಶಾಮಕ ದಳದ ಸಿಬ್ಬಂದಿ ನಂದಿಸುತ್ತಿರುವುದು.

ಮಡಿಕೇರಿ, ಫೆ25–ವಿರಾಜಪೇಟೆ ಮಾರ್ಗವಾಗಿ ಕೇರಳಕ್ಕೆ ಅಕ್ಕಿ ಸಾಗಿಸುತ್ತಿದ್ದ ಲಾರಿ ಬೆಂಕಿಗೆ ಆಹುತಿಯಾದ ಘಟನೆ ಕೊಡಗು–ಕೇರಳ ಗಡಿಯ ವಾಟೆಕೊಲ್ಲಿಯಲ್ಲಿ ಸೋಮವಾರ ಮಧ್ಯರಾತ್ರಿ ನಡೆದಿದೆ. ಆಂಧ್ರಪ್ರದೇಶದ 16 ಚಕ್ರದ ಲಾರಿಯಲ್ಲಿ ನೂರಾರು ಅಕ್ಕಿ ಚೀಲಗಳನ್ನು ಕೇರಳಕ್ಕೆ ಸಾಗಿಸಲಾಗುತ್ತಿತ್ತು. ಆದರೆ, ಕೊಡಗು ಗಡಿ ಭಾಗದ ವಾಟೆಕೊಲ್ಲಿ ಬಳಿ ಲಾರಿಯಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡಿದೆ ಚಾಲಕ ತಕ್ಷಣ ಲಾರಿಯನ್ನು ರಸ್ತೆಬದಿಗೆ ನಿಲ್ಲಿಸಿ ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ. ಆದರೆ, ಬೆಂಕಿ ಸಂಪೂರ್ಣವಾಗಿ ಲಾರಿಯನ್ನು ವ್ಯಾಪಿಸಿ ಅಕ್ಕಿ ಸಹಿತ ಲಾರಿ ಆಹುತಿಯಾಗಿದೆ. ನಂತರ ಸ್ಥಳಕ್ಕಾಗಮಿಸಿದ ವಿರಾಜಪೇಟೆ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಿಯಂತ್ರಿಸಲು ಹರಸಾಹಸ ಪಡಬೇಕಾಯಿತು. ಬೆಂಕಿ ಅನಾಹುತದಿಂದ ನೂರಾರು ಅಕ್ಕಿ ಮೂಟೆಗಳು ಸುಟ್ಟು ಕರಕಲಾಗಿದ್ದು, ಸುಟ್ಟ ಮೂಟೆಗಳಿಂದ ರಾಶಿ ಗಟ್ಟಲೆ ಅಕ್ಕಿ ರಸ್ತೆಯಲ್ಲಿ ಚೆಲ್ಲಾಪಿಲ್ಲಿಯಾಗಿ ಹರಡಿಕೊಂಡಿದೆ. ಇದನ್ನು ಕಂಡು ಸಾರ್ವಜನಿಕರು ಮರುಗುತ್ತಿದ್ದ ದೃಶ್ಯ ಕಂಡು ಬಂತು.

ಕಾಡಾನೆ ಹಾವಳಿ ನಿಯಂತ್ರಣಕ್ಕೆ 22 ಕೋಟಿ ಬಿಡುಗಡೆ

● ಶಾಸಕ ಪೊನ್ನಣ್ಣ ಮಾಹಿತಿ ● ವಿರಾಜಪೇಟೆ ಕ್ಷೇತ್ರದ ಕಾಡಂಚಿನ ಪ್ರದೇಶದಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಚಾಲನೆ



ಬಿ.ಶೆಟ್ಟಿಗೇರಿ ಗ್ರಾಪಂ ವ್ಯಾಪ್ತಿಯ ಕುಟ್ಟ ಬಳಿ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಶಾಸಕ ಪೊನ್ನಣ್ಣ ಚಾಲನೆ ನೀಡಿದರು.

ವಿರಾಜಪೇಟೆ, ಫೆ.25–ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಕಾಡಂಚಿನ ಪ್ರದೇಶಗಳಲ್ಲಿ ಕಾಡಾನೆ ಹಾವಳಿ ನಿಯಂತ್ರಿಸಲು ಸರ್ಕಾರ 22 ಕೋಟಿ ರೂ. ಬಿಡುಗಡೆ ಮಾಡಿದ್ದು, 15 ಕಿ.ಮೀ. ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗುವುದು ಎಂದು ಶಾಸಕ ಎ.ಎಸ್.ಪೊನ್ನಣ್ಣ ತಿಳಿಸಿದರು.

ಬಿ.ಶೆಟ್ಟಿಗೇರಿ ಗ್ರಾಪಂ ವ್ಯಾಪ್ತಿಯ ಕುಟ್ಟಂದಿಯಲ್ಲಿ 3 ಕಿ.ಮೀ. ಉದ್ದ ಹಾಗೂ ನಾಗರಹೊಳೆ ಆಭಯಾರಣ್ಯ ವ್ಯಾಪ್ತಿಯ 11 ಕಿ.ಮೀ. ಉದ್ದದ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಮಂಗಳವಾರ ಚಾಲನೆ ನೀಡಿ ಮಾತನಾಡಿದ ಅವರು, ಕೊಡಗು ಜಿಲ್ಲೆಯಲ್ಲಿ ಮಾನವ ಮತ್ತು ವನ್ಯಪ್ರಾಣಿಗಳ ಸಂಘರ್ಷ ಹಲವು ವರ್ಷಗಳಿಂದ ಇದೆ. ಇದರಿಂದ ಸ್ಥಳೀಯರಿಗೆ ತುಂಬಾ ತೊಂದರೆಯಾಗಿದೆ. ಶಾಶ್ವತವಾಗಿ ವನ್ಯಪ್ರಾಣಿ ಹಾವಳಿ ನಿಯಂತ್ರಿಸಲು ಅಗತ್ಯವಿರುವ ಕಡೆ ರೈಲ್ವೆ ಬ್ಯಾರಿಕೇಡ್, ಸೋಲಾರ್ ಬೇಲಿ ಅಳವಡಿಕೆ ಹಾಗೂ ಆನೆ ಕಂದಕ ನಿರ್ಮಾಣಕ್ಕೆ ಮುಂದಾಗಲಾಗಿದೆ ಎಂದರು.

ವನ್ಯಪ್ರಾಣಿ ಹಾವಳಿ ತಡೆಗೆ ಸರ್ಕಾರ ಹಲವು ಯೋಜನೆ ಹಾಗೂ ಕಾರ್ಯಕ್ರಮ ರೂಪಿಸಿದೆ. ಆ ನಿಟ್ಟಿನಲ್ಲಿ ನಾಗರಿಕರು, ಅಧಿಕಾರಿಗಳು ಎಲ್ಲಾ ಪ್ರಯತ್ನ ಮಾಡುತ್ತಿದ್ದಾರೆ. ವನ್ಯಪ್ರಾಣಿ ಹಾವಳಿ ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಂಡು ಮಾನವನ ಪ್ರಾಣ ಉಳಿಸುವುದು, ಬೆಳೆ ಹಾನಿ ತಡೆಯುವುದು ಪ್ರಮುಖವಾಗಿದೆ. ಆ ನಿಟ್ಟಿನಲ್ಲಿ ಸರ್ಕಾರ 22 ಕೋಟಿ ರೂ. ವಿಶೇಷ ಅನುದಾನ ಬಿಡುಗಡೆ ಮಾಡಿದೆ ಎಂದು ಮಾಹಿತಿ ನೀಡಿದರು.

ದಕ್ಷಿಣ ಕೊಡಗಿನ ವಿವಿಧೆಡೆ ವನ್ಯಪ್ರಾಣಿಗಳ ಹಾವಳಿ ಪ್ರದೇಶಕ್ಕೆ ಭೇಟಿ ನೀಡಿ ಸ್ಥಳೀಯರಿಂದ ಮಾಹಿತಿ ಪಡೆದು ವನ್ಯಪ್ರಾಣಿಗಳ ಹಾವಳಿ ತಪ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ. ಸ್ಥಳೀಯರ ವಿಶ್ವಾಸ ಪಡೆದು, ಕೃಷಿಕರು, ಅರಣ್ಯ ಇಲಾಖೆ ಅಧಿಕಾರಿಗಳು, ವನ್ಯಜೀವಿ ಮಂಡಳಿಯವರು ಹೀಗೆ ಎಲ್ಲರ ಜೊತೆ ಚರ್ಚಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗಿದೆ ಎಂದು ಹೇಳಿದರು.

ವನ್ಯಜೀವಿ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ ಮಾತನಾಡಿ, ವನ್ಯಜೀವಿ ಹಾಗೂ ಮಾನವ ಸಂಘರ್ಷ ತಡೆದು ಶಾಶ್ವತವಾಗಿ ವೈಜ್ಞಾನಿಕ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗಿದೆ. ಶಾಸಕರ ಪ್ರಯತ್ನದಿಂದ 22 ಕೋಟಿ ರೂ. ವಿಶೇಷ ಅನುದಾನ ಬಿಡುಗಡೆಯಾಗಿದೆ. ವನ್ಯಪ್ರಾಣಿಗಳ ಹಾವಳಿ ನಿಯಂತ್ರಿಸಲು ವೈಜ್ಞಾನಿಕವಾಗಿ ಪರಿಹಾರ ಕಂಡುಕೊಳ್ಳುವಲ್ಲಿ ಶ್ರಮಿಸಲಾಗುತ್ತದೆ ಎಂದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ನೆಹರು ಮಾತನಾಡಿ, ಮಾನವ ಮತ್ತು ವನ್ಯಪ್ರಾಣಿಗಳ ಸಂಘರ್ಷ ತಪ್ಪಿಸುವಲ್ಲಿ ಸರ್ವೆ ಕಾರ್ಯಕ್ಕೆ ಚಾಲನೆ ನೀಡಿ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗುತ್ತಿದೆ. ಅಗತ್ಯವಿರುವ ಕಡೆ ಸೋಲಾರ್ ಬೇಲಿ ನಿರ್ಮಾಣ ಮಾಡಲಾಗುವುದು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್ ಮಾತನಾಡಿ, ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನಲ್ಲಿ ಕಾಡಂಚಿನ ಸುಮಾರು 182 ಗ್ರಾಮಗಳು ಬರಲಿವೆ. ಕಾಡುಪ್ರಾಣಿ ಹಾವಳಿ ನಿಯಂತ್ರಿಸಿ, ವನ್ಯಪ್ರಾಣಿಗಳ ಚಲನವಲನಗಳ ಬಗ್ಗೆ ಹೆಚ್ಚಿನ ನಿಗಾವಹಿಸಲಾಗಿದೆ. ಈ ನಿಟ್ಟಿನಲ್ಲಿ ಅರಣ್ಯ ಇಲಾಖೆಯಿಂದ 17 ತಂಡ ರಚಿಸಲಾಗಿದೆ. ಸ್ಥಳೀಯರಿಗೆ ಎಸ್‌ಎಂಎಸ್ ಮೂಲಕ ವನ್ಯಪ್ರಾಣಿಗಳ ಚಲನವಲನ ಬಗ್ಗೆ ಮಾಹಿತಿ ನೀಡಲಾಗುತ್ತಿದೆ ಎಂದು ಹೇಳಿದರು.

ಕಾಡಾನೆಗೆ ರೇಡಿಯೋ ಕಾಲರ್ ಅಳವಡಿಕೆ ಪ್ರಾತ್ಯಕ್ಷಿಕೆ

ಈ ಸಂದರ್ಭದಲ್ಲಿ ಕಾಡಾನೆಗಳಿಗೆ ರೇಡಿಯೋ ಕಾಲರ್ ಅಳವಡಿಕೆ ಹಾಗೂ ಅದರ ಕಾರ್ಯನಿರ್ವಹಣೆ ಸಂಬಂಧ ಪ್ರಾತ್ಯಕ್ಷಿಕೆ ಪ್ರದರ್ಶಿಸಲಾಯಿತು. ಸ್ಥಳೀಯರಾದ ಸುಗುಣ ಸೋಮಯ್ಯ ಮಾತನಾಡಿ, ಒತ್ತುವರಿ ತೆರವುಗೊಳಿಸಿದ್ದಲ್ಲಿ ಕಾಡುಪ್ರಾಣಿಗಳ ಹಾವಳಿ ತಡೆಯಬಹುದು. ನಂತರ ಶಾಸಕ ಪೊನ್ನಣ್ಣ ಅವರು ತಿತಿಮತಿಯಲ್ಲಿ ಕೊಡಗು ವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ.ಮಾಲತಿ ಪ್ರಿಯ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಜಗನ್ನಾಥ್, ಭಾಸ್ಕರ ಹಾಗೂ ಆರ್‌ಎಫ್‌ಒಗಳೊಂದಿಗೆ ಚರ್ಚಿಸಿದರು. ದೇವಮಚ್ಚಿ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಗಡಿಯಲ್ಲಿ ಕೈಗೊಂಡಿರುವ ಮತ್ತು ಹೊಸದಾಗಿ ಕೈಗೊಳ್ಳಬೇಕಿರುವ ಕಾಮಗಾರಿಗಳ ಸಂಬಂಧ ಸ್ಥಳ ಪರಿಶೀಲಿಸಿದರು. ಬಳಿಕ ಮಾಲ್ದಾರೆ ಘಟ್ಟದಹಳ್ಳ ಗ್ರಾಮಸ್ಥರೊಂದಿಗೆ ಮಾನವ ಮತ್ತು ವನ್ಯಜೀವಿ ಸಂಘರ್ಷ ಬಗ್ಗೆ ಚರ್ಚಿಸಿದರು. ಇದೇ ಸಂದರ್ಭದಲ್ಲಿ ಮಡಿಕೇರಿ ವಿಭಾಗದ ದುಬಾರೆ ಮೀಸಲು ಅರಣ್ಯದ ಸರಹದ್ದಿನಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಪ್ರಕ್ರಿಯೆಗೆ ಚಾಲನೆ ನೀಡಿದರು. ಬಿ.ಶೆಟ್ಟಿಗೇರಿ ಗ್ರಾಪಂ ಅಧ್ಯಕ್ಷ ಬೋಪಣ್ಣ ಮತ್ತಿತರರು ಇದ್ದರು.

ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರ ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೆ



ಕರ್ನಾಟಕ ಸುವರ್ಣ ಸಂಭ್ರಮಾಚರಣೆಯ 50ನೇ ಕಾರ್ಯಕ್ರಮದಲ್ಲಿ ಕುಶಲಸಿರಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕುಶಾಲನಗರ, ಫೆ.25–ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರವನ್ನು ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗುವುದು. ಅದೇ ರೀತಿ ಪೊನ್ನಂಪೇಟೆ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಅಭಿವೃದ್ಧಿ ಪಡಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಪಟ್ಟಣದ ಸಹಕಾರ ಭವನದಲ್ಲಿ ಕನ್ನಡ ಸಿರಿ ಸ್ನೇಹ ಬಳಗದ ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮಾಚರಣೆ ಅಂಗವಾಗಿ 50ನೇ ಕಾರ್ಯಕ್ರಮವಾಗಿ ಮಂಗಳವಾರ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿಗಳಾದ ದಿ.ಆರ್.ಗುಂಡೂರಾವ್ ನುಡಿನಮನ ಹಾಗೂ ದಿ.ವೀರೇಂದ್ರ ಪಾಟೀಲ್ ಜನ್ಮ ಶತಮಾನೋತ್ಸವ ಕುಶಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ಎರಡು ಆಸ್ಪತ್ರೆಗಳ ಅಭಿವೃದ್ಧಿಗೆ ಈ ಬಾರಿ ಬಜೆಟ್‌ನಲ್ಲಿ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಹೊಸದಾಗಿ ಆರಂಭಗೊಂಡ ವಿಶ್ವವಿದ್ಯಾನಿಲಯಗಳಲ್ಲಿ ಕೆಲವು ಸರಿಯಾಗಿ ನಡೆಯುತ್ತಿಲ್ಲ. ಅನೇಕ ಕಡೆ ಹೊಸ ವಿವಿ ಬೇಡ ಅಂತ ಹೇಳುತ್ತಿದ್ದಾರೆ. ಮಂಡ್ಯ ವಿವಿಯನ್ನು ಮೈಸೂರು ವಿವಿಗೆ ಸೇರಿಸುವಂತೆ ಹಾಗೂ ಬೆಂಗಳೂರು ಮಹಾರಾಣಿ ವಿವಿಯನ್ನು ಬೆಂಗಳೂರು ವಿವಿಗೆ ಸೇರಿಸುವಂತೆ ಒತ್ತಡ ಹಾಕುತ್ತಿದ್ದಾರೆ. ಒಟ್ಟಾರೆ ವಿವಿಗಳಲ್ಲಿ ಶೈಕ್ಷಣಿಕ ವ್ಯವಸ್ಥೆ ಸರಿಯಾಗಬೇಕು ಎಂಬುದು ಸರ್ಕಾರದ ನಿಲುವು. ಕೊಡಗು ವಿಶೇಷ ಜಿಲ್ಲೆ. ಇಲ್ಲಿ ವಿವಿಗೆ ಅಗತ್ಯ ಜಾಗ ಹಾಗೂ ಕಟ್ಟಡ ಇದೆ. ಈ ಕುರಿತು ಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ ಸಚಿವರನ್ನು ಭೇಟಿ ಮಾಡಿ ಚರ್ಚಿಸಲಾಗುವುದು. ಕೊಡಗು ವಿವಿ ಹಾಗೆಯೇ ಉಳಿಯಬೇಕು. ಇಲ್ಲಿನ ಜನಾಭಿಪ್ರಾಯ ಬಹಳ ಮುಖ್ಯ. ಇಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲತೆಗಾಗಿ ಕೊಡಗು ವಿವಿ ಉಳಿಸಲು ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದರು.

ಲೇಖಕಿ ಪುಷ್ಪ ಶಿವರಾಮ್ ರೈ ಅವರ ತಂಬೆಲರು ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಸಂಸದ ಯದುವೀರ್, ಕೇಂದ್ರ ಸರ್ಕಾರ ಕೊಡಗಿನ ಪ್ರವಾಸೋದ್ಯಮ ಅಭಿವೃದ್ಧಿಗೆ ಬಜೆಟ್‌ನಲ್ಲಿ ವಿಶೇಷ ಅನುದಾನ ಕಲ್ಪಿಸಿದೆ. ಕೊಡಗಿನ 50 ಪ್ರವಾಸಿ ತಾಣಗಳಲ್ಲಿ ಮೂಲಸೌಕರ್ಯಗಳೊಂದಿಗೆ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಪ್ರವಾಸಿಗರಿಗೆ ಎಲ್ಲಾ ಅನುಕೂಲ ಮಾಡಿಕೊಡಲಾಗುವುದು ಎಂದರು.

ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್, ಶಾಸಕ ಡಾ.ಮಂತರ್‌ಗೌಡ, ಕನ್ನಡಸಿರಿ ಸ್ನೇಹ ಬಳಗದ ಅಧ್ಯಕ್ಷ ಬಿ.ಎಸ್.ಲೋಕೇಶ್ ಸಾಗರ್ ಮಾತನಾಡಿದರು. ಇದೇ ವೇಳೆ ಮಾಜಿ ಶಾಸಕ ಕೈಲಾಶ್ ನಾಥ ವೀರೇಂದ್ರ ಪಾಟೀಲ್, ಮುಖಂಡರಾದ ವಿ.ಎನ್. ವಸಂತಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವಿ.ಪಿ.ಶಶಿಧರ್, ರಾಜ್ಯ ಜಲ ಮಂಡಳಿ ಮಾಜಿ ಅಧ್ಯಕ್ಷೆ ಕೆ.ಪಿ.ಚಂದ್ರಕಲಾ, ವಕೀಲರ ಸಂಘದ ಅಧ್ಯಕ್ಷ ಆರ್.ಕೆ.ನಾಗೇಂದ್ರ ಬಾಬು, ಗಣಪತಿ ದೇವಾಲಯ ಸಮಿತಿ ಅಧ್ಯಕ್ಷ ಎಂ.ಕೆ.ದಿನೇಶ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಟಿ.ಆರ್.ಶರವಣ ಕುಮಾರ್ ಅವರಿಗೆ ಕುಶಲಸಿರಿ ಪ್ರಶಸ್ತಿ ನೀಡಲಾಯಿತು. ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ್ಞ ಉತ್ತಪ್ಪ, ತಾಲೂಕು ಅಧ್ಯಕ್ಷ ವಿ.ಪಿ.ಶಶಿಧರ್, ನೀರು ಬಳಕೆದಾರರ ಮಹಾ ಮಂಡಲ ಅಧ್ಯಕ್ಷ ಚೌಡೇಗೌಡ, ಪುರಸಭೆ ಅಧ್ಯಕ್ಷೆ ಜಯಲಕ್ಷ್ಮಿ ಚಂದ್ರು, ಯೋಜನಾ ಪ್ರಾಧಿಕಾರ ಅಧ್ಯಕ್ಷ ಪ್ರಮೋದ್ ಮುತ್ತಪ್ಪ, ಶಿಕ್ಷಕರಾದ ಉ.ರಾ.ನಾಗೇಶ್, ಗಾಯತ್ರಿ, ರಾಣಿ ರವೀಂದ್ರ ಹಾಜರಿದ್ದರು.

ಪಿಯುಸಿ, ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಜಿಲ್ಲಾಡಳಿತ ಸಿದ್ಧತೆ

● ಜಿಲ್ಲೆಯಲ್ಲಿ 17 ದ್ವಿತೀಯ ಪಿಯುಸಿ, 47 ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರ ● ಜಿಲ್ಲಾಧಿಕಾರಿ ಶಿಲ್ಪನಾಗ್ ಮಾಹಿತಿ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿದರು.

ಚಾಮರಾಜನಗರ, ಫೆ.25–ಮಾ.1 ರಿಂದ 20ರವರೆಗೆ ದ್ವಿತೀಯ ಪಿಯುಸಿ ಹಾಗೂ ಮಾ.23ರಿಂದ ಏ.4ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ಯಾವುದೇ ತೊಂದರೆಗಳಿಲ್ಲದೆ ಅಚ್ಚುಕಟ್ಟಾಗಿ ನಡೆಸಲು ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈ ಬಾರಿ 17 ಕೇಂದ್ರಗಳಲ್ಲಿ ದ್ವಿತೀಯ ಪಿಯುಸಿ ಹಾಗೂ 47 ಕೇಂದ್ರದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದೆ. ಚಾಮರಾಜನಗರ ತಾಲೂಕಿನಲ್ಲಿ 4, ಗುಂಡ್ಲುಪೇಟೆ 3, ಯಳಂದೂರು 2, ಕೊಳ್ಳೇಗಾಲ 5 ಹಾಗೂ ಹನೂರು ತಾಲೂಕಿನಲ್ಲಿ 3 ದ್ವಿತೀಯ ಪಿಯುಸಿ ಪರೀಕ್ಷಾ ಕೇಂದ್ರ ತೆರೆಯಲಾಗಿದೆ ಎಂದರು.

7364 ಪಿಯು ವಿದ್ಯಾರ್ಥಿಗಳು: ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 2887 ಬಾಲಕರು, 3849 ಬಾಲಕಿಯರು ಸೇರಿ ಒಟ್ಟು 6736 ಹೊಸ ವಿದ್ಯಾರ್ಥಿಗಳು ಹಾಗೂ 259 ಖಾಸಗಿ ವಿದ್ಯಾರ್ಥಿಗಳು, 365 ಪುನರಾವರ್ತಿತ ವಿದ್ಯಾರ್ಥಿಗಳು ಸೇರಿ ಒಟ್ಟು 7364 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

12,432 ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 5834 ಬಾಲಕರು, 5804 ಬಾಲಕಿಯರು ಸೇರಿ ಒಟ್ಟು 11,638 ಹೊಸ ವಿದ್ಯಾರ್ಥಿಗಳು ಹಾಗೂ 156 ಖಾಸಗಿ ವಿದ್ಯಾರ್ಥಿಗಳು, 638 ಪುನರಾವರ್ತಿತ ಅಭ್ಯರ್ಥಿಗಳು ಸೇರಿ ಒಟ್ಟು 12,432 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ಹೇಳಿದರು.

ಚಾಮರಾಜನಗರ ತಾಲೂಕಿನಲ್ಲಿ 15, ಗುಂಡ್ಲುಪೇಟೆ 10, ಹನೂರು 9, ಕೊಳ್ಳೇಗಾಲ 9 ಹಾಗೂ ಯಳಂದೂರು ತಾಲೂಕಿನಲ್ಲಿ 4 ಸೇರಿ ಒಟ್ಟು 47 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ ವಿದ್ಯಾರ್ಥಿಗಳ ಜೀವನದಲ್ಲಿ ಮುಖ್ಯ ಘಟ್ಟವಾಗಿದ್ದು, ಪೋಷಕರು ವಿದ್ಯಾರ್ಥಿಗಳ ಅಧ್ಯಯನಕ್ಕೆ ಸೂಕ್ತ ವಾತಾವರಣ ಹಾಗೂ ಅವಕಾಶ ಒದಗಿಸಬೇಕು. ವಿದ್ಯಾರ್ಥಿಗಳ ಕಲಿಕಾ ಪ್ರಗತಿಯನ್ನು ಪರಿಶೀಲಿಸಿ, ಶಿಕ್ಷಕರೊಡನೆ ಸಮಾಲೋಚಿಸಿ ಸಹಕಾರ ನೀಡಬೇಕು. ಮಕ್ಕಳ ಕಲಿಕೆಗೆ ಸೂಕ್ತ ಪ್ರೇರಣೆ, ಪ್ರೋತ್ಸಾಹ ನೀಡಬೇಕು. ಅವರ ಆರೋಗ್ಯದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಪರೀಕ್ಷಾ ಕೇಂದ್ರಗಳಿಗೆ ಒಂದು ಗಂಟೆ ಮುಂಚಿತವಾಗಿ ಮಕ್ಕಳನ್ನು ಕರೆದುಕೊಂಡು ಬರಬೇಕು ಎಂದು ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಪಂ ಸಿಇಓ ಮೋನಾರೋತ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದಾ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಇದ್ದರು.

> ಕಳೆದ ವರ್ಷಕ್ಕಿಂತ ಈ ಬಾರಿ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆ ಮತ್ತಷ್ಟು ಸಾಧನೆ ಮಾಡುವ ವಿಶ್ವಾಸವಿದೆ. ಈಗಾಗಲೇ ಮಕ್ಕಳಿಗೆ ಪರೀಕ್ಷೆ ತಯಾರಿಗಳನ್ನು ಶಿಕ್ಷಣ ಇಲಾಖೆಯಿಂದ ಮಾಡಲಾಗಿದ್ದು, ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಹಾಗೂ ವಂದತಿಗಳಿಗೆ ಕಿವಿಗೊಡದೆ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಬೇಕು.
> -ಶಿಲ್ಪನಾಗ್, ಜಿಲ್ಲಾಧಿಕಾರಿ

> ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಯಾವುದೇ ಅಕ್ರಮ ನಡೆಯದಂತೆ ಅಗತ್ಯ ಸಿದ್ಧತೆಗಳನ್ನು ಇಲಾಖೆಯಿಂದ ಕೈಗೊಳ್ಳಲಾಗಿದೆ. ಪ್ರತಿ ಕೇಂದ್ರಗಳಲ್ಲೂ ಸಿಬ್ಬಂದಿಯನ್ನು ನಿಯೋಜಿಸಿ, ವಾಹನಗಳ ಪಾರ್ಕಿಂಗ್ ಸೇರಿದಂತೆ ಇನ್ನಿತರೆ ಯಾವುದೇ ಅಡ್ಡಿಯುಂಟಾಗದಂತೆ ಕ್ರಮ ಕೈಗೊಳ್ಳಲಾಗುವುದು.
> -ಡಾ.ಬಿ.ಟಿ.ಕವಿತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಕಾಡುಹಂದಿ ಬೇಟೆಗೆ ಸ್ಫೋಟಕ ವಸ್ತು ಇಟ್ಟು

ಜಾನುವಾರುಗಳ ಸಾವಿಗೆ ಕಾರಣರಾಗಿದ್ದ ಇಬ್ಬರ ಬಂಧನ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಮಾತನಾಡಿದರು.

ಚಾಮರಾಜನಗರ, ಫೆ.25–ಕಾಡುಹಂದಿ ಬೇಟೆಗೆ ಬೆಳೆಗಳ ಮಧ್ಯ ಸ್ಫೋಟಕಗಳನ್ನು ಇಟ್ಟು ಜಾನುವಾರುಗಳ ಸಾವಿಗೆ ಕಾರಣರಾಗಿದ್ದ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ. ಕೊಳ್ಳೇಗಾಲ ತಾಲೂಕಿನ ಕುಣಗಳ್ಳಿ ಗ್ರಾಮದ ರಾಮಶೆಟ್ಟಿ (45) ಹಾಗೂ ಸೋಮಣ್ಣ (45) ಬಂಧಿತರು.

ಈ ಸಂಬಂಧ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಎಸ್ಪಿ ಡಾ.ಬಿ.ಟಿ. ಕವಿತಾ ಮಾತನಾಡಿ, ಜಿಲ್ಲೆಯ ರಾಮಾಪುರ, ಹನೂರು, ಕೊಳ್ಳೇಗಾಲ ಗ್ರಾಮಾಂತರ ಹಾಗೂ ಕುದೇರು ಗ್ರಾಮದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇತ್ತೀಚೆಗೆ ಮೇಯುತ್ತಿದ್ದ ಜಾನುವಾರುಗಳು ಸಿಡಿಮದ್ದು ಜಗಿದು ಮುಖ ಛಿದ್ರವಾಗಿ ಸಾವನ್ನಪ್ಪಿದ್ದವು. ಈ ಪ್ರಕರಣವನ್ನು ಜಿಲ್ಲಾ ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿ ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಿ, ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

ಬಂಧಿತರು ಕಾಡುಹಂದಿಗಳನ್ನು ಬೇಟೆಯಾಡುವ ಉದ್ದೇಶದಿಂದ ಸ್ಫೋಟಕ ವಸ್ತುಗಳನ್ನು ತಯಾರಿಸಿ ಮುಸುಕಿನ ಜೋಳದ ಸಂಡು ಹಾಗೂ ಮೇವಿನ ಜೊತೆ ಪಾಳು ಜಮೀನು ಹಾಗೂ ಇತರೆ ಸ್ಥಳಗಳಲ್ಲಿ ಇಡುತ್ತಿದ್ದರು. ಮೇವನ್ನು ಆರಿಸಿ ಬರುವ ಜಾನುವಾರುಗಳು ಇವುಗಳನ್ನು ತಿಂದ ಕೂಡಲೇ ಸ್ಫೋಟಗೊಂಡು ಸಾವನ್ನಪ್ಪಿವೆ ಎಂದು ವಿವರಿಸಿದರು.

ಈ ಸಂಬಂಧ ರಾಮಾಪುರ, ಹನೂರು, ಕೊಳ್ಳೇಗಾಲ ಗ್ರಾಮಾಂತರ ಹಾಗೂ ಕುದೇರು ಪೊಲೀಸ್ ಠಾಣೆಯಲ್ಲಿ ಒಟ್ಟು 5 ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ವಿಶೇಷ ತನಿಖಾ ತಂಡ ರಚಿಸಿ ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿ, 34 ಜೀವಂತ ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ವಿಚಾರಣೆ ವೇಳೆ ಬಂಧಿತರು ತಮ್ಮೊಂದಿಗೆ ಇನ್ನೂ ಮೂವರು ಆರೋಪಿಗಳಿದ್ದರು ಎಂದು ತಿಳಿಸಿದ್ದು, ಅವರ ಮಾಹಿತಿ ಕಲೆ ಹಾಕಲಾಗುತ್ತಿದೆ. ಶೀಘ್ರ ಅವರನ್ನು ಬಂಧಿಸಲಾಗುವುದು. ರಾಮಾಪುರ ಪೊಲೀಸ್ ಠಾಣೆ ನಿರೀಕ್ಷಕ ಪಿ.ಎನ್.ಶೇಷಾದ್ರಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಅಧಿಕಾರಿಗಳಾದ ಲೋಕೇಶ್, ಗಿರೀಶ್, ಬಂಟಪ್ಪ, ಪರಶುರಾಮ್, ರವಿ ಚೌವ್ಹಾಣ್, ದಯಾನಂದ ಪವಾರ್, ಶೆಹನ್ ಷಾ ಮಕಾನ್ ದಾರ್, ಸಿ. ಮಹೇಂದ್ರ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಎಎಸ್‌ಐ ಎಂ.ಎನ್.ಶಶಿಧರ್, ಕೊಳ್ಳೇಗಾಲ ಡಿವೈಎಸ್‌ಪಿ ಧರ್ಮೇಂದ್ರ ಹಾಜರಿದ್ದರು.

ಕಾಡುಮೊಲ ಬೇಟೆಯಾಡಿದ್ದ ಆರೋಪಿ ಬಂಧನ



ಕಾಡುಮೊಲ ಬೇಟೆಯಾಡಿದ್ದ ಆರೋಪಿಯನ್ನು ಅರಣ್ಯಾಧಿಕಾರಿಗಳು ಬಂಧಿಸಿರುವುದು.

ಯಳಂದೂರು, ಫೆ.25–ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಯಳಂದೂರು ವನ್ಯಜೀವಿ ವಲಯದ ಹಾವುರಾಣಿಗುಡ್ಡ ಅರಣ್ಯದಲ್ಲಿ ಕಾಡುಮೊಲ ಬೇಟೆಯಾಡಿದ್ದ ಆರೋಪಿಯನ್ನು ಅರಣ್ಯಾಧಿಕಾರಿಗಳು ಬಂಧಿಸಿದ್ದು, ಮತ್ತಿಬ್ಬರು ಪರಾರಿಯಾಗಿದ್ದಾರೆ.

ಯಳಂದೂರು ತಾಲೂಕಿನ ಕೃಷ್ಣಾಪುರ ಗ್ರಾಮದ ಮಾದಶೆಟ್ಟಿ (48) ಬಂಧಿತ. ಇದೇ ಗ್ರಾಮದ ರಾಚಪ್ಪಾಜಿ ಹಾಗೂ ಶಿವರಾಜು ಪರಾರಿಯಾಗಿದ್ದಾರೆ. ಬಂಧಿತನಿಂದ ಕಾಡುಮೊಲದ ಕಳೇಬರ, ನಾಡಬಂದೂಕು, ಮದ್ದು–ಗುಂಡುಗಳು, ಒಂದು ದ್ವಿಚಕ್ರ ವಾಹನ ವಶಪಡಿಸಿಕೊಳ್ಳಲಾಗಿದೆ.

ಮೂವರು ಅಕ್ರಮವಾಗಿ ಯಳಂದೂರು ವನ್ಯಜೀವಿ ವಲಯದ ಪುರಾಣಿ ಶಾಖೆಯ ಬೇತಾಳಕಟ್ಟೆ ಗಸ್ತಿನ ಹಾವುರಾಣಿಗುಡ್ಡ ಅರಣ್ಯಕ್ಕೆ ತೆರಳಿ ಮೊಲ ಬೇಟೆಯಾಡಿದ್ದರು. ಈ ವೇಳೆ ದಾಳಿ ನಡೆಸಿದ ಅರಣ್ಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಓರ್ವನನ್ನು ಬಂಧಿಸಿದ್ದಾರೆ. ತಲೆಮರೆಸಿಕೊಂಡಿರುವ ಮತ್ತಿಬ್ಬರ ಬಂಧನಕ್ಕೆ ಕ್ರಮವಹಿಸಲಾಗಿದೆ.

ಕಾರ್ಯಾಚರಣೆಯಲ್ಲಿ ಆರ್‌ಎಫ್‌ಓ ಹೆಚ್.ಎನ್.ನಾಗೇಂದ್ರ ನಾಯಕ, ಡಿಆರ್‌ಎಫ್‌ಓ ಮಧು, ಸಿಬ್ಬಂದಿ ಸಂಗಪ್ಪ ಸಿ.ಗೆಣ್ಣೂರ, ಶ್ರೀಕಂತ, ಪ್ರಭುಸ್ವಾಮಿ ಭಾಗವಹಿಸಿದ್ದರು.

ಬಂಡಳ್ಳಿಯ ಹಾಸ್ಟೆಲ್ ಪ್ರಾರಂಭಿಸದಿದ್ದರೆ ಪ್ರತಿಭಟನೆ

ಚಾಮರಾಜನಗರ, ಫೆ.25–ಹನೂರು ತಾಲೂಕಿನ ಬಂಡಳ್ಳಿ ಗ್ರಾಮಕ್ಕೆ ಮಂಜೂರಾಗಿರುವ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸದಿದ್ದರೆ ಪ್ರತಿಭಟನೆ ನಡೆಸುವುದಾಗಿ ಆದಿವಾಸಿ ಹಿತರಕ್ಷಣಾ ಸಮಿತಿ ಅಧ್ಯಕ್ಷ ನಾಗೇಂದ್ರ ಗಾಣಿಗ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಂಡಳ್ಳಿ, ಮಣಗಳ್ಳಿ, ಶಾಗ್ಯ, ತೆಳನೂರು, ಕೊತ್ತನೂರು ಗ್ರಾಪಂ ವ್ಯಾಪ್ತಿಯ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಬಂಡಳ್ಳಿಯಲ್ಲಿ 4.5 ಕೋಟಿ ರೂ. ವೆಚ್ಚದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ. ಇದರಿಂದ ನಾಯಕ ಹಾಗೂ ಕಾಡಂಚಿನ ಆದಿವಾಸಿ ಜನಾಂಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದರು.

ಅಧಿಕಾರಿಗಳ ತಪ್ಪಿನಿಂದ ಕೇವಲ 16 ವಿದ್ಯಾರ್ಥಿಗಳು ಇರುವುದರಿಂದ ಗ್ರಾಮಕ್ಕೆ ಹಾಸ್ಟೆಲ್ ಅವಶ್ಯವಿಲ್ಲ ಎಂದು ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿದ್ದು, ಹನೂರು ಪಟ್ಟಣಕ್ಕೆ ಸ್ಥಳಾಂತರ ಮಾಡಲಾಗಿದೆ. ಬಂಡಳ್ಳಿ ಗ್ರಾಮದಲ್ಲಿ ಬಾಡಿಗೆ ಹಂಚಿನ ಮನೆಯಲ್ಲಿ ವಿದ್ಯಾರ್ಥಿನಿಲಯ ಪ್ರಾರಂಭಿಸಿರುವುದರಿಂದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗಿಲ್ಲ. ಬಂಡಳ್ಳಿ ಪ್ರೌಢಶಾಲೆಯಲ್ಲಿ 153 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಗ್ರಾಮದಲ್ಲಿ ಸುಸಜ್ಜಿತ ವಿದ್ಯಾರ್ಥಿನಿಲಯ ನಿರ್ಮಾಣ ಮಾಡಿದರೆ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಾರೆ. ಗ್ರಾಮಕ್ಕೆ ಮಂಜೂರಾಗಿರುವ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಬೇಕು. ಒಂದು ವೇಳೆ ವಿದ್ಯಾರ್ಥಿನಿಲಯ ಪ್ರಾರಂಭಿಸದಿದ್ದರೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಆದಿವಾಸಿ ಹಿತರಕ್ಷಣಾ ಸಮಿತಿ ಅಧ್ಯಕ್ಷ ನಾಗೇಂದ್ರ, ಮುಖಂಡರಾದ ಮಹದೇವು, ಚಿಕ್ಕಮಾದು, ಮಾದಯ್ಯ ಹಾಜರಿದ್ದರು.

ಕೊಟ್ಟಿಗೆ ಹಣಕ್ಕಾಗಿ ಪ್ರತಿಭಟನೆ



ಕೊಟ್ಟಿಗೆ ಹಣ ನೀಡುವಂತೆ ಒತ್ತಾಯಿಸಿ ಗ್ರಾಮಸ್ಥರು ಜಾನುವಾರುಗಳೊಂದಿಗೆ ಪ್ರತಿಭಟನೆ ನಡೆಸಿದರು.

ಯಳಂದೂರು, ಫೆ.25–ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೊಟ್ಟಿಗೆ ನಿರ್ಮಿಸಿ ಅನೇಕ ವರ್ಷಗಳಾದರೂ ಇನ್ನೂ ಹಣ ಬಂದಿಲ್ಲ ಎಂದು ಅಗರ ಗ್ರಾಮಸ್ಥರು ಜಾನುವಾರುಗಳೊಂದಿಗೆ ಗ್ರಾಮ ಪಂಚಾಯಿತಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ನರೇಗಾ ಯೋಜನೆಯಡಿ 2017 ರಿಂದ 2020ರವರೆಗೆ ಕೊಟ್ಟಿಗೆ ನಿರ್ಮಿಸಿಕೊಂಡವರಿಗೆ ಇನ್ನೂ ಬಿಲ್ ಪಾವತಿ ಮಾಡಿಲ್ಲ. ಈ ಬಗ್ಗೆ ಪಂಚಾಯಿತಿಗೆ ಅಲೆದು ಸಾಕಾಗಿದೆ. ಬಿಲ್ ಪಾವತಿ ಮಾಡುವಂತೆ ಹಲವು ಬಾರಿ ಮನವಿ ಮಾಡಿದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿದರು.

ಪಂಚಾಯಿತಿಯಲ್ಲಿ ಫಲಾನುಭವಿಗಳಿಗೆ ಬಿಲ್ ನೀಡಬೇಕಾದರೇ ಲಂಚ ಕೊಡಬೇಕು. ಒಂದು ಫೈಲ್‌ಗೆ ಕನಿಷ್ಠ 1 ಸಾವಿರ ರೂ. ಲಂಚ ನೀಡಬೇಕು. ಇಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಪ್ರಭಟನಾಕಾರರು ದೂರಿದರು.

2 ತಿಂಗಳೊಳಗೆ ಪಾವತಿ: ಈ ಸಂದರ್ಭದಲ್ಲಿ ಪಿಡಿಓ ಮಂಜುನಾಥ್ ಮಾತನಾಡಿ, ನಾನು ಇಲ್ಲಿಗೆ ಹೊಸದಾಗಿ ಬಂದಿದ್ದೇನೆ. ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 41 ಕೊಟ್ಟಿಗೆ ನಿರ್ಮಾಣ ಮಾಡಲಾಗಿದೆ ಎಂಬ ಮಾಹಿತಿ ಇದೆ. ಈ ಸಂಬಂಧ ಪರಿಶೀಲಿಸಿ, 2 ತಿಂಗಳೊಳಗೆ ಬಿಲ್ ಪಾವತಿಸಲು ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ನಂತರ ಪ್ರತಿಭಟನೆ ಹಿಂಪಡೆಯಲಾಯಿತು. ಪ್ರತಿಭಟನೆಯಲ್ಲಿ ಗ್ರಾಮದ ಸುಂದರ್, ಸಂತೋಷ್, ಮಹೇಶ್, ಚಂದ್ರು ಮತ್ತಿತರರು ಭಾಗವಹಿಸಿದ್ದರು.

ನಿಧನ

ಅಂಕಿ ಸಿದ್ದಶೆಟಿ



ಯಳಂದೂರು, ಫೆ.25–ತಾಲೂಕಿನ ವೈ.ಕೆ.ಮೋಳೆ ಗ್ರಾಮದ ನಿವಾಸಿ ಅಂಕಿ ಸಿದ್ದಶೆಟ್ಟಿ (83) ಮಂಗಳವಾರ ನಿಧನರಾದರು.

ಮೃತರು ಪತ್ನಿ, ಮೂವರು ಪುತ್ರರು, ಪುತ್ರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಬುಧವಾರ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಜೆ.ಸೆಬಾಸ್ಟಿನ್



ಗುಂಡ್ಲುಪೇಟೆ, ಫೆ.25–ಪಟ್ಟಣದ ಕೆಎಸ್‌ಎನ್ ಬಡಾವಣೆ ನಿವಾಸಿ, ಅರಣ್ಯ ಇಲಾಖೆ ನಿವೃತ್ತ ನೌಕರ ಜೆ.ಸೆಬಾಸ್ಟಿನ್ (68) ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಪುತ್ರಿ, ಪುತ್ರರನ್ನು ಅಗಲಿದ್ದಾರೆ. ಬುಧವಾರ ಮಧ್ಯಾಹ್ನ 12 ಗಂಟೆಗೆ ಪಟ್ಟಣದ ಆರ್‌ಟಿಓ ಕಚೇರಿ ಪಕ್ಕದ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಡಿ-ನೋಟಿಫಿಕೇಷನ್ ಪ್ರಕರಣ

ಕೇಂದ್ರ ಸಚಿವ ಕುಮಾರಸ್ವಾಮಿ ಅರ್ಜಿ ವಜಾ ಮಾಡಿದ ಸುಪ್ರೀಂಕೋರ್ಟ್

ನವದೆಹಲಿ, ಫೆ.25– ಹಲಗೆವಡೇರ ಹಳ್ಳಿ ಡಿ–ನೋಟಿಫಿಕೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ. ಬಿಡಿಎ ಸ್ವಾಧೀನ ಪಡಿಸಿಕೊಂಡಿದ್ದ ಜಮೀನು ಡಿನೋಟಿಫಿಕೇಷನ್ ಸಂಬಂಧ ಕುಮಾರಸ್ವಾಮಿ ವಿರುದ್ಧದ ಪ್ರಕರಣದಲ್ಲಿ ಲೋಕಾಯುಕ್ತ ಬಿ–ರಿಪೋರ್ಟ್ ಸಲ್ಲಿಸಿದ್ದು, ಇದನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಇದನ್ನು ಪ್ರಶ್ನಿಸಿ ಕುಮಾರಸ್ವಾಮಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ಇದೀಗ ಸುಪ್ರೀಂ ಕೋರ್ಟ್ ಎಚ್‌ಡಿಕೆ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದೆ.



ಕುಮಾರಸ್ವಾಮಿ ಸಿಎಂ ಆಗಿದ್ದಾಗ ಬನಶಂಕರಿ ಬಳಿಯ ಹಲಗೆವಡೇರಹಳ್ಳಿ ಸರ್ವೆ ನಂ. 128, 137 ರಲ್ಲಿನ 2 ಎಕರೆ 24 ಗುಂಟೆ ಜಮೀನನ್ನು ಕಾನೂನುಬಾಹಿರವಾಗಿ ಡಿ–ನೋಟಿಫಿಕೇಷನ್ ಮಾಡಿದ ಆರೋಪ ಕೇಳಿಬಂದಿತ್ತು. ಈ ಕುರಿತ ದಾಖಲೆಗಳ ಸಮೇತ ಮಹದೇವಸ್ವಾಮಿ 2012ರಲ್ಲಿ ಖಾಸಗಿ ದೂರು ಸಲ್ಲಿಸಿದ್ದರು. ಕುಮಾರಸ್ವಾಮಿ ಜೊತೆಗೆ ಪದ್ಮಾ, ಶ್ರೀದೇವಿ, ಚೇತನ್‌ಕುಮಾರ್, ಕೆ.ಬಿ.ಶಾಂತಮ್ಮ, ಎಸ್.ರೇಖಾ ಚಂದ್ರು, ಯೋಗ ಮೂರ್ತಿ, ಬಿ.ನರಸಿಂಹಲು ನಾಯ್ಡು, ಆರ್.ಬಾಲಕೃಷ್ಣ, ಟಿ.ಮುರುಳಿಧರ್, ಜಿ. ಮಲ್ಲಿಕಾರ್ಜುನ, ಇ.ಎ. ಯೋಗೇಂದ್ರನಾಥ, ಪಿ.ಜಗದೀಶ, ಡಿ.ಎಸ್. ದೀಪಕ್, ಎಂ.ಸುಬ್ರಮಣಿ, ಬಾಲಾಜಿ ಇನ್ಫ್ರಾ, ಶುಭೋದಯ ಬಿಲ್ಡರ್ಸ್, ಸನ್‌ರೈಸ್ ಬಿಲ್ಡರ್ಸ್ ಮತ್ತು ಆರತಿ ಡೆವಲಪರ್ಸ್ ಪ್ರಮುಖರು ಆರೋಪಿತರಾಗಿದ್ದಾರೆ.

ಹಲಗೆವಡೇರಹಳ್ಳಿ ಡಿನೋಟಿಫಿಕೇಷನ್ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದರು. ಅದನ್ನು ದೂರುದಾರ ಮಹದೇವಸ್ವಾಮಿ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯ, ಲೋಕಾಯುಕ್ತ ಪೊಲೀಸರ ಬಿ–ರಿಪೋರ್ಟ್ ತಿರಸ್ಕರಿಸಿ ಪ್ರಕರಣದ ವಿಚಾರಣೆಯನ್ನು ಕೈಗೆತ್ತಿಕೊಂಡಿತ್ತು. ಇದನ್ನು ಪ್ರಶ್ನಿಸಿ ಕುಮಾರಸ್ವಾಮಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ಇದೀಗ ಸುಪ್ರೀಂಕೋರ್ಟ್ ಎಚ್‌ಡಿಕೆ ಅರ್ಜಿಯನ್ನು ವಜಾಗೊಳಿಸಿದೆ. ಇದೀಗ ಕುಮಾರಸ್ವಾಮಿಗೆ ಹಿನ್ನಡೆಯಾಗಿದೆ.

ಟೆರೇಸ್ ಬಾಗಿಲು ಮುರಿದು ಮನೆಗೆ ನುಗ್ಗಿ ಚಿನ್ನಾಭರಣ, ನಗದು ಕಳವು

ಮೈಸೂರು, ಫೆ.25(ಎಸ್‌ಬಿಡಿ)– ಖದೀಮರು ಟೆರೇಸ್ ಬಾಗಿಲು ಮುರಿದು ಮನೆಯೊಳಗೆ ನುಗ್ಗಿ, ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ, ಬೆಳ್ಳಿಪದಾರ್ಥ ಹಾಗೂ ನಗದು ದೋಚಿರುವ ಘಟನೆ ಮೈಸೂರಿನ ವಿಜಯನಗರದಲ್ಲಿ ನಡೆದಿದೆ.

ವಿಜಯನಗರ 2ನೇ ಹಂತ, ವಾಣಿವಿಲಾಸ ಬಡಾವಣೆಯ ನಿವಾಸಿ, ನಾರಾಯಣಸ್ವಾಮಿ ಅವರ ಮನೆಗೆ ನುಗ್ಗಿರುವ ಕಳ್ಳರು, ಚಿನ್ನಾಭರಣ, 2 ಕೆಜಿ ಬೆಳ್ಳಿ ಪದಾರ್ಥ ಹಾಗೂ 15 ಸಾವಿರ ನಗದನ್ನು ದೋಚಿದ್ದಾರೆ.

ನಾರಾಯಣಸ್ವಾಮಿ ಹಾಗೂ ಅವರ ಪತ್ನಿ ಲಕ್ಷ್ಮೀ ಫೆ.20ರಂದು ಬೆಳಗ್ಗೆ ಮನೆಗೆ ಬೀಗ ಹಾಕಿಕೊಂಡು ಬೆಂಗಳೂರಿನಲ್ಲಿರುವ ಪುತ್ರಿಯ ಮನೆಗೆ ತೆರಳಿದ್ದರು. ಫೆ.24ರಂದು ಮಧ್ಯಾಹ್ನ ಲಕ್ಷ್ಮೀ ಅವರು ವಾಪಸ್ಸಾದಾಗ ಮನೆಯ ನೆಲ ಮಹಡಿಯ ಕೊಠಡಿಯಲ್ಲಿದ್ದ ಕಬ್ಬಿಣದ ಬೀರು ಹಾಗೂ ವಾರ್ಡ್ರೋಬ್ ಬಾಗಿಲು ತೆಗೆದಿತ್ತು. ಅದರಲ್ಲಿದ್ದ ಬಟ್ಟೆ ಇನ್ನಿತರ ವಸ್ತುಗಳೆಲ್ಲಾ ಮಂಚದ ಮೇಲೆ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಬೀರುವಿನ ಡ್ರಾಯರ್‌ನಲ್ಲಿದ್ದ ಚಿನ್ನಾಭರಣ, ಬೆಳ್ಳಿ ಪದಾರ್ಥಗಳು ಹಾಗೂ ನಗದು ಇರಲಿಲ್ಲ. ಕೂಡಲೇ ಲಕ್ಷ್ಮೀ ಅವರು ಪತಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ.

ಸಂಜೆ ವೇಳೆಗೆ ಬೆಂಗಳೂರಿನಿಂದ ಆಗಮಿಸಿದ ನಾರಾಯಣಸ್ವಾಮಿ ಅವರು ಪರಿಶೀಲಿಸಿದಾಗ ಬೀರುವಿನಲ್ಲಿದ್ದ 2 ಜೊತೆ ಚಿನ್ನದ ಓಲೆ, 3 ಚಿನ್ನದ ಉಂಗುರ, 2 ಚಿನ್ನದ ಸರಗಳು, ಸುಮಾರು 2 ಕೆಜಿ ಬೆಳ್ಳಿ ಪದಾರ್ಥಗಳು, ಸುಮಾರು 15 ಸಾವಿರ ರೂ. ಹಣ ಹಾಗೂ ವಜ್ರದ ಓಲೆ ಇರಲಿಲ್ಲ. ಒಂದನೇ ಮಹಡಿಯಲ್ಲಿರುವ ರೂಂಗಳನ್ನು ಪರಿಶೀಲಿಸಿದಾಗ ಅಲ್ಲಿ ಯಾವುದೇ ಬೆಲೆಬಾಳುವ ಪದಾರ್ಥಗಳು ಕಳ್ಳತನವಾಗಿರಲಿಲ್ಲ. ಬಳಿಕ ಟೆರೇಸ್‌ಗೆ ಹೋಗುವ ಬಾಗಿಲನ್ನು ಹೊರಗಿನಿಂದ ಯಾವುದೋ ಚೂಪಾದ ಆಯುಧದಿಂದ ಮೀಟಿ ಬೀಗ ಮುರಿದು ಬಾಗಿಲು ತೆಗೆದು ಒಳನುಗ್ಗಿರುವುದು ಗೊತ್ತಾಗಿದೆ.

ಈ ಸಂಬಂಧ ನಾರಾಯಣಸ್ವಾಮಿ ಅವರು ವಿಜಯನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಕಳುವಾಗಿರುವ ಚಿನ್ನಾಭರಣದ ಪ್ರಮಾಣ ಹಾಗೂ ಮೌಲ್ಯವನ್ನು ಮನೆಯವರನ್ನು ಕೇಳಿ ತಿಳಿಸುವುದಾಗಿ ಹೇಳಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಖದೀಮರ ಪತ್ತೆಗೆ ಶೋಧ ನಡೆಸಿದ್ದಾರೆ.

ಕೆಪಿಎಸ್‌ಸಿಯ ಗೆಜೆಟೆಡ್ ಪ್ರೊಬೇಷನರಿ ಮುಖ್ಯ ಪರೀಕ್ಷೆ ಅರ್ಜಿ ಭರ್ತಿಗೆ ಕೆಎಟಿ ಅವಕಾಶ

ಬೆಂಗಳೂರು, ಫೆ.25– ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸುತ್ತಿರುವ 2023–24ನೇ 384 ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಮುಂದುವರಿಸಲು ಅನುವು ಮಾಡಿಕೊಟ್ಟಿರುವ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ (ಕೆಎಸ್‌ಎಟಿ) ಮುಖ್ಯ ಪರೀಕ್ಷೆಗೆ ಅರ್ಜಿ ಭರ್ತಿ ಮಾಡಲು ಅವಕಾಶ ಕಲ್ಪಿಸಿದೆ.

ಈ ಸಂಬಂಧ ಡಿ.ಪವಿತ್ರಾ ಸೇರಿದಂತೆ ಇತರೆ 51 ಅಭ್ಯರ್ಥಿಗಳು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಕೆಎಸ್‌ಎಟಿ ನ್ಯಾಯಾಂಗ ಸದಸ್ಯ ಎಸ್.ವೈ.ವಟವಟಿ ಮತ್ತು ಆಡಳಿತ ಸದಸ್ಯೆ ಅಮಿತಾ ಪ್ರಸಾದ್ ಅವರಿದ್ದ ಪೀಠವು ಈ ಕುರಿತಂತೆ ಆದೇಶಿಸಿದೆ.

ಕಳೆದ ವಾರವಷ್ಟೇ ಮುಖ್ಯ ಪರೀಕ್ಷೆಯ ಅಧಿಸೂಚನೆಯನ್ನು ಅಮಾನತಿನಲ್ಲಿರಿಸಿದ್ದ ಕೆಎಸ್‌ಎಟಿ, ಆ ಆದೇಶವನ್ನು ಮಾರ್ಪಾಡು ಮಾಡಿ ಪ್ರಕ್ರಿಯೆ ಮುಂದುವರಿಸಲು ಅವಕಾಶ ಮಾಡಿಕೊಟ್ಟಿದೆ. ಅಲ್ಲದೆ, ಅರ್ಜಿಯು ಅಂತಿಮ ಆದೇಶಕ್ಕೆ ಒಳಪಟ್ಟಿರಲಿದೆ ಎಂದು ತಿಳಿಸಿದ್ದು ವಿಚಾರಣೆಯನ್ನು ಮಾರ್ಚ್ 3ಕ್ಕೆ ಮುಂದೂಡಿದೆ. ಈ ಆದೇಶದಿಂದಾಗಿ ಪೂರ್ವಭಾವಿ ಪರೀಕ್ಷೆಯಲ್ಲಿ 1:15ರಂತೆ ಮುಖ್ಯ ಪರೀಕ್ಷೆಗೆ ಆಯ್ಕೆಯಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಪ್ರಕ್ರಿಯೆ ಮುಂದುವರಿಸಲು ಅವಕಾಶ ದೊರೆತಂತಾಗಿದೆ.

ಪರೀಕ್ಷೆಯಲ್ಲಿ ಸುಮಾರು 59 ಪ್ರಶ್ನೆಗಳ ಅನುವಾದದಲ್ಲಿ ದೋಷ ಕಂಡುಬಂದಿವೆ. ಆದ್ದರಿಂದ, ಪರೀಕ್ಷೆ ರದ್ದುಗೊಳಿಸಬೇಕು ಎಂದು ಅಭ್ಯರ್ಥಿಗಳು ಕೆಎಸ್‌ಎಟಿ ಮೆಟ್ಟಿಲೇರಿದ್ದರು.

ಗ್ಯಾರಂಟಿ ಯೋಜನೆಗಳು ಹೊರೆಯಾಗಿವೆ; ಆದರೂ ಬಡವರಿಗಾಗಿ ಸಹಿಸಿಕೊಳ್ಳಬೇಕು!

ಬೆಂಗಳೂರು, ಫೆ.25– ಗ್ಯಾರಂಟಿ ಯೋಜನೆಗಳು ಹೊರೆಯಾಗಿವೆ ಎಂಬುದರಲ್ಲಿ ಎರಡು ಮಾತಿಲ್ಲ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಗ್ಯಾರಂಟಿಗಳಿಂದ ಹೊರೆಯಾಗುತ್ತಿರುವುದು ನಿಜ. ಆದರೆ, ಅದನ್ನು ನಾವು ಗೊತ್ತಿದ್ದೇ ಜಾರಿಗೆ ತಂದಿದ್ದೇವೆ. ಬಡವರಿಗಾಗಿ ಆಗುವ ಹೊರೆಯನ್ನು ನಾವು ಸಹಿಸಿಕೊಳ್ಳಬೇಕು ಅಷ್ಟೆ ಎಂದರು.

ಬಿಜೆಪಿಯವರಿಗೆ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗುವುದು ಬೇಕಿಲ್ಲ. ಹೇಗಾದರು ಮಾಡಿ ಗ್ಯಾರಂಟಿ ಯೋಜನೆಗಳನ್ನು ಹತ್ತಿಕ್ಕಬೇಕು ಎನ್ನುವ ಪ್ರಯತ್ನ ಮಾಡುತ್ತಿದ್ದಾರೆ. ನಮ್ಮ ಉದ್ದೇಶ ಬಡವರಿಗೋಸ್ಕರ ಗ್ಯಾರಂಟಿ ಯೋಜನೆಗಳನ್ನು ಕೊಡುತ್ತಿದ್ದೇವೆ. ಬಡವರಿಗೆ ಹಣ ಕೊಡುವುದು ಬಿಜೆಪಿಯವರಿಗೆ ಮನಸ್ಸಿಲ್ಲ ಎಂದರೆ ಬಿಜೆಪಿಯವರ ಸಿದ್ಧಾಂತ ಏನಿದೆ ಎಂಬುದು ಅರ್ಥವಾಗುತ್ತದೆ. ಬಿಜೆಪಿಯವರು ಬಡವರ ಪರ ಇಲ್ಲ. ಪ್ರತಿಭಟನೆ ಮೂಲಕ ಸಾರ್ವಜನಿಕವಾಗಿ ಅದನ್ನು ಹೇಳಲು ಹೊರಟಿದ್ದಾರೆ. ಇದೆಲ್ಲವನ್ನು ಜನ ಗಮನಿಸುತ್ತಾರೆ ಎಂದು ಟೀಕಿಸಿದರು.



ಆದಾಯ ತೆರಿಗೆದಾರರು ಮತ್ತು ಸರ್ಕಾರಿ ನೌಕರರು ಸೇರಿದಂತೆ ಅನೇಕ ಜನರು ಈ ಯೋಜನೆಗಳಿಂದ ಹೊರಬಂದಿದ್ದಾರೆ ಎಂದು ಸಚಿವರು ಹಂಚಿಕೊಂಡರು. ಎಲ್ಲರೂ ಅದೇ ರೀತಿ ಮುಂದುವರಿದರೇ ಬಡವರಿಗೆ ಅನುಕೂಲ ಆಗುತ್ತದೆ ಎಂದು ಹೇಳಿದರು. ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕಾರ್ಡ್‌ದಾರರಿಗೆ ಮಾತ್ರ ಖಾತರಿ ಯೋಜನೆಗಳನ್ನು ಒದಗಿಸಬೇಕು ಎಂದು ತುರುವೇಕೆರೆ ಜೆಡಿಎಸ್ ಶಾಸಕ ಎಂ.ಟಿ. ಕೃಷ್ಣಪ್ಪ ಸಲಹೆ ನೀಡಿದ್ದಾರೆ. ವಿರೋಧ ಪಕ್ಷಗಳು ಸಲಹೆಗಳನ್ನು ನೀಡಿದರೆ ಸರ್ಕಾರ ಚರ್ಚೆಗೆ ಮುಕ್ತವಾಗಿದೆ ಎಂದು ಸ್ಪಷ್ಟಪಡಿಸಿದರು.

ಕಂಡಕ್ಟರ್‌ಗೆ ಹಲ್ಲೆ; ವರದಿಗೆ ಸೂಚನೆ: ಬೆಳಗಾವಿಯಲ್ಲಿ ಬಸ್ ಕಂಡಕ್ಟರ್ ಮೇಲಿನ ಹಲ್ಲೆಗೆ ಸಂಬಂಧಿಸಿದಂತೆ ಮಾತನಾಡಿದ ಅವರು, ಈ ವಿಷಯದ ಬಗ್ಗೆ ಪರಿಶೀಲನೆ ನಡೆಸಿ ವರದಿ ನೀಡುವಂತೆ ಸೂಚಿಸಿದ್ದೇನೆ ಎಂದು ಹೇಳಿದರು. ಕನ್ನಡ ಸಂಘಟನೆಗಳಿಗೆ ಪ್ರತಿಭಟನೆ ನಡೆಸಲು ಅವಕಾಶ ನೀಡಲಾಗಿದೆ. ಅವರು ಶಾಂತಿಯುತ ಪ್ರತಿಭಟನೆ ನಡೆಸಬೇಕು. ಯಾವುದೇ ಹಿಂಸಾಚಾರ ನಡೆದರೆ, ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

ಮಹಾರಾಷ್ಟ್ರ ಸರ್ಕಾರಿ ಬಸ್‌ಗಳು ಕರ್ನಾಟಕಕ್ಕೆ ಪ್ರವೇಶಿಸುತ್ತಿಲ್ಲ ಮತ್ತು ಕರ್ನಾಟಕದ ಬಸ್‌ಗಳು ಮಹಾರಾಷ್ಟ್ರಕ್ಕೆ ಹೋಗುತ್ತಿಲ್ಲ. ಪ್ರಸ್ತುತ, ಎರಡು ರಾಜ್ಯಗಳ ನಡುವಿನ ಬಸ್ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ ಮತ್ತು ಪರಿಸ್ಥಿತಿ ಸ್ಥಿರವಾದ ನಂತರ ಕಾರ್ಯಾಚರಣೆ ಪುನರಾರಂಭಗೊಳ್ಳುತ್ತದೆ ಎಂದು ಅವರು ಹೇಳಿದರು.

ರಾಜಕೀಯಗೊಳಿಸಬೇಡಿ: ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ದಾಳಿ ಪ್ರಕರಣದ ಬಗ್ಗೆ ಮಾತನಾಡಿದ ಅವರು, ನಾವು ಬಿಜೆಪಿಯ ಪ್ರತಿಭಟನೆಗಳನ್ನು ನಿಗ್ರಹಿಸಿಲ್ಲ. ಅನಗತ್ಯ ಬೆಳವಣಿಗೆಗಳನ್ನು ತಡೆಯಲು, ಎರಡೂ ಕಡೆಯವರು ಪ್ರತಿಭಟನೆ ನಡೆಸಲು ಅನುಮತಿ ನೀಡಲಾಗಿಲ್ಲ. ಹೀಗಾಗಿ ಅವರು ಕೋರ್ಟ್ ಮೆಟ್ಟಿಲೇರಿದ್ದಾರೆ. ನ್ಯಾಯಾಲಯದ ಆದೇಶದ ನಂತರ, ಅವರು ಗೊತ್ತುಪಡಿಸಿದ ಸ್ಥಳದಲ್ಲಿ ಪ್ರತಿಭಟನೆ ನಡೆಸಿದರು. ಈ ವಿಷಯವನ್ನು ರಾಜಕೀಯಗೊಳಿಸದಂತೆ ನಾನು ಅವರಿಗೆ ಸಲಹೆ ನೀಡಿದ್ದೇನೆ. ಜಾತಿ ಜನಗಣತಿ ವರದಿಯ ಕುರಿತು ಅವರು, ಮುಖ್ಯಮಂತ್ರಿ ಈಗಾಗಲೇ ಅದನ್ನು ಬಿಡುಗಡೆ ಮಾಡುವುದಾಗಿ ಹೇಳಿದ್ದಾರೆ. ಸೂಕ್ತ ಸಮಯದಲ್ಲಿ ಅದನ್ನು ಪ್ರಕಟಿಸಲಾಗುವುದು ಎಂದು ಹೇಳಿದರು.

ಉದಯಗಿರಿ ಗಲಭೆ: ಸತೀಶ್ ಗಡಿಪಾರಿಗೆ ತಡೆ

ಮೈಸೂರು, ಫೆ.25– ಮೈಸೂರಿನ ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿ ಸತೀಶ್ ಗಡಿಪಾರು ಪ್ರಕ್ರಿಯೆಗೆ ಕೋರ್ಟ್ ತಡೆ ನೀಡಿದೆ.



ಮುಸ್ಲಿಂ ಧರ್ಮದ ವಿರುದ್ಧ ಅವಹೇಳನಕಾರಿ ಪೋಸ್ಟ್ ಮಾಡಿ ಮೈಸೂರಿನ ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟಕ್ಕೆ ಕಾರಣನಾದ ಆರೋಪಿ ಸತೀಶ್ ಗಡಿಪಾರಿಗೆ ಪೊಲೀಸರು ಸಿದ್ಧತೆ ನಡೆಸಿದ್ದರು. ಆದ್ರೆ, ಪೊಲೀಸರ ಕ್ರಮ ಪ್ರಶ್ನಿಸಿ ಸತೀಶ್ ಪರ ವಕೀಲ ಮೈಸೂರು ಜಿಲ್ಲಾ ಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಕೋರ್ಟ್ ಸತೀಶ್ ಅರ್ಜಿಯನ್ನು ಪುರಸ್ಕರಿಸಿದ್ದು, ಆರೋಪಿ ಸತೀಶ್‌ನನ್ನು ಗಡಿಪಾರು ಮಾಡದಂತೆ ಕೋರ್ಟ್ ಆದೇಶ ಹೊರಡಿಸಿದೆ. ಇದರಿಂದ ಮೈಸೂರು ಪೊಲೀಸರಿಗೆ ಹಿನ್ನಡೆಯಾದಂತಾಗಿದೆ.

ಮುಸ್ಲಿಂ ಧರ್ಮದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಹರಿಬಿಟ್ಟ ಪ್ರಕರಣದ ಆರೋಪಿ ಸತೀಶ್ ಗಡಿಪಾರಿಗೆ ಮೈಸೂರು ನಗರ ಪೊಲೀಸರು ಮುಂದಾಗಿದ್ದು, ಈ ಬಗ್ಗೆ ಕಾರಣ ಕೇಳಿ ನೋಟಿಸ್ ನೀಡಿದ್ದರು. ಈ ಬಗ್ಗೆ ಸತೀಶ್ ಪರ ವಕೀಲ ಭಾಸ್ಕರ್ ಅವರು ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ವಿಚಾರಣೆಗೆ ಭಾಗಿಯಾಗಿ ಆಕ್ಷೇಪಣೆ ಸಲ್ಲಿಸಿದ್ದರು. ಅದಾದ ಬಳಿಕ ಪೊಲೀಸರ ನಿರ್ಧಾರ ಪ್ರಶ್ನಿಸಿ ಜಿಲ್ಲಾ ನ್ಯಾಯಾಲಯದ ಮೊರೆ ಹೋಗಿದ್ದರು.

ದೆಹಲಿ ವಿಧಾನಸಭೆ ಫಲಿತಾಂಶ ಪ್ರಕಟವಾದ ಬಳಿಕ ಮುಸ್ಲಿಂ ಸಮುದಾಯವನ್ನು ಅವಹೇಳನ ಮಾಡಿದ ಪೋಸ್ಟ್ ಅನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹರಿಬಿಟ್ಟ ಪ್ರಕರಣದ ಆರೋಪಿ ಸತೀಶ್. ಈತನ ಪೋಸ್ಟ್‌ನಿಂದಾಗಿ ಕೆರಳಿದ ಮುಸ್ಲಿಂ ಸಮುದಾಯ ಸತೀಶ್‌ನನ್ನು ಕೂಡಲೇ ಬಂಧಿಸಬೇಕೆಂದು ಪ್ರತಿಭಟನೆಗಿಳಿಯಿತು. ಬಳಿಕ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿತ್ತು. ಮುಸ್ಲಿಂ ಸಮುದಾಯದ ನೂರಾರು ಜನರು ಸೇರಿಕೊಂಡು ಉದಯಗಿರಿ ಪೊಲೀಸ್ ಠಾಣೆ ಮೇಲೆ ದಾಳಿ ಮಾಡಿದ್ದರು. ಪೊಲೀಸರು ಹಾಗೂ ಅವರ ವಾಹನಗಳ ಮೇಲೆ ಕಲ್ಲುತೂರಾಟ ನಡೆಸಿದ್ದು, ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿತ್ತು.

ಬಳಿಕ ಪೊಲೀಸರು ಆರೋಪಿ ಸತೀಶ್‌ನನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದರು. ಆದ್ರೆ, ಸತೀಶ್‌ಗೆ ಮೈಸೂರು 2ನೇ ಹೆಚ್ಚುವರಿ ಜಿಲ್ಲಾ ಸಿವಿಲ್ ನ್ಯಾಯಾಲಯವು ಜಾಮೀನು ನೀಡಿತ್ತು.

ಏ.3–4ರಂದು ಥೈಲ್ಯಾಂಡ್‌ನಲ್ಲಿ 6ನೇ ಬಿಮ್‌ಸ್ಟೆಕ್ ಶೃಂಗಸಭೆ

ಮೋದಿ-ಯೂನಸ್ ಮಾತುಕತೆ ಸಾಧ್ಯತೆ

ನವದೆಹಲಿ, ಫೆ25– ಪ್ರಧಾನಿ ನರೇಂದ್ರ ಮೋದಿ ಅವರು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ಅವರನ್ನು ಏಪ್ರಿಲ್ 3–4 ರಂದು ಥೈಲ್ಯಾಂಡ್‌ನಲ್ಲಿ ನಡೆಯಲಿರುವ 6 ನೇ ಬಿಮ್‌ಸ್ಟೆಕ್ (ಬಹು–ವಲಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರಕ್ಕಾಗಿ ಬಂಗಾಳ ಕೊಲ್ಲಿ ಉಪಕ್ರಮ) ಶೃಂಗಸಭೆಯ ಹೊರಗೆ ಭೇಟಿ ಮಾಡುವ ಸಾಧ್ಯತೆಯಿದೆ.

ಉಪ–ಪ್ರಾದೇಶಿಕ ಗುಂಪಿನ ಪ್ರಮುಖ ಶೃಂಗಸಭೆಯ ದಿನ ಏಪ್ರಿಲ್ 4 ಆಗಿರುತ್ತದೆ. ಪ್ರಧಾನಿ ಮೋದಿ ಮತ್ತು ಮುಹಮ್ಮದ್ ಯೂನಸ್ ನಡುವಿನ ಮಾತುಕತೆಯ ಸಾಧ್ಯತೆಯನ್ನು ಪರಿಶೀಲಿಸಲಾಗುತ್ತಿದ್ದು, ಇನ್ನೂ ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ.

ಕಳೆದ ವರ್ಷ ಸೆಪ್ಟೆಂಬರ್ 3–4ರಂದು ನಿಗದಿಯಾಗಿದ್ದ ಶೃಂಗಸಭೆಯಲ್ಲಿ ಭಾಗವಹಿಸಲು ಮೋದಿಯವರು ಏಪ್ರಿಲ್ ಆರಂಭದಲ್ಲಿ ಥೈಲ್ಯಾಂಡ್‌ಗೆ ಪ್ರಯಾಣಿಸಲಿದ್ದಾರೆ, ಥೈಲ್ಯಾಂಡ್ ದೇಶದಲ್ಲಿನ ರಾಜಕೀಯ ಬೆಳವಣಿಗೆಗಳಿಂದಾಗಿ ಇದು ಮುಂದೂಡಲ್ಪಟ್ಟಿತು.


ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯಿಂದಾಗಿ ಸಾರ್ಕ್ ಹೆಚ್ಚು ನಿಷ್ಕ್ರಿಯಗೊಂಡ ನಂತರ, ಭಾರತವು ಬಿಮ್‌ಸ್ಟೆಕ್‌ನ್ನು ಮಾದರಿ ಪ್ರಾದೇಶಿಕ ಸಂಘಟನೆಯಾಗಿ ನೋಡುತ್ತಿದೆ. ಬಾಂಗ್ಲಾದೇಶ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರನ್ನು ಪ್ರಧಾನಿ ಹುದ್ದೆಯಿಂದ ತೆಗೆದುಹಾಕಿದ ನಂತರ ಭಾರತ ಮತ್ತು ಬಾಂಗ್ಲಾದೇಶದ ನಡುವಿನ ಸಂಬಂಧಗಳು ಹದಗೆಟ್ಟಿದೆ. ಮಸ್ಕತ್‌ನಲ್ಲಿ ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ಸಲಹೆಗಾರ ತೌಹಿದ್ ಹೊಸೇನ್ ಅವರನ್ನು ಭೇಟಿಯಾದ ಕೆಲವೇ ದಿನಗಳ ನಂತರ ಭಾನುವಾರ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ವಿದೇಶಾಂಗ ಸಚಿವ ಜೈಶಂಕರ್, ಭಾರತದ ಬಗ್ಗೆ ಮಧ್ಯಂತರ ಆಡಳಿತದ ಪ್ರತಿಕೂಲ ಧೋರಣೆ ಮತ್ತು ಅಲ್ಪಸಂಖ್ಯಾತರ ಮೇಲಿನ ಹಿಂಸಾಚಾರದ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಬಾಂಗ್ಲಾದೇಶ ಸರ್ಕಾರ ಭಾರತದ ಬಗ್ಗೆ ಮಾಡಿದ ಸಾರ್ವಜನಿಕ ಟೀಕೆಗೆ ಜೈಶಂಕರ್ ಪ್ರತಿಕ್ರಿಯಿಸುತ್ತಾ, ಮಧ್ಯಂತರ ಸರ್ಕಾರದ ಅಧಿಕಾರಿಗಳು ತಮ್ಮ ಎಲ್ಲಾ ಸಮಸ್ಯೆಗಳಿಗೆ ಭಾರತವನ್ನು ದೂಷಿಸುತ್ತಿದ್ದರೆ, ಅವುಗಳಲ್ಲಿ ಕೆಲವು ಸಂಪೂರ್ಣವಾಗಿ ಆಧಾರರಹಿತವಾಗಿದ್ದರೆ, ಅದು ಸಂಘರ್ಷದ ಸಂದೇಶವನ್ನು ರವಾನಿಸುತ್ತದೆ.

ಬಿಎಸ್‌ವೈ ಜನ್ಮದಿನದಂದು ಸಮಾವೇಶಕ್ಕೆ ಹೈಕಮಾಂಡ್ ಬ್ರೇಕ್

ಸೇವಾ ಚಟುವಟಿಕೆ ಮೂಲಕ ಆಚರಿಸಲು ಬೆಂಬಲಿಗರ ಸಿದ್ಧತೆ

ಬೆಂಗಳೂರು, ಫೆ.25– ಮಾಜಿ ಸಿಎಂ ಹಾಗೂ ರಾಜ್ಯ ಬಿಜೆಪಿ ಅಧಿನಾಯಕ ಬಿ.ಎಸ್.ಯಡಿಯೂರಪ್ಪ ಅವರ ಜನ್ಮದಿನದಂದು (ಫೆ.27) ಸಮಾವೇಶ ನಡೆಸಲು ಮುಂದಾಗಿದ್ದ ಬೆಂಬಲಿಗರಿಗೆ ಹೈಕಮಾಂಡ್ ಶಾಕ್ ಕೊಟ್ಟಿದೆ. ಪಕ್ಷದಲ್ಲಿ ಪರಸ್ಪರ ಬಣ ಬಡಿದಾಟ, ಮೇಲಾಟ ನಡೆಯುತ್ತಿರುವ ಹಿನ್ನೆಲೆಯಲ್ಲಿ ಯಡಿಯೂರಪ್ಪ ಹೆಸರಿನಲ್ಲಿ ಸಮಾವೇಶ ನಡೆಸಬೇಕೆಂಬ ಆಪ್ತರ ಆಸೆಗೆ ಬಿಜೆಪಿ ಹೈಕಮಾಂಡ್ ತಣ್ಣೀರು ಎರಚಿದೆ.



ಸಮಾವೇಶವೂ ಬೇಡ, ಗೊಂದಲವೂ ಬೇಡ, ಸದ್ಯಕ್ಕೆ ತೆಪ್ಪಗಿರಿ ಅಂತ ದೆಹಲಿಯಿಂದ ಖಡಕ್ ಸಂದೇಶ ಬಿಎಸ್‌ವೈ ಆಪ್ತರಿಗೆ ಹಾಗೂ ಬೆಂಬಲಿಗರಿಗೆ ಬಂದಿದೆ. ಇದೀಗ ಸಮಾವೇಶಕ್ಕೆ ಫುಲ್ ಸ್ಟಾಪ್ ಬಿದ್ದಿದ್ದು, ಕ್ಷೇತ್ರವಾರು ಆಚರಣೆಗೆ ಬೆಂಬಲಿಗರು ಪ್ಲ್ಯಾನ್ ಮಾಡಿಕೊಂಡಿದ್ದಾರೆ. ಯಡಿಯೂರಪ್ಪ ಅವಧಿಯಲ್ಲಿ ಜಾರಿಗೆ ತರಲಾದ ಯಶಸ್ವಿ ಯೋಜನೆಗಳ ಫಲಾನುಭವಿಗಳನ್ನು ಸೇರಿಸಿ ಆ ಮೂಲಕ ಅವರ ಹುಟ್ಟುಹಬ್ಬ ಆಚರಿಸಲು ಸಿದ್ಧತೆಗಳು ನಡೆದಿವೆ. ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲೂ ವಿವಿಧ ಸೇವಾ ಕಾರ್ಯಕ್ರಮಗಳ ಮೂಲಕ ಆಚರಣೆಗೆ ಆಪ್ತರು ಮುಂದಾಗಿದ್ದಾರೆ.

ಭಾಗ್ಯಲಕ್ಷ್ಮೀ ಬಾಂಡ್, ಉಚಿತ ಸೈಕಲ್, ಸಾಲಮನ್ನಾ ಯೋಜನೆಯ ಫಲಾನುಭವಿಗಳ ಸಮ್ಮುಖದಲ್ಲಿ ಜನ್ಮದಿನ ಆಚರಿಸಲಾಗುವುದು. ಪ್ರತಿ ಕ್ಷೇತ್ರದಲ್ಲೂ ಯೋಜನಾ ಫಲಾನುಭವಿಗಳನ್ನ ಸೇರಿಸಿ, ಸ್ಥಳೀಯ ಮಟ್ಟದಲ್ಲಿ ಸಣ್ಣ ಕಾರ್ಯಕ್ರಮಕ್ಕೆ ತೀರ್ಮಾನ ಮಾಡಲಾಗಿದೆ. ಈ ವೇಳೆ ಪ್ರತಿ ಕ್ಷೇತ್ರದಲ್ಲೂ ಅನ್ನದಾನಕ್ಕೂ ವ್ಯವಸ್ಥೆ ಮಾಡಲಾಗುತ್ತಿದೆ.

ಯಡಿಯೂರಪ್ಪರ ಆಯುರಾರೋಗ್ಯ ವೃದ್ಧಿಗೆ ಪ್ರಾರ್ಥಿಸಿ, ಪೂಜೆ ಸಲ್ಲಿಸಲು ಕಾರ್ಯಕರ್ತರು ಸಹ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ರೈತರಿಗೆ ರಾಜ್ಯದ ವತಿಯಿಂದ ಹೆಚ್ಚುವರಿಯಾಗಿ 4 ಸಾವಿರ ರೂ. ರೈತ ಸಮ್ಮಾನ್ ನಿಧಿ ನೀಡಿದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಿದ್ಧತೆ ನಡೆದಿದೆ. ಯುವ ಮೋರ್ಚಾ, ಮಹಿಳಾ ಮೋರ್ಚಾ, ರೈತ ಮೋರ್ಚಾ ಕಾರ್ಯಕರ್ತರು ರಕ್ತದಾನ ಶಿಬಿರ, ಸೇವಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಿದ್ದಾರೆ.

ಹೆಜ್ಜೇನು ದಾಳಿಗೆ ಕಾರ್ಮಿಕ ಸಾವು

ವಿರಾಜಪೇಟೆ, ಫೆ.25–ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ಹೆಜ್ಜೇನು ದಾಳಿಯಿಂದ ಮೃತಪಟ್ಟಿರುವ ಘಟನೆ ಸಮೀಪದ ಪೊದುಮನಿ ಗ್ರಾಮದಲ್ಲಿ ನಡೆದಿದೆ.



ಗ್ರಾಮದ ಹೆಚ್.ಸಿ.ಲೋಹಿತ್(32) ಮೃತ ಕಾರ್ಮಿಕ. ತೋಟದಲ್ಲಿ ಕಾಫಿ ಕುಯ್ಯುತ್ತಿದ್ದ ಕಾರ್ಮಿಕರು ಹೆಜ್ಜೇನು ದಾಳಿಗೆ ಓಡಿ ಹೋಗಿದ್ದಾರೆ. ಆದರೆ, ಲೋಹಿತ್ ದಾಳಿಗೆ ಸಿಲುಕಿ ಮೃತಪಟ್ಟಿದ್ದಾರೆ. ಈ ಸಂಬಂಧ ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಗೆ ಸಹೋದರ ಆದೇಶ್ ದೂರು ನೀಡಿದ್ದಾರೆ.

ದಿಕ್ಕು ತಪ್ಪಿಸುವ ವೈದ್ಯಕೀಯ ಜಾಹೀರಾತು

ಕರ್ನಾಟಕ ಸೇರಿ ಇತರೆ ರಾಜ್ಯಗಳ ವಿರುದ್ಧ ಸುಪ್ರೀಂ ಕಿಡಿ

ನವದೆಹಲಿ, ಫೆ.25– ದಿಕ್ಕುತಪ್ಪಿಸುವ ವೈದ್ಯಕೀಯ ಜಾಹೀರಾತುಗಳ ವಿರುದ್ಧ ಕ್ರಮ ಕೈಗೊಳ್ಳದ ಕರ್ನಾಟಕ ಸೇರಿ ಇತರೆ ರಾಜ್ಯ ಸರ್ಕಾರಗಳ ವಿರುದ್ಧ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ.

ಸಾರ್ವಜನಿಕರನ್ನು ದಾರಿತಪ್ಪಿಸುವಂತಹ ಸುಳ್ಳು ಹಾಗೂ ಪರಿಶೀಲಿಸದ ವೈದ್ಯಕೀಯ ಘೋಷಣೆಗಳನ್ನು ತಡೆಗಟ್ಟಲು ಔಷಧ ಮತ್ತು ಮಾಂತ್ರಿಕ ಪರಿಹಾರ (ಆಕ್ಷೇಪಾರ್ಹ ಜಾಹೀರಾತುಗಳು) ಕಾಯಿದೆ–1954 ಅನ್ನು ಅಕ್ಷರಶಃ ಜಾರಿಗೆ ತರಬೇಕು ಎಂದು ನ್ಯಾ.ಅಭಯ್ ಎಸ್ ಓಕಾ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠ ಈ ಸಂಬಂಧ ಸಮಗ್ರ ಅನುಪಾಲನಾ ವರದಿ ಸಲ್ಲಿಸುವಂತೆ ಸೂಚಿಸಿದೆ.



ರಾಜ್ಯ ಸರ್ಕಾರಗಳು ದೂರುಗಳನ್ನಷ್ಟೇ ಅವಲಂಬಿಸುವ ಬದಲು ಕಾಯಿದೆ ಜಾರಿಗೆ ಪೂರ್ವಭಾವಿ ಕ್ರಮ ತೆಗೆದುಕೊಳ್ಳಬೇಕು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಕಾಯಿದೆಯ ಸೆಕ್ಷನ್ 170ರ ಅಡಿಯಲ್ಲಿ ಯಾವುದೇ ಜಾಹೀರಾತುಗಳನ್ನು ರಾಜ್ಯದಲ್ಲಿ ಪ್ರಕಟಿಸಲಾಗಿಲ್ಲ ಎಂದ ಜಾರ್ಖಂಡ್ ಸರ್ಕಾರವನ್ನು ಇದೇ ವೇಳೆ ನಿರ್ದಿಷ್ಟವಾಗಿ ಪ್ರಶ್ನಿಸಿತು. ಸೆಕ್ಷನ್ 170ರ ಅಡಿಯಲ್ಲಿ ಯಾವುದೇ ಔಷಧ ತಯಾರಕರು ಅನುಮತಿಗಾಗಿ ಅರ್ಜಿ ಸಲ್ಲಿಸಿಲ್ಲ ಎಂದು ಜಾರ್ಖಂಡ್ ಸಮರ್ಥಿಸಿಕೊಂಡಿದೆ. ಆದರೆ ಜಾಹೀರಾತುಗಳನ್ನು ಪ್ರಕಟಿಸಲಾಗುತ್ತಿದೆಯೇ ಎಂಬ ಕುರಿತು ಸ್ಪಷ್ಟನೆ ನೀಡಿಲ್ಲ ಎಂದು ಪೀಠ ನುಡಿದಿದೆ. ಅಂತೆಯೇ ನಿಯಮ 170ರ ಉಪಸೆಕ್ಷನ್ 2 ಮತ್ತು 3ರ ಅಡಿಯಲ್ಲಿ ಜಾಹೀರಾತುಗಳನ್ನು ಪ್ರಕಟಿಸಲಾಗುತ್ತಿದೆಯೇ ಎಂಬುದನ್ನು ಗಮನಿಸುವುದು ರಾಜ್ಯ ಸರ್ಕಾರದ ಕರ್ತವ್ಯ ಎಂದು ಹೇಳಿತು.

ಕಾಯಿದೆ ಉಲ್ಲಂಘಿಸುವವರನ್ನು ಪತ್ತೆ ಹಚ್ಚಲು ಪೂರ್ವಭಾವಿ ಕ್ರಮ ಕೈಗೊಳ್ಳದ ಕರ್ನಾಟಕ ಸರ್ಕಾರದ ವಿರುದ್ಧ ಕೂಡ ನ್ಯಾಯಾಲಯ ಅಸಮಾಧಾನ ಹೊರಹಾಕಿತು. ರಾಜ್ಯ ಸರ್ಕಾರದ ಬಳಿ ತನ್ನದೇ ಆದ ಪೊಲೀಸ್ ವ್ಯವಸ್ಥೆ ಮತ್ತು ಸೈಬರ್ ವಿಭಾಗ ಇದ್ದು, ಅಂತಹ ಜಾಹೀರಾತುಗಳ ಮೂಲ ಪತ್ತೆ ಹಚ್ಚುವುದು ತುಂಬಾ ಸುಲಭ ಎಂದಿದೆ. ನಿಯಮ ಉಲ್ಲಂಘಿಸುವವರ ಹೆಸರು ಮತ್ತು ವಿಳಾಸಗಳನ್ನು ಪತ್ತೆ ಹಚ್ಚಿ ಅಫಿಡವಿಟ್ ಸಲ್ಲಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಲಾಯಿತು.

ಕಾಯಿದೆ ಜಾರಿಗೆ ಸಂಬಂಧಿಸಿದಂತೆ ಕೇರಳ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ತಿಳಿಸಿದ ಅಮಿಕಸ್ ಕ್ಯೂರಿ ಹಿರಿಯ ವಕೀಲ ಶಾದನ್ ಫರಾಸತ್, ಪಂಜಾಬ್, ಮಧ್ಯಪ್ರದೇಶ ಸರ್ಕಾರಗಳು ಇತ್ತೀಚೆಗೆ ಅಫಿಡವಿಟ್ ಸಲ್ಲಿಸಿದ್ದು, ಅವುಗಳನ್ನು ಪರಿಶೀಲಿಸಬೇಕಿದೆ. ನೋಟಿಸ್ ಬಳಿಕ ಪುದುಚೇರಿ ಸರ್ಕಾರ ಕೂಡ ಅಫಿಡವಿಟ್ ಸಲ್ಲಿಸಿದೆ ಆಂಧ್ರ ಪ್ರದೇಶ ಅಫಿಡವಿಟ್ ಸಲ್ಲಿಸಿಲ್ಲ ಎಂಬುದನ್ನು ನ್ಯಾಯಾಲಯದ ಗಮನಕ್ಕೆ ತಂದರು.

ರಾಜ್ಯ ಸರ್ಕಾರ ಮತ್ತು ಕೇಂದ್ರಾಡಳಿತ ಪ್ರದೇಶಗಳು ಸಲ್ಲಿಸಿದ ಅನುಪಾಲನಾ ಅಫಿಡವಿಟ್‌ನ್ನು ಪರಿಶೀಲಿಸುವುದಾಗಿ ನ್ಯಾಯಾಲಯ ತಿಳಿಸಿದೆ. ದಿಕ್ಕು ತಪ್ಪಿಸುವ ಜಾಹೀರಾತು ತಡೆಗೆ ಪರಿಣಾಮಕಾರಿ ನಿರ್ಣಯ ಮತ್ತು ಕಾಯಿದೆಯನ್ನು ಜಾರಿಗೆ ತರಲು ಹೆಚ್ಚಿನ ಕ್ರಮ ಕೈಗೊಳ್ಳುವ ಕುರಿತು ಮುಂದಿನ ವಿಚಾರಣೆ ವೇಳೆ ಪರಿಗಣಿಸುವುದಾಗಿ ಹೇಳಿದೆ. ಈ ಸಂಬಂಧ ಕಾಯಿದೆ ಜಾರಿಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಟಿಪ್ಪಣಿ ಸಲ್ಲಿಸುವಂತೆ ನ್ಯಾಯಾಲಯ ಅಮಿಕಸ್ ಕ್ಯೂರಿ ಅವರಿಗೆ ನಿರ್ದೇಶಿಸಿದೆ.

ಶಿವರಾತ್ರಿಗೆ ಖರೀದಿ, ಸಿದ್ಧತೆ ಸಂಭ್ರಮ



ಶಿವಪೂಜೆಗೆ ಬೇಕಿರುವ ಪೂಜಾ ಸಾಮಗ್ರಿಗಳ ಖರೀದಿ ದೃಶ್ಯ



ಲಿಂಗರಾಜು ಎಂಬುವರು ಇಷ್ಟಲಿಂಗ ತಯಾರಿಕೆಯಲ್ಲಿ ತೊಡಗಿರುವುದು.

ಮೈಸೂರು, ಫೆ.25(ಎಸ್‌ಪಿಎನ್)– ಶಿವರಾತ್ರಿ ಪ್ರಯುಕ್ತ ಶಿವಪೂಜೆಗೆ ಬೇಕಿರುವ ಪೂಜಾ ಸಾಮಗ್ರಿಗಳ ಖರೀದಿ ದೃಶ್ಯ ಮೈಸೂರಲ್ಲಿ ಸಾಮಾನ್ಯವಾಗಿತ್ತು.

ಶಿವದಾರ, ರುದ್ರಾಭಿಷೇಕ ಸಾಮಾನು, ರುದ್ರಾಕ್ಷಿ ಹಾರ, ವಿಭೂತಿಗಟ್ಟಿ ಸೇರಿದಂತೆ, ಶಿವವಸ್ತ್ರ ಬಿಲ್ವಪತ್ರೆ ಹಾಗೂ ಉತ್ತಾರಾಣಿ ಕಡ್ಡಿ ಸೇರಿದಂತೆ ಇತರೆ ಪೂಜಾ ಸಾಮಗ್ರಿಗಳ ಖರೀದಿಸಿದ್ದಾರೆ. ಶಿವರಾತ್ರಿ ಹೆಚ್ಚಾಗಿ ಬಿಲ್ವಪತ್ರೆ ತುಂಬೆ ಹೂ ಹೆಚ್ಚಾಗಿ ಉಪಯೋಗಿಸುತ್ತಾರೆ.

ಅಗ್ರಹಾರ ನಿವಾಸಿ ಸರ್ವಮಂಗಳ ಎಂಬುವರು 'ಮೈಸೂರುಮಿತ್ರ'ನಿಗೆ ಮಾಹಿತಿ ನೀಡಿ, ಹಿಂದೂಗಳ ಹಬ್ಬ ಆಚರಣೆಯಲ್ಲಿ ಶಿವರಾತ್ರಿಗೆ ವಿಶೇಷ ಸ್ಥಾನವಿದೆ. ಶಿವರಾತ್ರಿಯಂದು ಭಕ್ತಿಯಿಂದ ಶಿವನನ್ನು ಸ್ಮರಣೆ ಮಾಡುವುದರಿಂದ ದುಃಖಗಳು ದೂರವಾಗಿ. ಶಿವನಿಗೆ ಪ್ರೀತಿ ಪಾತ್ರರಾಗುತ್ತಾರೆಂಬ ನಂಬಿಕೆಯಿದೆ ಹೀಗಾಗಿ ಶಿವರಾತ್ರಿಯಂದು ಭಕ್ತಿಭಾವದಿಂದ ಶಿವನ್ನು ಶುದ್ಧ ಮನಸ್ಸಿನಿಂದ ಉಪವಾಸ ಹಾಗೂ ಜಾಗರಣೆ ಮೂಲಕ ಆಚರಿಸುವುದುಂಟು ಎಂದು ತಿಳಿಸಿದರು.

ಒಮ್ಮೆ ಶಿವರಾತ್ರಿ ವ್ರತವನ್ನು ಆಚರಿಸಿದರೆ, ಸಾವಿರ ಏಕಾದಶಿ ವ್ರತಗಳ ಆಚರಿಸಿದಷ್ಟು ಫಲಗಳು ಹಾಗೂ ಕಾಶಿಯಲ್ಲಿ ಮುಕ್ತಿ ಪಡೆದಷ್ಟೆ ಪುಣ್ಯ ಫಲಗಳು ಸಿಗುತ್ತವೆ ಎಂದು ಶಿವಪುರಾಣದಲ್ಲಿ ಹೇಳಲಾಗಿದೆ. ಹಾಗಾಗಿ ಶಿವಮಂತ್ರ ಜಪಿಸಲು 108 ಪಂಚಮುಖಿ ರುದ್ರಾಕ್ಷಿ ಇರುವ ಜಪಮಣಿಗೆ ತುಂಬ ಬೇಡಿಕೆ, ಅಲ್ಲದೆ, ಸಣ್ಣ ಸಣ್ಣ ಮಕ್ಕಳು ರುದ್ರಾಕ್ಷಿ ಮಾಲೆ, ತುಳಸಿ ಮಾಲೆ ಧರಿಸುವ ವಾಡಿಕೆಯಿದೆ. ಈ ರುದ್ರಾಕ್ಷಿಗಳು ನೇಪಾಳ ಇಲ್ಲವೆ ಮಲೇಷಿಯಾದಲ್ಲಿ ಹೆಚ್ಚಾಗಿ ಬೆಳೆಯಲಾಗುತ್ತದೆ ಎಂದು ಮಾಹಿತಿ ನೀಡಿದರು.

ಇಷ್ಟಲಿಂಗದ ಬಿರುಕು ಮುಚ್ಚಿಸಬೇಕು: ಮೈಸೂರು ಅಗ್ರಹಾರದ ಕುದೇರು ಮಠದ ಇಷ್ಟಲಿಂಗ ತಯಾರಕ ಲಿಂಗರಾಜು ಎಂಬುವರು ಮಾಹಿತಿ ನೀಡಿ, ನಾನಾ ಕಾರಣಗಳಿಗೆ ಇಷ್ಟಲಿಂಗದಲ್ಲಿ ಬಿರುಕು ಮೂಡುತ್ತವೆ. ಇದು ಅನೇಕ ರಾಸಾಯನಿಕ ವಸ್ತುಗಳ ಮಿಶ್ರಣದಿಂದ ಕೂಡಿದ ಹೊದಿಕೆ, ಆವರಣ, ತ್ರಾಟಕಯೋಗ ಸಾಧನೆಗೆ ಸಹಕಾರಿಯಾಗುವಂತೆ ಹೊಳಪು ಸಿದ್ಧಪಡಿಸಲಾಗಿದೆ. ಬಹಳಷ್ಟು ಜನ ಇಷ್ಟಲಿಂಗವು ಕಲ್ಲೆಂದು ಭಾವಿಸಿರುವುದು ಅಜ್ಞಾನದ ಪರಮಾಧಿ ಎಂದರು.

ಇಷ್ಟಲಿಂಗವನ್ನು ಅರಗು, ರಾಳ, ಇಂಗಳಿಕ, ಶಿಲಾರಸ, ರುಮಾಮಸ್ತಿ, ಅಂಜನ, ತುಪ್ಪದ ಕಾಡಿಗೆ, ಗೇರುಎಣ್ಣೆ ಅದವಾಗಿ ಕಾಯಿಸಿ, ಕಾಂತಿಯನ್ನು ತಯಾರಿಸುತ್ತಾರೆ. ಈ ಕಾಂತಶಿಲೆಯಲ್ಲಿ 'ಇಷ್ಟಲಿಂಗ' ತಯಾರಿಸಲಾಗುತ್ತದೆ. ಕೆಲವೊಮ್ಮೆ 'ಇಷ್ಟಲಿಂಗ'ದಲ್ಲಿ ಬಿರುಕು ಮೂಡಿದರೆ, ಅದನ್ನು ಮುಚ್ಚಿಸಿ, ಶಿವರಾತ್ರಿ ಹಬ್ಬದಂದು ಶಿಷ್ಟಾಚಾರದ ಪ್ರಕಾರ ಪೂಜಿಸುವುದು ವಾಡಿಕೆ. ಹಾಗಾಗಿ ಶಿವರಾತ್ರಿಯಲ್ಲಿ ಇಷ್ಟಲಿಂಗ ಬಿರುಕು ಮುಚ್ಚುವುದು, ಹೊಳಪು ಮಾಡಿಸುವರು ಈ ದಿನಗಳಲ್ಲಿ ಹೆಚ್ಚು ಎಂದು ಮಾಹಿತಿ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣ

ಮಾ.7ರಿಂದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ; ಸ್ವತಃ ಸ್ನೇಹಮಯಿ ಕೃಷ್ಣ ವಾದ ಮಂಡನೆ

ಮೈಸೂರು, ಫೆ.25(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣ ಸಂಬಂಧ ಮಾರ್ಚ್ 7 ರಿಂದ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ ಆರಂಭವಾಗಲಿದೆ. ದೂರುದಾರ ಸ್ನೇಹಮಯಿ ಕೃಷ್ಣ ವಕೀಲರ ನೇಮಕ ಮಾಡಿಕೊಳ್ಳದೆ ತಾವೇ ವಾದ ಮಂಡಿಸಲು ನಿರ್ಧರಿಸಿದ್ದಾರೆ.



ಕರಿಕಾಗೆಯನ್ನು ಬಿಳಿಕಾಗೆ ಎಂದು ನ್ಯಾಯಾಲಯಕ್ಕೆ ತೋರಿಸುವೆ. ಕರಿ ಕಾಗೆಗೆ ಬಿಳಿ ಬಣ್ಣ ಬಳಿದು ಸ್ನೇಹಮಯಿ ಕೃಷ್ಣ ಹೇಳಿರುವಂತೆ ಇದು ಕರಿಕಾಗೆಯಲ್ಲ ಬಿಳಿಕಾಗೆ ಎಂದು ಅವಿವೇಕಿ ತನಿಖಾಧಿಕಾರಿಗಳು ನ್ಯಾಯಾಲಯಕ್ಕೆ ಸುಳ್ಳು ವರದಿಯನ್ನು ಸಲ್ಲಿಸಿದ್ದಾರೆ. ಆದರೆ ನನ್ನ ವಾದ ಮಂಡನೆ ವೇಳೆ ಇದು ಬಿಳಿ ಕಾಗೆಯಲ್ಲ; ಕರಿಕಾಗೆ ಎಂದು ನ್ಯಾಯಾಲಯಕ್ಕೆ ಅರ್ಥ ಮಾಡಿಸುತ್ತೇನೆ. ಈ ಮೂಲಕ ಅಪರಾಧ ಕೃತ್ಯ ಎಸಗಿದ ಆರೋಪಿಗಳಿಗೆ ಶಿಕ್ಷೆ ಕೊಡಿಸುತ್ತೇನೆ ಎಂದು ಸ್ನೇಹಮಯಿ ಕೃಷ್ಣ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಲೋಕಾಯುಕ್ತರು ಸಿದ್ದರಾಮಯ್ಯ ಸೇರಿದಂತೆ ನಾಲ್ವರಿಗೆ ಕ್ಲೀನ್‌ಚಿಟ್ ನೀಡಿದ್ದಾರೆ. ಇಷ್ಟಕ್ಕೆ ಈ ಪ್ರಕರಣ ಮುಗಿಯಿತು ಎಂದು ಕೆಲವರು ಭಾವಿಸಿದ್ದರು. ಆದರೆ ಈಗ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುವುದರಿಂದ ಈ ಪ್ರಕರಣ ಇನ್ನು ಹಲವು ತಿರುವು ಪಡೆಯಲಿದೆ.

ಈ ಕುರಿತ 'ಮೈಸೂರು ಮಿತ್ರ'ನಿಗೆ ವಿವರ ನೀಡಿದ ಅವರು, ವಕೀಲರ ನೆರವು ಪಡೆಯದೆ ನಾನೇ ವಾದ ಮಾಡುವುದಾಗಿ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ್ದೆ. ಇದಕ್ಕೆ ನ್ಯಾಯಾಲಯ ಸಮ್ಮತಿಸಿದೆ ಎಂದರು.

ಮಾರ್ಚ್ 7ರಿಂದ ನ್ಯಾಯಾಲಯದಲ್ಲಿ ವಿಚಾರಣೆ ನಡೆಯಲಿದೆ. ಈ ಸಂದರ್ಭದಲ್ಲಿ ಆರೋಪ ಸಾಬೀತು ಮಾಡಲು ನನ್ನಲ್ಲಿರುವ ಸಾಕ್ಷ್ಯಗಳನ್ನು ನ್ಯಾಯಾಲಯದಲ್ಲಿ ಮಂಡಿಸುವೆ. ಜೊತೆಗೆ ಹಲವು ದಾಖಲಾತಿಗಳನ್ನು ಕೂಡ ಸಲ್ಲಿಸುವೆ ಎಂದರು.

ಮೈಸೂರಿನ ಕೆಸರೆ ಸರ್ವೆ ನಂಬರ್ 364ರಲ್ಲಿ 3.16 ಎಕರೆಯನ್ನು ಭೂಸ್ವಾಧೀನದಿಂದ ಕೈ ಬಿಡುವಂತೆ ಸಲ್ಲಿಸಿದ ಮನವಿ ಪತ್ರದಲ್ಲಿ ಡಿಸಿಎಂ ಎಂಬ ಉಲ್ಲೇಖವಿದೆ ಆಗ ಉಪ ಮುಖ್ಯಮಂತ್ರಿ ಆಗಿದ್ದ ಸಿದ್ದರಾಮಯ್ಯ ಈ ಪ್ರಕರಣದಲ್ಲಿ ಪ್ರಭಾವ ಬೀರುವುದಕ್ಕೆ ಇದಕ್ಕಿಂತ ಇನ್ನೇನು ಸಾಕ್ಷಿ ಬೇಕು ಎಂದು ಸ್ನೇಹಮಯಿ ಕೃಷ್ಣ ಪ್ರಶ್ನಿಸಿದರು.

ಲೋಕಾಯುಕ್ತರು ಸಲ್ಲಿಸಿರುವ ವರದಿಯಲ್ಲಿ ನಾನು ಮಾಡಿರುವ ಆರೋಪಕ್ಕೆ ಸಾಕಷ್ಟು ಸಾಕ್ಷ್ಯಾಧಾರಗಳಿವೆ. ಆದರೆ ಸಿದ್ದರಾಮಯ್ಯ ಸೇರಿದಂತೆ ನಾಲ್ವರು ಆರೋಪಿಗಳು ಅಪರಾಧ ಕೃತ್ಯ ಎಸಗಿದ್ದಾರೆ ಎಂಬುದಕ್ಕೆ ಸಾಕ್ಷ್ಯಾಧಾರಗಳ ಕೊರತೆ ಇದೆ ಎಂದು ತನಿಖಾಧಿಕಾರಿ ಟಿ.ಜೆ.ಉದೇಶ್ ಹೇಳಿದ್ದಾರೆ.

ಲೋಕಾಯುಕ್ತ ತನಿಖಾಧಿಕಾರಿ ನ್ಯಾಯಾಲಯದಲ್ಲಿ ಸಲ್ಲಿಸಿರುವ ಅಂತಿಮ ವರದಿ ನೋಡಿದಾಗ ಇದು ಇಂಡಿಯನ್ ಪೊಲೀಸ್ ಸರ್ವಿಸ್ ಅಲ್ಲ ಇದು ಇಲ್ಲೀಗಲ್ ಪೊಲಿಟಿಷಿಯನ್ ಸರ್ವಿಸ್ ಎಂಬ ಹೊಸ ವ್ಯಾಖ್ಯಾನ ಕೊಟ್ಟಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಲೇವಡಿ ಮಾಡಿದ್ದಾರೆ.

10.89 ಕೋಟಿ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ

ಪಂಚ ಗ್ಯಾರಂಟಿ ಯೋಜನೆಗಳು ವಿಶ್ವಕ್ಕೆ ಮಾದರಿ: ಡಾ.ಯತೀಂದ್ರ



ಅಭಿವೃದ್ಧಿ ಕಾಮಗಾರಿಗಳಿಗೆ ಎಂಎಲ್‌ಸಿ ಡಾ.ಯತೀಂದ್ರ ಭೂಮಿ ಪೂಜೆ ನೆರವೇರಿಸಿದರು.

ತಿ.ನರಸೀಪುರ, ಫೆ.25– ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಬಡವರಿಗೆ ಅನುಕೂಲವಾಗಿದ್ದು, ಪಂಚ ಗ್ಯಾರಂಟಿ ಯೋಜನೆಗಳು ವಿಶ್ವಕ್ಕೆ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ತಿಳಿಸಿದರು.

ವರುಣ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ 10.89 ಕೋಟಿ ರೂ. ವೆಚ್ಚದಲ್ಲಿ ಹಮ್ಮಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳಿಗೆ ತಾಲೂಕಿನ ಇಂಡವಾಳು ಗ್ರಾಮದಲ್ಲಿ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ತಿ.ನರಸೀಪುರ ತಾಲೂಕಿನಲ್ಲಿ 10.89 ಲಕ್ಷ ರೂ.ಗಳ ಕಾಮಗಾರಿ ನಡೆಯುತ್ತಿದೆ. ವರುಣ ಕ್ಷೇತ್ರದ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಳೆದ ವರ್ಷ 500 ಕೋಟಿ ರೂ.ಗಳ ಕಾಮಗಾರಿಗೆ ಚಾಲನೆ ನೀಡಿದ್ದು, ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವ ಆರಂಭವಾಗಿದೆ ಎಂದರು.

ನಿರೀಕ್ಷೆಗೂ ಮೀರಿದ ಅಭಿವೃದ್ಧಿ ಕಾಮಗಾರಿ ಮಾಡುತ್ತಿದ್ದರೂ, ವಿಪಕ್ಷಗಳು ಟೀಕೆ ಮಾಡುವುದರಲ್ಲಿ ನಿರತವಾಗಿವೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ರಾಜ್ಯದ ಬೊಕ್ಕಸ ಖಾಲಿ ಮಾಡಿ ಈಗ ಹಣದ ಕೊರತೆ ತಂದಿಟ್ಟಿದ್ದಾರೆ ಎಂದು ಅಪಪ್ರಚಾರದಲ್ಲಿ ನಿರತರಾಗಿದ್ದಾರೆ. ಗ್ಯಾರಂಟಿ ಯೋಜನೆಗಳ ಯಶಸ್ಸು ವಿಪಕ್ಷಗಳ ಹೊಟ್ಟೆ ಕಿಚ್ಚಿಗೆ ಕಾರಣವಾಗಿದ್ದು, ಗ್ಯಾರಂಟಿ ಯೋಜನೆಗಾಗಿಯೇ ನಮ್ಮ ಸರ್ಕಾರ ಪ್ರತಿ ವರ್ಷ 50ರಿಂದ 60 ಸಾವಿರ ಕೋಟಿ ರೂ.ಗಳನ್ನು ವೆಚ್ಚ ಮಾಡುತ್ತಿದ್ದು, ಬಡವರಿಗೆ, ಫಲಾನುಭವಿಗಳಿಗೆ ನೇರವಾಗಿ ಹಣ ಜಮಾವಣೆ ಮಾಡುತ್ತಿದ್ದೇವೆ. ಅಲ್ಲದೇ ರಾಜ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಬಜೆಟ್‌ನಲ್ಲಿ ಅಗತ್ಯ ಹಣ ಮೀಸಲಿಟ್ಟಿದ್ದೇವೆ. ಹಾಗಾಗಿ ಅಭಿವೃದ್ಧಿ ಕಾಮಗಾರಿಗಳು ನಿರಂತರವಾಗಿ ನಡೆಯುತ್ತಿವೆ. ಸರ್ಕಾರದ ಬಳಿ ಸಾಕಷ್ಟು ಹಣವಿದ್ದು, ಸರ್ಕಾರದ ಬೊಕ್ಕಸ ಖಾಲಿಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿಗಳೇ ಆರ್ಥಿಕ ಮಂತ್ರಿಯಾಗಿರುವುದರಿಂದ ರಾಜ್ಯದ ಆರ್ಥಿಕತೆಯನ್ನು ಉತ್ತಮ ಸ್ಥಿತಿಯಲ್ಲಿಟ್ಟು ಅಧಿಕಾರ ನಡೆಸುತ್ತಿದ್ದಾರೆ. ಹೀಗಾಗಿ ಗ್ಯಾರಂಟಿ ಯೋಜನೆಗಳಿಂದ ಬಡವರ ಜೀವನಮಟ್ಟ ಸುಧಾರಣೆಯಾಗಿದೆ. ಕೇಂದ್ರ ಸರ್ಕಾರ ಎಲ್ಲಾ ವಸ್ತುಗಳ ಬೆಲೆಗಳನ್ನು ಏರಿಕೆ ಮಾಡಿದ್ದರಿಂದ ಜನರ ಜೀವನ ದುಸ್ತರವಾಗಿತ್ತು. ಆದರೆ ನಮ್ಮ ಸರ್ಕಾರ ಜಾರಿಗೆ ತಂದ ಪಂಚ ಗ್ಯಾರಂಟಿಗಳಿಂದ ಬಡಜನತೆ ನಿರಾಳವಾಗಿ ಬದುಕು ಸಾಗಿಸಲು ಸಾಧ್ಯವಾಗಿದೆ ಎಂದರು.

ಶಾಸಕರಿಂದ ಕೆಲವರ ಪರಿಗಣನೆ: ಆಕ್ರೋಶ..!; ಕಾರ್ಯಕ್ರಮದಲ್ಲಿ ಡಾ.ಯತೀಂದ್ರ ಅವರು ಕೆಲವರನ್ನು ಮಾತ್ರವೇ ಪರಿಗಣಿಸುತ್ತಿದ್ದಾರೆಂದು ಕೋಪಗೊಂಡ ಕಿರಗಸೂರು ಗ್ರಾಪಂ ಮಾಜಿ ಉಪಾಧ್ಯಕ್ಷ ಮಹದೇವ ಯಾವುದೇ ಕಾರ್ಯಕ್ರಮದಲ್ಲಿ ಕೇವಲ ನಾಲ್ಕೇ ಜನರನ್ನು ಪರಿಗಣಿಸಲಾಗುತ್ತಿದೆ. ಯಾವುದೇ ಕಾಮಗಾರಿಗಳು, ವರ್ಗಾವಣೆಗೆ ಸಂಬಂಧಿಸಿದಂತೆ ಇವರ ಮಾತನ್ನೇ ಪರಿಗಣಿಸಲಾಗುತ್ತಿದೆ. ಬೇರೆಯವರಾರು ಬೇಡವೇ ಎಂದು ಪ್ರಶ್ನಿಸಿದರು. ಕೇವಲ ನಾಲ್ವರು ಮಾತ್ರವೇ ಚುನಾವಣೆಯಲ್ಲಿ ಪಕ್ಷದ ಪರ ಕೆಲಸ ಮಾಡಿಲ್ಲ. ನಾವು ಕೂಡ ಪಕ್ಷದ ಪ್ರಾಮಾಣಿಕ ಕಾರ್ಯಕರ್ತರೇ. ಹಾಗಾಗಿ ಪಕ್ಷಕ್ಕಾಗಿ ದುಡಿದಿರುವ ಎಲ್ಲರನ್ನೂ ಸರಿ ಸಮಾನವಾಗಿ ಕಾಣಬೇಕೆಂದು ಮನವಿ ಮಾಡಿದರು.

ಈ ವೇಳೆ ಎಪಿಎಂಸಿ ಮಾಜಿ ಅಧ್ಯಕ್ಷ ಎನ್.ಅನಿಲ್ ಕುಮಾರ್, ತಾಲೂಕು ಕುರುಬರ ಸಂಘದ ಅಧ್ಯಕ್ಷ ಮನ್ನೇಹುಂಡಿ ಮಹೇಶ್, ಮಾಜಿ ಅಧ್ಯಕ್ಷ ಪ್ರಶಾಂತ್ ಬಾಬು, ಜಿಪಂ ಮಾಜಿ ಸದಸ್ಯ ಕೆ.ಮಹದೇವ್, ಹೊಸಕೋಟೆ ಗ್ರಾಪಂ ಅಧ್ಯಕ್ಷ ನಂದಿನಿ ರಾಜೇಂದ್ರ, ಮಾಜಿ ಅಧ್ಯಕ್ಷ ಆನಂದ್, ಮಹಿಳಾ ಘಟಕದ ಅಧ್ಯಕ್ಷೆ ಭಾಗಮ್ಮ, ಪುರಸಭಾ ಸದಸ್ಯರಾದ ಸಿ.ಪ್ರಕಾಶ್, ಎನ್.ಸೋಮು, ತಾಪಂ ಮಾಜಿ ಸದಸ್ಯ ರಮೇಶ್, ಕಿರಗಸೂರು ಗ್ರಾಪಂ ಮಾಜಿ ಉಪಾಧ್ಯಕ್ಷ ಮಹಾದೇವ, ತಾಪಂ ಮಾಜಿ ಅಧ್ಯಕ್ಷ ಅಂದಾನಿ, ಕುಪ್ಯ ಗ್ರಾಪಂ ಅಧ್ಯಕ್ಷ ಗವಿ, ಮಾಜಿ ಅಧ್ಯಕ್ಷ ರಘು, ಇಂಡವಾಳು ಲೋಕೇಶ್, ಬಸವರಾಜು, ಹೊನ್ನಯ್ಯ, ಕಂಬಯ್ಯ, ಯಡದೊರೆ ಗಜ್ಜಿ, ತುಂಬಲ ಗ್ರಾಪಂ ಅಧ್ಯಕ್ಷ ರಾಮ ನಂಜಯ್ಯ, ಆರ್.ಪಿ.ಹುಂಡಿ ನಾಗರಾಜು, ಪಿಕಾರ್ಡ್ ಬ್ಯಾಂಕ್ ನಿರ್ದೇಶಕರಾದ ಎನ್.ಎನ್.ಮಹದೇವಸ್ವಾಮಿ, ಎನ್.ಲಿಂಗಪ್ಪಾಜಿ, ಎಪಿಎಂಸಿ ಮಾಜಿ ಸದಸ್ಯ ಮಾವಿನ ಹಳ್ಳಿ ಪುಟ್ಟಸ್ವಾಮಿ, ಗಗ್ಗರಿ ಬಸವರಾಜು, ಕೆಆರ್‌ಐಡಿಎಲ್ ದಿಲೀಪ್, ಉಪ ತಹಸೀಲ್ದಾರ್ ತುಕಾರಾಂ, ಆರ್‌ಐ ಮಹೇಂದ್ರ ಸೇರಿದಂತೆ ಮತ್ತಿತರರಿದ್ದರು.

ರಾಜ್ಯ ಬ್ಯಾಂಕಿಗೂ ನೀವೇ ಉಪಾಧ್ಯಕ್ಷರು..!




ಮಹದೇವಣ್ಣ

ಕಾರ್ಯಕ್ರಮಕ್ಕೂ ಮುನ್ನಾ ವೇದಿಕೆಯಲ್ಲಿದ್ದವರಿಗೆ ಸ್ವಾಗತ ಕೋರುತ್ತಿದ್ದ ಎಂಎಲ್‌ಸಿ ಡಾ.ಯತೀಂದ್ರ ಅವರು ಕೆಂಪಯ್ಯನಹುಂಡಿ ಮಹದೇವಣ್ಣ ಅವರನ್ನು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಹದೇವಣ್ಣನವರೇ ಎನ್ನುತ್ತಿದ್ದಂತೆ ಪಕ್ಕದಲ್ಲಿ ಕುಳಿತವರು ಇನ್ನೂ ಆಯ್ಕೆಯಾಗಿಲ್ಲ ಸರ್ ಎಂದರು. 'ಹೌದಾ ಅವರೇ ಅಧ್ಯಕ್ಷರಾಗುತ್ತಾರೆ. ತಾಲೂಕು ಪಿಎಲ್‌ಡಿ ಬ್ಯಾಂಕ್‌ಗೆ ಅಧ್ಯಕ್ಷರಾಗಿ ಹಾಗೂ ರಾಜ್ಯ ಬ್ಯಾಂಕ್‌ಗೆ ಉಪಾಧ್ಯಕ್ಷರಾಗಿಯೂ ಅವರೇ ಆಯ್ಕೆಯಾಗುತ್ತಾರೆ ಬಿಡಿ' ಎಂದು ಯತೀಂದ್ರ ಭವಿಷ್ಯ ನುಡಿಯುತ್ತಿದ್ದಂತೆ ಮಹದೇವಣ್ಣರವರ ಮುಖದಲ್ಲಿ ಮಂದಹಾಸ ಮೂಡಿತು. ಕಾರ್ಯಕರ್ತರು ಅಭಿಮಾನಿಗಳು ಜೈಕಾರ ಹಾಕಿದರು.

ಇಂದು ಶ್ರೀಕಂಠೇಶ್ವರನ ಸನ್ನಿಧಿಯಲ್ಲಿ 'ಮಹಾ ಶಿವರಾತ್ರಿ'

● ಸಕಲ ಸಿದ್ಧತೆ ಪೂರ್ಣ ● ಸ್ವಾಮಿಗೆ ವಿಶೇಷ ಪೂಜೆ



ನಂಜನಗೂಡು, ಫೆ.25– ದಕ್ಷಿಣ ಕಾಶಿ ನಂಜನಗೂಡಿನ ಶ್ರೀಕಂಠೇಶ್ವರ ದೇವಾಲಯದಲ್ಲಿ ಫೆ.26ರಂದು ನಡೆಯುವ ಮಹಾಶಿವರಾತ್ರಿ ಆಚರಣೆಗೆ ಸಿದ್ಧತೆ ಪೂರ್ಣಗೊಂಡಿದೆ.

ಶಿವರಾತ್ರಿ ಪ್ರಯುಕ್ತ ಬುಧವಾರ ಮುಂಜಾನೆ 4 ಗಂಟೆಗೆ ದೇವರಿಗೆ ಉಷಾ ಕಾಲದ ಪೂಜೆ, ಕ್ಷೀರಾಭಿಷೇಕ, ಫಲಪಂಚಾಮೃತ ಅಭಿಷೇಕ, ಮಹಾನ್ಯಾಸ ಪೂರಕ ಏಕದಶವಾರ ರುದ್ರಾಭಿಷೇಕ, ಶಿವಸಹಸ್ರನಾಮ, ಮಹಾಮಂಗಳಾರತಿ ನೆರವೇರಲಿದೆ ಎಂದು ದೇವಾಲಯದ ಆಗಮಿಕ ನಾಗಚಂದ್ರ ದೀಕ್ಷಿತ್ ತಿಳಿಸಿದರು.

ಶಿವನಿಗೆ ಪ್ರಾತಃಕಾಲ, ಮಧ್ಯಾಹ್ನ, ಸಂಗಮ ಕಾಲ ಕ್ಷೀರಾಭಿಷೇಕ, ಫಲ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ನಡೆಯಲಿದೆ. ಸಂಜೆ 6ಕ್ಕೆ ಮೊದಲನೇ ಜಾವದ ಪೂಜೆ, ರಾತ್ರಿ 9ಕ್ಕೆ 2ನೇ ಜಾವದ ಪೂಜೆ, ರಾತ್ರಿ 12ಕ್ಕೆ 3ನೇ ಪೂಜೆ, ಮಧ್ಯರಾತ್ರಿ 3 ಗಂಟೆಗೆ 4ನೇ ಜಾವದ' ಪೂಜೆಗಳು ನಡೆಯಲಿವೆ. ಗುರುವಾರ ಬೆಳಗ್ಗೆ 6 ಗಂಟೆಗೆ ಸ್ವಾಮಿಯ ಉತ್ಸವ ಮೂರ್ತಿಯೊಂದಿಗೆ ಬೆಳ್ಳಿ ಶೈಲಾಸ ವಾಹನ ಉತ್ಸವ ನಡೆಸುವ ಮೂಲಕ ವಿಶೇಷ ಪೂಜೆ ಮುಗಿಯಲಿವೆ ಎಂದು ತಿಳಿಸಿದರು.

ದೇವಾಲಯದ ಇಓ ಜಗದೀಶ್ ಕುಮಾರ್ ಮಾತನಾಡಿ, 'ಶಿವರಾತ್ರಿ ಜಾಗರಣೆಗಾಗಿ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸುವುದರಿಂದ ಕುಡಿಯುವ ನೀರು ಹಾಗೂ ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ. ದೇವಾಲಯದ ಸುತ್ತಮುತ್ತ 26 ಸಿಸಿ ಟಿವಿ ಕ್ಯಾಮರಾ ಅಳವಡಿಸಲಾಗಿದೆ. ಪ್ರವೇಶ ದ್ವಾರದಲ್ಲಿ ನೂಕುನುಗ್ಗಲು ನಿಯಂತ್ರಿಸಲು ತಾತ್ಕಾಲಿಕ ಕಬ್ಬಿಣದ ತಡೆಗೋಡೆ ಅಳವಡಿಸಲಾಗುತ್ತಿದೆ. ಬೆಂಗಳೂರಿನ ಉದ್ಯಮಿ ವೆಂಕಟೇಶ ರೆಡ್ಡಿ ಕುಟುಂಬ ಹಾಗೂ ತಾಂಡವಪುರದ ನ್ಯಾಯತಿ ಸ್ಟೀಲ್ ನವೀನ್ ಕುಮಾರ್ ಗುಪ್ತ ಸೇವಾರ್ಥ ಹಾಗೂ ದೇವಾಲಯದಿಂದ ಬೆಳಗ್ಗೆಯಿಂದ ರಾತ್ರಿ 11 ಗಂಟೆವರೆಗೆ 5 ಕ್ವಿಂಟಾಲ್ ಕೇಸರಿ ಬಾತ್ ಹಾಗೂ ಖಾರಬಾತ್ ವಿತರಣೆ ಮಾಡಲಾಗುತ್ತದೆ ಎಂದರು. ಇದೇ ವೇಳೆ ದೇವಾಲಯವನ್ನು ವಿಶೇಷ ಹೂ, ಬಣ್ಣದ ಬಟ್ಟೆ ಹಾಗೂ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿದೆ. ಭಕ್ತರ ಮೂಲಸೌಲಭ್ಯಕ್ಕೆ ಆದ್ಯತೆ ನೀಡಲಾಗಿದೆ. ದೇವಾಲಯದ ಹೊರಾಂಗಣದಲ್ಲಿ ಸಿದ್ಧಪಡಿಸಲಾಗಿರುವ ವಿಶಾಲ ವೇದಿಕೆಯಲ್ಲಿ ಬೆಳಗಿನ ಜಾವದವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಭಕ್ತರು ಶಿವಕಥೆ, ಭಕ್ತಗೀತೆ ಕೇಳುತ್ತಾ ಶಿವಸ್ಮರಣೆ, ಜಾಗರಣೆ ಆಚರಿಸಬಹುದು ಎಂದರು.

ವಿಜೃಂಭಣೆಯ ಶ್ರೀಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ



ಶ್ರೀಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಸರಗೂರು, ಫೆ.25– ತಾಲೂಕಿನ ದಡದಹಳ್ಳಿಯಲ್ಲಿ ಶ್ರೀಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಜಾತ್ರೆ ಅಂಗವಾಗಿ ಸೋಮವಾರ ರಾತ್ರಿ ದಡದಹಳ್ಳಿ ಮಠದ ಷಡಕ್ಷರಿ ಸ್ವಾಮೀಜಿ ಸಾನ್ನಿಧ್ಯದಲ್ಲಿ ದೇವರಿಗೆ ವಿಶೇಷ ಪೂಜೆ ನಡೆಸಲಾಯಿತು. ಶ್ರೀಮಹದೇಶ್ವರ ಸ್ವಾಮಿ ದೇವಸ್ಥಾನ ಮತ್ತು ಗ್ರಾಮವನ್ನು ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ಮಂಗಳವಾರ ಮುಂಜಾನೆಯಿಂದಲೇ ಮಹದೇಶ್ವರರಿಗೆ ಹೋಮ–ಹವನ, ರುದ್ರಾಭಿಷೇಕ ವಿಶೇಷ ಪೂಜೆ ಸಲ್ಲಿಸಲಾಯಿತು. ಇದೇ ವೇಳೆ ಭಕ್ತರು ನದಿಗೆ ತೆರಳಿ ಗಂಗೆ ಪೂಜೆ ನಡೆಸಿ ದೇವರ ಉತ್ಸವಮೂರ್ತಿಯನ್ನು ಹೂಗಳಿಂದ ಅಲಂಕರಿಸಿ ವೀರಗಾಸೆ ಕುಣಿತ, ವಾದ್ಯಗೋಷ್ಠಿ ಸತ್ತಿಗೆ ಸೂರಪಾನಿಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಉತ್ಸವ ಮೂರ್ತಿ ದೇವಾಲಯಕ್ಕೆ ಆಗಮಿಸಿದ ಬಳಿಕ ರಥದಲ್ಲಿ ಪ್ರತಿಷ್ಠಾಪಿಸಿ ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಲಾಯಿತು. ಈ ವೇಳೆ ಸಾವಿರಾರು ಭಕ್ತರು ದೇವರ ದರ್ಶನ ಪಡೆದು ಪುನೀತರಾದರು. ನಂತರ ಕೊಂಡೋತ್ಸವಕ್ಕೆ ವಿಶೇಷ ಪೂಜೆ ಸಲ್ಲಿಸಿ ಚಾಲನೆ ನೀಡಲಾ ಯಿತು. ಈ ವೇಳೆ ನೂರಾರು ಭಕ್ತರು ಕೆಂಡದ ಮೇಲೆ ನಡೆದು ಹರಕೆ ತೀರಿಸಿದರು. ಭಕ್ತರಿಗೆ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಚನ್ನಬಸವದೇವರು, ಮುಖಂಡರಾದ ಡಿ.ಎಸ್.ಜಯಣ್ಣ, ಡಿ.ಮಲ್ಲಣ್ಣ, ಡಿ.ಸಿ.ಮಹೇಶ್, ಡಿ.ಎಸ್.ಉಮೇಶ್, ಡಿ.ಎಂ. ಸಿದ್ದಪ್ಪ, ವೀರಭದ್ರಪ್ಪ, ಮಲ್ಲಿಕಾರ್ಜುನ, ಡಿ.ಪಿ.ನಟರಾಜು, ಡಿ.ಪಿ.ಪ್ರಕಾಶ್, ಪುಟ್ಟನಾಯಕ, ಗುರುಪಾದ, ಡಿ.ಎಸ್.ಇಂದ್ರ ಸೇರಿದಂತೆ ಇನ್ನಿತರರಿದ್ದರು.

ಕ್ಯಾಷಿಯರ್ ವಿರುದ್ಧ ದೂರು ದಾಖಲು

ನಂಜನಗೂಡು, ಫೆ.25– ಬ್ಯಾಂಕ್‌ಗೆ ಲಕ್ಷಾಂತರ ರೂ. ಕಟ್ಟದೆ ಪರಾರಿಯಾಗಿರುವ ಬಾರ್ ಅಂಡ್ ರೆಸ್ಟೋರೆಂಟ್ ಕ್ಯಾಷಿಯರ್ ವಿರುದ್ಧ ನಗರದ ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ನಗರದ ಎಸ್‌ಎಲ್‌ವಿ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಕ್ಯಾಷಿಯರ್ ಆಗಿ ಕೆಲಸ ಮಾಡುತ್ತಿದ್ದ ಗಾಜನೂರು ಮೂಲದ ಮಹದೇವ.ಎಸ್ ಎಂಬಾತ ಬಾರ್‌ನಲ್ಲಿ ವ್ಯಾಪಾರ ಮಾಡಿದ್ದ 6,70,900 ರೂ.ಗಳನ್ನು ಬ್ಯಾಂಕಿಗೆ ಕಟ್ಟುವ ಬದಲು ಹಣದೊಂದಿಗೆ ಪರಾರಿಯಾಗಿದ್ದಾನೆ. ಆದ್ದರಿಂದ ಆತನನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಂಡು ಹಣ ವಾಪಸ್ ಕೊಡಿಸಿಕೊಡುವಂತೆ ಬಾರ್ ಮ್ಯಾನೇಜರ್ ಆನಂದ್ ನಂಜನಗೂಡು ಪಟ್ಟಣ ಠಾಣೆಗೆ ದೂರು ನೀಡಿದ್ದು, ಈ ಸಂಬಂಧ ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು ನಾಪತ್ತೆಯಾಗಿರುವ ಮಹದೇವನ ಪತ್ತೆಗೆ ಮುಂದಾಗಿದ್ದಾರೆ.

ಹುಲ್ಲೇನಹಳ್ಳಿ ಡೈರಿ ಕಾರ್ಯದರ್ಶಿಗೆ ಪ್ರೋತ್ಸಾಹ ನೀಡಿದ

ಅಧಿಕಾರಿಗಳ ಕ್ರಮ ಖಂಡಿಸಿ ರೈತ ಸಂಘದಿಂದ ಪ್ರತಿಭಟನೆ



ಹುಣಸೂರಿನಲ್ಲಿ ರೈತ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಹುಣಸೂರು, ಫೆ.25– ತಾಲೂಕಿನ ಹುಲ್ಲೇನಹಳ್ಳಿಯ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಾರ್ಯದರ್ಶಿ ಅಕ್ರಮ ಮತ್ತು ಅನ್ಯಾಯಗಳ ವಿರುದ್ಧ ಕ್ರಮ ಕೈಗೊಂಡರೂ ಅವರಿಗೆ ಪ್ರೋತ್ಸಾಹ ನೀಡಿದ ಅಧಿಕಾರಿಗಳ ಕ್ರಮ ಖಂಡಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಹುಣಸೂರಿನ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಜಿಲ್ಲಾ ರೈತ ಸಂಘದ ಮಹಿಳಾಧ್ಯಕ್ಷೆ ಉಮಾದೇವಿ ಮಾತನಾಡಿ, ಹುಲ್ಲೇನಹಳ್ಳಿ ಡೈರಿ ಹಿಂದಿನ ಕಾರ್ಯದರ್ಶಿ ಸುಂದ್ರಮ್ಮನವರು ಕಳೆದ 18 ವರ್ಷಗಳಿಂದ ಸರ್ವಾಧಿಕಾರಿಯಂತೆ ಆಡಳಿತ ನಡೆಸಿ ಸಾಕಷ್ಟು ಅನ್ಯಾಯ ಎಸಗಿದ್ದಾರೆ. ಇದನ್ನು ಖಂಡಿಸಿ ಹೊಸದಾಗಿ ಆಯ್ಕೆಯಾದ ಆಡಳಿತ ಮಂಡಳಿ ಅವರನ್ನು ತರಾಟೆ ತೆಗೆದುಕೊಂಡು ಅವರನ್ನು 4 ತಿಂಗಳ ಹಿಂದೆ ಅಮಾನತುಗೊಳಿಸಿ ನೂತನ ಕಾರ್ಯದರ್ಶಿಯನ್ನು ನೇಮಕ ಮಾಡಲಾಯಿತು. ಈ ವೇಳೆ ಸುಂದ್ರಮ್ಮ ಕಚೇರಿಯಲ್ಲಿದ್ದ ಬೀರು, ದಾಖಲಾತಿಗಳು ಇಟ್ಟಿರುವ ಬಾಕ್ಸ್‌ನ ಬೀಗ ಕೊಟ್ಟಿರಲಿಲ್ಲ. ಈ ಸಂಬಂಧ ಆಡಳಿತ ಮಂಡಳಿ ಸಹಕಾರ ಸಂಘಗಳ ಸಹಾಯಕ ನಿಬಂಧಕರಿಗೆ ದೂರು ನೀಡಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರೂ, ಅಧಿಕಾರಿಗಳು ಕಾರ್ಯದರ್ಶಿ ಅಮಾನತು ಆದೇಶಕ್ಕೆ ತಡೆ ನೀಡಿ ಅವರನ್ನೇ ಬೆಂಬಲಿಸಿ ಆಡಳಿತ ಮಂಡಳಿಗೆ ವಿರೋಧವಾಗಿ ನಡೆದುಕೊಂಡರು. ಈ ಸಂಬಂಧ ಮೈಸೂರಿನ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರಿಗೂ ದೂರು ನೀಡಿ ಸಂಘದ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಅಲ್ಲಿಯೂ ಸುಂದ್ರಮ್ಮನವರನ್ನು ಬೆಂಬಲಿಸಿ ಅವರನ್ನೇ ಮುಂದುವರೆಸಲು ಸೂಚಿಸಲಾಯಿತು.

ಇದರಿಂದ ಬೇಸತ್ತ ನೂತನ ಅಧ್ಯಕ್ಷೆ ಪುಟ್ಟತಾಯಮ್ಮ ಹುಣಸೂರಿನ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಗೆ ಆಗಮಿಸಿ ನಡೆದಿರುವ ಅನ್ಯಾಯದ ಬಗ್ಗೆ ಪ್ರಶ್ನಿಸಿದಾಗ ಅಧಿಕಾರಿಗಳು ಅವರನ್ನು ತೇಜೋವಧೆ ಮಾಡಿ ಅವಮಾನಿಸಿದ್ದಾರೆ. ಇದು ಒಬ್ಬ ಮಹಿಳಾ ಅಧ್ಯಕ್ಷರಿಗೆ ಮಾಡಿದ ಅವಮಾನ. ಈ ಅನ್ಯಾಯ ಖಂಡಿಸಿ ನ್ಯಾಯಕ್ಕಾಗಿ ಒತ್ತಾಯಿಸಿ ಇಂದು ಹುಣಸೂರಿನ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು.

ಜಿಲ್ಲಾಧ್ಯಕ್ಷ ರಫಿಉಲ್ಲಾ ಮಾತನಾಡಿ, ಈ ಹಿಂದಿನ ಕಾರ್ಯದರ್ಶಿ ಸುಂದ್ರಮ್ಮ ಅವರನ್ನು ಅಮಾನತು ಮಾಡಿ ನೂತನ ಕಾರ್ಯದರ್ಶಿ ಅವರನ್ನು ನೇಮಕ ಮಾಡಿದ್ದರೂ, ಸುಂದ್ರಮ್ಮ ಅವರು ದಾಖಲಾತಿಗಳು ಇರುವ ಬೀರುವಿನ ಬೀಗ ನೀಡದೇ ಹೋಗಿರುವುದರಿಂದ ಸದಸ್ಯರ ಹಾಲಿನ ಹಣ ನೀಡಲು ತೊಂದರೆಯಾಗಿದೆ. ಅಲ್ಲದೇ ಸುಂದ್ರಮ್ಮ ಅವರು ಸಾಕಷ್ಟು ಅವ್ಯವಹಾರ ನಡೆಸಿದ್ದಾರೆ. ಸೂಕ್ತ ತನಿಖೆ ನಡೆಸಿದರೇ ಅವು ಹೊರ ಬೀಳಲಿವೆ. ಹೀಗಾಗಿ ತಾಲೂಕು, ಜಿಲ್ಲಾ ಸಹಕಾರ ಸಂಘಗಳ ಅಧಿಕಾರಿಗಳು ಆಗಿರುವ ಅನ್ಯಾಯ ಸರಿಪಡಿಸಿ ಸುಂದ್ರಮ್ಮ ಅವರ ವಿರುದ್ಧ ಕ್ರಮ ಕೈಗೊಂಡು ಸಂಘದ ಬೀರು ಮತ್ತು ಕಾಪಾಟುಗಳ ಬೀಗಗಳನ್ನು ಕೊಡಿಸಬೇಕು ಎಂದರು.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಸಿಡಿಓ ರಾಜಣ್ಣ, ಎಸ್‌ಡಿಎ ಗಿರೀಶ್, ಸಹಾಯಕ ಲೋಕೇಶ್ ಕಚೇರಿಗೆ ಬೀಗ ಹಾಕಿರುವುದರನ್ನು ಗಮನಿಸಿ ನಗರ ಪೊಲೀಸ್ ಠಾಣೆಗೆ ವಿಷಯ ಮುಟ್ಟಿಸಿದರು. ಈ ವೇಳೆ ಇನ್ಸ್‌ಪೆಕ್ಟರ್ ಕಶ್ಯಪ್ ಸ್ಥಳಕ್ಕಾಮಿಸಿ ಪ್ರತಿಭಟನಕಾರರ ಮನವೊಲಿಸಿದರಾರೂ ಯಾವುದೇ ಪ್ರಯೋಜನವಾಗಲಿಲ್ಲ.

ಪ್ರತಿಭಟನೆಯಲ್ಲಿ ಮುಖಂಡರಾದ ನಂಜೇಗೌಡ, ಮಂಜುನಾಥ, ಲೋಕರಾಜ ಅರಸು, ಮಹದೇವು, ಶಶಿಧರ್, ಮರಿತಾಯಮ್ಮ, ತಾಲೂಕು ಅಧ್ಯಕ್ಷೆ ಅನಸೂಯಮ್ಮ, ನಿಂಗಮ್ಮ, ಮರಿಸ್ವಾಮಿ, ಉಪಾಧ್ಯಕ್ಷೆ ಮಹದೇವಮ್ಮ ಇನ್ನಿತರರಿದ್ದರು.

ಕನ್ನಾಯಕನಹಳ್ಳಿಗೆ ಸಾರಿಗೆ ಬಸ್ ಸಂಚಾರ ಆರಂಭ



ಸಾರಿಗೆ ಬಸ್‌ಗೆ ಗ್ರಾಮಸ್ಥರು ಪೂಜೆ ಸಲ್ಲಿಸಿ ಸ್ವಾಗತಿಸಿದರು.

ತಿ.ನರಸೀಪುರ ಫೆ.25– ತಾಲೂಕಿನ ಕನ್ನಾಯಕನಹಳ್ಳಿ ಗ್ರಾಮಕ್ಕೆ ಸಚಿವ ಹಾಗೂ ಸಂಸದರ ಕಾಳಜಿಯಿಂದಾಗಿ ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಆರಂಭವಾಗಿದೆ.

ಚಿರತೆ ಹಾವಳಿಯಿಂದ ನಲುಗಿದ್ದ ಕನ್ನಾಯಕನಹಳ್ಳಿಗೆ ಯಾವುದೇ ಸಾರಿಗೆ ಸೌಲಭ್ಯ ಇಲ್ಲದಿದ್ದರಿಂದ ಮೂರ್ನಾಲ್ಕು ಕಿಲೋಮೀಟರ್‌ಗಳಷ್ಟು ದೂರವಿರುವ ಮುಖ್ಯರಸ್ತೆಗೆ ಗ್ರಾಮದಿಂದ ಭಯದಿಂದಲೇ ನಡೆದು ಹೋಗಬೇಕಿತ್ತು. ಇದೀಗ ಗ್ರಾಮಕ್ಕೆ ಸರ್ಕಾರಿ ಸಾರಿಗೆ ಸಂಚಾರದಿಂದ ಗ್ರಾಮಸ್ಥರು ನಿಟ್ಟುಸಿರುಬಿಟ್ಟಿದ್ದಾರೆ. ಕನ್ನಾಯಕನಹಳ್ಳಿಗೆ ಆಗಮಿಸಿದ ಸಾರಿಗೆ ಬಸ್ಸಿಗೆ ಗ್ರಾಮದ ಹಿರಿಯರು, ಕಿರಿಯರು ಸೇರಿದಂತೆ ಎಲ್ಲರೂ ಸಂಭ್ರಮದಿಂದ ಪೂಜೆ ಸಲ್ಲಿಸಿದರು. ಸಚಿವರ ಸೂಚನೆಯಂತೆ ಬೆಳಗ್ಗೆ 8.30, ಮಧ್ಯಾಹ್ನ 1.30 ಹಾಗೂ ಸಂಜೆ 4.30ಕ್ಕೆ ಮಳವಳ್ಳಿಯಿಂದ ನೆಲ್ಲಿಗೆರೆ, ಚಿದರವಳ್ಳಿ, ಎಂ.ಎಲ್.ಹುಂಡಿ, ಉಕ್ಕಲಗೆರೆ ಮಾರ್ಗವಾಗಿ ಕನ್ನಾಯಕನಹಳ್ಳಿ ಗ್ರಾಮಕ್ಕೆ ಆಗಮಿಸುವ ಸಾರಿಗೆ ಬಸ್ ಚಿಕ್ಕಲಕ್ಷ್ಮಿಪುರ, ಜಗಜೀವನ ಗ್ರಾಮ, ವ್ಯಾಸರಾಜಪುರ ಹಾಗೂ ಸೋಸಲೆ ಮಾರ್ಗವಾಗಿ ನರಸೀಪುರಕ್ಕೆ ತೆರಳಿ ಅದೇ ಮಾರ್ಗವಾಗಿ ಮತ್ತೆ ಸಂಚರಿಸಲಿದೆ.

ಈ ವೇಳೆ ಸಾರಿಗೆ ಇಲಾಖೆ ನಿವೃತ್ತ ಅಧಿಕಾರಿ ಪುಟ್ಟಸ್ವಾಮಿ, ಸುನಿಲ್ ಬೋಸ್ ಯುವ ಬ್ರಿಗೇಡ್ ಸಂಚಾಲಕ ಕುಮಾರ್ ರಾಮೇಗೌಡ, ಉಕ್ಕಲಗೆರೆ ಗ್ರಾಪಂ ಅಧ್ಯಕ್ಷ ನಾಗೇಂದ್ರ, ಮಾಜಿ ಅಧ್ಯಕ್ಷ ಶಿವು, ಮಾಜಿ ಸದಸ್ಯರಾದ ಶಿವರಾಜು, ಎಸ್.ಮೂರ್ತಿ, ಗುತ್ತಿಗೆದಾರ ಮಧು, ದಸಂಸ ಮರಿಸ್ವಾಮಿ, ನಂದೀಶ್ ಇತರರಿದ್ದರು.

ಕಂಪಲಾಪುರ ಕೊಪ್ಪಲು ಡೇರಿಗೆ ಗೋಪಾಲ್ ಅಧ್ಯಕ್ಷ



ಡೈರಿ ಅಧ್ಯಕ್ಷರಾಗಿ ಗೋಪಾಲ್ ಆಯ್ಕೆಯಾದರು.

ಕಂಪಲಾಪುರ, ಫೆ.25– ಇಲ್ಲಿನ ಕಂಪಲಾಪುರ ಕೊಪ್ಪಲು ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಗೋಪಾಲ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಚಂದ್ರು ಆಂತರಿಕ ಒಪ್ಪಂದದಂತೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಮಂಗಳವಾರ ನಡೆದ ಚುನಾವಣೆ ಯಲ್ಲಿ ಗೋಪಾಲ್ ಅವರನ್ನು ಹೊರತು ಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಜೆ.ಹಿತೇಂದ್ರ ಅವಿರೋಧ ಆಯ್ಕೆಯನ್ನು ಘೋಷಿಸಿದರು.


ಈ ವೇಳೆ ಎಪಿಎಂಸಿ ಮಾಜಿ ಉಪಾಧ್ಯಕ್ಷ ಎಂ.ರಮೇಶ್, ಸಿಇಓ ಹೆಚ್.ಲೋಕೇಶ್, ಉಪಾಧ್ಯಕ್ಷೆ ಶೀಲಾ, ನಿರ್ದೇಶಕರಾದ ಕೆ.ಎಂ.ಲಕ್ಷ್ಮಣ್, ಚಂದ್ರು, ಗಿರೀಶ್, ಸದಾನಂದ, ಸಿದ್ದಪ್ಪ, ಗೀತಾ ಇತರರು ಹಾಜರಿದ್ದರು.

ಬೀದಿಗೆ ಬಿದ್ದ ಕಾಳಿದಾಸ ಕುರುಬ ಜನಾಂಗದ ಕ್ಷೇಮಾಭಿವೃದ್ಧಿ ಸಂಘದ ಬಣ ರಾಜಕೀಯ

ಹಾಲಿ ಅಧ್ಯಕ್ಷರ ವಜಾ, ನೂತನ ಅಧ್ಯಕ್ಷರಾಗಿ ಮಾಲೇಗೌಡ ಆಯ್ಕೆ



ಸಂಘ ನೂತನ ಅಧ್ಯಕ್ಷರಾಗಿ ಕ್ಯಾತನಹಳ್ಳಿ ಕೆ.ಎಸ್.ಮಾಲೇಗೌಡ ಆಯ್ಕೆಯಾದರು.



ಸಭೆಯಲ್ಲಿ ಕಾರ್ಯದರ್ಶಿ ಚಿಕ್ಕಣ್ಣ ಸಭೆಯ ನಡಾವಳಿ ಓದಿದರು.

ಹೆಚ್.ಡಿ.ಕೋಟೆ, ಫೆ.25– ಹೆಚ್.ಡಿ.ಕೋಟೆ, ಸರಗೂರು ತಾಲೂಕಿನ ಕಾಳಿದಾಸ ಕುರುಬ ಜನಾಂಗದ ಕ್ಷೇಮಾಭಿವೃದ್ಧಿ ಸಂಘದ ಬಣ ರಾಜಕೀಯ ಬೀದಿಗೆ ಬಿದ್ದಿದ್ದು, ಅಧ್ಯಕ್ಷರು ಸಂಘದಲ್ಲಿ ಅಧಿಕಾರ ದುರುಪಯೋಗ ಮಾಡಿಕೊಂಡು ಸಾಕಷ್ಟು ಅವ್ಯವಹಾರ ನಡೆಸಿದ್ದಾರೆ ಎಂದು ಆರೋಪಿಸಿ ಮತ್ತೊಂದು ಬಣದ ಸದಸ್ಯರು ಹೊಸದಾಗಿ ಅಧ್ಯಕ್ಷರೂ ಸೇರಿದಂತೆ ಆಡಳಿತ ಮಂಡಳಿ ನೇಮಿಸಿಕೊಂಡರು.

ಸಂಘದಲ್ಲಿ ಒಡಕುಂಟಾದ ಹಿನ್ನೆಲೆಯಲ್ಲಿ ಸಂಘದ ಅಧ್ಯಕ್ಷ ಮೊಳೆಯೂರು ಆನಂದ್ ಹಾಗೂ ಉಪಾಧ್ಯಕ್ಷ ವೀರೇಗೌಡರ ನೇತೃತ್ವದಲ್ಲಿ 2 ಬಣಗಳಾಗಿದ್ದವು. ಮಂಗಳವಾರ ಅಧ್ಯಕ್ಷ ಆನಂದ್ ಅವರು ಸಂಘದ ಯಾವುದೇ ಕಾರ್ಯ ಚಟುವಟಿಕೆಯಲ್ಲಿ ಭಾಗಿಯಾಗಿಲ್ಲ. ಸಾಕಷ್ಟು ಅವ್ಯಹಾರ ನಡೆಸಿದ್ದಾರೆ ಎಂದು ಆರೋಪಿಸಿ ಉಪಾಧ್ಯಕ್ಷ ವೀರೇಗೌಡ, ಕಾರ್ಯದರ್ಶಿ ಚಿಕ್ಕಣ್ಣ, ಜಿಲ್ಲಾಧ್ಯಕ್ಷ ಶಿವಪ್ಪ ಕೋಟೆ ಒಳಗೊಂಡ ಮತ್ತೊಂದು ಬಣ ಪಟ್ಟಣದ ಕನಕ ಭವನದಲ್ಲಿ ಸರ್ವ ಸದಸ್ಯರ ಸಭೆ ವಿಶೇಷ ಕರೆದಿತ್ತು. ಈ ವಿಚಾರ ತಿಳಿದ ಪಟ್ಟಣ ಠಾಣೆ ಪೊಲೀಸರು ಮುಂಜಾಗ್ರತಾ ಕ್ರಮವಾಗಿ ಬಿಗಿ ಬಂದೋಬಸ್ತ್ ಕೈಗೊಂಡಿದ್ದರು.

ಮತ್ತೊಂದೆಡೆ ವಿಶೇಷ ಸಭೆ ನಡೆಸದಂತೆ ತಿಳಿಸಿದರೂ ಅಧ್ಯಕ್ಷ ಆನಂದ್ ಮಾತಿಗೆ ಯಾವುದೇ ಮನ್ನಣೆ ನೀಡದ ವೀರೇಗೌಡರ ಬಣ ಸಭೆ ನಡೆಸಲು ಮುಂದಾದಾಗ ಆನಂದ್ ಬಣದ ಸದಸ್ಯರು ಕನಕ ಭವನಕ್ಕೆ ಬೀಗ ಹಾಕಿದ್ದರು. ಇದಕ್ಕೆ ವೀರೇಗೌಡ ಬಣ ವಿರೋಧ ವ್ಯಕ್ತಪಡಿಸಿ ಡಿವೈಎಸ್ಪಿ ಗೋಪಾಲಕೃಷ್ಣ ಅವರಿಗೆ ಭವನದಲ್ಲಿ ಸಭೆ ನಡೆಸಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಡಿವೈಎಸ್ಪಿ ಭವನಕ್ಕೆ ಬೀಗ ಹಾಕಿರುವುದು ನಮ್ಮ ಗಮನಕ್ಕೆ ಬಂದಿಲ್ಲ ಎಂದಾಗ ಎಂದರು. ಈ ವೇಳೆ ಭವನದ ಮುಂಭಾಗ ಸಭೆ ನಡೆಸಲು ಅವಕಾಶ ಮಾಡಿಕೊಡುವಂತೆ ಮಾಡಿದ ಮನವಿ ಮೇರೆಗೆ ಭವನ ಎದುರು ವೀರೇಗೌಡರ ಬಣದಿಂದ ಸಭೆ ನಡೆಯಿತು.

ಕನಕ ಭವನದ ರಸ್ತೆಬದಿ ಮಹಾಸಭೆ ಆರಂಭವಾಗಿ ಕಾರ್ಯದರ್ಶಿ ಚಿಕ್ಕಣ್ಣ ಸಭೆ ನಡಾವಳಿ ಓದಲು ಮುಂದಾದಾಗ ಅಧ್ಯಕ್ಷ ಮೊಳೆಯೂರ್ ಆನಂದ್ ಬಣ ಸಭೆಗೆ ಅಡ್ಡಿಪಡಿಸಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಸಭೆಯಲ್ಲಿ ಹಾಲಿ ಅಧ್ಯಕ್ಷ ಆನಂದ್ ಯಾವುದೇ ಸಭೆ ನಡೆಸದೆ ಸಂಘದ ಲೆಕ್ಕ ಕೊಡದೇ ಸರ್ಕಾರಿ ಅನುದಾನ ಹಾಗೂ ಭವನದ ಆದಾಯ ದುರುಪಯೋಗ ಮಾಡಿಕೊಂಡಿರುವುದರಿಂದ ಅವರನ್ನು ಅಧ್ಯಕ್ಷರ ಸ್ಥಾನದಿಂದ ವಜಾಗೊಳಿಸಲಾಯಿತು. ಅಲ್ಲದೇ ನೆರೆದಿದ್ದ 500ಕ್ಕೂ ಹೆಚ್ಚು ಸದಸ್ಯರ ಸಮ್ಮುಖದಲ್ಲಿ ಸರ್ವಾನುಮತದಿಂದ ನೂತನ ಅಧ್ಯಕ್ಷರಾಗಿ ಕೆ.ಎಸ್.ಮಾಲೇಗೌಡರನ್ನು ನೇಮಕ ಮಾಡಲಾಯಿತು.

ಮೊಳೆಯೂರು ಆನಂದ್ ಮಾತನಾಡಿ, ಇಂದು ನಡೆದಿರುವ ಸರ್ವ ಸದಸ್ಯರ ವಿಶೇಷ ಸಭೆ ಅನೂರ್ಜಿತವಾಗಿದ್ದು, ತಮಗೆ ಬೇಕಾದ ಸದಸ್ಯರಿಗೆ ಮಾತ್ರ ಆಹ್ವಾನ ಪತ್ರ ನೀಡಿ ಈ ಸಭೆ ನಡೆಸಿದ್ದಾರೆ. ಇದು ಸಂಘದ ನಿಯಮಾವಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು.

ಉಪಾಧ್ಯಕ್ಷ ವೀರೇಗೌಡರ ಬಣದವರು ನಡೆಸುತ್ತಿರುವ ಸಭೆ ವಿಚಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನಕ್ಕೆ ತರಲಾಗಿತ್ತು. ಅವರು ಮುಂದಿನ ದಿನಗಳಲ್ಲಿ ಎಲ್ಲರ ಸಮ್ಮುಖದಲ್ಲಿ ಸಭೆ ಕರೆದು ಚರ್ಚಿಸೋಣ ಎಂದಿದ್ದರು. ಸಿಎಂ ಮಾತಿಗೂ ಬೆಲೆ ನೀಡದೇ ಈ ಸಭೆ ನಡೆಸಿರುವುದು ಕುರುಬ ಸಮಾಜಕ್ಕೆ ಅವಮಾನ ಮಾಡಿದಂತೆ ಎಂದು ಬೇಸರ ವ್ಯಕ್ತಪಡಿಸಿದರು.

ನೂತನ ಅಧ್ಯಕ್ಷ ಕೆ.ಎಸ್.ಮಾಲೇಗೌಡ ಮಾತನಾಡಿ, ನನ್ನನ್ನು ಸರ್ವಾನುಮತದಿಂದ ಕುರುಬ ಸಮಾಜದ ತಾಲೂಕು ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಜನಾಂಗದ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಸಂಘದ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಉಪಾಧ್ಯಕ್ಷ ವೀರೇಗೌಡ ಬಣದಿಂದ ಪ್ರಧಾನ ಕಾರ್ಯದರ್ಶಿ ಚಿಕ್ಕಣ್ಣ, ಖಜಾಂಚಿ ಯತೀಶ್ ಕುಮಾರ್, ನಿರ್ದೇಶಕರಾದ ಕರಿಯಪ್ಪಗೌಡ, ಮಹದೇವು ಕೆಸಿ, ಜಗನ್ನಾಥ್ ಆರ್.ಪಿ, ಗೋವಿಂದರಾಜು, ಆರ್.ಎನ್.ಪಾಪಣ್ಣ, ಮಂಜುನಾಥ್, ಕೃಷ್ಣೇಗೌಡ, ರಾಜಣ್ಣ, ಎಂ.ರವಿ, ಹೆಚ್.ಎಂ. ಕುಮಾರ್, ಶಿವರಾಜು, ಕೆ.ಎಂ.ಪುಟ್ಟೇ ಗೌಡ, ಮುದ್ದ ರಾಮೇಗೌಡ, ತಮ್ಮಣ್ಣ, ಮುಖಂಡರಾದ ಬೈರೇಗೌಡ, ರಾಜೇಗೌಡ, ಮಂಜು, ಗಿರೀಶ್, ಸುಬ್ಬೇಗೌಡ, ವಜ್ರೇಗೌಡ, ನಾಗೇಗೌಡ, ಬೀರೇಗೌಡ, ನಾಗರಾಜು, ಕರೀಗೌಡ, ಮಹದೇವೇ ಗೌಡ, ಜಯಣ್ಣ, ರೇವಣ್ಣ, ನಂಜಪ್ಪ, ಚಿನ್ನಸ್ವಾಮಿ, ಕಾಳಸ್ವಾಮಿ, ಮುದ್ದೇಗೌಡ, ಮಹದೇವು, ಚಂದ್ರು, ಗಣೇಶ್, ಮುದ್ದ ಮಹಾದೇವ, ಮಂಜು, ಉಮೇಶ್, ನಿಂಗೇಗೌಡ, ರಮೇಶ್ ತಾಲೂಕಿನ ಅಜೀವ ಸದಸ್ಯರು ಭಾಗವಹಿಸಿದ್ದರು.

ಎಂ.ಬಿ.ಆನಂದ್ ಬಣದಿಂದ ನಾಗೇಗೌಡ, ಕುಮಾರೇಗೌಡ, ರಾಜೇಗೌಡ, ಬೈಪಾಸ್ ಮಂಜುನಾಥ್, ಶಿವಮಲ್ಲಪ್ಪ, ಮಹದೇವ್, ಕುಮಾರ್, ಬೀರೇಗೌಡ, ಮಹದೇವ್, ಚನ್ನೇಗೌಡ, ಚಂದ್ರೇಗೌಡ, ಸ್ವಾಮಿಗೌಡ, ರಾಜೇಗೌಡ, ಕಾಳಿರೇಗೌಡ, ಸಣ್ಣಸ್ವಾಮಿ, ಮರಮಲ್ಲೇಗೌಡ, ಕಾರ್ತಿಕ್, ಕುಮಾರಸ್ವಾಮಿ, ಚಿನ್ನಪ್ಪ, ಜವನಪ್ಪ, ಶಾಂತರಾಜು, ಶೇಖರಪ್ಪ, ರವಿ ಇತರರಿದ್ದರು.

ಬೆಳಗಾವಿ, ಮಹಾರಾಷ್ಟ್ರದಲ್ಲಿ ರಾಜ್ಯ ಸಾರಿಗೆ ಸಿಬ್ಬಂದಿ ಮೇಲೆ ಹಲ್ಲೆ ಖಂಡಿಸಿ

ಮೈಸೂರಲ್ಲಿ ಕನ್ನಡ ಪರ ಸಂಘಟನೆಗಳಿಂದ ಪ್ರತಿಭಟನೆ





ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ, ನಿರ್ವಾಹಕರ ಮೇಲೆ ಎಂಇಎಸ್ ಪುಂಡರು ನಡೆಸಿದ ಹಲ್ಲೆ ಖಂಡಿಸಿ ಮೈಸೂರಲ್ಲಿ ಮೈಸೂರು ಕನ್ನಡ ವೇದಿಕೆ ಹಾಗೂ ಮೈಸೂರು ಜಿಲ್ಲಾ ಕನ್ನಡ ಚಳವಳಿಗಾರರ ಸಂಘದ ಕಾರ್ಯಕರ್ತರು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದರು.

ಮೈಸೂರು, ಫೆ25(ಎಂಟಿವೈ)– ಬೆಳಗಾವಿ ಹಾಗೂ ಮಹಾರಾಷ್ಟ್ರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ಚಾಲಕ ಮತ್ತು ನಿರ್ವಾಹಕರ ಮೇಲೆ ಎಂಇಎಸ್ ಪುಂಡರು ನಡೆಸಿದ ಹಲ್ಲೆ ಪ್ರಕರಣವನ್ನು ಖಂಡಿಸಿ ಮೈಸೂರಲ್ಲಿ ಎರಡು ಕನ್ನಡ ಪರ ಸಂಘಟನೆಗಳು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದವು.

ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿಯ ಬಳಿ ಮೈಸೂರು ಕನ್ನಡ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಎಂಇಎಸ್ ಪುಂಡರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬೆಳಗಾವಿಯಲ್ಲಿ ಸಾರಿಗೆ ಸಿಬ್ಬಂದಿ ಮೇಲೆ ಮರಾಠಿ ಪುಂಡರು ಹಲ್ಲೆ ಮಾಡಿದ್ದಾರೆ. ಜತೆಗೆ, ಅವರ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಬೆಳಗಾವಿ ಜನಪ್ರತಿನಿಧಿಗಳಿಂದ ಕನ್ನಡಿಗರಿಗೆ ರಕ್ಷಣೆ ಇಲ್ಲದಂತಾಗಿದೆ. ಪೊಲೀಸ್ ಅಧಿಕಾರಿಗಳು ಮರಾಠಿ ಪುಂಡರ ಮತ್ತು ಬೆಳಗಾವಿ ಜನಪ್ರತಿನಿಧಿಗಳ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ ಎಂದು ದೂರಿದರು.

ಎಂಇಎಸ್ ಸಂಘಟನೆಯಿಂದ ಬೆಳಗಾವಿ ಕನ್ನಡಿಗರಿಗೆ ಒಂದಲ್ಲ ಒಂದು ರೀತಿ ಕಿರುಕುಳ ನೀಡುತ್ತಿದ್ದಾರೆ. ರಾಜ್ಯೋತ್ಸವ ಸಂದರ್ಭದಲ್ಲಿ ಬೆಳಗಾವಿಯಲ್ಲಿ ಮರಾಠಿಗರು ಕಪ್ಪು ಬಾವುಟ ಪ್ರದರ್ಶನ ಮಾಡಿ ಅವಮಾನ ಮಾಡುತ್ತಿದ್ದಾರೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ಪದಾಧಿಕಾರಿಗಳಾದ ನಾಲಾಬೀದಿ ರವಿ, ಬೋಗಾದಿ ಸಿದ್ದೇಗೌಡ, ಗೋಪಿ, ಸಿದ್ದಪ್ಪ, ಪ್ಯಾಲೇಸ್ ಬಾಬು, ಗೋವಿಂದರಾಜು, ಸ್ವಾಮಿ, ಮದನ್, ಬೀಡಾ ಬಾಬು, ಹರೀಶ್ ಕುಮಾರ್, ಮಾದಪ್ಪ ಅರವಿಂದ, ಶಿವೇಗೌಡ, ಚಿನ್ನಪ್ಪ, ಸುನಿಲ್, ಶಿವಣ್ಣ ನಾಯಕ್ ಇದ್ದರು.

ಪ್ರಕರಣ ಖಂಡನೀಯ: ಮೈಸೂರು ಜಿಲ್ಲಾ ಕನ್ನಡ ಚಳವಳಿಗಾರರ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಯಿತು.

ಈ ಪ್ರಕರಣ ಖಂಡನೀಯ. ಸಾರಿಗೆ ಸಿಬ್ಬಂದಿ ವಿರುದ್ಧ ಪೋಕ್ಸೋ ಕಾಯ್ದೆಯಡಿ ಹಾಕಿರುವ ಪ್ರಕರಣವನ್ನು ವಾಪಸ್ ಪಡೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಬೆಳಗಾವಿಯಲ್ಲಿ ಮೇಲಿಂದ ಮೇಲೆ ಶಾಂತಿ, ಸುವ್ಯವಸ್ಥೆಗೆ ಭಂಗವುಂಟು ಮಾಡುತ್ತಿರುವ ಎಂಇಎಸ್ ಸಂಘಟನೆಯನ್ನು ನಿಷೇಧಿಸಬೇಕು. ಮರಾಠಿಯಲ್ಲಿ ಪತ್ರ ವ್ಯವಹಾರ ನಡೆಸುವುದಾಗಿ ಭರವಸೆ ನೀಡಿರುವ ಬೆಳಗಾವಿ ಜಿಲ್ಲಾಧಿಕಾರಿ, ಪೊಲೀಸ್ ಆಯುಕ್ತರನ್ನು ರಾಜ್ಯದಿಂದ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಅವಿಭಾಜ್ಯ ಅಂಗವಾಗಿರುವ ಬೆಳಗಾವಿಯಲ್ಲಿ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್ ಚಾಲಕ, ನಿರ್ವಾಹಕರ ಮೇಲೆ ಎಂಇಎಸ್ ಪುಂಡರು ದಾಳಿ ನಡೆಸಿ, ಹಲ್ಲೆ ಮಾಡುತ್ತಿದ್ದರೂ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಸತೀಶ್ ಜಾರಕಿಹೊಳಿ ಅವರು ಮೌನವಾಗಿದ್ದಾರೆ. ಮರಾಠಿಗಳ ದಬ್ಬಾಳಿಕೆ, ದೌರ್ಜನ್ಯ ವಿರೋಧಿಸದೆ ಸುಮ್ಮನಿರುವುದು ಖಂಡನೀಯ ಎಂದರು. ಪ್ರತಿಭಟನೆಯಲ್ಲಿ ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮುಖಂಡರಾದ ಬಿ.ಎ.ಶಿವಶಂಕರ್, ಜಿ.ಪ್ರಕಾಶ್, ಕೆ.ಬಸವರಾಜಪ್ಪ, ಸಿದ್ದಪ್ಪ, ಪ್ರಭುಶಂಕರ್ ಇನ್ನಿತರರಿದ್ದರು.

ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ

ವನವೃಕ್ಷ ಪ್ರೇಮಕ್ಕೆ ಯದುವೀರ್ ಫಿದಾ

ಬಿಳಿಗಿರಿ ರಂಗನ ಬೆಟ್ಟ, ಗಿರಿ ಜನರ ಹುಲಿ ವೇಷದ ಬಗ್ಗೆ ಪ್ರಶಂಸೆ

ಮೈಸೂರು, ಫೆ.25(ಬಿಎಲ್‌ಯು)– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮನ್ ಕಿ ಬಾತ್‌ನಲ್ಲಿ ಬಿಳಿಗಿರಿ ರಂಗನ ಬೆಟ್ಟ ಅಭಯಾರಣ್ಯ ಹಾಗೂ ಗಿರಿಜನರ ಹುಲಿ ವೇಷದ ಬಗ್ಗೆ ಪ್ರಸ್ತಾಪಿಸಿದ್ದಾರೆ. ಬಿಳಿಗಿರಿ ರಂಗನ ಬೆಟ್ಟದ ಹಸಿರು ವನ ಹಾಗೂ ಗಿರಿ ಜನರ ಸಾಂಪ್ರದಾಯಿಕತೆಯನ್ನು ಪ್ರಶಂಸಿಸಿರುವುದಕ್ಕೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಪ್ರಧಾನಿ ಮೋದಿ ಅವರನ್ನು ಅಭಿನಂದಿಸಿದ್ದಾರೆ.


ಈ ಕುರಿತ ಪತ್ರಿಕಾ ಹೇಳಿಕೆ ನೀಡಿರುವ ಅವರು, ವನ್ಯಜೀವಿ ಸಂರಕ್ಷಣೆಯಲ್ಲಿ ಬುಡಕಟ್ಟು ಜನರು ಅತ್ಯಂತ ಶ್ರದ್ಧೆಯಿಂದ ಕೆಲಸ ಮಾಡುತ್ತಿದ್ದಾರೆ. ಇವರ ಈ ಪ್ರಯತ್ನ ಶ್ಲಾಘನೀಯ ಎಂದು ನರೇಂದ್ರ ಮೋದಿ ಹೇಳಿರುವುದನ್ನು ಯದುವೀರ್ ಸ್ವಾಗತಿಸಿದ್ದಾರೆ.

ಬಿಳಿಗಿರಿರಂಗನ ಬೆಟ್ಟದಲ್ಲಿ ಹುಲಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗುತ್ತಿದೆ. ಈ ಪ್ರದೇಶದಲ್ಲಿ ಪ್ರಾಣಿ ಮತ್ತು ಮಾನವ ಸಂಘರ್ಷ ಕಡಿಮೆ ಇರುವುದು ಮೆಚ್ಚುಗೆ ವಿಷಯವಾಗಿದೆ. ಕರ್ನಾಟಕ, ಕೇರಳ, ತಮಿಳುನಾಡು ರಾಜ್ಯಗಳಲ್ಲಿ ಹುಲಿ ವೇಷ ಕುಣಿತ ಕಣ್ಮನ ಸೆಳೆಯುತ್ತದೆ. ಇದು ವಿಶೇಷ ಅನುಭವ ನೀಡುತ್ತದೆ ಎಂದು ನರೇಂದ್ರ ಮೋದಿ ಅವರು ಬಣ್ಣಿಸಿರುವುದು ವಿಶೇಷ ಎನಿಸಿದೆ ಎಂದು ಯದುವೀರ್ ಹೇಳಿದ್ದಾರೆ. ನರೇಂದ್ರ ಮೋದಿ ಅವರು ಈ ವಿಚಾರದ ಬಗ್ಗೆ ಪ್ರಸ್ತಾಪಿಸಿರುವುದು ಹಾಗೂ ವನ್ಯಜೀವಿ ಮತ್ತು ಅರಣ್ಯದ ಬಗ್ಗೆ ಅಪಾರ ಆಸಕ್ತಿ ಹೊಂದಿರುವ ನನಗೆ ಹೆಚ್ಚು ಖುಷಿ ತಂದಿದೆ ತಿಳಿಸಿದ್ದಾರೆ.

ಮುಂಬರುವ ದಿನಗಳಲ್ಲಿ ಬುಡಕಟ್ಟು ಜನಾಂಗದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡಲು ಇದು ಸಹಕಾರಿಯಾಗಿದೆ. ಈ ವಿಚಾರಗಳ ಬಗ್ಗೆ ಸಂಸತ್ ಅಧಿವೇಶನದಲ್ಲಿ ಪ್ರಸ್ತಾಪಿಸುತ್ತೇನೆ ಎಂದು ಯದುವೀರ್ ಭರವಸೆ ನೀಡಿದ್ದಾರೆ.

ಬಡಗಲಹುಂಡಿಯ ಮಲೆಮಹದೇಶ್ವರ ದೇವಾಲಯದಲ್ಲಿ ಶಿವರಾತ್ರಿ ವಿಶೇಷ ಪೂಜಾ ಮಹೋತ್ಸವ

ಮೈಸೂರು, ಫೆ.25(ಎಂಟಿವೈ)– ಮೈಸೂರು ತಾಲೂಕಿನ ಬಡಗಲಹುಂಡಿ ಗ್ರಾಮದ



ಮಲೆ ಮಹದೇಶ್ವರ ದೇವಾಲಯದಲ್ಲಿ ಫೆ.26 ಮತ್ತು 27ರಂದು ಶಿವರಾತ್ರಿ ಹಬ್ಬದ ವಿಶೇಷ ಪೂಜಾ ಮಹೋತ್ಸವ ಏರ್ಪಡಿಸಲಾಗಿದೆ. ಬಡಗಲಹುಂಡಿ ಗ್ರಾಮದಲ್ಲಿರುವ ಮಲೆ ಮಹದೇಶ್ವರ ದೇವಾಲಯದಲ್ಲಿ 34ನೇ ವರ್ಷದ ವಿಶೇಷ ಪೂಜಾ ಮಹೋತ್ಸವ ಹಾಗೂ ಶಿವರಾತ್ರಿ ಹಿನ್ನೆಲೆಯಲ್ಲಿ ವಿವಿಧ ಪೂಜಾ ಕಾರ್ಯ ಕೈಗೊಳ್ಳಲಾಗಿದ್ದು, ನಾಳೆ(ಫೆ.26) ಸಂಜೆ 7ಕ್ಕೆ ಮಹದೇಶ್ವರಸ್ವಾಮಿಗೆ ಬಿಲ್ವಾರ್ಚನೆ, ರುದ್ರಾಭಿಷೇಕ, ಎಣ್ಣೆಮಜ್ಜನ ಸೇವೆ, ವಸ್ತ್ರಧಾರಣೆ ನಡೆಯಲಿದೆ.

ಫೆ.27ರಂದು ಬೆಳಗ್ಗೆ 11ಕ್ಕೆ ವಿಶೇಷ ಪೂಜಾ ಕಾರ್ಯ ನೆರವೇರಿದ ಬಳಿಕ ಅನ್ನಸಂತರ್ಪಣೆ ನಡೆಯಲಿದ್ದು, ಈ ಪೂಜಾ ಕಾರ್ಯಕ್ರಮದಲ್ಲಿ ಬಡಗಲಹುಂಡಿ, ಮೂಡಲಹುಂಡಿ, ಕೆಂಪೇಗೌಡನಹುಂಡಿ, ಹೊಸಹುಂಡಿ, ವರಕೋಡು ಹಾಗೂ ಮೆಲ್ಲಹಳ್ಳಿ ಸೇರಿದಂತೆ ವಿವಿಧ ಗ್ರಾಮಸ್ಥರು ಪಾಲ್ಗೊಳ್ಳಲಿದ್ದಾರೆ.

ಸಂಸದ ಯದುವೀರ್ ಪ್ರಯತ್ನದ ಫಲಶ್ರುತಿ

ಕರಿಮೆಣಸಿನ ಮೇಲೆ ಜಿಎಸ್‌ಟಿ ರದ್ದು



ಕೊಡಗು ಜಿಲ್ಲೆಯಲ್ಲಿ ಬೆಳೆಯುವ ಕರಿಮೆಣಸು ಮೇಲೆ ವಿಧಿಸಿದ್ದ ಜಿಎಸ್‌ಟಿ ರದ್ದು ಮಾಡುವಂತೆ ಮೈಸೂರು–ಕೊಡಗು ಲೋಕಸಭಾ ಸದಸ್ಯ ಯದುವೀರ್ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದರು.

ಕೊಡಗಿನ ಕರಿಮೆಣಸು ಬೆಳೆಗಾರರ ಸಂಕಷ್ಟ ನನ್ನ ಅರಿವಿಗೆ ಬಂದ ಕೂಡಲೇ ದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿದ್ದೆ. ಆ ವೇಳೆ ಕರಿಮೆಣಸು ಮೇಲೆ ವಿಧಿಸಿದ್ದ ಜಿಎಸ್‌ಟಿ ರದ್ದು ಮಾಡುವಂತೆ ಕೋರಿದ್ದೆ. ಇದಕ್ಕೆ ಸ್ಪಂದಿಸಿದ ಸಚಿವರು ಜಿಎಸ್‌ಟಿ ರದ್ದು ಮಾಡಿದ್ದಾರೆ. ಈ ಹಿನ್ನೆಲೆ ನಿರ್ಮಲಾ ಸೀತಾರಾಮನ್ ಅವರಿಗೆ ನಾನು ಧನ್ಯವಾದ ತಿಳಿಸುತ್ತೇನೆ ಎಂದು ಯದುವೀರ್ ಹೇಳಿದ್ದಾರೆ.

ಮೈಸೂರು, ಫೆ.25(ಬಿಎಲ್‌ಯು)– ಕರಿಮೆಣಸಿನ ಮೇಲೆ ವಿಧಿಸಿದ್ದ ಜಿಎಸ್‌ಟಿ (ಸರಕು ಮತ್ತು ಸೇವಾ ತೆರಿಗೆ) ಯನ್ನು ಕೇಂದ್ರ ಸರ್ಕಾರ ರದ್ದು ಮಾಡಿದ್ದು, ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪರಿಶ್ರಮದಿಂದ ಇದು ಸಾಧ್ಯವಾಗಿದೆ.

ಕೊಡಗು ಜಿಲ್ಲೆಯಲ್ಲಿ ಅತಿ ಹೆಚ್ಚಾಗಿ ಕರಿಮೆಣಸು ಬೆಳೆಯಲಾಗುತ್ತದೆ. ಆದರೆ ಕೇಂದ್ರ ಸರ್ಕಾರ ಇದರ ಮೇಲೆ ಜಿಎಸ್‌ಟಿ ವಿಧಿಸಿತ್ತು. ಇದರಿಂದ ಕರಿಮೆಣಸು ಬೆಳೆಯವ ಬೆಳೆಗಾರರು ಆರ್ಥಿಕವಾಗಿ ತೀವ್ರ ತೊಂದರೆ ಅನುಭವಿಸುತ್ತಿದ್ದರು.

ಕೊಡಗಿನ ಗೋಣಿಕೊಪ್ಪದ ಬೆಳೆಗಾರರೊಬ್ಬರಿಗೆ ಕೇಂದ್ರ ಸರ್ಕಾರ ಒಂದು ಕೋಟಿ ಜಿಎಸ್‌ಟಿ ಪಾವತಿಗೆ ನೋಟಿಸ್ ನೀಡಿತ್ತು. ಈ ಹಿನ್ನೆಲೆಯಲ್ಲಿ ಕರ್ನಾಟಕ ಕಾಫಿ ಬೆಳೆಗಾರರ ಸಂಘ ಹಾಗೂ ಕರ್ನಾಟಕ ಪ್ಲಾಂಟರ್ಸ್ ಅಸೋಸಿಯೇಷನ್ ನಿಯೋಗ ಯದುವೀರ್ ಅವರನ್ನು ಭೇಟಿ ಮಾಡಿ ಪರಿಸ್ಥಿತಿ ಮನವರಿಕೆ ಮಾಡಿಕೊಟ್ಟಿದ್ದರು.

ಬೆಳೆಗಾರರ ಮನವಿಯನ್ನು ಗಂಭೀರವಾಗಿ ಪರಿಗಣಿಸಿದ ಯದುವೀರ್ ಅವರು, ದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಕರಿಮೆಣಸಿಗೆ ವಿಧಿಸಿರುವ ಜಿಎಸ್‌ಟಿ ರದ್ದು ಮಾಡುವಂತೆ ಮನವಿ ಮಾಡಿದ್ದರು.

ಯದುವೀರ್ ಆಗ್ರಹವನ್ನು ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಪ್ರಸ್ತಾಪಿಸಿದ ನಿರ್ಮಲಾ ಸೀತಾರಾಮನ್ ಅವರು, ಕರಿ ಮೆಣಸು ಮೇಲೆ ವಿಧಿಸಿದ್ದ ಜಿಎಸ್‌ಟಿ ರದ್ದು ಮಾಡಿ ಆದೇಶ ಹೊರಡಿಸಿದ್ದಾರೆ. ಇದರಿಂದ ಕೊಡಗು ಮಾತ್ರವಲ್ಲದೆ ಕರಿಮೆಣಸು ಬೆಳೆಯುವ ಭಾರತದ ಇತರೆ ಬೆಳೆಗಾರರಿಗೂ ಇದರಿಂದ ಅನುಕೂಲವಾಗಿದೆ.

ಮಲೇಷ್ಯಾ ಏರ್‌ಲೈನ್ಸ್‌ನ ಎಂಹೆಚ್ 370 ಮಹಾ ದುರಂತ: ಮತ್ತೆ ಹುಡುಕಾಟ..!

ಬೆಂಗಳೂರು, ಫೆ.25– ನಾಪತ್ತೆಯಾಗಿರುವ ಮಲೇಷ್ಯಾ ಏರ್‌ಲೈನ್ಸ್‌ನ ಎಂಎಚ್ 370 ವಿಮಾನದ ಶೋಧ ಕಾರ್ಯ ಹಲವು ವರ್ಷಗಳ ನಂತರ ಮತ್ತೆ ಆರಂಭವಾಗುತ್ತಿದೆ. 239 ಮಂದಿ ಪ್ರಯಾಣಿಸುತ್ತಿದ್ದ ಆ ನತದೃಷ್ಟ ವಿಮಾನ 2014ರ ಮಾರ್ಚ್ 8ರಂದು ಕಣ್ಮರೆಯಾಗಿತ್ತು.

ಬ್ರಿಟನ್‌ನ ಸಾಗರ ಸಂಶೋಧನಾ ಕಂಪನಿ ಓಷಿಯನ್ ಇನ್ಫಿನಿಟಿ, ಎಂಎಚ್ 370 ವಿಮಾನವನ್ನು ಹುಡುಕಾಡುವ ಕೆಲಸವನ್ನು ಆರಂಭಿಸುತ್ತಿದೆ. ತನ್ನ ಅತ್ಯಾಧುನಿಕ ಹಡಗುಗಳನ್ನು, ಸಲಕರಣೆಗಳನ್ನು ಸಮುದ್ರದಾಳಕ್ಕೆ ಇಳಿಸುತ್ತಿದೆ ಎಂದು ಮಲೇಷ್ಯಾದ ಸಾರಿಗೆ ಸಚಿವ ಆಂಥೋನಿ ಲೋಕ್ ಹೇಳಿದ್ದಾರೆ. ಆದರೆ ಈ ಹುಡುಕಾಟಕ್ಕೆ ಓಷಿಯನ್ ಇನ್ಫಿನಿಟಿ ಕಂಪನಿಗೆ ಯಾವುದೇ ಗಡುವನ್ನು ವಿಧಿಸುತ್ತಿಲ್ಲ. ಹೊಸ ಆಶಾಭಾವನೆಯೊಂದಿಗೆ ಹುಡುಕಾಟಕ್ಕೆ ಅವರು ಸಿದ್ಧರಿದ್ದಾರೆ ಎಂದು ಹೇಳಿದ್ದಾರೆ. ಈ ಕುರಿತು ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ ಸೇರಿದಂತೆ ಅನೇಕ ಅಂತರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ವಿಮಾನ ಕಣ್ಮರೆಯಾದಾಗಿನಿಂದ 2018ರವರೆಗೆ ದಕ್ಷಿಣ ಹಿಂದೂ ಮಹಾಸಾಗರದಲ್ಲಿ ವಿಮಾನಕ್ಕಾಗಿ ಸಾಕಷ್ಟು ಶೋಧ ಕಾರ್ಯ ನಡೆಸಲಾಗಿತ್ತು. ಆದರೆ ಆ ವಿಮಾನದ ಕುರಿತು ಇನ್ನೂ ಯಾವುದೇ ಅಧಿಕೃತ ಸುಳಿವು ಸಿಕ್ಕಿಲ್ಲ.

ಸತತ ನಾಲ್ಕು ವರ್ಷ ಮಲೇಷ್ಯಾ, ಚೀನಾ, ಆಸ್ಟ್ರೇಲಿಯಾ ಹಾಗೂ ಜಗತ್ತಿನ ಇತರ ಅನೇಕ ದೇಶಗಳು ಮುಂದೆ ನಿಂತು ಲಭ್ಯವಿರುವ ಎಲ್ಲ ತಂತ್ರಗಳನ್ನು ಉಪಯೋಗಿಸಿ ಶೋಧ ಕಾರ್ಯ ನಡೆಸಿದರೂ ಇದುವರೆಗೆ ಆ ವಿಮಾನ ಏನಾಯಿತು, ಅದರಲ್ಲಿದ್ದವರು ಏನಾದರು, ಎನ್ನುವುದು ಅಧಿಕೃತವಾಗಿ ತಿಳಿದು ಬಂದಿಲ್ಲ. 2018 ರಲ್ಲಿ ಯಾವುದೇ ನಿಖರ ಫಲಿತಾಂಶ ಇಲ್ಲದೇ ಶೋಧ ಕಾರ್ಯಾಚರಣೆಯೂ ಅಧಿಕೃತವಾಗಿ ಅಂತ್ಯಗೊಂಡಿತ್ತು. ಈಗ ಮತ್ತೆ ಆರಂಭವಾಗುತ್ತಿದೆ.

ಭಗತ್‌ಸಿಂಗ್, ಅಂಬೇಡ್ಕರ್ ಭಾವಚಿತ್ರ ತೆರವು ಖಂಡಿಸಿ

ದೆಹಲಿ ಮುಖ್ಯಮಂತ್ರಿ ರೇಖಾಗುಪ್ತ ವಿರುದ್ಧ ಮೈಸೂರಲ್ಲಿ ಪ್ರತಿಭಟನೆ

ಮೈಸೂರು, ಫೆ.25(ಎಸ್‌ಪಿಎನ್)– ದೆಹಲಿ ಮುಖ್ಯಮಂತ್ರಿ ರೇಖಾಗುಪ್ತ ನೇತೃತ್ವದ ರಾಜ್ಯ ಸರ್ಕಾರ, ದೆಹಲಿ ಸೆಕ್ರೆಟರಿಯೇಟ್, ವಿಧಾನಸಭೆ ಹಾಗೂ ಮುಖ್ಯಮಂತ್ರಿಗಳ ಕಚೇರಿಯಿಂದ ಸ್ವಾತಂತ್ರ್ಯ ಹೋರಾಟಗಾರ ಭಗತ್‌ಸಿಂಗ್, ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ತೆಗೆದುಹಾಕಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ವೇದಿಕೆ ಹಾಗೂ ಕಾಂಗ್ರೆಸ್ ಮುಖಂಡರು, ಅಹಿಂದ ಮುಖಂಡರು ಮೈಸೂರು ಜಿಲ್ಲಾ ನ್ಯಾಯಾಲಯದ ಮುಂಭಾಗ ಮಹಾತ್ಮಗಾಂಧಿ ಪುತ್ಥಳಿ ಬಳಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಕೇಂದ್ರ ಸರ್ಕಾರ, ಪ್ರಧಾನಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ದೆಹಲಿ ಮುಖ್ಯಮಂತ್ರಿ ರೇಖಾಗುಪ್ತ ಹಾಗೂ ಆರ್‌ಎಸ್‌ಎಸ್ ವಿರುದ್ಧ ಸಂವಿಧಾನ ವಿರೋಧಿ ಕೇಂದ್ರ ಸರ್ಕಾರಕ್ಕೆ, ಅಂಬೇಡ್ಕರ್ ವಿರೋಧಿ ಆರ್‌ಎಸ್‌ಎಸ್‌ಗೆ, ಮನುವಾದವನ್ನು ಪೋಷಿಸುತ್ತಿರುವ ಬಿಜೆಪಿ ವಿರುದ್ಧ ಧಿಕ್ಕಾರ ಕೂಗಿ ತಮ್ಮ ಆಕ್ರೋಶ ಹೊರಹಾಕಿದರು.

ಇದೇ ವೇಳೆ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ಮಾತನಾಡಿ, ಮುಖ್ಯಮಂತ್ರಿಯಾದ ಎರಡೇ ದಿನಕ್ಕೆ ದೆಹಲಿ ಸಿಎಂ ರೇಖಾ ಗುಪ್ತಾ, ದೆಹಲಿ ವಿಧಾನಸೌಧ ಸಭಾಂಗಣ ಮತ್ತು ಸಿಎಂ ಕಚೇರಿಯಲ್ಲಿ ಹಿಂದಿನ ಸರ್ಕಾರದ ಅವಧಿಯಲ್ಲಿ ಹಾಕಿದ್ದ ಸ್ವಾತಂತ್ರ್ಯ ಹೋರಾಟಗಾರ ಭಗತ್‌ಸಿಂಗ್, ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರ ತೆಗೆಯುವ ಮೂಲಕ ಬಿಜೆಪಿ ಮತ್ತು ಆರ್‌ಎಸ್‌ಎಸ್ ಮನಸ್ಸಿನ ಆಲೋಚನೆ ಏನೆಂಬುದನ್ನು ಮತ್ತೊಮ್ಮೆ ಈ ಘಟನೆ ಮೂಲಕ



ದೆಹಲಿ ಮುಖ್ಯಮಂತ್ರಿ ರೇಖಾಗುಪ್ತ ವಿರುದ್ಧ ವಿವಿಧ ಸಮುದಾಯದ ಮುಖಂಡರು ಮಹಾತ್ಮಗಾಂಧಿ ಪುತ್ಥಳಿ ಬಳಿ ಪ್ರತಿಭಟನೆ ನಡೆಸಿದರು.

ಸಾಬೀತುಪಡಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಂ ಮಾತನಾಡಿ, ಬಿಜೆಪಿ ನೇತೃತ್ವದ ಸರ್ಕಾರದಲ್ಲಿ ಆರ್‌ಎಸ್‌ಎಸ್ ಹಿಡನ್ ಅಜೆಂಡಾ ಜಾರಿಗೊಳಿಸಿ, ಡಾ.ಬಿ.ಆರ್.ಅಂಬೇಡ್ಕರ್ ರಚಿತ ಸಂವಿಧಾನವನ್ನು ಬುಡಮೇಲು ಮಾಡುವ ಕೆಲಸವನ್ನು ಪ್ರಧಾನಮಂತ್ರಿ ಮೋದಿ ನೇತೃತ್ವದಲ್ಲಿ ಜಾರಿಗೊಳಿಸಲು ಮುಂದಾಗಿದೆ. ಬಿಜೆಪಿಯನ್ನು ಬುಡಸಮೇತ ಕಿತ್ತು ಹಾಕಬೇಕು. ಈ ಕೂಡಲೇ ರಾಷ್ಟ್ರಪತಿಗಳು ಮಧ್ಯಪ್ರವೇಶ ಮಾಡಿ ದೆಹಲಿ ಸಿಎಂ ರೇಖಾಗುಪ್ತ ಅವರನ್ನು ವಜಾಗೊಳಿಸುವಂತೆ ಒತ್ತಾಯಿಸಿದರು. ಇಲ್ಲದಿದ್ದರೆ, ಮೈಸೂರು ಜಿಲ್ಲಾ ಬಿಜೆಪಿ ಮತ್ತು ಆರ್‌ಎಸ್‌ಎಸ್ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಆಗ್ರಹಿಸಿದರು.

ಹಿರಿಯ ಕಾಂಗ್ರೆಸ್ ಮುಖಂಡ ಹೆಚ್.ವಿ.ರಾಜೀವ್ ಮಾತನಾಡಿ, ಬಿಜೆಪಿ ಮತ್ತು ಆರ್.ಎಸ್.ಎಸ್ ಅಜೆಂಡಾನೇ ಸಂವಿಧಾನ ಬದಲಿಸುವುದು. ಈಗಲಾದರು ಬಿಜೆಪಿಯಲ್ಲಿರುವ ದಲಿತರು, ಹಿಂದುಳಿದವರು ಮತ್ತು ಮಹಿಳೆಯರು ಬಿಜೆಪಿ ಪಕ್ಷ ಬಿಟ್ಟು ಹೊರಬರಬೇಕು. ಸ್ವಾತಂತ್ರ್ಯ ಹೋರಾಟಗಾರ ಭಗತ್‌ಸಿಂಗ್, ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಗಳನ್ನು ತೆಗೆಸಿ, ದ್ವೇಷ ಸಾಧಿಸುತ್ತಿದೆ ಎಂದು ಆಕ್ರೋಶ ಹೊರಹಾಕಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ದಲಿತರನ್ನು ಒಡೆಯಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಮನೆ ಬಾಗಿಲು ಕಾಯುತ್ತಿದ್ದ ವಿಧಾನ ಪರಿಷತ್ ವಿಪಕ್ಷನಾಯಕ ಛಲವಾದಿ ನಾರಾಯಣಸ್ವಾಮಿಯನ್ನು ಎತ್ತಿಕಟ್ಟಿ ಅವಮಾನ ಮಾಡುತ್ತಿದೆ. ಮಾಜಿ ಶಾಸಕ ಎನ್.ಮಹೇಶ್ ಸೇರಿದಂತೆ ಇತರೆ ದಲಿತ ಮುಖಂಡರು ಈ ಕುರಿತು ಮಾತನಾಡಬೇಕು. ಅಂತೆಯೇ ಈಗ ಮುಸ್ಲಿಮರನ್ನು ಒಡೆಯಬೇಕು ಎಂದು ನಿರಂತರವಾಗಿ ಪ್ರಯತ್ನ ಪಡುತ್ತಿದ್ದಾರೆ. ಅದಕ್ಕಾಗಿಯೇ ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣ ತಣ್ಣಗಾಗಿದ್ದರೂ ಅದನ್ನು ಮತ್ತೆ ಮತ್ತೆ ಮುನ್ನೆಲೆಗೆ ತರುವ ಸಾಹಸವನ್ನು ಬಿಜೆಪಿ, ಆರ್‌ಎಸ್‌ಎಸ್ ಮಾಡುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಚಂದ್ರಶೇಖರ್, ವಕೀಲ ಪುಟ್ಟಸಿದ್ದೇಗೌಡ, ಎನ್.ಆರ್.ಕಾಂತರಾಜು, ಜಿ.ಪಂ ಮಾಜಿ ಉಪಾಧ್ಯಕ್ಷ ಸುಬ್ಬಯ್ಯ, ವಕೀಲ ಪರಂಜ್ಯೋತಿ, ತನುಜಾ ಮಹೇಶ್, ಕೋಮಲ, ಕಾಂಗ್ರೆಸ್ ಮುಖಂಡರಾದ ಈಶ್ವರ್ ಚಕ್ಕಡಿ, ರಾಜೇಶ್, ಬಿಎಸ್ಪಿ ಮುಖಂಡ ಚಂದ್ರಶೇಖರ್, ನಾಯಕ ಸಮುದಾಯದ ಮುಖಂಡ ದ್ಯಾವಪ್ಪನಾಯಕ, ಚನ್ನಕೇಶವಮೂರ್ತಿ, ಮುರಳಿ, ಮುದ್ದುಮಾದಯ್ಯ, ಮಡಿವಾಳ ಸಂಘದ ಜಿಲ್ಲಾಧ್ಯಕ್ಷ ರವಿನಂದನ್, ಲೋಕೇಶ್‌ಕುಮಾರ್, ಕನಕರಾಜ್, ಯೋಗೇಶ್ ಉಪ್ಪಾರ್, ರೈತ ಮುಖಂಡ ಕಂದೇಗಾಲ ಶ್ರೀನಿವಾಸ, ಚಿನ್ನಂಬಳ್ಳಿ ದೊರೆಸ್ವಾಮಿ, ಮಾವಳ್ಳಿ ರವಿ, ಎಡತಲೆ ಮಂಜುನಾಥ್, ಶಿವಸ್ವಾಮಿ, ಸೋಮರಾಜ್, ಜಯಸುಂದರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ತಂಡೆಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಡ್ರ್ಯಾಗನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಗೇಮ್ ಚೇಂಜರ್ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಛಾವಾ (ಹಿಂ)	4 ಪ್ರದರ್ಶನಗಳು
ರಾಜಕಮಲ್	
ನಿಲವುಕು ಎನಮೇಲ್ ಎನ್ನಡಿ ಕೋಪಂ(ತ)	4 ಪ್ರದರ್ಶನಗಳು
ಸಂಗಂ	
ವಿಷ್ಣುಪ್ರಿಯ (ಕ)	4 ಪ್ರದರ್ಶನಗಳು
ಲಿಡೋ	
ಡಾಕು ಮಹಾರಾಜ್ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಇದಮೊಯರ್ಚಿ (ತ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ವಿದ್ಧಾಮುಯರ್ಚಿ (ತ): ಬೆ.6.55ಕ್ಕೆ, ಬೆ10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್

LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅತ್ಯಾಚಾರ ಆರೋಪಿಗೆ 10 ವರ್ಷ ಕಠಿಣ ಶಿಕ್ಷೆ

ಮೈಸೂರು, ಫೆ. 25(ಆರ್‌ಕೆ)– ದೆವ್ವ ಬಿಡಿಸಿದರೆ ವಿವಾಹವಾಗುತ್ತದೆ ಎಂದು ಹೇಳಿ ಮಸೀದಿ ಹಿಂಭಾಗದ ಗೋರಿ ಬಳಿ ಕರೆಸಿಕೊಂಡು ಅವಿವಾಹಿತೆ ಮೇಲೆ ಅತ್ಯಾಚಾರವೆಸಗಿದ್ದ ಧರ್ಮಗುರು ಸೋಗಿನ ವ್ಯಕ್ತಿಗೆ ಮೈಸೂರು ನ್ಯಾಯಾಲಯವು 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ.


ಹುಣಸೂರು ಪಟ್ಟಣದ ಲಾಲ್‌ಬಂದ ಸ್ಟ್ರೀಟ್ ನಿವಾಸಿ ಜಬೀವುಲ್ಲಾ ಶಿಕ್ಷೆಗೊಳಗಾದ ಆರೋಪಿ. 33 ವರ್ಷಗಳಾದರೂ ಮದುವೆಯಾಗದೇ ಇದ್ದ ಸಂತ್ರಸ್ತೆಗೆ ದೆವ್ವ ಹಿಡಿದಿದೆ, ಪೂಜೆ ಮಾಡಿ ದೆವ್ವ ಬಿಡಿಸಿದರೆ ಮದುವೆಯಾಗುತ್ತದೆ ಎಂದು ಹೇಳಿ 2020ರ ಜೂನ್ 1ರುದು ಆಕೆಯ ಮನೆಯಲ್ಲಿ ಆರೋಪಿ ಪೂಜೆ ಮಾಡಿದ್ದ.

ಮೊಟ್ಟೆ, ನಿಂಬೆಹಣ್ಣನ್ನು ಅಂಬ್ರಿ ಗೋರಿ ಬಳಿ ಒಡೆಯಬೇಕೆಂದು ಆತ ಹೇಳಿದ ಹಿನ್ನೆಲೆಯಲ್ಲಿ ಸಂಬಂಧಿ ಸಾಧಿಕ್ ಪಾಷಾ ಸಂತ್ರಸ್ತೆಯನ್ನು ಪಿರಿಯಾಪಟ್ಟಣದ ಬೋಲೆಬಾಲೆ ಗೋರಿ ಬಳಿ ಕರೆದೊಯ್ದಿದ್ದರು. ಪಿರಿಯಾಪಟ್ಟಣ ಟೌನ್‌ಗೆ ಹೋಗಿ ಬೆಂಕಿಪೊಟ್ಟಣ ತರುವಂತೆ ಸಾಧಿಕ್ ಪಾಷಾನನ್ನು ಕಳುಹಿಸಿದ ಜಬೀವುಲ್ಲಾ, ಮಧ್ಯಾಹ್ನ 1.30 ಗಂಟೆ ವೇಳೆಗೆ ಅಂಬ್ರಿ ಮಸೀದಿಯ ಒಳಭಾಗದ ಗೋರಿ ಹಿಂಭಾಗಕ್ಕೆ ಸಂತ್ರಸ್ತೆಯನ್ನು ಕರೆದೊಯ್ದು ತಾನು ಸಂಭೋಗ ಮಾಡಿದರೆ ಮದುವೆಯಾಗುತ್ತದೆ ಎಂದು ತಿಳಿಸಿ, ಬಲವಂತವಾಗಿ ಅತ್ಯಾಚಾರ ಮಾಡಿದ್ದ.

ಪ್ರಕರಣ ದಾಖಲಿಸಿಕೊಂಡಿದ್ದ ಪಿರಿಯಾಪಟ್ಟಣ ಸರ್ಕಲ್‌ನ ಅಂದಿನ ಇನ್‌ಸ್ಪೆಕ್ಟರ್ ಬಿ.ಆರ್. ಪ್ರದೀಪ್ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲದ ನ್ಯಾಯಾಧೀಶ ಎಂ. ರಮೇಶ ಅವರು, ವಾದ–ಪ್ರತಿವಾದಗಳನ್ನು ಆಲಿಸಿದಾಗ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿಗೆ 10 ವರ್ಷಗಳ ಕಠಿಣ ಸಜೆ ಮತ್ತು 30,000 ರೂ. ದಂಡ, ಐಪಿಸಿ ಸೆಕ್ಷನ್ ಮತ್ತು 5,000 ರೂ. ದಂಡ ವಿಧಿಸಿ ಇಂದು ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಕೆ. ನಾಗರಾಜ ವಾದ ಮಂಡಿಸಿದ್ದರು.

ಶಿವರಾತ್ರಿ ಹಿನ್ನೆಲೆ ಶ್ರೀ ಭೋಗೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ

ಮೈಸೂರು, ಫೆ.25(ಬಿಎಲ್‌ಯು)– ಮೈಸೂರಿನ ಬೋಗಾದಿಯ ಇತಿಹಾಸ



ಪ್ರಸಿದ್ಧ ಶ್ರೀ ಕ್ಷೇತ್ರ ಶ್ರೀ ಭೋಗೇಶ್ವರ, ಶ್ರೀ ಸಪ್ತಮಾತೃಕಾ ಹಿರಿದೇವಮ್ಮ ದೇವಸ್ಥಾನದಲ್ಲಿ ಶಿವರಾತ್ರಿ ಜಾತ್ರಾ ಮಹೋತ್ಸವದ ಹಿನ್ನೆಲೆ ನಾಳೆ (ಫೆಬ್ರವರಿ 26) ಹಲವು ಪೂಜಾ ಕಾರ್ಯ ನಡೆಯಲಿದೆ. ನಾಳೆ ಮುಂಜಾನೆ 5 ಗಂಟೆಗೆ ಮಹಾ ಸಂಕಲ್ಪ, ಗಣಪತಿ ಹೋಮ, ಶ್ರೀ ಭೋಗೇಶ್ವರ ಸ್ವಾಮಿಗೆ ಪಂಚಾಮೃತ ಅಭಿಷೇಕ, ಅಲಂಕಾರ, ಅರ್ಚನೆ, ಸಹಸ್ರನಾಮ ಅರ್ಪಣೆ ನಂತರ ಶಿವ ಪಂಚಾಕ್ಷರಿ ಹೋಮ ಸೇರಿದಂತೆ ಹಲವು ಧಾರ್ಮಿಕ ಕಾರ್ಯ ನೆರವೇರಿಸಲಾಗುವುದು. ನಂತರ ಮಹಾ ಮಂಗಳಾರತಿ ನಡೆಯಲಿದ್ದು, ತೀರ್ಥ ಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಜಾಗರಣೆ ಹಿನ್ನೆಲೆ ದಿನದ 24 ಗಂಟೆ ಕಾಲ ದೇವರಿಗೆ ರುದ್ರಾಭಿಷೇಕ ಸೇರಿದಂತೆ ಹಲವು ಪೂಜಾ ಕಾರ್ಯ ನೆರವೇರಲಿದೆ. ಶಿವರಾತ್ರಿ ಹಬ್ಬದ ಹಿನ್ನೆಲೆ ನಾಳೆ ಬೆಳಿಗ್ಗೆಯಿಂದ ಮಾರನೆ ದಿನ ಬೆಳಗ್ಗೆವರೆಗೆ ಹಲವು ಸಾಂಸ್ಕೃತಿಕ ಕಾರ್ಯಕ್ರಮ ಕೂಡ ಆಯೋಜಿಸಲಾಗಿದೆ.

ಅಧಿವೇಶನದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ–ಜೆಡಿಎಸ್ ಜಂಟಿ ಹೋರಾಟ: ಆರ್. ಅಶೋಕ್

ಜೆಡಿಎಸ್-ಬಿಜೆಪಿ ಸಮನ್ವಯ ಸಮಿತಿ ಸಭೆಯಲ್ಲಿ ಈ ನಿರ್ಧಾರ



ಜೆಡಿಎಸ್– ಬಿಜೆಪಿ ಸಮನ್ವಯ ಸಮಿತಿ ಸಭೆ ನಡೆಯಿತು.

ಬೆಂಗಳೂರು: ರಾಜ್ಯದ ಸಮಸ್ಯೆಗಳ ಪರಿಹಾರಕ್ಕಾಗಿ ವಿಧಾನಮಂಡಲ ಅಧಿವೇಶನದಲ್ಲಿ ಹೋರಾಟ ನಡೆಸಲು ಬಿಜೆಪಿ ಹಾಗೂ ಜೆಡಿಎಸ್ ತಯಾರಿ ಮಾಡಿಕೊಳ್ಳುತ್ತಿವೆ. ಇದರ ಪೂರ್ವಭಾವಿಯಾಗಿ ಇಂದು ಖಾಸಗಿ ಹೋಟೆಲ್‌ನಲ್ಲಿ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅಧ್ಯಕ್ಷತೆಯಲ್ಲಿ ಜೆಡಿಎಸ್– ಬಿಜೆಪಿ ಸಮನ್ವಯ ಸಮಿತಿ ಸಭೆ ಕರೆಯಲಾಗಿತ್ತು. ಅಧಿವೇಶನದಲ್ಲಿ ಅನುಸರಿಸಬೇಕಾದ ಕಾರ್ಯತಂತ್ರಗಳ ಬಗ್ಗೆ ಉಭಯ ಪಕ್ಷಗಳ ಮುಖಂಡರು ಸುಮಾರು ಎರಡು ಗಂಟೆಗಳ ಕಾಲ ಸಮಾಲೋಚನೆ ನಡೆಸಿದರು.

ಸಭೆ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಪ್ರತಿಪಕ್ಷದ ನಾಯಕ ಆರ್.ಅಶೋಕ್, ರಾಜ್ಯದ ಎಲ್ಲ ಸಮಸ್ಯೆಗಳನ್ನು ಪರಿಹರಿಸುವಂತೆ ಒತ್ತಾಯಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ–ಜೆಡಿಎಸ್ ಜಂಟಿಯಾಗಿ ಅಧಿವೇಶನದಲ್ಲಿ ಹೋರಾಟ ಮಾಡಲಿವೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಕೋಮುಗಲಭೆ ಹೆಚ್ಚಾಗಿದೆ. ಮೈಸೂರಿನಲ್ಲಿ ಇತ್ತೀಚೆಗೆ ಮುಸ್ಲಿಮರು ಪೊಲೀಸರ ಮೇಲೆಯೇ ಹಲ್ಲೆ ಮಾಡಿದ್ದಾರೆ. ಮೈಕ್ರೋ ಫೈನಾನ್ಸ್‌ಗಳ ಸಾಲದ ಹೊರೆಯಿಂದಾಗಿ ಜನರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಕೆಪಿಎಸ್‌ಸಿಯಲ್ಲಿ ಭ್ರಷ್ಟಾಚಾರ ಮಿತಿಮೀರಿದ್ದು, ಲಂಚ ನೀಡಿ ಪಾಸಾಗಬೇಕಾದ ಸ್ಥಿತಿ ಬಂದಿದೆ ಎಂದು ದೂರಿದರು.

ಕೆಪಿಎಸ್‌ಸಿಯಲ್ಲಿ ಕನ್ನಡದ ಕೊಲೆಯಾಗುತ್ತಿದೆ. ಸಿಎಂ ಸಿದ್ದರಾಮಯ್ಯ ಕನ್ನಡ ಕಾವಲು ಸಮಿತಿಯ ಅಧ್ಯಕ್ಷರಾಗಿದ್ದರು ಎಂಬುದನ್ನು ಮರೆತಿದ್ದಾರೆ. ಬಿಜೆಪಿ ಸರ್ಕಾರ ರೈತ ಸ್ನೇಹಿಯಾಗಿದ್ದರೆ, ಕಾಂಗ್ರೆಸ್‌ನಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಬೆಂಗಳೂರಿನಲ್ಲಿ ಅಭಿವೃದ್ಧಿ ಕುಂಠಿತವಾಗಿದೆ. ಎಲ್ಲೆಲ್ಲೂ ಕಸದ ರಾಶಿ ಕಂಡುಬರುತ್ತಿದೆ. ಇವೆಲ್ಲ ಸಮಸ್ಯೆಗಳ ವಿರುದ್ಧ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ನಡೆದ ಸಭೆಯಲ್ಲಿ ಕೇಂದ್ರ ಸಚಿವ, ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಡಿ.ವಿ.ಸದಾನಂದ ಗೌಡ, ಸಂಸದರಾದ ತೇಜಸ್ವಿಸೂರ್ಯ, ಪಿ.ಸಿ.ಮೋಹನ್, ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್, ಶಾಸಕರಾದ ಗೋಪಾಲಯ್ಯ, ಎಸ್.ಆರ್. ವಿಶ್ವನಾಥ್, ಮುನಿರತ್ನ, ಸಿ.ಕೆ.ರಾಮಮೂರ್ತಿ, ಎಂ.ಕೃಷ್ಣಪ್ಪ, ರವಿ ಸುಬ್ರಮಣ್ಯ, ಬೈರತಿ ಬಸವರಾಜ್, ಉದಯ ಗರುಡಾಚಾರ್, ಮಾಜಿ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ವಿಧಾನಪರಿಷತ್ ಸದಸ್ಯ ಬೋಜೇಗೌಡ ಮತ್ತಿತರರು ಭಾಗವಹಿಸಿದ್ದರು.

ಗ್ರೇಟರ್ ಬೆಂಗಳೂರು ಮೂಲಕ ನಾಡಪ್ರಭು ಹೆಸರು ಅಳಿಸುವ ಹುನ್ನಾರ

ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪ

ಬೆಂಗಳೂರು: ಗ್ರೇಟರ್ ಬೆಂಗಳೂರು ಮೂಲಕ ನಾಡಪ್ರಭು ಕೆಂಪೇಗೌಡರ ಹೆಸರನ್ನು ಸಂಪೂರ್ಣವಾಗಿ ಅಳಿಸಲು ಹೊರಟಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಕಿಡಿಕಾರಿದರು.

ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ಸಭೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಗ್ರೇಟರ್ ಬೆಂಗಳೂರು ಮಾಡಲು ಹೊರಟಿದೆ ಎಂದು ಪತ್ರಿಕೆಗಳಲ್ಲಿ ನೋಡಿದ್ದೇನೆ. ಯಾವ ಬಿಲ್ ಮಂಡನೆ ಮಾಡುತ್ತಾರೆ ನೋಡೋಣ. ಆದರೆ ಬೆಂಗಳೂರು ಮಹಾನಗರವನ್ನು ಏಳೆಂಟು ಪಾಲಿಕೆಗಳನ್ನಾಗಿ ಒಡೆಯಲು ಹೊರಟಿದ್ದಾರೆ. ಈ ಮೂಲಕ ನಾಡಪ್ರಭು ಕೆಂಪೇಗೌಡರ ಹೆಸರನ್ನು ಸಂಪೂರ್ಣವಾಗಿ ನಾಶ ಮಾಡಲು ಹೊರಟಿದ್ದಾರೆ. ಜನರೇ ಈ ಬಗ್ಗೆ ತೀರ್ಮಾನಿಸುತ್ತಾರೆ ಎಂದು ಹೇಳಿದರು.

ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಎರಡೂ ಪಕ್ಷಗಳ ಶಾಸಕರು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಎಲ್ಲರೂ ಜೊತೆಗೂಡಿ ಹಲವು ವಿಚಾರಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಮುಂದಿನ ವಿಧಾನಸಭೆ ಕಲಾಪದಲ್ಲಿ ಯಾವ ವಿಷಯಗಳಿಗೆ ಆದ್ಯತೆ ನೀಡಬೇಕು, ಬಜೆಟ್ ನಂತರ ಯಾವೆಲ್ಲಾ ಅಂಶಗಳ ಮೇಲೆ ಚರ್ಚೆ ನಡೆಸಬೇಕು ಎಂದು ಸಮಾಲೋಚನೆ ಮಾಡಿದ್ದೇವೆ ಎಂದರು.

ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆ ಹದಗೆಟ್ಟಿರುವುದು, ಕೆಪಿಎಸ್‌ಸಿ ಅಕ್ರಮಗಳು, ಮೈಕ್ರೋ ಫೈನಾನ್ಸ್ ಸಮಸ್ಯೆ, ಬಾಣಂತಿಯರ ಸಾವು, ಪರಿಹಾರ ಸಿಗದೆ ರೈತರು ಸಂಕಷ್ಟದಲ್ಲಿರುವುದು, ಕುಡಿಯುವ ನೀರಿನ ಸಮಸ್ಯೆ, ಬೆಂಗಳೂರು ಅಭಿವೃದ್ಧಿ ಕುಂಠಿತ, ಮೆಟ್ರೋ ದರ ಏರಿಕೆ, ಇಂತಹ ಹಲವು ವಿಚಾರಗಳ ಬಗ್ಗೆ ಉಭಯ ಪಕ್ಷದವರು ಒಟ್ಟಾಗಿ ಹೋರಾಟ ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗೆ ಉಚಿತ ಬಸ್ ಪ್ರಯಾಣ

ಬೆಂಗಳೂರು: ಎಸ್‌ಎಸ್‌ಎಲ್‌ಸಿ (10ನೇ ತರಗತಿ) ಮತ್ತು ದ್ವಿತೀಯ ಪಿಯುಸಿ (12ನೇ ತರಗತಿ) ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಯ ಸಮಯದಲ್ಲಿ ಉಚಿತ ಬಸ್ ಪ್ರಯಾಣವನ್ನು ಒದಗಿಸುವುದಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಘೋಷಿಸಿದೆ.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ, ಕೆಎಸ್‌ಆರ್‌ಟಿಸಿ ತನ್ನ ಬಸ್‌ಗಳಲ್ಲಿ (ನಗರ, ಉಪನಗರ, ಸಾಮಾನ್ಯ ಮತ್ತು ಎಕ್ಸ್‌ಪ್ರೆಸ್) ತಮ್ಮ ನಿವಾಸದಿಂದ ಅವರಿಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಲು ನಿರ್ಧರಿಸಿದೆ ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ.

ಮಾ.1ರಿಂದ 20ರವರೆಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಮತ್ತು ಮಾ.21ರಿಂದ ಏ.4ರವರೆಗೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ತಮ್ಮ ಪರೀಕ್ಷಾ ಪ್ರವೇಶ ಪತ್ರವನ್ನು ಪ್ರಸ್ತುತಪಡಿಸುವ ಮೂಲಕ ಈ ಸೌಲಭ್ಯವನ್ನು ಪಡೆಯಬಹುದು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.
ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು – 570028.
ದೂರವಾಣಿ ಸಂಖ್ಯೆ: 0821-2473923/2473933, ಫ್ಯಾಕ್ಸ್ ನಂ.0821-2472797
ಇ–ಮೇಲ್ : mymuladmn@gmail.com

ಟೆಂಡರ್ ಸಂಖ್ಯೆ:KMF/2024-25/SE3247 ದಿನಾಂಕ 24.02.2025

ಟೆಂಡರ್ ಪ್ರಕಟಣೆ (ಇ–ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟದ ... 2025–26ನೇ ಸಾಲಿಗೆ ... ಇ–ಪ್ರೊಕ್ಯೂರ್‌ಮೆಂಟ್ ಮುಖೇನ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ್ ದಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪ್ಲಾಟ್ ಫಾರಂ ಆದ www.kppp.karnataka.gov.in ನಲ್ಲಿ ಅಪ್‌ಲೋಡ್ ಮಾಡಬಹುದಾಗಿರುತ್ತದೆ ಹಾಗೂ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 07.03.2025 ಸಂಜೆ 5.00 ಗಂಟೆಯವರೆಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ವ್ಯವಸ್ಥಾಪಕರು (ಆಡಳಿತ) ರವರನ್ನು ಮೊಬೈಲ್ ಸಂಖ್ಯೆ: 6366430802 ಮೂಲಕ ಸಂಪರ್ಕಿಸಬಹುದಾಗಿದೆ.

ಸಹಿ/–, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,

ಮುಡಾ ಆಸ್ತಿ ಜಪ್ತಿ; ಬಲವಂತದ ಕ್ರಮ ಬೇಡ

ಕೋರ್ಟ್ ಆದೇಶ ವಿಸ್ತರಣೆ



ಬೆಂಗಳೂರು, ಫೆ.25– ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ನಿವೇಶನ ಹಂಚಿಕೆ ಅಕ್ರಮ ಪ್ರಕರಣದಲ್ಲಿ; ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ದಟ್ಟಗಳ್ಳಿಯಲ್ಲಿರುವ ಜಮೀನನ್ನು ಜಾರಿ ನಿರ್ದೇಶನಾಲಯ (ಇ.ಡಿ) ಜಪ್ತಿ ಮಾಡಿದ್ದು, ಸದ್ಯ ಈ ಕುರಿತು ಯಾವುದೇ ಬಲವಂತದ ಕ್ರಮಕ್ಕೆ ಮುಂದಾಗಬಾರದು ಎಂದು ಇಡಿಗೆ ನೀಡಿದ್ದ ಆದೇಶವನ್ನು ಹೈಕೋರ್ಟ್ ಪುನಃ ವಿಸ್ತರಿಸಿದೆ.

ಈ ಸಂಬಂಧ ಮೈಸೂರು ವಿದ್ಯಾರಣ್ಯಪುರಂನಲ್ಲಿರುವ, ಚಾಮುಂಡೇಶ್ವರಿ ನಗರ ಸರ್ವೋದಯ ಸಂಘದ ಕಾರ್ಯದರ್ಶಿ ಭೋಜರಾಜ ಅವರು ಸಲ್ಲಿಸಿರುವ ಸಿವಿಲ್ ನ್ಯಾಯಾಂಗ ನಿಂದನೆ ಅರ್ಜಿಯನ್ನು ನ್ಯಾಯಮೂರ್ತಿ ಕೆ.ಸೋಮಶೇಖರ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ಅರ್ಜಿದಾರರ ಪರ ಹಾಜರಿದ್ದ ಪದಾಂಕಿತ ಹಿರಿಯ ವಕೀಲರಾದ ಎಸ್.ಎಸ್. ನಾಗಾನಂದ ಹಾಗೂ ಡಿ.ಆರ್.ರವಿಶಂಕರ್ ವಾದ ಮಂಡಿಸಿದರು. ಇ.ಡಿ ಪರ ಹಾಜರಿದ್ದ ಮಧುಕರ ದೇಶಪಾಂಡೆ ಅವರು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡುವಂತೆ ನ್ಯಾಯಪೀಠಕ್ಕೆ ಮನವಿ ಮಾಡಿದರು.

ಇದೇ ವೇಳೆ ಮುಡಾದ ಹಾಲಿ ಆಯುಕ್ತ ಎ.ಎನ್.ರಘುನಂದನ ಪರ ಸಿ.ಪಿ. ವಿವೇಕಾನಂದ ಅವರು ವಕಾಲತ್ತು ಸಲ್ಲಿಸಿದರು. ಈ ಹಿಂದಿನ ಮುಡಾ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ಅವರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿದ ನ್ಯಾಯಪೀಠ ಅರ್ಜಿಯನ್ನು ಯೋಗ್ಯತೆಯ ಆಧಾರದಡಿ ವಿಲೇವಾರಿ ಮಾಡುವುದಾಗಿ ತಿಳಿಸಿ ವಿಚಾರಣೆಯನ್ನು ಮಾರ್ಚ್ 14ಕ್ಕೆ ಮುಂದೂಡಿತು.

ಮುಡಾದಿಂದ ನಿವೇಶನ ಹಂಚಿಕೆ ಮಾಡುವುದಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶ ಪಾಲನೆ ಮಾಡಿಲ್ಲ ಎಂದು ಚಾಮುಂಡೇಶ್ವರಿ ನಗರ ಸರ್ವೋದಯ ಸಂಘ, ಪ್ರಾಧಿಕಾರದ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ದಾಖಲಿಸಿದೆ. ಅರ್ಜಿದಾರರ ಪರ ಹೈಕೋರ್ಟ್ ವಕೀಲ ಬಿ.ಎಲ್.ಸಂಜೀವ್ ವಕಾಲತ್ತು ವಹಿಸಿದ್ದಾರೆ.

ಹಿರಿಯ ರಂಗ ಕಲಾವಿದೆ ವಿಮಲಾ ರಂಗಾಚಾರ್ ವಿಧಿವಶ

ಬೆಂಗಳೂರು, ಫೆ.25– ಹಿರಿಯ ರಂಗ ಕಲಾವಿದೆ, ಸಂಘಟಕಿ, ಲಲಿತಕಲೆಗಳ ಪೋಷಕರಾಗಿದ್ದ ವಿಮಲಾ ರಂಗಾಚಾರ್ (97) ವಿಧಿವಶರಾದರು.



ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದ ವಿಮಲಾ ನಿಧನಕ್ಕೆ ಗಣ್ಯರು ಸಂತಾಪ ಸೂಚಿಸಿದ್ದಾರೆ. ಭಾರತೀಯ ನಾಟ್ಯ ಸಂಘದ ಕರ್ನಾಟಕ ಘಟಕದ ಅಧ್ಯಕ್ಷರಾಗಿದ್ದ ಅವರು, ಬೆಂಗಳೂರಿನ ಎಡಿಎ ರಂಗ ಮಂದಿರದ ಗೌರವ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದರು. ಜೊತೆಗೆ ಶಿಕ್ಷಣ ಕ್ಷೇತ್ರ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅವರ ಕೊಡುಗೆ ಅನನ್ಯವಾಗಿದೆ. ಬೆಂಗಳೂರಿನ ಸೇವಾ ಸದನವನ್ನು ವಿಮಲಾ ರಂಗಾಚಾರ್ ಕಟ್ಟಿ ಬೆಳೆಸಿದ್ದರು. ವಿಮಲಾ ಅವರ ಪುತ್ರಿ ರೇವತಿ ವಿದೇಶದಲ್ಲಿದ್ದು, ಅವರು ಬೆಂಗಳೂರಿಗೆ ಬಂದ ಬಳಿಕ ಫೆ.27ರಂದು ಅಂತ್ಯಕ್ರಿಯೆ ನಡೆಯಲಿದೆ.

ನಿಧನ



ಬೊಳ್ಳಕರಂಡಕಿಟ್ಟಿ


ಮೈಸೂರು, ಫೆ.25–ಮೈಸೂರು ಕುವೆಂಪುನಗರ ಅನಿಕೇತನ ರಸ್ತೆಯ ಮೂರನೇ ಕ್ರಾಸ್ (ನಂ.86) ನಿವಾಸಿ, ಬೋಪಯ್ಯ ಅವರ ಪತ್ನಿ ಬೊಳ್ಳಕರಂಡಕಿಟ್ಟಿ (ಕುಪ್ಪಚಿರ) ಅವರು ಇಂದು ಮುಂಜಾನೆ ನಿಧನರಾದರು. ಅವರಿಗೆ 72 ವರ್ಷ ವಯಸ್ಸಾಗಿತ್ತು. ಮೃತರು ಪತಿ, ಪುತ್ರಿ ಶ್ರುತಿ ಬೋಪಯ್ಯ, ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು ಮಧ್ಯಾಹ್ನ ಗೋಕುಲಂನ ಚಿರಶಾಂತಿ ಧಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅಹಮದ್ ಷರೀಫ್ ಹಸನ್



ಮೈಸೂರಿನ ಉದಯಗಿರಿ ಎರಡನೇ ಹಂತದ ಸಿಐಟಿಬಿ ಕಾಲೋನಿ ನಿವಾಸಿ ಅಹಮದ್ ಷರೀಫ್ ಹಸನ್ (71) ಇಂದು ಬೆಳಗ್ಗೆ ಹರ್ಯಾಣದ ಯಮುನಾನಗರದಲ್ಲಿ ನಿಧನರಾದರು. ಇವರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು, ಅಪಾರ ಬಂಧು– ಮಿತ್ರರನ್ನು ಅಗಲಿದ್ದಾರೆ. ಇಂದು ರಾತ್ರಿ 11 ಗಂಟೆಗೆ ಯಮುನಾನಗರದ ಮದರಸೆ ವಾಲಿಂ ಮಜ್ಜಿದ್‌ನಲ್ಲಿ ನಮಾಜ್–ಇ–ಜನಾಜ್ ನಂತರ ಅಂತ್ಯಕ್ರಿಯೆ ನೆರವೇರಿತು ಎಂದು ಮೂಲಗಳು ತಿಳಿಸಿವೆ.

ಎಂ.ಎನ್.ನಟರಾಜ



ಮೈಸೂರು, ಫೆ.25– ನಗರದ ಕೆ.ಆರ್.ಮೊಹಲ್ಲಾ, ವೀಣೆಶೇಷಣ್ಣ ರಸ್ತೆ ನಿವಾಸಿ ಎಂ.ಎನ್.ನಟರಾಜ(ಕೇಬಲ್ ನಟ–45 ವರ್ಷ) ಅವರು ಮಂಗಳವಾರ ನಿಧನರಾದರು. ಇವರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಬುಧವಾರ ಮಧ್ಯಾಹ್ನ 12.30ಕ್ಕೆ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ 45

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

POLICE PUBLIC SCHOOL

(Run by the Karnataka State Police Welfare and Education Trust, Mysore)

INVITES APPLICATIONS FROM PROFESSIONALS FOR THE ACADEMIC YEAR 2025-26

Pre-Primary Teachers (Kindergarten)	Qualification: NTT/ NST/ PPT/ Montessori training.	Scale of Pay 13,500-250-14,500-300-16,000 Plus- DA 15%, HRA 5% & CCA-Rs.250/-
Primary Teachers (Classes 1 to 4) to handle Hindi, Social Science, Science, Library, Computer Science, Art & Craft	Qualification: B.A., B.Ed., B.Sc., B.Ed.B.LIS, B.Sc., Computer Science / BCA, Diploma in Art & Craft by any recognized institute	Scale of Pay 15,000-600-18,000-750-21,000 Plus- DA 15%, HRA 5% & CCA-Rs.250/-
Middle School Teachers (Classes 5 to 7) to handle English, Social Science, Mathematics, Science & Computer Science	Qualification: B.A., B.Ed., B.Sc., B.Ed., & Computer Science / BCA	Scale of Pay 15,000-600-18,000-750-21,000 Plus- DA 15%, HRA 5% & CCA-Rs.250/-
Secondary School Teacher (Classes 8 to 10) to handle Science, Social Science.	Qualification: B.Sc., B.Ed., B.A., B.Ed.,	Scale of Pay 18,000-750-21,750-1050-27,000 Plus- DA 15%, HRA 5% & CCA-Rs.250/-
Senior Secondary School Teachers (Classes 11 & 12) to handle Chemistry & Economics	Qualification: Post-graduation in Chemistry with B.Ed., & Post-graduation in Economics with B.Ed.,	Scale of Pay 30,000-1,200-36,000-1, 800-45,000 Plus- DA 15%, HRA 5% & CCA-Rs.250/-
Karate Instructor	Qualification: A Recognized Black Belt Certification	Consolidated 13,000-15,000
Counsellor	M.Sc., Psychology/ Certificate in Guidance & Counselling	Consolidated 13,000-15,000
Office Assistant	Qualification: B.Com., with MS Office Experience (MS Word & MS Excel)	Consolidated 13,000-15,000

Excellent Knowledge in the subject, vision, creativity and originality of approach are necessary along with excellent communication skills. Experience in similar positions in reputed Schools will be an added advantage.

Send in your application with detailed resume **within 7 days** of Publication of this advertisement to

POLICE PUBLIC SCHOOL
Mahadevapura Main Road, Jalapuri, Mysuru-570 019
Ph: 0821-2459900 Email: policepublicschoolresumes@gmail.com
Sd/- Secretary, KSPW & E Trust, Mysore

ಕರ್ನಾಟಕ ಸರ್ಕಾರ
(ಆಯುಷ್ ಇಲಾಖೆ)
ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ,
ಬೃಂದಾವನ ಬಡಾವಣೆ, ಕೆ.ಆರ್.ಎಸ್.ರಸ್ತೆ,ಮೈಸೂರು–570 020.
Email ID:gncymchospital2017@gmail.com
Ph. No.0821-2512121

ಸಂಖ್ಯೆ:ಜಿಎನ್‌ಸಿ&ಹೆಚ್/23/ಸರಬು/2023–24 ದಿನಾಂಕ: 21.02.2025

ದರಪಟ್ಟಿ ಆಹ್ವಾನ ಪ್ರಕಟಣೆ

ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮೈಸೂರು., ಇಲ್ಲಿನ ರೋಗಿಗಳ ಚಿಕಿತ್ಸೆಗೆ ಅವಶ್ಯವಿರುವ 1 ಮೆನ್ ಅಕ್ಯುಪಂಕ್ಚರ್ ನೀಡಲ್‌ಗಳನ್ನು ಖರೀದಿಸಲು ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳವರು ನಿಗಧಿತ ದಿ: 21.02.2025 ರಿಂದ 28.02.2025ರ ಸಂಜೆ 5.00 ಗಂಟೆಯವರೆಗೆ ಸಲ್ಲಿಸುವುದು. ದರಪಟ್ಟಿ ಅಂದಾಜು ಮೊತ್ತ ರೂ.2.00 ಲಕ್ಷಗಳಲ್ಲಿ ಎಲ್ಲಾ ತೆರಿಗೆಗಳು ಒಳಗೊಂಡಂತೆ. ದರಪಟ್ಟಿ ಆಹ್ವಾನ ಪತ್ರ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

ಸಹಿ/– ಪ್ರಾಚಾರ್ಯರು

DIPR/DDMYS/1340/KSMCA/969/2024-25

ಕರ್ನಾಟಕ ಸರ್ಕಾರ,
ಕಾರ್ಯಪಾಲಕ ಅಭಿಯಂತರರ ಕಛೇರಿ,
ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ.
ಸಂಖ್ಯೆ:ಕಾ.ಅ:ಪಂರಾಇಂವಿ:ಮಂಡ್ಯ:ಮಟೆಂಪ್ರ:2024–25/2745
ದಿ:24.02.2025

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ ಸಂಖ್ಯೆ:50/2024–25

ಈ ಕಛೇರಿ ಟೆಂಡರ್ ಪ್ರಕಟಣೆ ಸಂಖ್ಯೆ: ಕಾಅ:ಪಂರಾಇಂವಿ:ಮಂಡ್ಯ: ಟೆಂಪ: ಸಇಂ–2:47/2024–25 ದಿನಾಂಕ: 06.02.2025ರಂದು ಲೆಕ್ಕಶೀರ್ಷಿಕೆ :4235ರ ನರೇಗಾ ಒಗ್ಗೂಡಿಸುವಿಕೆ ಯೋಜನೆಯಡಿ ಅನುಮೋದನೆಯಾಗಿರುವ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿತ್ತು. ಸದರಿ ಟೆಂಡರ್ ಪ್ರಕಟಣೆಯ ಕ್ರ.ಸಂ.(2)ರ ಮದ್ದೂರು ತಾ॥ ದೇಶಹಳ್ಳಿ (INDENT12651/CALL-2) ಮತ್ತು ಕ್ರ.ಸಂ(8)ರ ಶ್ರೀರಂಗಪಟ್ಟಣ ತಾ: ಕಪರನಕೊಪ್ಪಲು ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ (INDENT12712/ CALL-2) ಕಾಮಗಾರಿಗಳಿಗೆ ಟೆಂಡರ್‌ನಲ್ಲಿ ಯಾವುದೇ ಗುತ್ತಿಗೆದಾರರು ಭಾಗವಹಿಸದ ಕಾರಣ ಸದರಿ ಕಾಮಗಾರಿಗಳಿಗೆ ಮರು ಟೆಂಡರ್ ಪ್ರಕಟಣೆ ಪ್ರಕಟಿಸಲಾಗಿದೆ. ಟೆಂಡರ್‌ಗಳನ್ನು KPPPortal ಆನ್‌ಲೈನ್ ಮೂಲಕ ಸಲ್ಲಿಸತಕ್ಕದ್ದು. ಟೆಂಡರ್‌ಗಳನ್ನು ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ:04.03.2025ರ ಸಂಜೆ 4.00 ಗಂಟೆವರೆಗೆ. ಹೆಚ್ಚಿನ ವಿವರಗಳಿಗಾಗಿ ಕೆ.ಪಿ.ಪಿ. ಪೋರ್ಟಲ್ ಅಥವಾ ಕಾರ್ಯಪಾಲಕ ಅಭಿಯಂತರರು, ಪಂ.ರಾ.ಇಂ.ವಿಭಾಗ, ಮಂಡ್ಯರವರ ಕಛೇರಿಯಲ್ಲಿ ಸಂಪರ್ಕಿಸಿ ಪಡೆಯಬಹುದು.

ಸಹಿ/–ಕಾರ್ಯಪಾಲಕ ಅಭಿಯಂತರರು,
ಪಂ.ರಾ.ಇಂ.ವಿಭಾಗ, ಮಂಡ್ಯ.

ವಾಸಾಸಂಇ/ಪನಿ–ಮಂ/ಕೆಎಸ್‌ಎಂಸಿಎ/692/2024–25